ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜೂನ್ 3 ಶನಿವಾರ 2023

₹4

ಸಂಪುಟ: 44 | ಸಂಚಿಕೆ: 48 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23

ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695

ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ ಮತ್ತು ಫೋಟೋಗೆ: news@mysurumithra.com ಜಾಹೀರಾತು: ad@mysurumithra.com

ಮೈಸೂರು ವಿಮಾನ ನಿಲ್ದಾಣ ವಿಸ್ತರಣೆ ಪ್ರಸ್ತಾಪ

ಭವಿಷ್ಯದ ಯೋಜನೆಗೆ 91 ಎಕರೆ ಹೆಚ್ಚುವರಿ ಭೂಮಿ ಸ್ವಾಧೀನಪಡಿಸಿಕೊಳ್ಳಿ

ಕೆಐಎಡಿಬಿ ಅಧಿಕಾರಿಗಳಿಗೆ ಸಂಸದ ಪ್ರತಾಪ್ ಸಿಂಹ ಸೂಚನೆ

ಮೈಸೂರು, ಜೂ. 2(ಆರ್‌ಕೆ)– ಮೈಸೂರು ವಿಮಾನ ನಿಲ್ದಾಣದ ರನ್‌ವೇ ವಿಸ್ತರಣೆಯ ಮುಂದಿನ ಯೋಜನೆಗಳಿಗೆ ಅಗತ್ಯವಿರುವ 91 ಎಕರೆ ಹೆಚ್ಚುವರಿ ಭೂಮಿ ಸ್ವಾಧೀನಪಡಿಸಿಕೊಳ್ಳಿ ಎಂದು ಸಂಸದ ಪ್ರತಾಪ್ ಸಿಂಹ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆಐಎಡಿಬಿ) ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಮೈಸೂರಿನ ಜಲದರ್ಶಿನಿ ಅತಿಥಿ ಗೃಹದಲ್ಲಿ ಮಂಡಕಳ್ಳಿ ವಿಮಾನ ನಿಲ್ದಾಣದ ಅಭಿವೃದ್ಧಿ ಸಂಬಂಧ ಕೆಐಎಡಿಬಿ, ಸೆಸ್ಕ್, ರೆವಿನ್ಯೂ ಹಾಗೂ ವಿಮಾನ ನಿಲ್ದಾಣ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಭವಿಷ್ಯದ ಅಭಿವೃದ್ಧಿ ಯೋಜನೆಗಾಗಿ ಈಗಿನಿಂದಲೇ ಹೆಚ್ಚುವರಿ 91 ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಅಧಿಸೂಚನೆ ಹೊರಡಿಸಿ ಪ್ರಕ್ರಿಯೆ ನಡೆಸಿ ಎಂದು ಸೂಚಿಸಿದರು. ಭೂಸ್ವಾಧೀನಕ್ಕೆ ಅಗತ್ಯವಿರುವ ಅನುದಾನವನ್ನು ಸರ್ಕಾರದ ಮಟ್ಟದಲ್ಲಿ ಮಾತನಾಡಿ ಮಂಜೂರು ಮಾಡಿಸುತ್ತೇನೆ. ತಾವು ಹೊಸದಾಗಿ ಪ್ರಸ್ತಾವನೆ ಸಲ್ಲಿಸಿ ಎಂದ ಪ್ರತಾಪ್ ಸಿಂಹ, ಭವಿಷ್ಯದಲ್ಲಿ 3.50 ಕಿಮೀ ಸಾಮರ್ಥ್ಯದ ರನ್‌ವೇ ಯೋಜನೆ ಕೈಗೆತ್ತಿಕೊಂಡಲ್ಲಿ ಭೂಮಿ ಸಮಸ್ಯೆ ಉದ್ಭವಿಸದಂತೆ ಅಗತ್ಯ ಕ್ರಮ ವಹಿಸಿ ಎಂದರು.

ಈಗಾಗಲೇ ವಿಮಾನ ನಿಲ್ದಾಣದ ವಿಸ್ತರಣೆಗೆ 160 ಎಕರೆ ಭೂಮಿ ಸ್ವಾಧೀನಕ್ಕೆ ರಾಜ್ಯ ಸರ್ಕಾರದಿಂದ 150 ಕೋಟಿ ರೂ. ಬಿಡುಗಡೆ ಮಾಡಿದ್ದು, 90 ಕೋಟಿ ರೂ.ಗಳನ್ನು ಭೂ ಮಾಲೀಕರಿಗೆ ಪಾವತಿಸಲಾಗಿದೆ. ಉಳಿದ 46 ಕೋಟಿ ರೂ. ಹಣ ಬಿಡುಗಡೆಗೆ ಮಂಡಳಿ ವತಿಯಿಂದ ಪ್ರಸ್ತಾವನೆ ಸಲ್ಲಿಸಿದಲ್ಲಿ ತಾವು ಸರ್ಕಾರದ ಮಟ್ಟದಲ್ಲಿ ಪ್ರಯತ್ನಿಸಿ ಅಗತ್ಯ ಕ್ರಮ ವಹಿಸುವುದಾಗಿಯೂ ಅವರು ತಿಳಿಸಿದರು.

ಭೂಸ್ವಾಧೀನಕ್ಕಾಗಿ 319 ಕೋಟಿ ರೂ. ಮಂಜೂರು ಮಾಡಲಾಗಿದ್ದು, ಬಿಡುಗಡೆಯಾಗಬೇಕಿರುವ ಹಣ ಕೊಡಿಸಲು ತಾವು ಪ್ರಯತ್ನಿಸುವುದಾಗಿ ಹೇಳಿದ ಅವರು, ಉಳಿದಂತೆ ರನ್‌ವೇ ವಿಸ್ತರಣೆಗೆ ಅಗತ್ಯವಿರುವ ಭೂಮಿಯಲ್ಲಿರುವ ವಿದ್ಯುತ್ ಮಾರ್ಗ, ಕಾಲುವೆ, ಮರಗಳನ್ನು ಸ್ಥಳಾಂತರಿಸಿ ಭಾರತ ವಿಮಾನ ನಿಲ್ದಾಣಗಳ ಪ್ರಾಧಿಕಾರಕ್ಕೆ ಭೂಮಿಯನ್ನು ಹಸ್ತಾಂತರಿಸಬೇಕೆಂದು ಕೆಐಎಡಿಬಿ, ಸೆಸ್ಕ್ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳಿಗೆ ಸಲಹೆ ನೀಡಿದರು.

ಸ್ವಾಧೀನಪಡಿಸಿಕೊಂಡ ಭೂಮಿಯಲ್ಲಿರುವ ವಿದ್ಯುತ್ ಕಂಬ, ಪರಿವರ್ತಕಗಳನ್ನು ಸ್ಥಳಾಂತರಿಸಲು ಅಗತ್ಯವಿರುವ ಅನುದಾನವನ್ನು ಬಿಡುಗಡೆ ಮಾಡಿಸಿರುವುದರಿಂದ ಅಧಿಕಾರಿಗಳು ಅತೀ ಬೇಗ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು ಎಂದು ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ರನ್‌ವೇ ವಿಸ್ತರಿಸಲು ಪ್ರಸ್ತುತ ಇರುವ ಮೈಸೂರು–ನಂಜನಗೂಡು ರಸ್ತೆಯ ಮಾರ್ಗ ಬದಲಿಸಬೇಕಿರುವುದರಿಂದ ಪ್ರಕ್ರಿಯೆಯನ್ನು ಬೇಗ ಮುಗಿಸಬೇಕು. ಭೂಮಿ ಹಸ್ತಾಂತರವಾಗುತ್ತಿದ್ದಂತೆಯೇ ಭಾರತ ವಿಮಾನ ನಿಲ್ದಾಣಗಳ ಪ್ರಾಧಿಕಾರದಿಂದ ವಿಸ್ತರಣೆ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು ಎಂದು ಸಂಸದರು ತಿಳಿಸಿದರು. ಮೈಸೂರು ವಿಮಾನ ನಿಲ್ದಾಣದ ನಿರ್ದೇಶಕ ಅನೂಪ್, ಮಾಜಿ ನಿರ್ದೇಶಕ ಆರ್.ಮಂಜುನಾಥ್, ಕೆಐಎಡಿಬಿ ವಿಶೇಷ ಭೂಸ್ವಾಧೀನಾಧಿಕಾರಿ ಪ್ರಿಯ ದರ್ಶಿನಿ, ಅಸಿಸ್ಟೆಂಟ್ ಎಕ್ಸಿಕ್ಯೂಟಿವ್ ಇಂಜಿನಿಯರ್ ಮಹೇಶ್, ಸೆಸ್ಕ್, ಕಂದಾಯ ಇಲಾಖೆ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.



ಮೈಸೂರಿನ ಜಲದರ್ಶಿನಿ ಅತಿಥಿ ಗೃಹದಲ್ಲಿ ಸಂಸದ ಪ್ರತಾಪ್ ಸಿಂಹ ಕೆಐಎಡಿಬಿ ಅಧಿಕಾರಿಗಳೊಂದಿಗೆ ಶುಕ್ರವಾರ ಸಭೆ ನಡೆಸಿದರು.

ಮೈಸೂರು–ಬೆಂಗಳೂರು ಹೈವೇಯಲ್ಲಿ ಕಬ್ಬಿಣ ಕಳ್ಳರ ಹಾವಳಿ

ಇಲ್ಲಿರುವ ಕಬ್ಬಿಣದ ಕಂಬ, ರಾಡು, ಗ್ರಿಲ್ ಕತ್ತರಿಸಿ ಕಳವು

ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ವೇನಲ್ಲಿ ಕಬ್ಬಿಣದ ಕಳ್ಳರ ಕಾಟ ಜಾಸ್ತಿಯಾಗಿದೆ. ವಿದ್ಯುತ್ ಕಂಬ, ಗ್ರಿಲ್, ತಡೆಗೋಡೆಗಳನ್ನು ಖದೀಮರು ಕತ್ತರಿಸಿ ಹೊತ್ತೊಯ್ಯುತ್ತಿದ್ದಾರೆ ಎಂದು ಸಂಸದ ಪ್ರತಾಪ್ ಸಿಂಹ ತಿಳಿಸಿದ್ದಾರೆ.

ನಿಮ್ಮದೇ ಹಣದಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ಹೆದ್ದಾರಿ ನಿರ್ಮಿಸಲಾಗಿದೆ. ದಕ್ಷಿಣ ಭಾರತದ ಅತೀ ದೊಡ್ಡ ಸುಸಜ್ಜಿತ ರಸ್ತೆಯನ್ನು ಉಳಿಸಿಕೊಳ್ಳುವುದು ನಿಮ್ಮ ಜವಾಬ್ದಾರಿ. ನಿಮ್ಮ ಮನೆಯಲ್ಲಿರುವ ಕಬ್ಬಿಣವನ್ನು ಬೇಕಿದ್ದರೆ ಗುಜರಿಗೆ ಹಾಕಿಕೊಳ್ಳಿ. ಅದನ್ನು ಬಿಟ್ಟು ಹೆದ್ದಾರಿ ಕಬ್ಬಿಣ ಕದಿಯಬೇಡಿ ಎಂದು ಆಕ್ರೋಶ ವ್ಯಕ್ತಪಡಿಸಿದರು. ಅವಘಡಗಳನ್ನು ತಪ್ಪಿಸುವ ಸಲುವಾಗಿ ಹೆದ್ದಾರಿಯ ಎರಡೂ ಕಡೆ ಗ್ರಿಲ್‌ಗಳ ತಡೆಗೋಡೆಯನ್ನು ಅಳವಡಿಸಲಾಗಿದೆ. ನೀವು ಅದನ್ನೇ ಹೊತ್ತೊಯ್ದರೆ ಏನು ಮಾಡಬೇಕು. ಮೈಸೂರು, ಮಂಡ್ಯ, ರಾಮನಗರ ಜನರು ಅಂತಹ ಕಳ್ಳರ ಬಗ್ಗೆ ಮಾಹಿತಿ ನೀಡಬೇಕೆಂದು ಪ್ರತಾಪ್ ಸಿಂಹ ತಿಳಿಸಿದರು.

ಯಾವುದೇ ಷರತ್ತಿಲ್ಲದೆ ಗ್ಯಾರಂಟಿಗಳ ಜಾರಿ ಮಾಡಲಿ

ಮೈಸೂರು, ಜೂ. 2(ಆರ್‌ಕೆ)– ಐದು ಗ್ಯಾರಂಟಿ ಭರವಸೆ ನೀಡಿ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಸರ್ಕಾರ ಯಾವುದೇ ಷರತ್ತು ವಿಧಿಸದೇ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಲಿ ಎಂದು ಸಂಸದ ಪ್ರತಾಪ್ ಸಿಂಹ ಒತ್ತಾಯಿಸಿದ್ದಾರೆ. ಮೈಸೂರಿನ ಜಲದರ್ಶಿನಿ ಅತಿಥಿ ಗೃಹದಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಿದ್ದ ಅವರು, ಚುನಾವಣೆಗೂ ಮುನ್ನಾ ಗ್ಯಾರಂಟಿ ಯೋಜನೆಗಳನ್ನು ಘೋಷಣೆ ಮಾಡುವಾಗ ನೀವು ಯಾವುದೇ ಕಂಡೀಷನ್ ಹಾಕಿರಲಿಲ್ಲ. ಅದರಂತೆ ಈಗ ನಡೆದುಕೊಳ್ಳಬೇಕು. ನನಗೂ ಫ್ರೀ, ನಿನಗೂ ಫ್ರೀ, ಎಲ್ಲರಿಗೂ ಫ್ರೀ ಎಂದು ಹೇಳಿದ ಸಿದ್ದರಾಮಯ್ಯ, ಈಗ ಯಾವುದೇ ಷರತ್ತುಗಳಿಲ್ಲದೆಯೇ 5 ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಬೇಕು ಎಂದರು.

ತನಿಖೆ ನಡೆಸಿ: ಹಿಂದಿನ ಬಿಜೆಪಿ ಸರ್ಕಾರದ ಮೇಲೆ ತೀವ್ರ ಆರೋಪ ಮಾಡುತ್ತಿರುವ ಕಾಂಗ್ರೆಸ್ ಸರ್ಕಾರ ಪಿಎಸ್‌ಐ ಹಗರಣ, ಬಿಟ್ ಕಾಯಿನ್ ಪ್ರಕರಣ, 40 ಪರ್ಸೆಂಟ್ ವಿಚಾರ ಹಾಗೂ ಚಾಮರಾಜನಗರ ಆಕ್ಸಿಜನ್ ದುರಂತ ಸಂಬಂಧ ತನಿಖೆ ನಡೆಸಲಿ ಎಂದು ಅವರು ಒತ್ತಾಯಿಸಿದರು. ನೀವು ಆರೋಪಿಸಿದ್ದೆಲ್ಲಾ ಸತ್ಯ ಎಂಬುದು ಸಾಬೀತಾಗಬೇಕಾದರೆ ತನಿಖೆ ನಡೆಸಿ ತಪ್ಪಿತಸ್ಥರು ಬಿಜೆಪಿಯವರಾಗಲೀ, ಬೇರೆ ಯಾರೇ ಇರಲಿ ಹಿಡಿದು ಜೈಲಿಗೆ ಹಾಕಿಸಿ. ನಿಮ್ಮ ಮೇಲೆ ಜನ ಅತೀವ ನಂಬಿಕೆ ಇಟ್ಟಿದ್ದಾರೆ. ಅದನ್ನು ಉಳಿಸಿಕೊಳ್ಳಿ ಎಂದು ಅವರು ತಿಳಿಸಿದರು.

ಮೈಸೂರು ಶ್ರೀ ಸುತ್ತೂರು ಮಠಕ್ಕೆ ಆಸ್ಟ್ರೇಲಿಯದ ಸಂಸದೀಯ ನಿಯೋಗ ಭೇಟಿ



ಮೈಸೂರು, ಜೂ. 2– ಆಸ್ಟ್ರೇಲಿಯದ ಸಂಸದೀಯ ನಿಯೋಗವು ಭಾರತಕ್ಕೆ ವಿವಿಧ ಕ್ಷೇತ್ರಗಳ ಅಧ್ಯಯನಕ್ಕೆ ಆಗಮಿಸಿತ್ತು. ಅಸೆಂಬ್ಲಿಯ ಸಭಾಧ್ಯಕ್ಷರಾದ ಶ್ರೀಮತಿ ಮಿಚೆಲ್ ರಾಬರ್ಟ್ಸ್‌ರವರ ಅಧ್ಯಕ್ಷತೆಯಲ್ಲಿ ವಿರೋಧ ಪಕ್ಷದ ನಾಯಕರಾದ ಡಾ. ಡೇವಿಡ್ ಹನಿ, ಸದಸ್ಯರಾದ ಡಾ. ಜಗದೀಶ್ ಕೃಷ್ಣನ್, ಕ್ಯಾಸಂಡ್ರ ರೋ, ಡೇವಿಡ್ ಸ್ಕೈಫ್ ಅವರುಗಳು ತಂಡದೊಂದಿಗೆ ಆಗಮಿಸಿದ್ದರು.

ಈ ಭೇಟಿಯ ಅವಧಿಯಲ್ಲಿ ಜೂನ್ 1 ರಂದು ಮೈಸೂರು ಶ್ರೀ ಸುತ್ತೂರು ಮಠಕ್ಕೆ ಆಗಮಿಸಿ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರನ್ನು ಭೇಟಿ ಮಾಡಿ ಸಮಾಲೋಚಿಸಿದರು. ಜೆಎಸ್‌ಎಸ್ ಸಂಸ್ಥೆಗಳು ಆಸ್ಟ್ರೇಲಿಯಾದ ವಿವಿಧ ವಿಶ್ವವಿದ್ಯಾನಿಲಯಗಳೊಂದಿಗೆ ಹೊಂದಿರುವ ಪರಸ್ಪರ ಒಡಂಬಡಿಕೆಗಳ ವಿವರಗಳನ್ನು ಅವರ ಗಮನಕ್ಕೆ ತರಲಾಯಿತು. ಅದಕ್ಕಾಗಿ ಸಂತೋಷ ವ್ಯಕ್ತಪಡಿಸಿದರು. ಜೆಎಸ್‌ಎಸ್ ಸಂಸ್ಥೆಗಳ ಅಂತಿಮ ವರ್ಷದ ವಿದ್ಯಾರ್ಥಿಗಳು ಹಾಗೂ ಬೋಧಕರು ಅಲ್ಲಿಯ ವಿವಿಧ ವಿಶ್ವವಿದ್ಯಾನಿಲಯಗಳೊಂದಿಗೆ ಶೈಕ್ಷಣಿಕ ವಿನಿಮಯಗಳ ಬಗ್ಗೆ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಂಡು, ಭಾರತ ಮತ್ತು ಆಸ್ಟ್ರೇಲಿಯ ನಡುವಿನ ಸಂಬಂಧ ಮತ್ತಷ್ಟು ವೃದ್ಧಿಯಾಗಲು ಪ್ರಯತ್ನಿಸುವುದಾಗಿ ತಿಳಿಸಿದರು. ನಿಯೋಗದ ಪ್ರತಿನಿಧಿಗಳನ್ನು ಅಭಿನಂದಿಸಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಡಾ.ಸಿ.ಜಿ. ಬೆಟಸೂರಮಠ, ಡಾ. ಸುರೀಂದರ್ ಸಿಂಗ್, ಕೆಎಸ್‌ಒಯು ಕುಲಪತಿಗಳಾದ ಪ್ರೊ. ಶರಣಪ್ಪ ಹಲಸೆ, ಪಶ್ಚಿಮ ಬಂಗಾಳದ ಐಎಎಸ್ ಅಧಿಕಾರಿಗಳಾದ ಕೆಂಪಹೊನ್ನಯ್ಯ, ಕುಲಸಚಿವರಾದ ಡಾ.ಬಿ. ಮಂಜುನಾಥ್ ಪ್ರಾಂಶುಪಾಲರಾದ ಡಾ.ಹೆಚ್. ಬಸವನ ಗೌಡಪ್ಪ ಹಾಗೂ ವಿವಿಧ ನಿಕಾಯಗಳ ಮುಖ್ಯಸ್ಥರು ಭಾಗವಹಿಸಿದ್ದರು.

ಹುಣಸೂರಿನಲ್ಲಿ ಕುಡಿತ ಬಿಡಿಸುವ ಉಚಿತ ಶಿಬಿರ

ಮೈಸೂರು, ಜೂ.2– ಶ್ರೀ ಸುತ್ತೂರು ಮಠ, ಜೆಎಸ್‌ಎಸ್ ಮಹಾವಿದ್ಯಾಪೀಠ ಮತ್ತು ವಿವಿಧ ಸಂಘಸಂಸ್ಥೆಗಳ ಸಹಯೋಗದೊಂದಿಗೆ 27 ಜೂನ್ ಮಂಗಳವಾರದಿಂದ 6 ಜುಲೈ ಗುರುವಾರದವರೆಗೆ 15ನೆಯ ಕುಡಿತ ಬಿಡಿಸುವ ಉಚಿತ ಶಿಬಿರವನ್ನು ಹುಣಸೂರಿನ ಶ್ರೀ ಗುರುಬೂದಿಸ್ವಾಮಿಗಳವರ ಮಂಗಳ ಮಂಟಪದಲ್ಲಿ ಏರ್ಪಡಿಸಲಾಗಿದೆ.

ಶಿಬಿರದಲ್ಲಿ ಪಾಲ್ಗೊಳ್ಳಲು ಆಸಕ್ತಿಯುಳ್ಳವರು ಆದಷ್ಟು ಶೀಘ್ರ ಹೆಸರನ್ನು ನೋಂದಾಯಿಸಿಕೊಳ್ಳಬಹುದು. ಈ ಸಾಮಾಜಿಕ ಸಮಸ್ಯೆಯ ಪರಿಹಾರದಲ್ಲಿ ಆಸಕ್ತಿಯುಳ್ಳವರು ಮದ್ಯವ್ಯಸನಿಗಳನ್ನು ಆಧಾರ್ ಕಾರ್ಡ್‌ನ ಜೆರಾಕ್ಸ್ ಪ್ರತಿ, ಭಾವಚಿತ್ರ, ಅಗತ್ಯ ಬಟ್ಟೆ ಹಾಗೂ ಹೊದಿಕೆಗಳೊಡನೆ ಕರೆದುಕೊಂಡು ಬಂದು ಶಿಬಿರಕ್ಕೆ ಸೇರಿಸಬಹುದಾಗಿದೆ.

ಹೆಸರನ್ನು ನೋಂದಾಯಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ಚುಂಚನಹಳ್ಳಿ ಶ್ರೀಗಳು, ಡಾ.ಎಂ.ಪಿ.ಸೋಮಶೇಖರ್ ಮತ್ತು ಎಸ್. ಬಸವರಾಜು ಅವರನ್ನು ಕ್ರಮವಾಗಿ 9945494612, 9448653897 ಮತ್ತು 9886476142 ದೂರವಾಣಿಗಳಲ್ಲಿ ಸಂಪರ್ಕಿಸಲು ಕೋರಿದೆ.

ತಿ.ನರಸೀಪುರ ಬಳಿ ಭೀಕರ ಅಪಘಾತ ಪ್ರಕರಣ

ಆಸ್ಪತ್ರೆಯಲ್ಲಿ ಗಾಯಾಳು ಸಾವು; ಸತ್ತವರ ಸಂಖ್ಯೆ 11ಕ್ಕೆ ಏರಿಕೆ

ಮೈಸೂರು, ಜೂ. 2(ಆರ್‌ಕೆ)– ತಿ.ನರಸೀಪುರ ತಾಲೂಕು ಕುರುಬೂರು ಬಳಿ ಇತ್ತೀಚೆಗೆ ಸಂಭವಿಸಿದ್ದ ಭೀಕರ ಅಪಘಾತದಲ್ಲಿ ತೀವ್ರವಾಗಿ ಗಾಯಗೊಂಡು ಕೆ.ಆರ್. ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ವ್ಯಕ್ತಿ ಸಾವನ್ನಪ್ಪಿದ್ದಾರೆ.

ಬಳ್ಳಾರಿ ಜಿಲ್ಲೆ, ಸಂಗನಕಲ್ ಗ್ರಾಮದ ಸಂದೀಪ ಸಾವನ್ನಪ್ಪಿದ ಗಾಯಾಳು. ಘಟನೆಯಲ್ಲಿ ಗಾಯಗೊಂಡು ಮೈಸೂರಿನ ಕೆ.ಆರ್.ಆಸ್ಪತ್ರೆಯ ಸರ್ಜಿಕಲ್ ವಿಭಾಗದ ಐಸಿಯುನಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಸಂದೀಪ, ಚಿಕಿತ್ಸೆ ಫಲಕಾರಿಯಾಗದೇ ಇಂದು ಬೆಳಗ್ಗೆ 7.30 ರಲ್ಲಿ ಮೃತಪಟ್ಟರು ಎಂದು ಪೊಲೀಸರು ತಿಳಿಸಿದ್ದಾರೆ. ಇದರಿಂದಾಗಿ ಮೈಸೂರು–ಕೊಳ್ಳೇಗಾಲ ಹೆದ್ದಾರಿಯಲ್ಲಿ ಇನ್ನೋವಾ ಕಾರು ಮತ್ತು ಖಾಸಗಿ ಬಸ್ ನಡುವೆ ಸಂಭವಿಸಿದ ಅಪಘಾತದಲ್ಲಿ ಮೃತಪಟ್ಟವರ ಸಂಖ್ಯೆ 11ಕ್ಕೇರಿದಂತಾಗಿದೆ. ಸಂಗನಕಲ್‌ನಲ್ಲಿ ತಮ್ಮ ತಾಯಿಯೊಂದಿಗೆ ಗ್ರಾಮ ಒನ್ ಸೆಂಟರ್ ನಡೆಸುತ್ತಿದ್ದ ಸಂದೀಪ್, ಮೇ 29 ರಂದು ಸಂಭವಿಸಿದ ರಸ್ತೆ ಅಪಘಾತದಲ್ಲಿ ಕುಟುಂಬದವರನ್ನು ಕಳೆದುಕೊಂಡಿದ್ದರು.

ಅಪಘಾತದಲ್ಲಿ ಗಾಯಗೊಂಡಿರುವ ಜನಾರ್ಧನ್ ಎಂಬುವರು ಕೆ.ಆರ್. ಆಸ್ಪತ್ರೆ ಐಸಿಯುನಲ್ಲಿ ಚಿಕಿತ್ಸೆ ಪಡೆಯುತ್ತಿದ್ದರೆ, ನಾಲ್ಕು ವರ್ಷದ ಪುತ್ರ ಪುನೀತ ಚೆಲುವಾಂಬ ಆಸ್ಪತ್ರೆ ಮಕ್ಕಳ ವಿಭಾಗದ ಐಸಿಯುನಲ್ಲಿ ದಾಖಲಾಗಿದ್ದಾನೆ. ಬಸ್ಸಿನಲ್ಲಿದ್ದ ಚಾಮರಾಜನಗರ ಜಿಲ್ಲೆ, ಗಣಗನಪುರ ಗ್ರಾಮದ ಗೌರವ್ ಸಹ ಮಕ್ಕಳ ವಾರ್ಡ್‌ನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಆತನೊಟ್ಟಿಗೆ ಬಸ್ಸಿನಲ್ಲಿ ಪ್ರಯಾಣಿಸುತ್ತಿದ್ದ, ತಿ.ನರಸೀಪುರ ಕಾಲೇಜಿನ ವಿದ್ಯಾರ್ಥಿನಿ ಬಾನು ಕೆಆರ್ ಆಸ್ಪತ್ರೆಯಿಂದ ಗುರುವಾರ ಡಿಸ್‌ಚಾರ್ಜ್ ಆಗಿದ್ದಾಳೆ.

ಮೇ 29 ರಂದು ಮಧ್ಯಾಹ್ನ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಇನ್ನೋವಾ ಕಾರು ಚಾಲಕ ಶ್ರೀರಂಗಪಟ್ಟಣದ ಯುವಕ ಸೇರಿದಂತೆ ಮೈಸೂರಿಗೆ ಪ್ರವಾಸಕ್ಕೆ ಬಂದಿದ್ದ ಸಂಗನಕಲ್ ಗ್ರಾಮದ 10 ಮಂದಿ ಸ್ಥಳದಲ್ಲೇ ಸಾವನ್ನಪ್ಪಿದ್ದರು.

ಮೈಸೂರಲ್ಲಿ ಇಂದಿನಿಂದ ಎರಡು ದಿನ ಬೀಜ ಮೇಳ

ಮೈಸೂರು, ಜೂ.2–ಮೈಸೂರಿನ ಸಹಜ ಸಮೃದ್ಧ ಸಂಸ್ಥೆಯ ವತಿಯಿಂದ ನಾಳೆ (ಜೂ.3) ಮತ್ತು ಮರುದಿನ ನಂಜಬಹದ್ದೂರ್ ಛತ್ರದಲ್ಲಿ ಬೀಜಮೇಳ ಮತ್ತು ಆಹಾರ ಮೇಳ ಏರ್ಪಡಿಸಲಾಗಿದೆ.

ನಾಳೆ ಬೆಳಗ್ಗೆ 11.30ಕ್ಕೆ ಕೋಲಾರದ ಬೀಜ ಮಾತೆ ಶ್ರೀಮತಿ ಪಾಪಮ್ಮ ಮೇಳವನ್ನು ಉದ್ಘಾಟಿಸಲಿದ್ದಾರೆ. ಸಹಜ ಸಮೃದ್ಧ ನಿರ್ದೇಶಕ ಜಿ.ಕೃಷ್ಣಪ್ರಸಾದ್ ಅಧ್ಯಕ್ಷತೆ ವಹಿಸಲಿದ್ದು, ಮೈಸೂರಿನ ತೋಟಗಾರಿಕಾ ಮಹಾವಿದ್ಯಾಲಯದ ಡೀನ್ ಡಾ. ವಿಷ್ಣುವರ್ಧನ, ನಾಗೇನಹಳ್ಳಿಯ ಸಾವಯವ ಕೃಷಿ ಸಂಶೋಧನಾ ಕೇಂದ್ರದ ಮುಖ್ಯಸ್ಥ ಡಾ. ಸಿ.ಪ್ರಕಾಶ್, ಕಿರುಗಾವಲು ಗ್ರಾಮದ ಬೀಜ ಸಂರಕ್ಷಕ ಸಯ್ಯದ್ ಘನಿಖಾನ್, ಕುಂದಗೋಳದ ಸಮುದಾಯ ಬೀಜ ಬ್ಯಾಂಕ್‌ನ ಮುಖ್ಯಸ್ಥರಾದ ಶ್ರೀಮತಿ ಬೇಬಿ ಜಾನ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಎರಡು ದಿನಗಳ ಬೀಜ ಮೇಳದಲ್ಲಿ ರಾಜ್ಯದ 30ಕ್ಕೂ ಹೆಚ್ಚು ಬೀಜ ಸಂರಕ್ಷಕರ ಗುಂಪುಗಳು ಪಾಲ್ಗೊಳ್ಳಲಿದ್ದು, ವಿವಿಧ ದೇಶೀ ತಳಿಗಳನ್ನು ಮೇಳದಲ್ಲಿ ಪ್ರದರ್ಶಿಸಲಾಗುತ್ತದೆ. ಗುಣಮಟ್ಟದ ಭತ್ತ, ಸಿರಿಧಾನ್ಯ ಮತ್ತು ತರಕಾರಿ ಬೀಜಗಳು ಹಾಗೂ ಕೆಂಪು ಬಣ್ಣದ ಸಿದ್ಧ ಹಲಸು ಹಾಗೂ ಇತರೆ ಹಣ್ಣಿನ ಗಿಡಗಳು ಮಾರಾಟ ಮಾಡಲ್ಪಡುತ್ತವೆ. ಜೂನ್ 4ರಂದು 10.30ಕ್ಕೆ ಬೀಜ ಸಂರಕ್ಷಣೆ ಮತ್ತು ಸಾವಯವ ಬೀಜೋತ್ಪಾದನೆ ಬಗ್ಗೆ ಉಚಿತ ತರಬೇತಿ ಏರ್ಪಡಿಸಲಾಗಿದೆ. ಹೆಚ್ಚಿನ ವಿವರಗಳಿಗಾಗಿ ಮೊಬೈಲ್ ಸಂಖ್ಯೆಗಳು 9880908608 ಅಥವಾ 9972077998 ಅನ್ನು ಸಂಪರ್ಕಿಸಬಹುದು.

ಮೈಸೂರಲ್ಲಿ ಇಂದಿನಿಂದ ಕೆಪಿಎಸ್ಸಿ ಸ್ಪರ್ಧಾತ್ಮಕ ಪರೀಕ್ಷೆ

ಮೈಸೂರು, ಜೂ.2(ಆರ್‌ಕೆ)–ಮುಖ್ಯ ವಿದ್ಯುತ್ ಪರಿವೀಕ್ಷಕರ ಹುದ್ದೆಗಳ ಭರ್ತಿಗಾಗಿ ನಾಳೆ (ಜೂನ್ 3)ಯಿಂದ ಎರಡು ದಿನ ಮೈಸೂರಿನ ಮಹಾರಾಣಿ ಮಹಿಳಾ ಕಲಾ ಕಾಲೇಜಿನಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳು ನಡೆಯಲಿವೆ.

ಕರ್ನಾಟಕ ಲೋಕ ಸೇವಾ ಆಯೋಗ (KPSC)ವು ನಡೆಸಲಿರುವ ಪರೀಕ್ಷೆಗಳಿಗೆ ಶನಿವಾರ ಮತ್ತು ಭಾನುವಾರ ಅಗತ್ಯ ಸೌಲಭ್ಯ ಒದಗಿಸಿದ್ದು, ಜಿಲ್ಲಾಡಳಿತವು ಜಿಲ್ಲಾ ಖಜಾನೆಯಿಂದ ಪ್ರಶ್ನೆ ಪತ್ರಿಕೆ ಮತ್ತು ಉತ್ತರ ಪತ್ರಿಕೆಗಳನ್ನು ಪರೀಕ್ಷಾ ಕೇಂದ್ರಕ್ಕೆ ತಲುಪಿಸಲು ವ್ಯವಸ್ಥೆ ಮಾಡಲಾಗಿದೆ. ಪರೀಕ್ಷಾ ಕೇಂದ್ರದ ಸುತ್ತ 200 ಮೀಟರ್ ವ್ಯಾಪ್ತಿಯಲ್ಲಿ ಸೆಕ್ಷನ್ 144 ರೀತ್ಯಾ ನಿಷೇಧಾಜ್ಞೆ ಜಾರಿ ಮಾಡಲಾಗಿದ್ದು, ಸೂಕ್ತ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ. ಕೇಂದ್ರಕ್ಕೆ ಪರೀಕ್ಷಾರ್ಥಿಗಳು ಹಾಗೂ ಸಿಬ್ಬಂದಿಗಳನ್ನು ಹೊರತುಪಡಿಸಿ ಅನಧಿಕೃತ ವ್ಯಕ್ತಿಗಳು ಸುಳಿಯದಂತೆ ಮತ್ತು ಜೆರಾಕ್ಸ್ ಅಂಗಡಿಗಳನ್ನು ತೆರೆಯದಂತೆ ನಗರ ಪೊಲೀಸ್ ಆಯುಕ್ತರು ಆದೇಶಿಸಿದ್ದಾರೆ.

ರೈಲುಗಳ ಸರಣಿ ಅಪಘಾತ; 70ಕ್ಕೂ ಅಧಿಕ ಪ್ರಯಾಣಿಕರ ಸಾವು

● ಒಡಿಸ್ಸಾದ ಬೆಹನಾಗ್ ರೈಲ್ವೆ ನಿಲ್ದಾಣದಲ್ಲಿ ದುರಂತ ● 350ಕ್ಕೂ ಅಧಿಕ ಮಂದಿಗೆ ಗಾಯ ● ಕರ್ನಾಟಕದ 110 ಮಂದಿ ಸೇಫ್

ಭುವನೇಶ್ವರ್: ಎರಡು ಎಕ್ಸ್‌ಪ್ರೆಸ್ ರೈಲು ಮತ್ತು ಗೂಡ್ಸ್ ರೈಲು ನಡುವೆ ಡಿಕ್ಕಿ ಹೊಡೆದ ಪರಿಣಾಮ 70ಕ್ಕೂ ಹೆಚ್ಚು ಮಂದಿ ಸಾವನ್ನಪ್ಪಿ, ಸುಮಾರು 350 ಮಂದಿ ಗಾಯಗೊಂಡಿರುವ ಘಟನೆ ಒಡಿಶಾದ ಬಾಲಸೋರ್ ಜಿಲ್ಲೆಯ ಬಹನಾಗ ರೈಲ್ವೆ ನಿಲ್ದಾಣದಲ್ಲಿ ಇಂದು ಸಂಜೆ ಸಂಭವಿಸಿದೆ.

ಯಶವಂತಪುರ–ಹೌರಾ ಎಕ್ಸ್‌ಪ್ರೆಸ್ ಮತ್ತು ಕೋರಮಂಡಲ್ ಎಕ್ಸ್‌ಪ್ರೆಸ್ ರೈಲುಗಳು ಗೂಡ್ಸ್ ರೈಲಿಗೆ ಡಿಕ್ಕಿ ಹೊಡೆದು ಈ ದುರಂತ ಸಂಭವಿಸಿದೆ ಎಂದು ಹೇಳಲಾಗಿದ್ದು, ರೈಲುಗಳ ಡಿಕ್ಕಿ ರಭಸಕ್ಕೆ 15ರಿಂದ 17 ಬೋಗಿಗಳು ಪಕ್ಕದ ಹಳಿ ಮೇಲೆ ಉರುಳಿಬಿದ್ದಿವೆ. ಎರಡೂ ಎಕ್ಸ್‌ಪ್ರೆಸ್ ರೈಲುಗಳಲ್ಲಿ ಹಲವು ಪ್ರಯಾಣಿಕರು ಸಿಲುಕಿದ್ದು, ಅವರನ್ನು ರಕ್ಷಿಸುವ ಕಾರ್ಯ ನಡೆಯುತ್ತಿದೆ. ಕೋರಮಂಡಲ್ ಎಕ್ಸ್‌ಪ್ರೆಸ್ ರೈಲು ಚೆನ್ನೈನಿಂದ ಕೊಲ್ಕತ್ತಾದ ಶಾಲಿಮಾರ್‌ಗೆ ತೆರಳುತ್ತಿತ್ತು. ಮತ್ತೊಂದು ರೈಲು ಬೆಂಗಳೂರಿನ ಯಶವಂತಪುರದಿಂದ ಹೌರಾಗೆ ತೆರಳುತ್ತಿತ್ತು. ಬಾಲಸೋರ್ ಜಿಲ್ಲೆ ಬಹನಾಗ ರೈಲು ನಿಲ್ದಾಣದ ಬಳಿ ಸಿಗ್ನಲ್ ವೈಫಲ್ಯದಿಂದ ಈ ದುರಂತ ಸಂಭವಿಸಿದೆ ಎಂದು ಪ್ರಾಥಮಿಕ ವರದಿಗಳು ತಿಳಿಸಿವೆ.



ರಕ್ಷಣಾ ಕಾರ್ಯಾಚರಣೆಗಾಗಿ ವಿಶೇಷ ತಂಡಗಳು ದೌಡಾಯಿಸಿದ್ದು, ಗಾಯಾಳುಗಳನ್ನು ಸಮೀಪದ ಆಸ್ಪತ್ರೆಗಳಿಗೆ ರವಾನಿಸಲಾಗಿದೆ. ಘಟನಾ ಸ್ಥಳಕ್ಕೆ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಮತ್ತು ಒಡಿಶಾ ಮುಖ್ಯಮಂತ್ರಿ ನವೀನ್ ಪಟ್ನಾಯಕ್ ಭೇಟಿ ನೀಡಿದ್ದರು. ದುರ್ಘಟನೆಯಲ್ಲಿ ಮೃತಪಟ್ಟವರ ಕುಟುಂಬದವರಿಗೆ ತಲಾ 10 ಲಕ್ಷ ರೂ. ಹಾಗೂ ಗಾಯಾಳುಗಳಿಗೆ ತಲಾ 2 ಲಕ್ಷ ರೂ. ಪರಿಹಾರ ಘೋಷಿಸಲಾಗಿದೆ. ಕರ್ನಾಟಕದ ಕಳಸಾದಿಂದ ಜೈನಮುನಿಗಳ ದರ್ಶನಕ್ಕಾಗಿ ಯಶವಂತ ಪುರ–ಹೌರಾ ಎಕ್ಸ್‌ಪ್ರೆಸ್‌ನಲ್ಲಿ ತೆರಳಿದ್ದ 110 ಮಂದಿ ಸೇಫ್ ಆಗಿದ್ದಾರೆಂದು ಮೂಲಗಳು ತಿಳಿಸಿವೆ. ಸಹಾಯವಾಣಿ ಸಂಖ್ಯೆಗಳು: 033–26382217, 8972073925, 6782262286, 9332392339

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

3.6.2023 ಶನಿವಾರ, ಮಳೆ ನಕ್ಷತ್ರ: ರೋಹಿಣಿ, 25.05.2023 ರಿಂದ 07.06.2023
ಶ್ರೀ ಶೋಭಕೃತ್ ನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಜ್ಯೇಷ್ಠ ಮಾಸ, ಶುಕ್ಲ ಪಕ್ಷ,
ತಿಥಿ: ಚತುರ್ದಶಿ, ನಕ್ಷತ್ರ: ಅನೂರಾಧ, ರಾಹುಕಾಲ: ಬೆಳಗ್ಗೆ 9 ರಿಂದ 10.30ರವರೆಗೆ

■ **ಶ್ರೀ ಶ್ರೀನಿವಾಸ ಸ್ವಾಮಿ ಕೈಂಕರ್ಯ ಸಭಾ :** ಶ್ರೀ ಶ್ರೀನಿವಾಸಸ್ವಾಮಿಯವರ ವಾರ್ಷಿಕ ಮಹೋತ್ಸವ, ಶ್ರೀ ಪದ್ಮಾವತಿ ಅಮ್ಮನವರ ವರ್ಧಂತಿ, ಸಂಜೆ 6ಕ್ಕೆ ಪುಷ್ಪ ಪಲ್ಲಕ್ಕಿ ಉತ್ಸವ, ಸ್ಥಳ: ಸಭಾ ಆವರಣ, ತಿಲಕ್‌ನಗರ.

■ **ಜೆಎಸ್‌ಎಸ್ ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾನಿಲಯ :** ಮುಕ್ತ ದಿನ ಆಚರಣೆ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಸ್ಥಳ: ಎಸ್‌ಜೆಸಿಇ ಕಾಲೇಜು ಆವರಣ, ಬೆಳಗ್ಗೆ 10 ರಿಂದ.

■ **ಅಭಿವೃದ್ಧಿ :** ಸಿಲ್ಕ್ ಇಂಡಿಯಾ–2023, ಸಿಲ್ಕ್, ಕಾಟನ್ ಮತ್ತು ಇತರ ಸೀರೆಗಳ ಮಾರಾಟ ಮತ್ತು ಪ್ರದರ್ಶನ, ಸ್ಥಳ: ಸದರನ್ ಸ್ಟಾರ್, ವಿನೋಬಾ ರಸ್ತೆ, ಬೆಳಗ್ಗೆ 10.30ರಿಂದ ರಾತ್ರಿ 8.30 ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಸಕ್ಕರೆ ಕಾಯಿಲೆಯಿಂದಾದ ಕಿಡ್ನಿ ತೊಂದರೆಗೆ ತಪಾಸಣಾ ಮತ್ತು ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 10.30ಕ್ಕೆ.

■ **ಜಿಲ್ಲಾ ಹಾಗೂ ತಾಲೂಕು ಕನ್ನಡ ಸಾಹಿತ್ಯ ಪರಿಷತ್ :** ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತ್ಯೋತ್ಸವ ಪ್ರಯುಕ್ತ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ತೇರ್ಗಡೆಗೊಂಡು ಕನ್ನಡ ಭಾಷೆಯಲ್ಲಿ ಅಧಿಕ ಅಂಕ ಗಳಿಸಿರುವ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮತ್ತು ನೂತನ ಶಾಸಕರಿಗೆ ಅಭಿನಂದನಾ ಸಮಾರಂಭ ಹಾಗೂ ಕವಿಗೋಷ್ಠಿ, ಉದ್ಘಾಟನೆ : ಶಾಸಕ ಟಿ.ಎಸ್. ಶ್ರೀವತ್ಸ, ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್‌ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ : ಶಾಸಕರಾದ ಕೆ. ಹರೀಶ್‌ಗೌಡ, ದರ್ಶನ್ ಧ್ರುವನಾರಾಯಣ್, ಪ್ರತಿಭಾ ಪುರಸ್ಕಾರ ಪ್ರದಾನ: ಮೈಸೂರು ವಿವಿ ಕುಲಪತಿ ಪ್ರೊ. ಎನ್.ಕೆ. ಲೋಕನಾಥ್, ಅಧ್ಯಕ್ಷತೆ : ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಪ್ರಾಸ್ತಾವಿಕ ನುಡಿ: ಕನ್ನಡ ಸಾಹಿತ್ಯ ಕಲಾಕೂಟ ಅಧ್ಯಕ್ಷ ಎಂ. ಚಂದ್ರಶೇಖರ್, ಸ್ಥಳ: ಶ್ರೀ ನಾದಬ್ರಹ್ಮ ಸಂಗೀತ ಸಭಾ, ಕೃಷ್ಣಮೂರ್ತಿಪುರಂ, ಬೆಳಗ್ಗೆ 10.30ಕ್ಕೆ.

■ **ಟ್ವೆಲ್ ಮ್ಯಾಗಜಿನ್ :** ಶೀರೋ ಅವಾರ್ಡ್ಸ್‌ನ ಲಾಂಛನ ಬಿಡುಗಡೆ ಕಾರ್ಯಕ್ರಮ, ಲಾಂಛನ ಬಿಡುಗಡೆ ಹಾಗೂ ಉದ್ಘಾಟನೆ : ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಸ್ಥಳ: ರ್‍ಯಾಡಿಸನ್ ಬ್ಲೂ, ಬೆಳಗ್ಗೆ 10.45ಕ್ಕೆ.

■ **ಕರ್ನಾಟಕ ಸೇನಾ ಪಡೆ :** ರಾಜರ್ಷಿ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ ಅಂಗವಾಗಿ ಪ್ರವಾಸಿಗರಿಗೆ ಮೈಸೂರು ಪಾಕ್ ವಿತರಣಾ ಕಾರ್ಯಕ್ರಮ, ಸಾನ್ನಿಧ್ಯ : ಪ್ರೊ. ಭಾಷ್ಯಂ ಸ್ವಾಮೀಜಿ, ಪುಷ್ಪಾರ್ಚನೆ : ವಿಧಾನ ಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ, ಉಪಸ್ಥಿತರು : ಉಪ ಪೊಲೀಸ್ ಆಯುಕ್ತ ಡಾ. ಎಂ. ಮುತ್ತುರಾಜ್, ಅರಮನೆ ಮಂಡಳಿ ಉಪನಿರ್ದೇಶಕ ಟಿ.ಎಸ್. ಸುಬ್ರಹ್ಮಣ್ಯ, ಎಂ.ಎನ್. ದೊರೆಸ್ವಾಮಿ, ಕರ್ನಾಟಕ ರಾಜ್ಯ ಒಕ್ಕಲಿಗರ ಸಂಘದ ಕಾರ್ಯಾಧ್ಯಕ್ಷ ಸಿ.ಜಿ. ಗಂಗಾಧರ್, ಮೈಸೂರು ಬ್ರಾಹ್ಮಣ ಸಭಾ ಅಧ್ಯಕ್ಷ ಡಿ.ಟಿ. ಪ್ರಕಾಶ್, ಸ್ಥಳ:ಮೈಸೂರು ಅರಮನೆ ದಕ್ಷಿಣ ದ್ವಾರದ ಮುಂಭಾಗ, ಬೆಳಗ್ಗೆ 11.30ಕ್ಕೆ.

■ **ಶ್ರೀ ರಾಘವೇಂದ್ರಸ್ವಾಮಿಗಳ ಬೃಂದಾವನ ಸನ್ನಿಧಾನ :** ಶ್ರೀ ರಾಘವೇಂದ್ರ ಸ್ವಾಮಿಗಳ 76ನೇ ಬೃಂದಾವನ ಪ್ರತಿಷ್ಠಾಪನಾ ವರ್ಧಂತ್ಯುತ್ಸವ ಜ್ಞಾನಸತ್ರ, ಪಂಡಿತ್ ಶ್ರೀ ರಘೋತ್ತಮಾಚಾರ್ಯ ನಾಗಸಂಪಿಗೆ, ಬಾಗಲಕೋಟೆ ಅವರಿಂದ ಶ್ರೀಮದ್ ರಾಮಾಯಣ ಪ್ರವಚನ (ಬಾಲಕಾಂಡ), ಸ್ಥಳ:ತತ್ವಜ್ಞಾನ ಮಂದಿರ, ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಆವರಣ, ಕೃಷ್ಣಮೂರ್ತಿಪುರಂ, ಸಂಜೆ 6ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.30 ಅಂತಾರಾಷ್ಟ್ರೀಯ ಯೋಗ ದಿನದ ಅಂಗವಾಗಿ ಮೈಸೂರಿನ ಯೋಗ ವಿದ್ಯಾ ಪರಂಪರೆ, ಬಾನುಲಿ ಸರಣಿ, ಪ್ರಸ್ತುತಿ– ಡಾ.ಎ.ಎಸ್. ಚಂದ್ರಶೇಖರ್, 6.35 ಸಿ.ಎಫ್.ಟಿ.ಆರ್.ಐ ಸಿರಿಧಾನ್ಯದ ಸಿರಿ–ಪ್ರಾಯೋಜಿತ ಕಾರ್ಯಕ್ರಮ, 6.40 ಹಾಡು ಹೇಳಿದ ಕಥೆ, ಪ್ರಸ್ತುತಿ – ಡಾ. ಮೈಸೂರು ಉಮೇಶ್, 7.15 ಭಾವಗೀತೆಗಳು, 8.30 ವಿಶಿಷ್ಟ ವ್ಯಕ್ತಿ ವಿಶೇಷ ಯತ್ನ–ಬಾನುಲಿ ಸರಣಿ–ಮೈಸೂರಿನ ರಾಜಮಾತೆ ಪ್ರಮೋದಾದೇವಿ ಅವರೊಂದಿಗೆ ಸಂವಾದ, ನಡೆಸಿಕೊಡುತ್ತಾರೆ– ದಿವಾಕರ ಹೆಗಡೆ, 10.00 ಕೆ.ಜಿ. ಕನಕಲಕ್ಷ್ಮಿ – ಹಾಡುಗಾರಿಕೆ

ಮಧ್ಯಾಹ್ನ: 12.30 ದೇವರನಾಮ, 12.45 ಜನಪದಸಂಗೀತ, 1.20 ವಿಶ್ವಯೋಗ ದಿನದ ಸಂಬಂಧದ ಸರಣಿ, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 3.30 ಮಕ್ಕಳ ಮಂಟಪ –ಶ್ರೀರಂಗಪಟ್ಟಣ ಪಾಲಹಳ್ಳಿಯ ಶ್ರೀ ಶಾರದಾ ಹಿರಿಯ ಪ್ರಾಥಮಿಕ ಶಾಲೆಯ ಮಕ್ಕಳಿಂದ ಕಾರ್ಯಕ್ರಮ ವೈವಿಧ್ಯ, 4.00 ನಾಟಕ, 4.30 ನೆನಪಿನಂಗಳ, 6.50 ಕೃಷಿರಂಗ–ತೋರಣ ಹೂರಣ– ಪ್ರಸ್ತುತಿ– ಜಿ. ಶಾಂತಕುಮಾರ್, 8.00 ಯುವವಾಣಿ, 10.00 ರಾಷ್ಟ್ರೀಯ ಸಂಗೀತ ಕಾರ್ಯಕ್ರಮ, ನಂದಿನಿ ಚಕ್ರಬೋರ್ತಿ–ಗಾಯನ

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜೂನ್ 3 ಶನಿವಾರ 2023

ಸಂಪುಟ: 44 | ಸಂಚಿಕೆ: 48 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಐದೂ ಗ್ಯಾರಂಟಿ ಜಾರಿ ಘೋಷಣೆ

ಷರತ್ತುಗಳು ಅನ್ವಯ



ಜೂನ್ 11ರಿಂದ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ

'ಶಕ್ತಿ' 1



ಜುಲೈ 1ರಿಂದ ತಲಾ 10 ಕೆ.ಜಿ.ಅಕ್ಕಿ ವಿತರಣೆ

'ಅನ್ನಭಾಗ್ಯ' 2



ಜುಲೈ 1ರಿಂದ ಷರತ್ತು ಬದ್ಧ 200 ಯೂನಿಟ್ ಉಚಿತ ವಿದ್ಯುತ್

'ಗೃಹಜ್ಯೋತಿ' 3



ಆ.15ರಿಂದ ಪ್ರತಿ ಮನೆ ಯಜಮಾನಿಗೆ ಮಾಸಿಕ 2000 ರೂ.

'ಗೃಹಲಕ್ಷ್ಮಿ' 4



ಪ್ರಸಕ್ತ ಸಾಲಿನಲ್ಲಿ ವಿವಿಧ ಪದವಿ ಪಡೆದವರಿಗೆ 3000ರೂ. ಡಿಪ್ಲೊಮಾದಾರರಿಗೆ 1500 ರೂ.

'ಯುವ ನಿಧಿ' 5



ಬೆಂಗಳೂರು, ಜೂ.2– ಕಾಂಗ್ರೆಸ್ ಪಕ್ಷ ಚುನಾವಣೆಗೂ ಮುನ್ನಾ ಜನತೆಗೆ ನೀಡಲಾಗಿದ್ದ ಎಲ್ಲಾ ಗ್ಯಾರಂಟಿ ಭರವಸೆಗಳನ್ನು ಪ್ರಸಕ್ತ ಹಣಕಾಸು ವರ್ಷದಲ್ಲಿ ಅನುಷ್ಠಾನಗೊಳಿಸಲಾಗುವುದು ಎಂದು ಸಚಿವ ಸಂಪುಟ ಸಭೆ ನಂತರ ಸುದ್ದಿಗೋಷ್ಠಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದರು.

ಮೊದಲ ಗ್ಯಾರಂಟಿ: ಗೃಹ ಜ್ಯೋತಿ ಯೋಜನೆಯನ್ನು ಜುಲೈ 1 ರಿಂದ ಜಾರಿ ಮಾಡಲಾಗುವುದು. 12 ತಿಂಗಳ ಸರಾಸರಿ ಆಧರಿಸಿ, ಅದಕ್ಕೆ ಶೇಕಡಾ 10ರಷ್ಟು ಸೇರಿಸಿ, ಸಂಪೂರ್ಣ ಶುಲ್ಕ ವಿನಾಯಿತಿ ನೀಡಲಾಗುವುದು ಎಂದರು. ಈ ಹಿಂದಿನ ಹಳೇ ವಿದ್ಯುತ್ ಬಾಕಿಯನ್ನು ಗ್ರಾಹಕರೇ ಪಾವತಿಸಬೇಕು. ಜುಲೈ ತಿಂಗಳ ವಿದ್ಯುತ್ ಬಳಕೆಗೆ ಆಗಸ್ಟ್ ನಿಂದ ಅನ್ವಯವಾಗಲಿದೆ. ಬಾಡಿಗೆದಾರರಿಗೂ ಈ ಯೋಜನೆ ಅನ್ವಯವಾಗಲಿದೆ ಎಂದರು. ಯಾವುದೇ ಜಾತಿ, ಧರ್ಮಗಳ ತಾರತಮ್ಯ ಇಲ್ಲದೆ ಗ್ಯಾರಂಟಿ ಯೋಜನೆ ಜಾರಿ ಎಂದ ಸಿದ್ದರಾಮಯ್ಯ, ಈ ಆರ್ಥಿಕ ವರ್ಷದಲ್ಲಿ ಘೋಷಣೆ ಮಾಡಿರುವ ಎಲ್ಲಾ ಗ್ಯಾರಂಟಿಗಳನ್ನು ಮಾಡುತ್ತೇವೆ ಎಂದು ತಿಳಿಸಿದರು.

● 9ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಡಾಕ್ಟರ್ : (ಮರಣಶಯ್ಯೆಯಲ್ಲಿದ್ದ ರೋಗಿಗೆ) "ನಿಮಗೇನಾದರೂ ಕೊನೆ ಆಸೆ ಇದೆಯಾ?"

ರೋಗಿ : "ಖಂಡಿತಾ ಇದೆ ಡಾಕ್ಟ್ರೆ"

ಡಾಕ್ಟರ್ : "ಏನು ನಿಮ್ಮ ಕೊನೆ ಆಸೆ?

ರೋಗಿ : ಸಾಯೋಕೆ ಮುಂಚೆ ಒಂದೇ ಒಂದು ಸಲ ನಾನು ನಿಮ್ಮ ಎಂಬಿಬಿಎಸ್ ಸರ್ಟಿಫಿಕೇಟ್ ನೋಡಬೇಕು!"

ಮೈಸೂರು ಮಿತ್ರ

ಶನಿವಾರ, 3 ಜೂನ್ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ..........

ಅಂಜಿಕೆಯನ್ನು ತೋರ್ಪಡಿಸಿದರೆ ಅದು ಅಪಾಯವನ್ನು ಸ್ವಾಗತಿಸಿದಂತೆ.

–ಚೆಸ್ಟರ್‌ಫೀಲ್ಡ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ದಾನ ದಾನಕ್ಕಿಂತಲೂ ಅನ್ನದಾನ ಮೇಲು

ನಿಮ್ಮ ಪತ್ರಗಳು

ಯುಜಿಡಿ ಕಾಮಗಾರಿ ಶೀಘ್ರ ಪೂರ್ಣಗೊಳಿಸಿ

ಮಾನ್ಯರೆ,

ಮೈಸೂರಿನ ಕುವೆಂಪುನಗರ, ಎಂ ಬ್ಲಾಕ್, ಅಗರವಾಲ್ ಆಸ್ಪತ್ರೆಯ ಮುಖ್ಯ ರಸ್ತೆಯಿಂದ ಶ್ರೀರಾಂಪುರದ ಶಿವನ ದೇವಸ್ಥಾನದವರೆಗೆ ಮುಖ್ಯ ರಸ್ತೆಯಲ್ಲಿ ಯುಜಿಡಿ ಪೈಪ್‌ಲೈನ್ ಅಳವಡಿಸುವ ಕಾಮಗಾರಿ ಕಳೆದ ಆರು ತಿಂಗಳಿನಿಂದಲೂ ನಡೆಯುತ್ತಲೇ ಇದೆ. ಈ ಮುಖ್ಯ ರಸ್ತೆಯಲ್ಲಿ ಆರ್‌ಎಂಪಿ ಕ್ವಾರ್ಟಸ್ ಎದುರು ಸುಮಾರು ನಾನೂರು ಮಂದಿ ವಿದ್ಯಾರ್ಥಿನಿಯರುಗಳಿರುವ ಹಾಸ್ಟೆಲ್ ಇದ್ದು, ಇಲ್ಲಿಂದ ನಗರದ ಬೇರೆ-ಬೇರೆ ಕಾಲೇಜುಗಳಿಗೆ ಕೆಎಸ್‌ಆರ್‌ಟಿಸಿ, ಬಸ್ಸುಗಳಲ್ಲೇ ತೆರಳಬೇಕು.

ಕಳೆದ ಆರು ತಿಂಗಳುಗಳಿಂದ ಈ ರಸ್ತೆಯಲ್ಲಿ ಕೆಎಸ್‌ಆರ್‌ಟಿಸಿ ಬಸ್‌ಗಳ ಸಂಚಾರವಿಲ್ಲದೇ ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳಿಗೆ ತೀವ್ರ ತೊಂದರೆಯಾಗುತ್ತಿದೆ. ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಸಿಟಿಗೆ ಹೋಗಲು ಸುಮಾರು ಒಂದು ಕಿ.ಮಿ. ದೂರದ ಕುವೆಂಪುನಗರದ ಬಸ್ ಡಿಪೋದಿಂದ ಬಸ್ ಹಿಡಿದು ಹೋಗಬೇಕು. ಈ ಕಾಮಗಾರಿಯಿಂದಾಗಿ ರಸ್ತೆಯ ಅಕ್ಕ ಪಕ್ಕ ಗುಂಡಿಗಳಾಗಿದ್ದು, ಆಗಾಗ್ಗೆ ಸಣ್ಣಪುಟ್ಟ ಅಪಘಾತಗಳು ಸಂಭವಿಸುತ್ತಲೇ ಇವೆ. ಕೇವಲ ಒಂದರಿಂದ – ಒಂದೂವರೆ ಕಿ.ಮೀ ದೂರದ ಯುಜಿಡಿ ಪೈಪ್‌ಲೈನ್ ಅಳವಡಿಸಲು ಎಷ್ಟು ತಿಂಗಳು ಬೇಕು? ಅಥವಾ ಸಂಬಂಧಿಸಿದವರಿಗೆ ಇನ್ನು ಕಮಿಷನ್ ಸಂದಾಯವಾಗಿಲ್ಲವೆ?

–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು

ರಸ್ತೆಗೆ ಚಾಚಿಕೊಂಡಿರುವ ಮೆಟಲ್ ಛೇಂಬರ್‌ನಿಂದ ಅನಾಹುತ ಸಾಧ್ಯತೆ



ಮಾನ್ಯರೆ,

ಮೈಸೂರಿನ ಕುವೆಂಪು ನಗರ, ಗೋಕುಲಂ ಹಾಗೂ ನಗರದ ಇತರ ಸ್ಥಳಗಳಲ್ಲಿ ಟೆಲಿಕಾಂ ಸಂಸ್ಥೆಯಿಂದ ಅಳವಡಿಸಲಾಗಿರುವ ಮೆಟಲ್ ಚೇಂಬರ್ ರಸ್ತೆಗೆ ಚಾಚಿಕೊಂಡಿದ್ದು, ಇದ'ರಿಂದ ಪಾದಚಾರಿಗಳು ಹಾಗೂ ವಾಹನ ಚಾಲಕರಿಗೆ ತುಂಬಾ ತೊಂದರೆಯಾಗಿದೆ. ಮಕ್ಕಳು ತಮ್ಮ ಮನೆಯ ಸಮೀಪವಿರುವ ರಸ್ತೆ ಬದಿಗಳಲ್ಲಿ ಆಟವಾಡುವಾಗ ಈ ಛೇಂಬರ್ ಮೇಲೆ ಕಾಲಿಟ್ಟರೆ ಗಾಯಗೊಳ್ಳುವ ಸಾಧ್ಯತೆಗಳಿವೆ. ಈ ಕಬ್ಬಿಣದ ಛೇಂಬರ್ ವೃದ್ಧರು ವಾಕಿಂಗ್ ಮಾಡುವಾಗ ನೋಡದೆ ಕಾಲಿಟ್ಟರೆ ಅವರ ಪ್ರಾಣಕ್ಕೂ ಅಪಾಯವನ್ನುಂಟುಮಾಡುತ್ತವೆ. ಅಲ್ಲದೆ ಇಂತಹ ಪ್ರದೇಶದಲ್ಲಿ ಟ್ರ್ಯಾಕ್ಟರ್ಸ್, ಖಾಸಗಿ ವಾಹನಗಳು ಮತ್ತು ಇತರೆ ದೊಡ್ಡ ವಾಹನಗಳು ಚಲಿಸುವುದು ತುಂಬಾ ಕಷ್ಟವಾಗುತ್ತದೆ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ಇತ್ತ ಗಮನಹರಿಸಿ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಮನವಿ.

–ಎಸ್.ಕೆ. ಸತ್ಯನಾಯಕ್, ಮೈಸೂರು.

ಒಂದು ಸಮಾಧಾನಕರ ಸಂಗತಿ

ಮಾನ್ಯರೆ,

ಮೈಸೂರು ನಗರದ ದ್ವಿಚಕ್ರ ವಾಹನ ಸವಾರರನ್ನು ಆಗಾಗ ಬೆಚ್ಚಿ ಬೀಳಿಸುತ್ತಿದ್ದ ಮತ್ತು ಕೆಲವು ರಸ್ತೆ ಅಪಘಾತಗಳಿಗೆ ಪರೋಕ್ಷವಾಗಿ ಕಾರಣವಾಗುತ್ತಿದ್ದ ಸಂಚಾರಿ ಪೊಲೀಸರ ವಾಹನ ತಪಾಸಣೆ ಕಾರ್ಯವನ್ನು ನಗರ ಪೋಲಿಸ್ ಆಯುಕ್ತರು ನಿಲ್ಲಿಸಿರುವುದು ಸ್ವಾಗತಾರ್ಹವಾಗಿದೆ.

ಹೆಲ್ಮೆಟ್ ಧರಿಸದೇ ವಾಹನ ಚಾಲನೆ ಮಾಡುವುದು ಸೇರಿದಂತೆ ಹತ್ತು ಹಲವು ರೀತಿಯ ಸಂಚಾರ ನಿಯಮಗಳನ್ನು ಉಲ್ಲಂಘಿಸುತ್ತಿದ್ದ ಸವಾರರ ಮೇಲೆ ಎಲ್ಲೆಂದರಲ್ಲಿ ಮುಗಿ ಬಿದ್ದು ದಂಡವನ್ನು ವಸೂಲಿ ಮಾಡುತ್ತಿದ್ದ ಪೊಲೀಸರ ಕಣ್ಣು ತಪ್ಪಿಸಿ ಪರಾರಿಯಾಗಲು ಪ್ರಯತ್ನಿಸುತ್ತಿದ್ದ ವಾಹನ ಸವಾರರು ವಾಹನವನ್ನು ಯದ್ವಾ ಬಿದ್ವಿ ತಿರುಗಿಸಿ, ಅಪಘಾತಕ್ಕೆ ಸಿಲುಕುತ್ತಿದ್ದರು. ಕೆಲವು ಸಂದರ್ಭಗಳಲ್ಲಿ ಸವಾರರ ಪ್ರಾಣಕ್ಕೂ ಸಂಚಕಾರವಾದ ಉದಾಹರಣೆ ಇದೆ. ಸಂಚಾರ ನಿಯಮಗಳನ್ನು ಎಲ್ಲಾ ಸವಾರರು ಕಡ್ಡಾಯವಾಗಿ ಪಾಲಿಸಬೇಕು ಎಂಬುದರಲ್ಲಿ ಎರಡನೆಯ ಮಾತಿಲ್ಲ. ಆದರೆ, ಸಂಚಾರಿ ಪೋಲಿಸರು ಇದಕ್ಕಾಗಿ ಹಸಿದ ಹುಲಿಗಳಂತೆ, ಎಲ್ಲೆಂದರಲ್ಲಿ ವಾಹನ ಸವಾರರನ್ನು ಅಡ್ಡಗಟ್ಟುವುದು ಅದೇಕೋ ಸರಿಕಾಣದು.

ಸಂಚಾರಿ ಪೊಲೀಸರ ಸಮಯವೆಲ್ಲಾ ಇದರಲ್ಲೇ ಕಳೆದು ಹೋಗುತ್ತದೆ. ಸಾರ್ವಜನಿಕರಿಂದಲೂ ಸಹ ಇದರ ಬಗ್ಗೆ ಆಗಿಂದಾಗ್ಗೆ ದೂರು ಕೇಳಿ ಬರುತ್ತಿತ್ತು ಈಗ ಈ ರೀತಿಯ ರಂಪಾಟಗಳಿಗೆ ಕಡಿವಾಣ ಹಾಕಿರುವ ಪೊಲೀಸ್ ಆಯುಕ್ತರು ಇನ್ನು ಮುಂದೆ ಸಂಚಾರಿ ಪೋಲಿಸರು, ತಮ್ಮ ದೈನಂದಿನ ಕೆಲಸ ಕಾರ್ಯಗಳಿಗೆ ಹೆಚ್ಚು ಗಮನ ನೀಡುತ್ತಾರೆ ಹಾಗೂ ಸಂಚಾರ ನಿಯಮಗಳ ಉಲ್ಲಂಘನೆ ಪತ್ತೆ ಹಚ್ಚಲು ನಗರದ ಎಲ್ಲಾ ಪ್ರಮುಖ ರಸ್ತೆಗಳಲ್ಲಿ ಸಿಸಿ ಕ್ಯಾಮರಾಗಳನ್ನು ಅಳವಡಿಸಿ, ಸಂಬಂಧಿಸಿದವರಿಗೆ ನೋಟಿಸ್ ಕಳುಹಿಸಲಾಗುತ್ತದೆ ಎಂದು ಹೇಳಿರುವುದು ಮಾಧ್ಯಮಗಳಲ್ಲಿ ಪ್ರಕಟವಾಗಿದೆ.

ವಾಹನ ತಪಾಸಣೆಯ ಹೆಸರಿನಲ್ಲಿ ವಾಹನ ಸವಾರರಿಗೆ ಕಿರಿಕಿರಿ ಉಂಟು ಮಾಡುವುದು ಸರಿಯಲ್ಲ. ಅದೇ ವೇಳೆ, ವಾಹನ ಸವಾರರು, ಸಾಧ್ಯವಾದಷ್ಟು ಮಟ್ಟಿಗೆ ಸಂಚಾರ ನಿಯಮಗಳನ್ನು ಪಾಲಿಸಿ, ಹಾಗೂ ವಾಹನಗಳಿಗೆ ಸಂಬಂಧಿಸಿದ ದಾಖಲೆಗಳನ್ನು ತಮ್ಮ ಬಳಿ ಇಟ್ಟುಕೊಂಡು ಸುಗಮ ಸಂಚಾರ ವ್ಯವಸ್ಥೆಗೆ ಪೋಲಿಸರ ಜೊತೆ ಸಹಕರಿಸಬೇಕಾಗಿದೆ.

–ಕೆ.ವಿ.ವಾಸು, ವಕೀಲರು ಮತ್ತು ನೋಟರಿ, ಮೈಸೂರು

ಸ್ವಾಗತಾರ್ಹ ಬೆಳವಣಿಗೆ

ಮಾನ್ಯರೆ,

ರಾಜ್ಯದ ಎಲ್ಲಾ ಶಾಲಾ–ಕಾಲೇಜು ಮತ್ತು ವಿಶ್ವವಿದ್ಯಾಲಯಗಳಲ್ಲಿ ಪ್ರತಿದಿನ ಸಂವಿಧಾನದ ಪ್ರಸ್ತಾವನೆಯನ್ನು ವಿದ್ಯಾರ್ಥಿಗಳಿಂದ ಪಠಿಸುವುದಕ್ಕೆ ಪೂರಕವಾಗಿ ಆದೇಶ ಹೊರಡಿಸಲು ಅಧಿಕಾರಿಗಳಿಗೆ ಸಮಾಜ ಕಲ್ಯಾಣ ಸಚಿವರು ಸೂಚನೆ ನೀಡಿರುವುದು ಸ್ವಾಗತಾರ್ಹ. ರಾಜ್ಯಾದ್ಯಂತ ಶಾಲೆ, ಕಾಲೇಜುಗಳಲ್ಲಿ ಸಂವಿಧಾನದ ಪ್ರಸ್ತಾವನೆಯನ್ನು ಪಠಿಸುವುದು ಕಡ್ಡಾಯಗೊಳಿಸಿದ್ದಲ್ಲಿ ಸಂವಿಧಾನದ ಬಗ್ಗೆ ಅದರಲ್ಲೂ ಮೂಲಭೂತ ಹಕ್ಕುಗಳು, ಮೂಲಭೂತ ಕರ್ತವ್ಯಗಳು, ರಾಜ್ಯ ನೀತಿ, ನಿರ್ದೇಶನ ತತ್ವಗಳು, ಮೂರು ಹಂತದ ಆಡಳಿತ ವ್ಯವಸ್ಥೆ, ಸ್ವತಂತ್ರ ನ್ಯಾಯಾಂಗ ವ್ಯವಸ್ಥೆ, ಸಂಸದೀಯ ವ್ಯವಸ್ಥೆ, ಜಾತ್ಯತೀತ ನಿಲುವು, ಏಕ ನಾಗರಿಕತ್ವ ವ್ಯವಸ್ಥೆ, ಮತದಾನದ ಹಕ್ಕು ಮತ್ತು ಸಂವಿಧಾನವನ್ನು ತಿದ್ದುಪಡಿ ಮಾಡಲು ಇರುವ ಅವಕಾಶ ಮತ್ತು ಇನ್ನಿತರ ಅಂಶಗಳು ವಿದ್ಯಾರ್ಥಿಗಳಿಗೆ ಮನವರಿಕೆ ಆಗಲು ನೆರವಾಗುತ್ತದೆ.

–ಡಾ.ವಿಜಯಕುಮಾರ್ ಎಚ್.ಕೆ., ರಾಯಚೂರು



ಪ್ರೊ. ಆರ್. ಇಂದಿರಾ
ಸಮಾಜಶಾಸ್ತ್ರಜ್ಞೆ
ramaraoindira@gmail.com

ಸಮಾಜಮುಖಿ

'ವಿಶ್ವ ಪರಿಸರ ದಿನಾಚರಣೆ' ಮಂತ್ರ ಪಠಣೆ ಆರಂಭವಾಗಿ ಅರ್ಧ ಶತಮಾನ ಕಳೆದೊಯ್ತು!

ಜೂನ್ 5 ಬಂತೆಂದರೆ ವಿಶ್ವ ಪರಿಸರ ದಿನಾಚರಣೆಯನ್ನು ಜಗತ್ತಿನೆಲ್ಲೆಡೆ ಆಚರಿಸಲಾಗುತ್ತದೆ. ಈ ಬಾರಿಯ ಪರಿಸರ ದಿನಾಚರಣೆಯ ಮಹತ್ವವೆಂದರೆ ಅದು 50 ವರ್ಷಗಳನ್ನು ಕಳೆದು 51ನೇ ವರ್ಷಕ್ಕೆ ಕಾಲಿಟ್ಟಿರುವುದು. ಸಮಕಾಲೀನ ಸಂದರ್ಭದಲ್ಲಿ ಮಾನವ ಸಮಾಜ ಎದುರಿಸುತ್ತಿರುವ ಸವಾಲುಗಳಲ್ಲಿ ಪರಿಸರ ಸಂರಕ್ಷಣೆ ಅತ್ಯಂತ ಆದ್ಯತೆಯ ಸ್ಥಾನದ ಲ್ಲಿರುವುದರಿಂದ ಈ ದಿನದ ಮಹತ್ವವೇನು, ಅದರ ಆಚರಣೆ ಎಲ್ಲಿ, ಯಾರಿಂದ ಮತ್ತು ಏತಕ್ಕಾಗಿ ಆರಂಭವಾಯಿತು ಎಂಬುದನ್ನು ವಿಶ್ಲೇಷಿಸಿ, ಅದರ ಸುಸ್ಥಿರ ಸಂರಕ್ಷಣೆಗೆ ನಮ್ಮ ಮುಂದಿರುವ ದಾರಿಗಳೇನು ಎಂಬುದನ್ನು ಚರ್ಚಿಸಬೇಕಾಗಿದೆ.

ವಿಶ್ವ ಪರಿಸರ ದಿನಾಚರಣೆಗೆ ಒಂದು ಐತಿಹಾಸಿಕ ಪರಂಪರೆಯಿದೆ. 1972ನೇ ಇಸವಿಯಲ್ಲಿ ವಿಶ್ವ ಸಂಸ್ಥೆಯ ಆಶ್ರಯದಲ್ಲಿ ಸ್ವೀಡನ್ ದೇಶದ ಸ್ಟಾಕ್ ಹೋಂ ನಗರದಲ್ಲಿ ಪ್ರಥಮ ಬಾರಿಗೆ ಜೂನ್ 5ರಿಂದ 16ರವರೆಗೂ ಮಾನವ ಪರಿಸರ ಸಮಾವೇಶವನ್ನು ಏರ್ಪಡಿಸಲಾಯಿತು. ಸಮಾವೇಶದಲ್ಲಿ ಸುಸ್ಥಿರ ಪರಿಸರವನ್ನು ನಿರ್ಮಾಣ ಮಾಡುವತ್ತ ಎಲ್ಲ ದೇಶಗಳೂ ವಹಿಸಬೇಕಾದ ಎಚ್ಚರಗಳ ಬಗ್ಗೆ ಚರ್ಚಿಸಿ ಪರಿಸರ ನಾಶಕ್ಕೆ ಕಾರಣವಾಗುತ್ತಿರುವ ಜಾಗತಿಕ ತಾಪಮಾನ ಏರಿಕೆ, ವನ್ಯಜೀವಿಗಳ ನಾಶ, ಮಾನವ ವಲಸೆ, ಜನಸಂಖ್ಯಾ ಹೆಚ್ಚಳ ಮುಂತಾದುವುಗಳ ಬಗ್ಗೆ ಜಾಗೃತರಾಗಿ ಜೀವನಾಧಾರಗಳಾದ ನೆಲ–ಜಲ–ವಾಯು–ಸಸ್ಯ– ಪ್ರಾಣಿ ಸಂಪತ್ತುಗಳನ್ನು ರಕ್ಷಿಸಲು ಸರ್ಕಾರಗಳು, ಸ್ವಯಂಸೇವಾ ಸಂಸ್ಥೆಗಳು, ಬಂಡವಾಳಶಾಹಿ ವಲಯ ಮತ್ತು ನಾಗರಿಕ ಸಮಾಜ ಸನ್ನದ್ಧವಾಗಬೇಕು ಎಂಬ ಕರೆಯನ್ನು ನೀಡಲಾಯಿತು.

1973ರಿಂದ ಪ್ರತಿ ವರ್ಷವೂ ಮಾನವ ಪರಿಸರ ಸಮಾವೇಶದ ಮೊದಲ ದಿನವಾದ ಜೂನ್ 5ರಂದು ವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸಬೇಕು ಎಂದು ನಿರ್ಧರಿಸಿದ ವಿಶ್ವ ಸಂಸ್ಥೆಯ ಜನರಲ್ ಅಸೆಂಬ್ಲಿ ಯುನೈಟೆಡ್ ನೇಷನ್ಸ್ ಎನ್ವಿರಾನ್ಮೆಂಟಲ್ ಪ್ರೋಗ್ರಾಮ್(ವಿಶ್ವ ಸಂಸ್ಥೆಯ ಪರಿಸರ ಕಾರ್ಯಕ್ರಮ) ಎಂಬ ವಿಶೇಷ ಘಟಕವನ್ನು ಪ್ರಾರಂಭ ಮಾಡುವ ನಿರ್ಧಾರವನ್ನು ತೆಗೆದುಕೊಂಡಿತು. ವಿಶ್ವ ಪರಿಸರ ದಿನಾಚರಣೆ ಈ ಘಟಕದ ಮೂಲಕ ಪ್ರತಿ ವರ್ಷವೂ ಆಚರಿಸಲ್ಪಟ್ಟು ವಿಶ್ವ ಪರಿಸರ ದಿನಾಚರಣೆಗೆ ವಿಶ್ವ ಸಂಸ್ಥೆ ಪ್ರತಿ ವರ್ಷವೂ ಒಂದು ಘೋಷ ವಾಕ್ಯವನ್ನೂ ನೀಡುತ್ತದೆ. ಈ ಬಾರಿಯ ಘೋಷವಾಕ್ಯವೆಂದರೆ ಪ್ಲಾಸ್ಟಿಕ್ ಮಾಲಿನ್ಯವನ್ನು ಹೊಡೆದು ಓಡಿಸಿ ಎಂಬುದು.

ನಮ್ಮ ಸಮಾಜ ಆಧುನಿಕತೆಯತ್ತ ಸರಿಯುತ್ತಾ ಹೋದ ಹಾಗೆಲ್ಲ ಪರಿಸರದ ಮೇಲೆ ಒತ್ತಡಗಳು ಹೆಚ್ಚಾಗುತ್ತಾ ಹೋಗುತ್ತಿವೆ. ಅದರ ಪರಿಣಾಮವನ್ನೇ ನಾವು ಇಂದು ಅರಣ್ಯಗಳ ಹನನ, ಜೀವವೈವಿಧ್ಯ ನಾಶ, ಯೋಜನಾ ರಹಿತ ನಗರೀಕರಣ, ಅಭಿವೃದ್ಧಿಯ ಹೆಸರಿನಲ್ಲಿ ಬೃಹತ್ ಕಟ್ಟಡಗಳ ನಿರ್ಮಾಣ, ಜೀವನಾಧಾರಗಳನ್ನು ಅರಸಿ ಬರುವವರ ನಗರಾಭಿಮುಖ ವಲಸೆ–ಇವುಗಳ ರೂಪದಲ್ಲಿ ಕಾಣುತ್ತಿರುವುದು. ವಿಶ್ವ ಸಂಸ್ಥೆಯ ಪ್ರಕಾರ ಪರಿಸರವನ್ನು ಅಲಕ್ಷಿಸುವ ಮೂಲಕ ಒಂದು ರೀತಿಯ 'ಪರಿಸರ ತುರ್ತು ಪರಿಸ್ಥಿತಿ' ಇಂದು ನಿರ್ಮಾಣವಾಗಿದೆ. ಈಗಾಗಲೇ ಇರುವ ಸಮಸ್ಯೆಗಳ ಜೊತೆಗೆ ಹೊಸ ಹೊಸ ಸವಾಲುಗಳು ಎದುರಾಗುತ್ತಿವೆ. ಅವುಗಳಲ್ಲಿ ಪ್ಲಾಸ್ಟಿಕ್ ವಸ್ತುಗಳು ಮತ್ತು ಪ್ಲಾಸ್ಟಿಕ್ ತ್ಯಾಜ್ಯ ಪ್ರಾಕೃತಿಕ ಪರಿಸರಕ್ಕೆ ಮತ್ತು ಮಾನವ ಜೀವಕ್ಕೆ ತಂದೊಡ್ಡಿರುವ ಅಪಾಯಗಳು ಗಂಭೀರ ಸ್ವರೂಪವನ್ನು ತಾಳುತ್ತಿದ್ದು ಈಗ ಅದರತ್ತ ಗಮನ ಹರಿಸುವುದು ಅತೀ ಮುಖ್ಯವಾದ ಅಗತ್ಯವಾಗಿದೆ. ಪ್ಲಾಸ್ಟಿಕ್ ವಸ್ತುಗಳಾಗಲೀ ತಾಜ್ಯವಾಗಲೀ ಪರಿಸರದಲ್ಲಿ ಬಹು ಕಾಲ ಉಳಿದು, ವಿಷಪೂರಿತ ಟಾಕ್ಸಿನ್ಸ್‌ಗಳನ್ನು ಹರಡುತ್ತವೆ. ಬಹುತೇಕ ಪ್ಲಾಸ್ಟಿಕ್‌ಗಳು ಜಾಗತಿಕ ತಾಪಮಾನ ಹೆಚ್ಚಿಸುವ ಇಂಧನಗಳು, ಅನಿಲ, ತೈಲ ಮತ್ತು ಕಲ್ಲಿದ್ದಲುಗಳ ಮೂಲದಿಂದ ಉದ್ಭವವಾಗುವ ರಾಸಾಯನಿಕಗಳಿಂದ ತಯಾರಾಗುವುದರಿಂದ ಅವು ಜಾಗತಿಕ ತಾಪಮಾನದ ಏರಿಕೆಗೆ ಕಾರಣವಾಗುವುದಷ್ಟೇ ಅಲ್ಲ, ಮಾನವ ಮತ್ತು ಪ್ರಾಣಿಗಳ ಜೀವ ಹರಣಕ್ಕೂ ಕಾರಣವಾಗುತ್ತವೆ.



"ನಮ್ಮ ಸಮಾಜ ಆಧುನಿಕತೆಯತ್ತ ಸರಿಯುತ್ತಾ ಹೋದ ಹಾಗೆಲ್ಲ ಪರಿಸರದ ಮೇಲೆ ಒತ್ತಡಗಳು ಹೆಚ್ಚಾಗುತ್ತಾ ಹೋಗುತ್ತಿವೆ. ಅದರ ಪರಿಣಾಮವನ್ನೇ ನಾವು ಇಂದು ಅರಣ್ಯಗಳ ಹನನ, ಜೀವವೈವಿಧ್ಯ ನಾಶ, ಯೋಜನಾ ರಹಿತ ನಗರೀಕರಣ, ಅಭಿವೃದ್ಧಿಯ ಹೆಸರಿನಲ್ಲಿ ಬೃಹತ್ ಕಟ್ಟಡಗಳ ನಿರ್ಮಾಣ, ಜೀವನಾಧಾರಗಳನ್ನು ಅರಸಿ ಬರುವವರ ನಗರಾಭಿಮುಖ ವಲಸೆ – ಇವುಗಳ ರೂಪದಲ್ಲಿ ಕಾಣುತ್ತಿರುವುದು. ವಿಶ್ವ ಸಂಸ್ಥೆಯ ಪ್ರಕಾರ ಪರಿಸರವನ್ನು ಅಲಕ್ಷಿಸುವ ಮೂಲಕ ಒಂದು ರೀತಿಯ 'ಪರಿಸರ ತುರ್ತು ಪರಿಸ್ಥಿತಿ' ಇಂದು ನಿರ್ಮಾಣವಾಗಿದೆ. ಈಗಾಗಲೇ ಇರುವ ಸಮಸ್ಯೆಗಳ ಜೊತೆಗೆ ಹೊಸ ಹೊಸ ಸವಾಲುಗಳು ಎದುರಾಗುತ್ತಿವೆ. ಅವುಗಳಲ್ಲಿ ಪ್ಲಾಸ್ಟಿಕ್ ವಸ್ತುಗಳು ಮತ್ತು ಪ್ಲಾಸ್ಟಿಕ್ ತಾಜ್ಯ ಪ್ರಾಕೃತಿಕ ಪರಿಸರಕ್ಕೆ ಮತ್ತು ಮಾನವ ಜೀವಕ್ಕೆ ತಂದೊಡ್ಡಿರುವ ಅಪಾಯಗಳು ಗಂಭೀರ ಸ್ವರೂಪವನ್ನು ತಾಳುತ್ತಿದ್ದು ಈಗ ಅದರತ್ತ ಗಮನ ಹರಿಸುವುದು ಅತೀ ಮುಖ್ಯವಾದ ಅಗತ್ಯವಾಗಿದೆ.

ಪ್ಲಾಸ್ಟಿಕ್ ಮಾಲಿನ್ಯ ಒಂದು ಜಾಗತಿಕ ಸಮಸ್ಯೆ. ಜಾಗತಿಕ ಪ್ಲಾಸ್ಟಿಕ್ ಉತ್ಪಾದನೆ ಹಾಲಿ 390 ಟನ್ನುಗಳಷ್ಟಿದ್ದು ಪ್ರತಿ ವರ್ಷವೂ ಶೇ.4ರಷ್ಟು ಹೆಚ್ಚುತ್ತಿದೆ. 1950ರಿಂದ 2017ರವರೆಗೂ ಉತ್ಪಾದನೆಯಾದ 9.2 ಬಿಲಿಯನ್ ಪ್ಲಾಸ್ಟಿಕ್‌ನಲ್ಲಿ 7 ಬಿಲಿಯನ್, ಎಂದರೆ ಶೇಕಡಾ 76ರಷ್ಟು ತಾಜ್ಯವಾಗಿ ಪರಿವರ್ತನೆ ಹೊಂದಿ ಭೂಮಿಯೊಳಗೆ ಸೇರಿದೆ. ಪ್ಲಾಸ್ಟಿಕ್‌ನಿಂದ ಸೃಷ್ಟಿಯಾದ ಮಾಲಿನ್ಯ ವಸತಿ ಪ್ರದೇಶಗಳನ್ನೂ ಪ್ರಾಕೃತಿಕ ಸಂಪನ್ಮೂಲಗಳ ಸಾಮರ್ಥ್ಯವನ್ನೂ ಕಡಿಮೆ ಮಾಡುತ್ತದೆ. ಹೀಗಾಗುವುದರಿಂದ ಇಡೀ ಪರಿಸರದ ಸಮತೋಲನವೇ ಪಲ್ಲಟವಾಗಿ ಜಾಗತಿಕ ತಾಪಮಾನದ ಏರಿಕೆಯನ್ನು ತಡೆಗಟ್ಟುವ ಶಕ್ತಿಯನ್ನು ಪರಿಸರ ಕಳೆದುಕೊಳ್ಳುತ್ತದೆ. ಕೋಟ್ಯಾಂತರ ಜನರ ಜೀವನ ನಿರ್ವಹಣಾ ಮಾರ್ಗಗಳು ಕುಗ್ಗುತ್ತಾ ಹೋಗಿ, ಆಹಾರ ಉತ್ಪಾದನೆಯೂ ಕಡಿಮೆಯಾಗುತ್ತದೆ.

ಭಾರತದಲ್ಲಿ ಪ್ಲಾಸ್ಟಿಕ್ ತಾಜ್ಯ ಸೃಷ್ಟಿಯಿಂದಾಗುತ್ತಿರುವ ಅಪಾಯಕ್ಕಿಂತ ಅದರ ನಿರ್ವಹಣೆಯಲ್ಲಿ ನಾವು ಸೋತಿರುವುದು ಭವಿಷ್ಯದ ಬಗ್ಗೆ ಹೆದರಿಕೆಯನ್ನು ಹುಟ್ಟಿಸುತ್ತದೆ ಎಂಬುದು ಅಧ್ಯಯನಗಳಿಂದ ಮೂಡಿ ಬಂದಿರುವ ವಿಚಾರ. ಕಳೆದ ಎರಡು ದಶಕಗಳಲ್ಲಿ ಕೈಗಾರಿಕೆಗಳು ಮತ್ತು ನಗರಗಳ ಬೆಳವಣಿಗೆ ಅತೀ ಹೆಚ್ಚು ಪ್ರಮಾಣದಲ್ಲಿ ಆಗಿದ್ದು ಪ್ಲಾಸ್ಟಿಕ್‌ಗಾಗಿ ಬೇಡಿಕೆಯೂ ಹೆಚ್ಚಿದೆ. ವರ್ಷವೊಂದರಲ್ಲೇ 22 ಮಿಲಿಯನ್ ಟನ್ ಪ್ಲಾಸ್ಟಿಕ್‌ಗೆ ಬೇಡಿಕೆಯಿದ್ದು, ಉತ್ಪತ್ತಿಯಾಗುವ ಪ್ಲಾಸ್ಟಿಕ್‌ನ ಸುಸ್ಥಿರ ನಿರ್ವಹಣೆ ನಮ್ಮ ದೇಶದಲ್ಲಿರುವ 5000ಕ್ಕೂ ಹೆಚ್ಚು ಪ್ಲಾಸ್ಟಿಕ್ ತಯಾರಿಕಾ ಮತ್ತು ನಿರ್ವಹಣಾ ಘಟಕಗಳ ಜವಾಬ್ದಾರಿಯಾಗಿದೆ. ಆದರೆ ಇವುಗಳಲ್ಲಿ ಎಷ್ಟು ನಿಯಮಗಳ ಪ್ರಕಾರ ತಮ್ಮ ವ್ಯವಹಾರಗಳನ್ನು ನಡೆಸುತ್ತಿದ್ದಾರೆ ಎನ್ನುವುದರ ಬಗ್ಗೆ ತೀವ್ರ ಅನುಮಾನಗಳು ವ್ಯಕ್ತವಾಗಿವೆ.

ಪ್ಲಾಸ್ಟಿಕ್‌ನಿಂದ ಸೃಷ್ಟಿಯಾದ ತಾಜ್ಯವನ್ನು ಭೂಮಿಯ ಮೇಲೆ ಅಥವಾ ಒಳಗೆ ಎಸೆಯುವುದು ಇಲ್ಲ ಶೇಖರಿಸುವುದರಿಂದ ಇಡೀ ವಾತಾವರಣವೇ ಕಲುಷಿತವಾಗುತ್ತದೆ. ಸರಕಾರವೇನೋ ನಮ್ಮ ದೇಶದ ಶೇಕಡಾ 60 ಭಾಗ ಪ್ಲಾಸ್ಟಿಕ್ ತಾಜ್ಯವನ್ನು ಮರು ಬಳಕೆಗೆ ಸಿದ್ಧಪಡಿಸಲಾಗುತ್ತದೆ ಎಂದು ಹೇಳುತ್ತಿದ್ದರೂ ವಾಸ್ತವದಲ್ಲಿ ಸಾರ್ವಜನಿಕ ತ್ಯಾಜ್ಯದ ಶೇ.13 ಭಾಗ ಮಾತ್ರ ರಿಸೈಕಲ್ ಆಗುತ್ತಿದೆ ಎಂಬುದು ತಜ್ಞರ ಅಂಬೋಣ.

ಕಳೆದ ನಾಲ್ಕು ವರ್ಷಗಳಲ್ಲಿ, ವಿಶೇಷವಾಗಿ ಕೋವಿಡ್ ಕಾಲದಲ್ಲಿ ಪ್ಲಾಸ್ಟಿಕ್‌ಗೆ ಬೇಡಿಕೆ ಭಾರತದಲ್ಲಿ ಹೆಚ್ಚಾಯಿತು. ಒಂದೆಡೆ ಭೂಮಿಯ ಮೇಲೆ ಸಂಗ್ರಹವಾಗುವ ಪ್ಲಾಸ್ಟಿಕ್ ತಾಜ್ಯ ಮಾನವ ಪರಿಸರವನ್ನು ಕಲುಷಿತಗೊಳಿಸುತ್ತಿದ್ದರೆ, ಮತ್ತೊಂದೆಡೆ ಸಾಗರಗಳ ಒಳಗೆ ಸೇರುತ್ತಿರುವ ಪ್ಲಾಸ್ಟಿಕ್ ಜಲಚರಗಳನ್ನು ಅಪಾಯದ ಅಂಚಿಗೆ ತಳ್ಳುತ್ತಿದೆ. ನಮ್ಮ ದೇಶದಲ್ಲಿ ಮುಂಬೈ, ಕೇರಳ ಮತ್ತು ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ ಸಮುದ್ರ ಸಂಪತ್ತು ಇಡೀ ಜಗತ್ತಿನ ಅತ್ಯಂತ ಕಲುಷಿತ ಜಲ ಮೂಲಗಳೆಂದು ಪರಿಗಣಿತವಾಗಿದೆ. ಇಡೀ ಪ್ರಪಂಚದ ಜಲಾವೃತ್ತ ಪ್ರದೇಶವನ್ನು ತೆಗೆದುಕೊಂಡಾಗ ಶೇ.86ರಷ್ಟು ಸಮುದ್ರ ಆಮೆಗಳು, ಶೇ.44 ರಷ್ಟು ಸಮುದ್ರ ಹಕ್ಕಿಗಳು ಮತ್ತು ಶೇ.43 ರಷ್ಟು ಸಮುದ್ರ ಸಸ್ತನಿಗಳು ಪ್ಲಾಸ್ಟಿಕ್ ತಾಜ್ಯದಿಂದ ಹಾನಿಗೆ ಒಳಗಾಗಿವೆ ಎಂದು ಸಂಶೋಧನೆಗಳು ಹೇಳುತ್ತಿವೆ. ಜಲಸಂಪನ್ಮೂಲಗಳನ್ನು ಆಹಾರ ಮೂಲಗಳಾಗಿ ಅವಲಂಬಿಸಿರುವ ಜನ ಸಮುದಾಯಗಳ ಆರೋಗ್ಯವನ್ನೂ ಪ್ಲಾಸ್ಟಿಕ್ ತ್ಯಾಜ್ಯ ನಕಾರಾತ್ಮಕವಾಗಿ ಪ್ರಭಾವಿಸುತ್ತದೆ ಎಂದು ಪ್ರತ್ಯೇಕವಾಗಿ ಹೇಳಬೇಕಿಲ್ಲವಲ್ಲ. ಸರ್ಕಾರಗಳು ಪ್ಲಾಸ್ಟಿಕ್ ಬಳಕೆಯನ್ನು ಎಷ್ಟೇ ಬಿಗಿ ಕ್ರಮಗಳ ಮೂಲಕ ನಿಷೇಧ ಮಾಡಿದರೂ ಇಂದಿಗೂ ದೇಶದ ಅನೇಕ ನಗರಗಳಲ್ಲಿ, ಪ್ರವಾಸಿ ತಾಣಗಳಲ್ಲಿ, ಆಸ್ಪತ್ರೆಗಳಲ್ಲಿ, ಆಹಾರ ತಯಾರಿಸುವ ಹಾಗೂ ಪ್ಯಾಕೇಜಿಂಗ್ ಮಾಡುವ ಘಟಕಗಳಲ್ಲಿ, ಮನೆಗಳಿಗೆ ಆಹಾರ, ಅಗತ್ಯ ವಸ್ತುಗಳು ಅಥವಾ ಸೌಂದರ್ಯ ಪ್ರಸಾಧನ ವಸ್ತುಗಳನ್ನು ತಲುಪಿಸುವ ವ್ಯವಸ್ಥೆಯಲ್ಲಿ ಪ್ಲಾಸ್ಟಿಕ್ ಬಳಕೆ ಅಧಿಕವಾ ಗಿದ್ದು ಇದಕ್ಕೆ ಪರ್ಯಾಯವಾದ ಪರಿಸರ ಸೂಕ್ಷ್ಮ ಕ್ರಮಗಳನ್ನು ತೆಗೆದುಕೊಳ್ಳದಿದ್ದರೆ ಮುಂಬರುವ ವರ್ಷಗಳಲ್ಲಿ ಪ್ಲಾಸ್ಟಿಕ್ ಪ್ರೇರಿತ ಆರೋಗ್ಯ ಸಮಸ್ಯೆಗಳು ಮತ್ತಷ್ಟು ವೃದ್ಧಿಯಾಗುವುದರಲ್ಲಿ ಸಂದೇಹವಿಲ್ಲ.

ಪ್ಲಾಸ್ಟಿಕ್‌ನಿಂದ ಉಂಟಾಗುವ ಮಾಲಿನ್ಯವನ್ನು ತಡೆಗಟ್ಟಲು ವಿಶ್ವ ಸಂಸ್ಥೆಯ ಪರಿಸರ ಕಾರ್ಯಕ್ರಮ ಸಂಸ್ಥೆ ಇತ್ತೀಚೆಗಷ್ಟೇ ಪ್ರಕಟಿಸಿದ ವರದಿಯೊಂದು ಕೆಲ ಸಲಹೆಗಳನ್ನು ನೀಡಿದೆ. ಈ ವರದಿಯ ಪ್ರಕಾರ ಮರು ಬಳಕೆಗೆ ಯೋಗ್ಯವಾದ ವಸ್ತುಗಳ ತಯಾರಿಕೆ ಮತ್ತು ಮಾನವ ದೇಹ, ಭೂ ಪ್ರದೇಶ ಮತ್ತು ಪರಿಸರ ದೊಳಗೆ ತ್ಯಾಜ್ಯಗಳನ್ನು ಬಿಡುವುದನ್ನು ನಿಲ್ಲಿಸಿ ಪರಿಸರ ಸೂಕ್ಷ್ಮ ಆರ್ಥಿಕ ವ್ಯವಸ್ಥೆಯನ್ನು ರೂಪಿಸಿದಾಗ ಮಾತ್ರ ಪ್ಲಾಸ್ಟಿಕ್ ಮಾಲಿನ್ಯವನ್ನು ತಡೆಗಟ್ಟಲು ಸಾಧ್ಯ.

ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ: ಹರಕೆ ಹೊತ್ತಿದ್ದ ಮಹಿಳೆಯರಿಂದ ಚಾಮುಂಡಿ ಬೆಟ್ಟಕ್ಕೆ ಪಾದಯಾತ್ರೆ

ಮೈಸೂರು, ಜೂ.2(ಎಂಟಿವೈ)–ವಿಧಾನಸಭಾ ಚುನಾವಣೆಯಲ್ಲಿ ಗೆದ್ದು ಸಿದ್ದರಾಮಯ್ಯ ಅವರು ಎರಡನೇ ಬಾರಿ ಮುಖ್ಯಮಂತ್ರಿ ಆಗಲೆಂದು ಹರಕೆ ಹೊತ್ತಿದ್ದ ಕಾಳಿಸಿದ್ದನಹುಂಡಿ ಗ್ರಾಮದ ಮಹಿಳೆಯರು ಬುಧವಾರ ಪಾದಯಾತ್ರೆ ಮೂಲಕ ಚಾಮುಂಡಿಬೆಟ್ಟಕ್ಕೆ ಬಂದು 1001 ತೆಂಗಿನ ಕಾಯಿ ಒಡೆದು ಹರಕೆ ತೀರಿಸಿದರು.

ಚಾಮುಂಡೇಶ್ವರಿ ಕ್ಷೇತ್ರ ವ್ಯಾಪ್ತಿಯ ಕಾಳಿಸಿದ್ದನಹುಂಡಿ ಗ್ರಾಮಸ್ಥರು ಸಿದ್ದರಾಮಯ್ಯ ಅವರು ವರುಣ ಕ್ಷೇತ್ರದಲ್ಲಿ ಗೆದ್ದು, ಎರಡನೇ ಬಾರಿಗೆ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದರೆ ಗ್ರಾಮದಿಂದ ಕಾಲ್ನಡಿಗೆಯಲ್ಲಿ ಚಾಮುಂಡಿಬೆಟ್ಟ ಹತ್ತುವುದಾಗಿ ಹರಕೆ ಹೊತ್ತಿದ್ದರು. ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡು, ಭರವಸೆ ನೀಡಿದ್ದ 5 ಗ್ಯಾರಂಟಿ ಕಾರ್ಯಕ್ರಮವನ್ನು ಜಾರಿ ಗೊಳಿಸುತ್ತಿದ್ದಂತೆಯೇ ಪಾದಯಾತ್ರೆ ಆರಂಭಿಸಿದ ಕಾಳಿಸಿದ್ದನಹುಂಡಿ ಗ್ರಾಮದ 50ಕ್ಕೂ ಹೆಚ್ಚು ಜನರ ತಂಡ ಚಾಮುಂಡಿಬೆಟ್ಟ ತಲುಪಿ ವಿಶೇಷ ಪೂಜೆ ಸಲ್ಲಿಸಿ, 1001 ತೆಂಗಿನ ಕಾಯಿ ಒಡೆದು ಹರಕೆ ತೀರಿಸಿದರು.



ಕಾಳಿಸಿದ್ದನಹುಂಡಿ ಗ್ರಾಮದ ಕಾಂಗ್ರೆಸ್ ಮುಖಂಡ ಜೈಸ್ವಾಮಿ, ಧರ್ಮಸ್ಥಳ ಸಂಘದ ಪ್ರತಿನಿಧಿ ನಾಗಮ್ಮ ನೇತೃತ್ವದಲ್ಲಿ 50 ಜನರ ತಂಡ ಸಿದ್ದರಾಮಯ್ಯ ಅವರ ಭಾವಚಿತ್ರ ಹಿಡಿದುಕೊಂಡು 25 ಕಿಮೀ ಪಾದಯಾತ್ರೆ ನಡೆಸಿ ಉದ್ದಕ್ಕೂ ಜೈಕಾರ ಹಾಕುತ್ತ ಚಾಮುಂಡಿಬೆಟ್ಟಕ್ಕೆ ಬಂದು ತಾಯಿಗೆ ಪೂಜೆ ಸಲ್ಲಿಸಿ, ನಂತರ ಅನ್ನಸಂತರ್ಪಣೆ ಕೂಡ ಮಾಡಿದರು. ಇದೇ ವೇಳೆ ಸಂಘದ ಸದಸ್ಯೆ ಜಯಮ್ಮ ಮಾತನಾಡಿ, ನಾವು ದೇವರನ್ನು ನೋಡಿಲ್ಲ. ಆದರೆ ಸಿದ್ದರಾಮಯ್ಯ ಅವರೇ ನಮ್ಮ ಕಣ್ಣಿಗೆ ಕಾಣುವ ದೇವರು. ಅವರು ಬಡವರ ಹಸಿವನ್ನು ನೀಗಿಸಿದ್ದಾರೆ. ಇನ್ನು 4 ಶುಕ್ರವಾರ ಪಾದಯಾತ್ರೆ ಮಾಡುತ್ತೇವೆ ಎಂದರು. ಕಾಂಗ್ರೆಸ್ ಮುಖಂಡ ಜೈಸ್ವಾಮಿ ಮಾತನಾಡಿ, ಸಿದ್ದರಾಮಯ್ಯನವರು ನುಡಿದಂತೆ ನಡೆದ ಏಕೈಕ ನಾಯಕ. ಅವರು ಬಡವರ, ಹಸಿದವರ, ದೀನದಲಿತರ ಪಾಲಿಗೆ ಆಪತ್ಬಾಂಧವರಾಗಿದ್ದಾರೆ. ಅವರು 5 ವರ್ಷಗಳ ಕಾಲ ಮುಖ್ಯಮಂತ್ರಿಯಾಗಿ ಆಡಳಿತ ನಡೆಸಲಿ ಎಂದು ವಿಶೇಷ ಪೂಜೆ ಸಲ್ಲಿಸಿ ದ್ದೇವೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡ ರಾದ ನಾಡನಹಳ್ಳಿ ರವಿ, ರಾಮನಹುಂಡಿ ಹೆಚ್.ಜೆ. ಸ್ವಾಮಿ, ಸಿದ್ದರಾಮ, ಮಹಾದೇವು, ಶಿವಣ್ಣ, ಮಮತ, ರೇವಮ್ಮ, ನಾಗಮ್ಮ, ಚಿಕ್ಕೋಳಮ್ಮ ಇನ್ನಿತರರು ಪಾಲ್ಗೊಂಡಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ

ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821– 2496522/23

ಬೇಕಾಗಿದ್ದಾರೆ
ಗಂಧದ ಕಡ್ಡಿಯನ್ನು ಮಾರುವುದಕ್ಕೆ ಹುಡುಗ/ ಹುಡುಗಿಯರು ಬೇಕಾಗಿದ್ದಾರೆ ಕಮೀಷನ್ ಆಧಾರದ ಮೇಲೆ
9341953012
0821-2566798

ಮನೆ ಮಾರಾಟಕ್ಕಿದೆ
30X40 Corner G/F, F/F, S/F ಟೀಚರ್ಸ್ ಲೇಔಟ್ & ಅರವಿಂದ ಲೇಔಟ್
IPS ಲೇಔಟ್ 3ನೇ ಹಂತ, Near Ring Road N/F Total Sqft 4300, 40x95 ನಿವೇಶನ ಮಾರಾಟಕ್ಕಿದೆ
9880929323

ಸೈಟು ಮಾರಾಟಕ್ಕಿದೆ
30X40 ಸೈಟ್ ನಂ. 2, ಮುಡಾ ಅಪ್ರೂವ್ಡ್, ಕುಸುಮ ಚಂದ್ರಶೇಖರ್ ಕಲ್ಯಾಣ ಮಂಟಪದ ಮುಂಭಾಗದ ರಸ್ತೆ, ಶಾದನ ಹಳ್ಳಿ ರಸ್ತೆ, ಕೆ.ಆರ್.ಎಸ್. ರಸ್ತೆ, ಮೈಸೂರು.
ಸಂಪರ್ಕಿಸಿ :
98454 30098 / 72043 01250

ಮಂಟಪ ಮನೆ
ನಿತ್ಯ ಪೂಜೆ ಮಾಡಲು ನಿಮಗೊಂದು ದೇವರ ಮಂಟಪ ಬೇಕೇ ಬೀಟೆ ಮತ್ತು ಹಲಸು ಮರದಿಂದ ತಯಾರಿಸುತ್ತೇವೆ
ಸಂಪರ್ಕಿಸಿ: ಶ್ರೀನಗರ ಮೈಸೂರು
9448207634
9036742526

ಅಡುಗೆಯವರು ಬೇಕಾಗಿದ್ದಾರೆ
ಮೈಸೂರಿನ ಜಯನಗರದಲ್ಲಿ ವಾಸವಾಗಿರುವ ಕುಟುಂಬವೊಂದಕ್ಕೆ ಸಸ್ಯಾಹಾರಿ ಮತ್ತು ಮಾಂಸಾಹಾರಿ ಅಡುಗೆ ಸಿದ್ಧಪಡಿಸುವ ಮಹಿಳಾ ಅಡುಗೆಯವರು ಬೇಕಾಗಿದ್ದಾರೆ. ಉಳಿದುಕೊಳ್ಳಲು ವ್ಯವಸ್ಥೆ ಇರುತ್ತದೆ
ಕೂಡಲೇ ಸಂಪರ್ಕಿಸಿ:
9449825074, 8310897580

ನಿವೇಶನ ಮಾರಾಟಕ್ಕಿದೆ
ಸರ್.ಎಂ.ವಿ. ಬಡಾವಣೆಯಲ್ಲಿ ಸೈಟ್ ನಂ 261, 60x40, W/F MUDA Approved
ಆರ್.ಟಿ.ನಗರ ಹತ್ತಿರ, ಲಿಂಗಾಂಬುದಿ ಪಾಳ್ಯ, ಮೈಸೂರು
(Broker Excuse)
ಸಂಪರ್ಕಿಸಿ: 9480384038

ಬೇಕಾಗಿದ್ದಾರೆ
ಮೊಬೈಲ್ ಶೋರೂಂನಲ್ಲಿ ಕೆಲಸ ಮಾಡಲು ಸೇಲ್ಸ್ ಎಗ್ಸಿಕ್ಯುಟಿವ್‌ಗಳು ಬೇಕಾಗಿದ್ದಾರೆ. ಸಂಪರ್ಕಿಸಿ
9886409722

ಉದ್ಯೋಗ ಅವಕಾಶ
ಬಂದ ದಿನವೇ ಕೆಲಸ (ಮಾರ್ಕೆಟಿಂಗ್ ಅಲ್ಲ) ಮೈಸೂರಿನ ಪ್ರತಿಷ್ಠಿತ MNC ಹಾಗೂ IT ಕಂಪನಿಗಳಿಗೆ 4th SSLC, PUC, ITI, Any Degree ಪಾಸ್/ಫೇಲ್ ಆದ ಯುವಕ/ ಯುವತಿಯರು ಇಂದೇ ಬೇಕಾಗಿದ್ದಾರೆ. ESI/PF ನೊಂದಿಗೆ ಊಟ ವಸತಿಯಿರುತ್ತದೆ. ಸಂಬಳ+ಟಿಟಿ 15200/- to 86000/-
9740733021
9535028750

ಹೊಸ ಅಂಗಡಿ ಮಳಿಗೆ ಬಾಡಿಗೆಗಿದೆ
400 sqft
ನಂ.1956 ನವಗ್ರಹ ದೇವಸ್ಥಾನ ಎದುರು ಅಗ್ರಹಾರ ಹತ್ತಿರ, ಮೈಸೂರು
9845081918

DTCP SITES FOR SALE
DTCP Sites Rs. 699 per sq.ft., Near Jayapura, H.D. Kote Road, Mysore.
9590491194,9606783264

ನಿರ್ಮಲ ಸರ್ವೀಸ್
ಸಂಪು ಕ್ಲೀನಿಂಗ್‌ಗಾಗಿ ಸಂಪರ್ಕಿಸಿ:
6364079244

MUDA SITE FOR SALE
Total Area: 1650 Sq.feet Corner Site Site No.33 D. Ravishankar Layout Near Ring Road
9880047018

HOUSE FOR SALE
20x30, MUDA allotted New 3 BHK Duplex, fully furnished house, N/F Door at Dattagalli, Near Narayana Bakery. Price: 79 Lakhs. Contact owner.
Mob: 6361295132

ಬೇಕಾಗಿದ್ದಾರೆ/Wanted
ಮೈಸೂರಿನ ಕಾಳಿದಾಸ ರೋಡ್(KD Road) ನಲ್ಲಿ ಇರುವ ಹಾಸ್ಟೆಲ್ ಸಸ್ಯಾಹಾರಿ ರೆಸ್ಟೋರೆಂಟ್‌ಗೆ ಅನುಭವವುಳ್ಳ 'ಇಂಡಿಯನ್ ಆಲ್ ರೌಂಡರ್' Indian All Rounder (ಚೈನೀಸ್ ಮತ್ತು ನಾರ್ತ್ ಇಂಡಿಯನ್ ಕುಕ್ಕಿಂಗ್ ಚೆಫ್) & ಕೌಂಟರ್ ಪಾರ್ಸೆಲ್ & ಅಸಿಸ್ಟೆಂಟ್ ಕುಕ್ (ಸಹಾಯಕ) & ದೋಸಾ ಚೆಫ್ ಬೇಕಾಗಿದ್ದಾರೆ. ಆಕರ್ಷಕ ಸಂಬಳ ಹಾಗು ಉತ್ತಮ ಸೌಲಭ್ಯಗಳನ್ನು ನೀಡಲಾಗುತ್ತದೆ.
7338392631

ಮನೆ ಮಾರಾಟಕ್ಕಿದೆ
ಮೈಸೂರು ಜಿಲ್ಲೆ, ನಂಜನಗೂಡು ಟೌನ್, 7ನೇ ಕ್ರಾಸ್ ಬಡಾವಣೆಯಲ್ಲಿರುವ 1500 ಚದರ ಅಡಿಗಳ 30x50 ಹೆಂಚಿನ ಮನೆ ನಂ.2816/2712 ಮಾರಾಟಕ್ಕಿದೆ. ಆಸಕ್ತಿವುಳ್ಳವರು ಸಂಪರ್ಕಿಸಿ:
7892520585

WANTED
We require ITI Turner, Fitter, Electricians and Diploma in mechanical, preferably Female.
0821-2582668
7204445679
Address: Mystech Machines # Q113, 4th Cross, 8th Main, Hebbal, Industrial Estate, Mysore-570016

Teachers Required
Any Degree /D.Ed/B.Ed Qualified Candidates can walk-in-interview on Sunday 04.06.2023, 10.00 AM to 1.00 PM, Food and Accommodation free for selected one's. WhatsApp / Call:
8310234382
cambridgepublicschool903@gmail.com

ಸೋಲಾರ್ ವಾಟರ್ ಹೀಟರ್
Solar Water Heater
ಸೇಲ್ಸ್, ಸರ್ವೀಸ್ ರಿಪೇರಿ, ಎಕ್ಸ್‌ಚೇಂಜ್ ಹಾಗೂ ಬಿಡಿ ಭಾಗಗಳಿಗಾಗಿ ಸಂಪರ್ಕಿಸಿ
Vinaykrishna
9611648636

ಉಚಿತ ತರಬೇತಿ
ಮನೆಯಿಂದಲೇ ಬಟ್ಟಲು ಸಾಂಬ್ರಾಣಿ ಮತ್ತು ಊದಿಬತ್ತಿ ತಯಾರಿಸಿ ನಮಗೆ ಮರಳಿಸಿ ಪ್ರತಿದಿನ 500 ರಿಂದ 800 ರೂ. ವರೆಗೆ ಗಳಿಸಿ.
ತರಬೇತಿಗಾಗಿ:
7406375196, 9880548596

ಸಾಲ / Loans
* House Purchase Loan
* Site Purchase Loan
* Construction Loan
* Mortgage Loan
(MUDA, Corporation & Revenue).
77605-98705

ವೃದ್ಧಾಶ್ರಮ
ಹಿರಿಯ ಜೀವಗಳಿಗೆ, ಹಾಸಿಗೆ ಹಿಡಿದ ವೃದ್ಧರನ್ನು, ಪಾರ್ಶ್ವವಾಯು ಪೀಡಿತರು, ಹಾಗೂ ಕೈಲಾಗದ ವಯೋ ವೃದ್ಧರನ್ನು ಮನೆಯಂತೆಯೇ ನೋಡಿ ಕೊಳ್ಳುತ್ತಿರುವ ಸಂಸ್ಥೆ ನಮ್ಮ ಮೈಸೂರಿನಲ್ಲಿ ಊಟ, ವಸತಿಯೊಂದಿಗೆ ನರ್ಸಿಂಗ್ ಸೌಲಭ್ಯವಿದೆ. ಆಸಕ್ತಿವುಳ್ಳವರು ಸಂಪರ್ಕಿಸಿ
9110455297 | 9591557126

SITE FOR SALE
1200 Sqft North Kamadenu Layout, Sriramapura
1200 Sqft North KBL Greenwood
7353292209
9036024777

ಬೇಕಾಗಿದ್ದಾರೆ
ಹಾಸ್ಟೆಲ್‌ಗೆ ಅಡುಗೆ ಹೆಲ್ಪರ್ ಕೆಲಸಕ್ಕೆ ಪುರುಷರು ಬೇಕಾಗಿದ್ದಾರೆ. ಸ್ಥಳ: ಸುಳ್ಯ
9902176566

ಟ್ಯಾಂಕ್ ಮತ್ತು ಸೋಲಾರ್ ಸರ್ವೀಸ್
ಜರ್ಮನ್ ಟೆಕ್ನಾಲಜಿ ಬಳಸಿ ಸಂಪು, ಟ್ಯಾಂಕ್ ಮತ್ತು ಸೋಲಾರ್ ಸರ್ವೀಸ್ ಮಾಡಲಾಗುತ್ತದೆ.
Mob: 9008711654

WANTED TEACHERS
GURUKULA ACADEMY
JP Nagar, Mysore
Pre Primary and Primary School (English Medium)
Wanted teachers for the SUBJECT ENGLISH
Preferable lady teacher and English fluency.
HR, Accountant, Telecaller
Contact:
98861 42884

ಸಂಪು ಕ್ಲೀನಿಂಗ್
ಸಂಪರ್ಕಿಸಿ:
9902914891

ಟಿವಿ ರಿಪೇರಿ
ಎಲ್‌ಸಿಡಿ, ಎಲ್‌ಇಡಿ ಟಿವಿ
Service at your doorstep.
Mob: 9880066886

ಮೊಬೈಲ್‌ನಲ್ಲಿ ಕೆಲಸ
ವಾರದ ಸಂಬಳ
NO TARGET, TYPING WORK
ತಿಂಗಳಿಗೆ ರೂ.10,000 ರಿಂದ ರೂ.25,000 ಗಳಿಸಬಹುದು.
8884439666

HOUSE FOR RENT
1) 2BHK Built in 20x30 Site North Facing Ground Floor, AEH
2) 2BHK Built in 20x30 Site North Facing First Floor
Duplex Near Ganabharathee K Block, Kuvempunagar, Mysore
(Brokers Excuse)
9880656225

SITES FOR SALE
in Yelwala
MUDA Approved & DTCP Approved
7829779070

ಶ್ರೀ ಮಹಾಲಕ್ಷ್ಮೀ ಟ್ರಾವೆಲ್ಸ್
2–6–2023: ಕಾಶಿ, ಗಯಾ, ಬುದ್ಧಗಯಾ, ಪ್ರಯಾಗ್ ರಾಜ್, ಅಯೋಧ್ಯೆ 29–6–2023: ಗುರುವಾಯೂರು, ಕೊಚ್ಚಿನ್, ಅಲೆಪ್ಪಿ, ಪ್ರಿಂಗಿಂದ್ರ. 29–6–2023: ರಾಮೇಶ್ವರ, ಕನ್ಯಾಕುಮಾರಿ, ಮಧುರೈ. 1–9–2023: ಚಾರ್‌ಧಾಮ್ ಯಾತ್ರೆ, ಕೇದಾರನಾಥ್, ಬದ್ರಿನಾಥ್, ಗಂಗೋತ್ರಿ, ಯಮುನೋತ್ರಿ 11–7–2023: ಗುಜರಾತ್, ನಾಗೇಶ್ವರ್, ಸೋಮನಾಥ್, ದ್ವಾರಕಾ. 10–8–2023: ನೇಪಾಳ, ಮುಕ್ತಿನಾಥ್, ಪಶುಪತಿ.
9591017782, 9964527782

CHANGE OF NAME
I, Prabhu Harekal Sujatha, residing at #107/1, 11th Main, 10th Cross, Kamakshi Hospital Road, Saraswathipuram, Mysuru-570 009, have changed my name as Prabhu Sujatha Umesh, on my own free will, infront of Notary K.M. Krishna on 1-6-2023. I declare that I shall at all times hereafter in all records, deeds and writings and in all proceedings, dealings and transactions, private as well as upon all occasions whatsoever, use and sign the name of Prabhu Sujatha Umesh.
Sd/- Prabhu Sujatha Umesh

DOCUMENT LOST
Kamala Krisshna Kumar, House No. 10, 2nd Cross, 2nd Main, Arekere 2nd Gate, Doctor's Layout, BG Road, Bangalore-76, between 29-6-2021 and 2-6-2023, I lost property documents related to me & my husband Late K.R. Krisshna Kumar of High-lands Site 13, Jayapura Hobli, Dadadahalli. Document No. MYW-1-05899-2014-15, CD #MYWD35. Finders please contact:
Mob: 6362250526

CHANGE OF NAME
I, Periyasamy, residing at #23-25, Belagola Food Industrial Area, MG Halli, Mysuru-570 017, have changed my name as Periyasamy K., on my own free will, in front of Notary C. Mangala on 30-5-2023. I declare that I shall at all times hereafter in all records, deeds and writings and in all proceeding, dealing and transaction, private as well as upon all occasions whasoever, use and sign the name of Periyasamy K.
Sd/- Periyasamy K.

ಸಂಪು ಕ್ಲೀನಿಂಗ್‌ಗಾಗಿ
ಸಂಪರ್ಕಿಸಿ:
8861612486

ಜೀವನ ಸಂಗಾತಿ ಬೇಕಾಗಿದ್ದಾರೆ
75 ವರ್ಷ ವಯಸ್ಸಿನ ಸ್ಮಾರ್ತ ಬ್ರಾಹ್ಮಣ ರೂ.30,000/– ಸರ್ಕಾರಿ ವಿಶ್ರಾಂತಿ ವೇತನ ಪಡೆಯುತ್ತಿರುವ ವಿಧುರನಿಗೆ ಮಕ್ಕಳಿಲ್ಲದ ವಿಶಾಲಿ ಮಹಿಳೆಗೆ ಯಾವುದೇ ಬ್ರಾಹ್ಮಣ ಪಂಗಡದ ಪುರುಷರು ಸಂಗಾತಿಯಾಗಿರಲು ಬೇಕಾಗಿದ್ದಾರೆ. ಆಸಕ್ತರು ಸಂಪರ್ಕಿಸಬಹುದಾದ ಫೋನ್ ನಂ.
8147634390

ಮನೆ ಮಾರಾಟಕ್ಕಿದೆ
ಮೈಸೂರು ನಗರ, ಕೃಷ್ಣಮೂರ್ತಿಪುರಂ, 4ನೇ ಕ್ರಾಸ್, ಮನೆ ನಂ.1299 ನಿವೇಶನದ ವಿಸ್ತೀರ್ಣ 32x70+(3x40' ಪ್ಯಾಸೇಜ್) ಒಟ್ಟು 2360 ಚದರ ಅಡಿಯಲ್ಲಿ ಕಟ್ಟಿರುವ 4 ಮನೆಗಳು ನೆಲಂತಸ್ತು 2 ಮನೆಗಳು ಒಂದನೇ ಮಹಡಿ, 2 ಮನೆಗಳು ಬೆಲೆ ಚದರ ಅಡಿಗೆ ರೂ.7000/-, ಮಾಲೀಕರು:
9845120632,9591408008

ಕೇರಳ ಶ್ರೀ ಪ್ರಸಿದ್ಧ ಜ್ಯೋತಿಷ್ಯರು
Famous Astrologer
ಪಂಡಿತ್ ಸಂತೋಷ್. 9741250896
ಕಾಣಬೇಕಾಗಿ ನಾಲ್ಕದ ದೈವ, ಕಲ್ಲುಟ ಭಗವತಿ ಪ್ರತ್ಯೇಕ ಪೂಜೆಯಿಂದ ನಿಮ್ಮ ಎಲ್ಲಾ ಸಮಸ್ಯೆಗಳಿಗೆ ಪರಿಹಾರ.
9741250896
[illegible]

ಕೇರಳ ಶ್ರೀ ಪ್ರಸಿದ್ಧ ಮಹಾ ಮಾಂತ್ರಿಕ ಜ್ಯೋತಿಷ್ಯರು, ನಂ.1 ಮೋಡಿ ತಜ್ಞರು
ಪಂಡಿತ್ ಕೆ.ಎಸ್.ಕೃಷ್ಣಮೂರ್ತಿ
ಮೊ.: 9741806990
[illegible]



Solar Water Heater SALES & SERVICE
SUNZONE SOLAR SYSTEM
VN Double Road, Kuvempunagar, Mysuru
9845175443

PART TIME JOBS
ಮನೆಯಲ್ಲೇ ಕುಳಿತು ನಾವು ಕೊಡುವ ಪುಸ್ತಕ ಬರೆಯುವ ಹಾಗೂ ಫಾರಂ ತುಂಬುವ ಮೂಲಕ ತಿಂಗಳಿಗೆ 15,000 ರಿಂದ 20,000 ಸಂಪಾದಿಸಿ. (ಕೊರಿಯರ್ ಸೌಲಭ್ಯವಿದೆ)
Mob: 8749098879

FOR SALE
Buy & Sell Site, House, Land
1) 20x30, 30x40, 40x60 sites in H.D. Kote Road, near Defence Apartment.
(2) 12x36, G+2 house, Kuvempunagar.
3) 30x40, 40x60 Somanatha Nagar attach.
4) 30x40 Duplex house, Srirampura.
5) 20x30 New and old house available in Dattagalli. Contact:
9538690359, 9035990359

ಸೈಟು ಮಾರಾಟಕ್ಕಿದೆ
20X30
ದಟ್ಟಗಳ್ಳಿ, ಮೈಸೂರಿನಲ್ಲಿ
7829296767
7204960770

SHRIRAM
WALK IN INTERVIEW
ASM SM ME MT'S
Location: Mysuru, Hunsur, Madikeri, Kushalnagar, Chamarajanagar
Age: Between 20 to 35, 1 Year Sales
Exp. Attend Walk in on : 6th June 2023 10 am to 5 Pm
Shriram Life Insurance Co.Ltd
1111/1115, 1st Floor, Siri Complex, Vinobha Road Devaraja Mohalla, Shivarampet Mysore-575001
9980921064, 9686455625

WANTED
ಹೆಲ್ಪರ್ಸ್ ಹುಡುಗರು ಬೇಕಾಗಿದ್ದಾರೆ
ದ್ವಿಚಕ್ರ ವಾಹನ ಹೊಂದಿರುವವರಿಗೆ ಆದ್ಯತೆ
99011 63200
97435 65907

100% TEAK WOOD FACTORY FINISH DOORS
@ DEPOT RATES

10 YEARS WARRANTY
www.ssbuildmart.com
9901291267
9845426862

WANTED DRIVERS
Yellow Board with badge for Etios Vehicle
Call: 9880686345

ಸ್ಟೆಲ್ಲಾ ಎಲೆಕ್ಟ್ರಿಕ್ ಸ್ಕೂಟರ್
STELLA ELECTRIC SCOOTERS

₹69000/-*
EASY LOANS AVAILABLE
NO REGISTRATION REQUIRED
ENDURO MOTO Mysore & Mandya
9448042457, 9886762467

ಬರವಣಿಗೆ ಕೆಲಸ
ಮನೆಯಿಂದಲೇ ಫಾರಂ ಭರ್ತಿ ಮಾಡುವ ಉದ್ಯೋಗ ಮಾಡಿ ಪ್ರತಿ 1 ಫಾರಂಗೆ 30 ರೂ.ಗಳನ್ನು ಪಡೆಯಿರಿ.
97318 91409

ಮನೆ ಬಾಡಿಗೆಗೆ ಇದೆ
ವಿಜಯ ನಗರ 2ನೇ ಹಂತ ಮೈಸೂರು 40x60, 3 ಬೆಡ್ ರೂಂ G/F, E/F
9164570612
9611140830

CHANGE OF NAME
I, Ashok Tukaram Bansode, residing at Door No. 731/S, 24th Cross, Sankranthi Circle, Hebbal 2nd Stage, Vijayanagar 2nd Stage, Mysuru-570 017, have changed my name from Ashok Tukaram Bansode to Ashok T. Banasode, on my own free will, sworn in before Notary C. Mangala, Mysuru, vide affidavit, dated 25-5-2023.
Sd/- Ashok T. Banasode

SITE FOR SALE
30x40, North face site sale at Somnatha Nagar.
Call: 9880273834

SITE FOR SALE
30ftx46ft West Face Near JSS Layout 2nd Stage T.N.Pura Main Road
9686935355

ಬೇಕಾಗಿದ್ದಾರೆ
ಮೈಸೂರಿನ ಹೆಬ್ಬಾಳಿನಲ್ಲಿರುವ ಪೆಟ್ರೋಲ್ ಬಂಕ್‌ನಲ್ಲಿ ಕೆಲಸ ಮಾಡಲು ಪುರುಷರು/ಮಹಿಳೆಯರು ಬೇಕಾಗಿದ್ದಾರೆ. ವಯಸ್ಸು 40 ರಿಂದ 50 ರವರೆಗೆ ಮೊದಲ ಆದ್ಯತೆ. ಸಂಬಳ: 12,000/–
8892258814

ಬೇಕಾಗಿದ್ದಾರೆ
ಸೆಕ್ಯೂರಿಟಿ ಸೂಪರ್‌ವೈಸರ್ (12,000+ESI, PF+ WEEK OFF)
ಸೆಕ್ಯೂರಿಟಿ ಗಾರ್ಡ್‌ಗಳು (10,000+ESI, PF + WEEK OFF)
ಸ್ಥಳ: ಲಲಿತಾದ್ರಿಪುರ, ಮೈಸೂರು
9886219793

Premium Residential Layout VINYAS GREEN VALLEY
MUDA Approved Near Yelwala Attach, KRS Bypass Road Mysore
30x50 - Odd Sites
9964441122
9071902562

ರೂಮು/ 3 BHK ಮನೆ/ ಅಂಗಡಿ ಬಾಡಿಗೆಗೆ ಇದೆ,
ಬೋಗಾದಿ ಪಕ್ಕ SBM ಲೇಔಟ್ ಮೈಸೂರು # 154ನಲ್ಲಿ ಡಿ ಬ್ಲಾಕ್
9483051207

ಮೈತ್ರಿ ಟ್ರಾವೆಲ್ಸ್
ಶಿರಡಿ ಪ್ರವಾಸ: 23.6.23, 3 ದಿನಗಳು ಶನಿಸಿಂಗನಾಪುರ, ಗೃಷ್ಣೇಶ್ವರ ಜ್ಯೋತಿರ್ಲಿಂಗ, ಎಲ್ಲೋರ, ನಾಸಿಕ್, ತ್ರಯಂಬಕೇಶ್ವರ ಜ್ಯೋತಿರ್ಲಿಂಗ, ಭೀಮಾಶಂಕರ ಜ್ಯೋತಿರ್ಲಿಂಗ
6360422209
9482421499

30X40, DTCP "A"
ಖಾತೆಯುಳ್ಳ ಲೇಔಟ್ ಸೈಟ್ ಮಾರಾಟಕ್ಕಿದೆ 11 ಲಕ್ಷದ 25 ಸಾವಿರಗಳು ನಿರ್ಮಾಣ ಲೇಔಟ್ ತಳೂರು ಸರ್ಕಲ್ ಹತ್ತಿರ ಮೈಸೂರು
9742198093

ಕೆಲಸಕ್ಕೆ ಬೇಕಾಗಿದ್ದಾರೆ
ಸೆಕ್ಯೂರಿಟಿ ಗಾರ್ಡ್: ಆನಂದೂರ್, ಲಕ್ಷ್ಮೀಪುರಂ, ಪಾಲ್ಕಳ್ಳಿ, ಬಂಬೂಬಜಾರ್, ಕೆ.ಡಿ.ರೋಡ್, ಚಾಮುಂಡಿಪುರಂ, ನಾಡನಹಳ್ಳಿ (ವಿದ್ಯಾವಿಕಾಸ್ ಕಾಲೇಜ್), ಹೆಬ್ಬಾಳ್ ಹತ್ತಿರ, ಫಾರಂನಲ್ಲಿ ಗಾರ್ಡನಿಂಗ್ ಕೆಲಸಕ್ಕೆ ಕ್ಯಾಬಿನ್ ಬೇಕಾಗಿದ್ದಾರೆ. ಹೆಚ್.ಡಿ.ಕೋಟೆ ರೋಡ್, (ರಿಲೇ ಸ್ಕೂಲ್ ಹತ್ತಿರ)
8310098788,6361439167

ಮಹಿಳೆಯರಿಗೆ
ಆಫೀಸ್ ಕೆಲಸ ಮತ್ತು ಮ್ಯಾನೇಜ್‌ಮೆಂಟ್ ಕೆಲಸಕ್ಕೆ ಮಹಿಳೆಯರು ಬೇಕಾಗಿದ್ದಾರೆ
9901080314

ಬೇಕಾಗಿದ್ದಾರೆ
10th Pass/Fail
ದಿನಸಿ ಅಂಗಡಿಯಲ್ಲಿ ಪ್ಯಾಕಿಂಗ್ ಕೆಲಸಕ್ಕೆ ಹುಡುಗರು ಬೇಕು (Part Time/Full Time) ಕುವೆಂಪುನಗರ ಸುತ್ತಮುತ್ತ ಹುಡುಗರು ಮಾತ್ರ
9535370330

ಮೈಸೂರು ವ್ಯಾರೇಜ್ ಬ್ಯೂರೋ
ಎಲ್ಲಾ ಜಾತಿಯ ಎಲ್ಲಾ ವಯಸ್ಸಿನ ಎಲ್ಲಾ ವಿದ್ಯಾವಂತ ವಧು-ವರರಿಗೆ ನೇರ ಸಂಪರ್ಕ. ಪ್ರತಿ ದಿನ ವಧುವರರ ನೇರ ಸಂದರ್ಶನ ಇರುತ್ತದೆ.
ಡಾ. ಗುರೂಜಿ
7899625268
9448229184

ಬೇಕಾಗಿದ್ದಾರೆ
ಬಟ್ಟೆ ಅಂಗಡಿಯಲ್ಲಿ ಮತ್ತು ಮೆಡಿಕಲ್ ಶಾಪ್‌ನಲ್ಲಿ ಕೆಲಸ ಮಾಡಲು ಹುಡುಗಿಯರು/ಮಹಿಳೆಯರು ಬೇಕಾಗಿದ್ದಾರೆ. ಸಂಬಳ: 8000 ರಿಂದ 11 ಸಾವಿರದವರೆಗೆ (ಅನುಭವದ ಆಧಾರದ ಮೇಲೆ) ಸಮಯ: ಬೆ.9.30 ರಿಂದ ರಾತ್ರಿ 9.00 ವರೆಗೆ ಸ್ಥಳ: ಅಗ್ರಹಾರ, ಹೆಬ್ಬಾಳ್, ಮೈಸೂರು ಸ್ಥಳೀಯರಿಗೆ ಆದ್ಯತೆ.
9986311444
9986322444

WANTED SITES
@ Bogadi, Vijayanagar, Dattagalli, Srirampura, Ring Road, Surroundings
QUICK REGN
9342125252

ಹೊಸ ಮನೆ ಮಾರಾಟಕ್ಕಿದೆ
30x40 ಉತ್ತರ ದಿಕ್ಕು, ಪೂರ್ವಕ್ಕೆ ಬಾಗಿಲು Ground Floor & First Floor# 214, ವಿದ್ಯಾಶಂಕರ ಲೇಔಟ್ ಶಕ್ತಿನಗರ ಲೇಔಟ್ ಪಕ್ಕ, ಡಾ|| ರಾಜ್‌ಕುಮಾರ್ ರಸ್ತೆ ಹತ್ತಿರ, ಮೈಸೂರು
8050014718
9880623476

ತೇಜಸ್ವಿನಿ ಟೂರಿಸ್ಟ್
16–6–23 ರಿಂದ 16 ದಿನ, ಗುಜರಾತ್, ರಾಜಸ್ಥಾನ್ ಮತ್ತು ಮಧ್ಯಪ್ರದೇಶ ಪ್ರವಾಸ, ಸೋಮನಾಥ್, ಮಹಾಕಾಳೇಶ್ವರ, ಉಜ್ಜೈನಿ, ಓಂಕಾರೇಶ್ವರ, ಸ್ಟಾಚು ಆಫ್ ಯೂನಿಟಿ, ನಿಷ್ಕಲಂಕ ಮಹಾದೇವ, ಮೌಂಟ್ ಅಬು, ಪುಷ್ಕರ್ ಅಜ್ಮೀರ್, ಜೈಪುರ ಇತ್ಯಾದಿ
9739624961
9379792644

PAVAMAN INNOVATIVE SCHOOL
Nursery Teacher : 2.
NST/Montessori Primary: 2
Any subject & Physical Education
B Ed,D.Ed or any Degree.
English communication must
Himalayan Edn Trust, 7th cross, 3rd Main B M Shree Nagar Metagalli Mysuru
8197695840, 8431891316

ಸೆಕ್ಯೂರಿಟಿ ಗಾರ್ಡ್ ಬೇಕಾಗಿದ್ದಾರೆ
ರಾಯಲ್ ಇನ್ ಸಿಗ್ನಲ್ ಕೆ.ಆರ್.ಎಸ್. ಹೊಟೇಲ್, ಮೇಟಗಳ್ಳಿ, ಕುರ್ಗಳ್ಳಿ, ಹಿನಕಲ್ ಸುತ್ತಮುತ್ತ ಸಂಬಳ: 11000 ಊಟ ತಿಂಡಿ ಇರುತ್ತದೆ.
7090303144
9036744955

HOUSE FOR SALE
East Facing Duplex House Built on 40x60 Site at Vivekananda nagar, (SBM Colony) Mysore (No Brokers)
8792720395

COMMERCIAL
(100X30) 80 FEET ROAD
@ Brahmin's Layout MUDA Approved (Near Srirampura Ring Road) 60 Lakhs
9538839926

ಶಿಕ್ಷಕಿಯರು ಬೇಕಾಗಿದ್ದಾರೆ
ಡಿ.ಇಡಿ ತರಬೇತಿ ಹೊಂದಿರುವವರು ವಿಕಸಿತ ಕಿರಿಯ ಪ್ರಾಥಮಿಕ ಶಾಲೆ (ಇಂಗ್ಲೀಷ್ ಮೀಡಿಯಂ) ಕೇಸರವಾಡ, ಮೈಸೂರು (ತಾ) & (ಜಿ)
9916778412
9880348677

ಸುವರ್ಣಯಾತ್ರ
ಕಾಶಿ ಪ್ರವಾಸ 7ದಿನಗಳು 23.6.23
ಕೇರಳ ಪ್ರವಾಸ 7 ದಿನಗಳು 24.06.23, ಮಧ್ಯಪ್ರದೇಶ 4 ದಿನಗಳು 28.6.23, ಶಿರಡಿ ಪ್ರವಾಸ 3ದಿನಗಳು 07.07.23, ಪುರಿ ಪನ್ನಾಲಾಲ್ ಪ್ರವಾಸ 4 ದಿನಗಳು 12.07.23
9008381022
9019462508

ಸೆಕ್ಯೂರಿಟಿ ಗಾರ್ಡ್ ಬೇಕಾಗಿದ್ದಾರೆ
25 ರಿಂದ 45 ವರ್ಷದವರೆಗೆ ವಿವಿಧ ಸಂಸ್ಥೆ ಹಾಗೂ ಆಫೀಸ್‌ಗಳಿಗೆ ಮೈಸೂರು ಸಿಟಿ ಹಾಗೂ ಸುತ್ತಮುತ್ತಲಿನವರಿಗೆ ಆದ್ಯತೆ. (ಬೆಳಿಗ್ಗೆ 10 ರಿಂದ ಸಂಜೆ 6ರವರೆಗೆ)
ಸಂಪರ್ಕಿಸಿ:
9036745292

ಬೇಕಾಗಿದ್ದಾರೆ
ಸೆಕ್ಯೂರಿಟಿ ಗಾರ್ಡ್–2 ಹುದ್ದೆ (ಸ್ಟ್ರಿ ಅಥವಾ ರಾತ್ರಿ ಪಾಳಿ)
ಹೋಟೆಲ್ ಗುಪ್ತಾ
252/ಬಿ, ಅಶೋಕ ರೋಡ್, ಹರ್ಡ್ ಹೋಟೆಲ್ ಹತ್ತಿರ, ಲಕ್ಷ್ಕರ್ ಮೊಹಲ್ಲಾ, ಮೈಸೂರು
9620274630
9740083831

ಮೈಸೂರು ಮಿತ್ರ ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
–ಜಾಹೀರಾತು ವ್ಯವಸ್ಥಾಪಕರು

ಮತ್ತಷ್ಟು ವರ್ಗೀಕೃತ ಜಾಹೀರಾತು ಪುಟ 7 ರಲ್ಲಿ

ಮೈಸೂರು ಮಿತ್ರ ಶನಿವಾರ 3 ಜೂನ್ 2023

ಅಧಿಕಾರಿಗಳು ರಾಜಕಾರಣ ಮಾಡುವುದನ್ನು ನಾನು ಸಹಿಸಲ್ಲ

ಕೆಡಿಪಿ ಸಭೆಯಲ್ಲಿ ಶಾಸಕ ಗಣಿಗ ರವಿಕುಮಾರ್



ಮಂಡ್ಯ, ಜೂ.2– ಅಧಿಕಾರಿಗಳು ಜನರ ಸಮಸ್ಯೆಗಳನ್ನು ಆಲಿಸಿ, ಬಗೆಹರಿಸಿದರೆ ಸಾಕು. ಅಧಿಕಾರಿಗಳು ರಾಜಕಾರಣ ಮಾಡುವುದನ್ನು ನಾನು ಸಹಿಸಲ್ಲ. ರಾಜಕಾರಣ ಮಾಡಲು ನಾವಿದ್ದೇವೆ ಎಂದು ಮೊದಲ ಕೆಡಿಪಿ ಸಭೆಯಲ್ಲಿ 35ಕ್ಕೂ ಹೆಚ್ಚು ಇಲಾಖೆ ಅಧಿಕಾರಿಗಳೊಂದಿಗೆ ಚರ್ಚಿಸಿದ ಶಾಸಕ ಗಣಿಗ ರವಿಕುಮಾರ್, ಸಮನ್ವಯದಿಂದ ಕಾರ್ಯ ನಿರ್ವಹಿಸುವಂತೆ ಅಧಿಕಾರಿಗಳಿಗೆ ತಾಕೀತು ಮಾಡಿದರು.

ಶುಕ್ರವಾರ ನಗರದ ತಾಪಂ ಕಚೇರಿಯಲ್ಲಿ ಏರ್ಪಡಿಸಿದ್ದ ಮಂಡ್ಯ ಕ್ಷೇತ್ರ ವ್ಯಾಪ್ತಿಯ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ, ಕ್ಷೇತ್ರದ ಸಮಸ್ಯೆಗಳ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದು ಮಾತನಾಡಿದ ಅವರು, ನಾವು ನೀವು ಸೇರಿ ಕೆಲಸ ಮಾಡಿದರೆ ಮಂಡ್ಯ ಕ್ಷೇತ್ರ ಹಾಗೂ ತಾಲೂಕನ್ನು ಮಾದರಿ ಕ್ಷೇತ್ರವನ್ನಾಗಿ ಮಾಡಬಹುದು. ನೀವು ರೈತರು, ಬಡವರ ಕೆಲಸಗಳನ್ನು ಮಾಡಿಕೊಟ್ಟರೆ ಅವರು ಖುಷಿಯಾಗಿರುತ್ತಾರೆ. ಆಗ ನಮ್ಮ ಹತ್ತಿರ ಸಮಸ್ಯೆ ಬರುವುದಿಲ್ಲ. ನೀವು ಕೆಲಸ ಮಾಡದಿದ್ದಾಗ ಅವರು ನಮ್ಮ ಹತ್ತಿರ ಬರುತ್ತಾರೆ. ಆಗ ನಾವು ನಿಮಗೆ ಫೋನ್ ಮಾಡಬೇಕಾಗುತ್ತದೆ. ನಮ್ಮಿಂದ ನಿಮಗೆ ಫೋನ್ ಬಾರದ ರೀತಿ ನೀವು ಕೆಲಸ ಮಾಡಿದರೆ ನೀವು ಖುಷಿಯಾಗಿರುತ್ತೀರಾ. ನಾವು ಕೂಡ ಖುಷಿಯಾಗಿರುತ್ತೇವೆ ಎಂದರು.

ನಾವು ನೀವು ಇರುವುದು ಜನಸೇವೆಗಾಗಿ. ನಾವೆಲ್ಲರೂ ಸೇರಿ ಉತ್ತಮ ಕೆಲಸ ಮಾಡಿದರೆ ಮಂಡ್ಯ ಕ್ಷೇತ್ರ ಮಾದರಿಯಾಗುತ್ತದೆ. ನಾನು ಏನು ಮಾಡೋದು ಎಂದು ಬಂದಿಲ್ಲ. ಏನು ಮಾಡಬೇಕು ಎನ್ನುವ ಪ್ಲಾನ್ ಇಟ್ಟುಕೊಂಡು ಬಂದಿದ್ದೇನೆ. ನನ್ನ ಕೆಲಸಗಳಿಗೆ ಅಧಿಕಾರಿಗಳು ಸಹಕರಿಸಬೇಕು ಎಂದರು.

ಮಂಡ್ಯವನ್ನು ಹಂತ ಹಂತವಾಗಿ ಅಭಿವೃದ್ಧಿಪಡಿಸೋಣ. ಅದಕ್ಕೆ ಬೇಕಾದ ಸಂಪನ್ಮೂಲವನ್ನು ನಮ್ಮ ಸರ್ಕಾರದಿಂದ ತರುವ ಜವಾಬ್ದಾರಿ ನನ್ನದು. ಆದರೆ ಕೆಲಸ ಮಾಡುವ ಜವಾಬ್ದಾರಿ ನಿಮ್ಮದು. ಒಂದಷ್ಟು ಕೆಲಸವನ್ನು ಇಲ್ಲಿದ್ದ ಅಧಿಕಾರಿಗಳು ಮಾಡಿದ್ದಾರೆ. ಈಗಲೂ ಮಾಡುತ್ತಿದ್ದಾರೆ. ನೀವು ಇಲ್ಲಿ ಒಳ್ಳೆಯ ಕೆಲಸ ಮಾಡಿ ಉತ್ತಮ ಹೆಸರು ಸಂಪಾದಿಸಿದರೆ, ನೀವು ಮುಂದೆ ಉನ್ನತ ಹುದ್ದೆಗೆ ವರ್ಗಾವಣೆಯಾಗುವಾಗ ಬೇರೆ ತಾಲೂಕಿನ ಶಾಸಕರು ಮಂಡ್ಯದಲ್ಲಿ ಕೆಲಸ ಮಾಡಿದ ಇಂತಹ ಅಧಿಕಾರಿಯೇ ನಮ್ಮ ತಾಲೂಕಿಗೆ ಬೇಕೆಂದು ಪೈಪೋಟಿ ಮಾಡುತ್ತಾರೆ. ಹಾಗೆ ನೀವು ಕೆಲಸ ಮಾಡಿ, ನಿಮ್ಮ ಇಲಾಖೆಗೆ ಹಾಗೂ ನಮ್ಮ ತಾಲೂಕಿಗೆ ಹೆಸರು ತರಬೇಕೆಂದು ಕರೆ ನೀಡಿದರು.

ಜನಕ್ಕೆ ಒಳ್ಳೆಯದು ಮಾಡಬೇಕೆನ್ನುವುದೇ ನನ್ನ ಭಾವನೆ. ನನ್ನ ಮೊಬೈಲ್‌ಗೆ 24 ಗಂಟೆಯಲ್ಲಿ ಯಾವಾಗ ಬೇಕಾದರೂ ಅಧಿಕಾರಿಗಳು ಕರೆ ಮಾಡಿ, ಸಮಸ್ಯೆ ಹೇಳಬಹುದು. ಅದಕ್ಕೆ ನಾನು ಆಕ್ಷೇಪಿಸುವುದಿಲ್ಲ. ಆದರೆ ನಾನು ಕರೆ ಮಾಡಿದಾಗ ಯಾವುದೇ ಅಧಿಕಾರಿಯಾದರೂ ಕರೆ ಸ್ವೀಕರಿಸಬೇಕು. ಅದೇ ನನ್ನ ಅಪೇಕ್ಷೆ ಎಂದರು.

ಯಾರು ಸಹ ಅಕ್ರಮ ಮಾಡಬೇಡಿ. ಕಾನೂನು ಬದ್ಧವಾಗಿ ಏನಿದೆ ಆ ಕೆಲಸವನ್ನಷ್ಟೇ ಮಾಡಿ. ಹಾಗಂತ ಜನರನ್ನು ಅಲೆದಾಡಿಸದೇ ಸಮನ್ವಯತೆ ಕಾಪಾಡಿ. ನಿಮ್ಮ ಯಾವ ಕೆಲಸಕ್ಕೂ ನಾನು ಹಸ್ತಕ್ಷೇಪ ಮಾಡುವುದಿಲ್ಲ. ರಾಜಕೀಯ ಒತ್ತಡ ಹಾಕುವುದಿಲ್ಲ. ಒಳ್ಳೆಯದಂತೂ ಜನತೆಗೆ ಮಾಡಬೇಕು ಎನ್ನುವುದು ನನ್ನ ಭಾವನೆ. ನನ್ನ ಮೇಲೆ ಜನ ಬಹಳ ನಂಬಿಕೆ ಇಟ್ಟು ಮತ ಕೊಟ್ಟಿದ್ದಾರೆ. ಅವರಿಗಾಗಿ ನಾನು ಹಗಲಿರುಳು ದುಡಿಯಲು ಸಿದ್ಧ. ನನ್ನ ಕೆಲಸಕ್ಕೆ ನಿಮ್ಮ ಸ್ಪಂದನೆ ಬಹಳ ಅತ್ಯಮೂಲ್ಯ ಎಂದರು. ಈ ವೇಳೆ ತಾಲೂಕು ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

ಜನರಿಗೆ ಕೊಟ್ಟ ಮಾತು ತಪ್ಪಿದ ದರ್ಶನ್ ಪುಟ್ಟಣ್ಣಯ್ಯ

ಹೆಂಡತಿ, ಮಕ್ಕಳನ್ನು ನೋಡಲು ಹೋಗುವುದಾಗಿ ಹೇಳಿ ಅಮೆರಿಕಾಕ್ಕೆ ಹಾರಿದ ಶಾಸಕ



ಪಾಂಡವಪುರ, ಜೂ.2– ಕಳೆದ 3 ತಿಂಗಳ ಹಿಂದೆಯಷ್ಟೇ ವಿಧಾನಸಭಾ ಚುನಾವಣೆಗಾಗಿ ಅಮೆರಿಕಾದಿಂದ ವಾಪಸ್ ಬಂದಿದ್ದ ರೈತ ನಾಯಕ ದರ್ಶನ್ ಪುಟ್ಟಣ್ಣಯ್ಯ, ಅಮೆರಿಕಾದಲ್ಲಿದ್ದ ತನ್ನ ಆಸ್ತಿ ಹಾಗೂ ಸಂಸ್ಥೆ ಮಾರಿ ಕ್ಷೇತ್ರದಲ್ಲೇ ಉಳಿದುಕೊಳ್ಳಲು ಬಂದಿದ್ದೇನೆ. ಇನ್ನು ಮುಂದೆ ಕ್ಷೇತ್ರ ಬಿಟ್ಟು ಹೋಗುವುದಿಲ್ಲ ಎಂದು ಚುನಾವಣೆ ವೇಳೆ ಕೊಟ್ಟ ಮಾತನ್ನು ತಪ್ಪಿದ್ದಾರೆ. ಶಾಸಕರಾಗಿ ಒಂದೇ ಒಂದು ತಿಂಗಳಾಗಿಲ್ಲ. ಆಗಲೇ ಶಾಸಕ ದರ್ಶನ್ ಪುಟ್ಟಣ್ಣಯ್ಯ ಕುಟುಂಬಸ್ಥರನ್ನು ನೋಡಿ 5 ತಿಂಗಳಾಗಿದೆ. 10 ದಿನಗಳ ಕಾಲ ಅಮೆರಿಕಾಕ್ಕೆ ಹೋಗುತ್ತಿದ್ದೇನೆ ಎಂದು ಸಾಮಾಜಿಕ ಜಾಲತಾಣದಲ್ಲಿ ವೀಡಿಯೋ ಹರಿಯಬಿಟ್ಟು ವಿದೇಶಕ್ಕೆ ಹಾರಿದ್ದಾರೆ.

ಶಾಸಕ ದರ್ಶನ್ ಪುಟ್ಟಣ್ಣಯ್ಯ ವಿದೇಶಕ್ಕೆ ಹೋಗುವುದು ತಪ್ಪಲ್ಲ. ಆದರೆ ಮೇಲುಕೋಟೆ ಕ್ಷೇತ್ರದ ಮತದಾರರಿಗೆ ಅಮೆರಿಕಾದಲ್ಲಿರುವ ತನ್ನ ಆಸ್ತಿ ಮಾರಾಟ ಮಾಡಿದ್ದೇನೆ. ನಾನು ಇನ್ನು ಮುಂದೆ ವಿದೇಶಕ್ಕೆ ಹೋಗಲ್ಲ ಎಂದು ಚುನಾವಣಾ ಸಂದರ್ಭ ಪ್ರತಿ ಭಾಷಣದಲ್ಲೂ ಹೇಳಿಕೆ ನೀಡುತ್ತಾ, ಮೇಲುಕೋಟೆ ಜನರ ಮತ ಗಿಟ್ಟಿಸಿಕೊಳ್ಳಲು ಮುಂದಾಗಿ ಇದೀಗ ಏಕಾಏಕಿ ಕುಟುಂಬಸ್ಥರನ್ನು ನೋಡಲು 10 ದಿನ ವಿದೇಶಕ್ಕೆ ಹೋಗುತ್ತಿರುವುದಾಗಿ ಹೇಳಿಕೆ ಕೊಟ್ಟು ತಮ್ಮ ಮಾತನ್ನು ಮುರಿದಿದ್ದಾರೆ.

ತಿಂಗಳ ಹಿಂದೆ ಸ್ವತಃ ದರ್ಶನ್ ಪುಟ್ಟಣ್ಣಯ್ಯ ಅವರ ಪತ್ನಿ ಪ್ರಚಾರಕ್ಕೆ ಆಗಮಿಸಿದ್ದರು. ಆಗ ಅವರು ಸಹ ದರ್ಶನ್ ಇನ್ನು ಮುಂದೆ ಇಲ್ಲೇ ಇರುತ್ತಾರೆ ಎಂದು ಹೇಳಿದ್ದರು. ಆದರೆ ಶಾಸಕರು ಮಾತ್ರ ಪತ್ನಿ ಒಂದು ತಿಂಗಳ ಹಿಂದೆ ಇಲ್ಲಿಗೆ ಬಂದಿದ್ದರೂ, ಇದೀಗ ಕುಟುಂಬಸ್ಥರನ್ನು ಕಂಡು 5 ತಿಂಗಳಾಗಿವೆ ಎಂದು ಹೇಳಿ ವಿದೇಶಕ್ಕೆ ಹೋಗಿದ್ದಾರೆ.

ಅಮೆರಿಕಾದಲ್ಲಿ ನೆಲೆಸಿದ್ದ ದರ್ಶನ್ ಪುಟ್ಟಣ್ಣಯ್ಯ ಚುನಾವಣೆಗಾಗಿ ವಾಪಸ್ಸಾಗಿದ್ದರು. ಚುನಾವಣೆ ವೇಳೆ ನಾನು ಅಮೆರಿಕಾದಲ್ಲಿದ್ದ ಎಲ್ಲಾ ಕಂಪನಿ, ವ್ಯವಹಾರಗಳನ್ನು ಮಾರಾಟ ಮಾಡಿ ನಮ್ಮ ದೇಶಕ್ಕೆ ಬಂದಿದ್ದೇನೆ. ಇನ್ನು ಮುಂದೆ ಅಮೆರಿಕಾಕ್ಕೆ ಹೋಗಲ್ಲ. ಇಲ್ಲಿಯೇ ಇದ್ದು ಜನಸೇವೆ, ರೈತ ಚಳವಳಿ ಮಾಡುತ್ತೇನೆ ಎಂದು ಭರವಸೆ ನೀಡಿದ್ದರು. ಇದೀಗ ಚುನಾವಣೆಯಲ್ಲಿ ಗೆದ್ದು ಇನ್ನೂ ಒಂದು ತಿಂಗಳೇ ಕಳೆದಿಲ್ಲ. ಶಾಸಕ ದರ್ಶನ್ ಪುಟ್ಟಣ್ಣಯ್ಯ ಅಮೆರಿಕಾಕ್ಕೆ ತೆರಳಿರುವುದು ಕ್ಷೇತ್ರದ ಜನರ ಟೀಕೆಗೆ ಗುರಿಯಾಗಿದೆ.

ನನ್ನ ಹೆಂಡತಿ ಮಕ್ಕಳನ್ನು ನೋಡಿ 5 ತಿಂಗಳಾಗಿವೆ. ಹಾಗಾಗಿ ನಾನು 10 ದಿನಗಳ ಕಾಲ ಅಮೆರಿಕಾಕ್ಕೆ ಹೋಗುತ್ತಿದ್ದೇನೆ. ಎಲ್ಲಾ ಕೆಲಸಗಳನ್ನು ಬೇರೆಯವರಿಗೆ ವಹಿಸಿದ್ದೇನೆ. ಕ್ಷೇತ್ರದ ಜನತೆ ಯಾವುದಾದರೂ ಕೆಲಸ ಇದ್ದರೆ ನನಗೆ ದೂರವಾಣಿ ಕರೆ ಮಾಡಿ, ನನ್ನ ಜತೆ ಮಾತನಾಡಬೇಕಾದರೆ ನಮ್ಮ ಕಡೆಯವರು ನಿಮಗೆ ಕನೆಕ್ಟ್ ಮಾಡಿಕೊಡುತ್ತಾರೆ ಎಂದು ಶಾಸಕ ದರ್ಶನ್ ಪುಟ್ಟಣ್ಣಯ್ಯ ಮಾಡಿರುವ ವೀಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದ್ದು, ಕ್ಷೇತ್ರದಲ್ಲಿ ಸಾಕಷ್ಟು ಚರ್ಚೆಗೆ ಗ್ರಾಸವಾಗಿದೆ.

ಗದ್ದೆಹೊಸೂರು ಡೈರಿ ಕಾರ್ಯದರ್ಶಿ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಪ್ರತಿಭಟನೆ




ಕೆ.ಆರ್.ಪೇಟೆ, ಜೂ.2– ತಾಲೂಕಿನ ಗದ್ದೆಹೊಸೂರು ಹಾಲು ಉತ್ಪಾದಕರ ಸಹಕಾರ ಸಂಘದ ಕಾರ್ಯದರ್ಶಿ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ನಿರ್ದೇಶಕರು ಹಾಗೂ ಗ್ರಾಮಸ್ಥರು ಪಟ್ಟಣದ ಮನ್‌ಮುಲ್ ಉಪವ್ಯವಸ್ಥಾಪಕರ ಕಚೇರಿ ಎದುರು ಶುಕ್ರವಾರ ಪ್ರತಿಭಟನೆ ನಡೆಸಿದರು.

ಈ ವೇಳೆ ಮಾತನಾಡಿದ ಗ್ರಾಮಸ್ಥರು ಮತ್ತು ಸಂಘದ ನಿರ್ದೇಶಕರು, ಕಾರ್ಯದರ್ಶಿ ಮಂಜೇಗೌಡರ ತಮ್ಮ ಸೇವಾವಧಿ 2019ಕ್ಕೆ ಮುಗಿದಿದ್ದರೂ, ಕಳೆದ 3 ವರ್ಷಗಳಿಂದ ನಿಯಮಬಾಹಿರವಾಗಿ ಡೈರಿಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಅಲ್ಲದೇ ಸಂಘದ ಆಡಳಿತ ಮಂಡಳಿ ನಿರ್ಣಯ ಪುಸ್ತಕದಲ್ಲಿ ನಿರ್ದೇಶಕರ ನಕಲಿ ಸಹಿ ಮಾಡಿ ತಮ್ಮ ಪುತ್ರನನ್ನು ಪ್ರಭಾರ ಕಾರ್ಯದರ್ಶಿಯಾಗಿ ಅನಧಿಕೃತವಾಗಿ ನೇಮಕ ಮಾಡಿಕೊಂಡು ಸಂಘದಲ್ಲಿ ಲಕ್ಷಾಂತರ ರೂ. ಅವ್ಯವಹಾರ ನಡೆಸಿದ್ದಾರೆ. ಈ ಸಂಬಂಧ ಮೇಲ್ವಿಚಾರಕ ಶಿವಶಂಕರ್ ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ಸಾಕಷ್ಟು ಬಾರಿ ದೂರು ನೀಡಿದರೂ ಯಾವುದೇ ಕ್ರಮ ಕೈಗೊಳ್ಳದೇ ನಿರ್ಲಕ್ಷ್ಯ ವಹಿಸಿದ್ದಾರೆ. ಹೀಗಾಗಿ ತಾವೇ ಸಂಘದಲ್ಲಿ ನಡೆದಿರುವ ಅವ್ಯವಹಾರಗಳ ಬಗ್ಗೆ ಪರಿಶೀಲನೆ ನಡೆಸಿ, ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಮನ್‌ಮುಲ್ ಉಪವ್ಯವಸ್ಥಾಪಕರನ್ನು ಒತ್ತಾಯಿಸಿದರು.

ಈ ವೇಳೆ ಮಾತನಾಡಿದ ಮನ್‌ಮುಲ್ ಉಪವ್ಯವಸ್ಥಾಪಕ ಮರಿರಾಚಯ್ಯ, ಈ ಸಂಬಂಧ ನನಗೆ ಯಾವುದೇ ಮಾಹಿತಿ ಬಂದಿಲ್ಲ. ಹೀಗಾಗಿ ನಾಳೆಯೇ ಈ ಸಂಬಂಧ ಪರಿಶೀಲನೆ ನಡೆಸಿ ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮ ಜರುಗಿಸಿ ನ್ಯಾಯ ಕೊಡಿಸುವುದಾಗಿ ಭರವಸೆ ನೀಡಿದರು. ಬಳಿಕ ಪ್ರತಿಭಟನೆ ಹಿಂಪಡೆಯಲಾಯಿತು. ಪ್ರತಿಭಟನೆಯಲ್ಲಿ ಗದ್ದೆಹೊಸೂರು ಡೈರಿ ನಿರ್ದೇಶಕ ರಾದ ಜಿ.ಆರ್.ಜಗದೀಶ್, ಜಿ.ಬಿ.ಗೌತಮ್, ಜಿ.ಎಮ್.ಶಶಿಧರ, ನಾಗಮ್ಮ, ರಂಗಯ್ಯ, ಲಕ್ಷ್ಮೀದೇವಿ, ಭೈರೇಗೌಡ, ಗ್ರಾಮದ ಮುಖಂಡರಾದ ಜಿ.ಎನ್. ಪಾಂಡುರಂಗ, ಬಾಲಚಂದ್ರ, ಜಿ.ವಿ.ಚಂದ್ರಶೇಖರ್, ಮಹೇಶ್, ಜಿ.ಆರ್.ಚಂದ್ರಶೇಖರ್, ದರ್ಶನ್, ಜಿ.ಎನ್.ದೀಪು ಸೇರಿದಂತೆ ಹಲವರಿದ್ದರು.

ಮೈಷುಗರ್ ಪುನರಾರಂಭಕ್ಕೆ 50 ಕೋಟಿ ಮಂಜೂರಿಗೆ ಸಿಎಂ ಅನುಮೋದನೆ



ಮಂಡ್ಯ, ಜೂ.2– ಜಿಲ್ಲೆಯ ಜೀವನಾಡಿ ಮೈಷುಗರ್ ಸಕ್ಕರೆ ಕಾರ್ಖಾನೆಯಲ್ಲಿ ಈ ಹಂಗಾಮಿನ ಕಬ್ಬು ನುರಿಸುವಿಕೆ ಪ್ರಾರಂಭಿಸಲು ಹಾಗೂ ದುಡಿಯುವ ಬಂಡವಾಳಕ್ಕೆ ಸರ್ಕಾರದಿಂದ 50 ಕೋಟಿ ರೂ. ಬಿಡುಗಡೆಗೆ ಹಣಕಾಸು ಇಲಾಖೆಯಿಂದ ಅನುಮೋದನೆ ದೊರಕಿದೆ.

2023–24ನೇ ಸಾಲಿನಲ್ಲಿ ಕಬ್ಬು ನುರಿಸಲು ಸರ್ಕಾರದಿಂದ ತುರ್ತಾಗಿ ಧನ ಸಹಾಯ ನೀಡಬೇಕೆಂದು ಶಾಸಕ ಗಣಿಗ ರವಿಕುಮಾರ್ ಹಾಗೂ ವಿಧಾನಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಸರ್ಕಾರಕ್ಕೆ ಮನವಿ ಮಾಡಿದ್ದರು. ಈ ಮನವಿಗೆ ಸ್ಪಂದಿಸಿದ ಸಿಎಂ ಸಿದ್ದರಾಮಯ್ಯ ತಕ್ಷಣವೇ ಹಣ ಬಿಡುಗಡೆಗೆ ವ್ಯವಸ್ಥೆ ಮಾಡಿದ್ದಾರೆ.

ಕಬ್ಬು ಕಟಾವು ಪ್ರಾರಂಭವಾಗುವ ಮೊದಲು ಗ್ಯಾಂಗ್‌ಗಳಿಗೆ ನೀಡಲು ಹಣದ ಅವಶ್ಯಕತೆ ಇದೆ. ಯಂತ್ರಗಳ ದುರಸ್ತಿಗಳೂ ಇವೆ. ಅದಕ್ಕಾಗಿ ತಕ್ಷಣ ಹಣ ಬಿಡುಗಡೆ ಮಾಡಬೇಕು ಎಂದು ಮನವಿ ಮಾಡಲಾಗಿತ್ತು. ಹೀಗಾಗಿ ಕಾರ್ಖಾನೆ ಪ್ರಾರಂಭೋತ್ಸವ ಹಾಗೂ ಗ್ಯಾಂಗ್‌ಗಳಿಗೆ ನೀಡಲು 15 ಕೋಟಿ ರೂ. ಹಾಗೂ ಕಾರ್ಖಾನೆ ದುಡಿಯುವ ಬಂಡವಾಳ (ವರ್ಕಿಂಗ್ ಕ್ಯಾಪಿಟಲ್)ಕ್ಕಾಗಿ 35 ಕೋಟಿ ರೂ. ನೀಡಲು ಹಣಕಾಸು ಇಲಾಖೆ ಒಪ್ಪಿಗೆ ನೀಡಿದೆ. ಸರ್ಕಾರದ ಈ ಸಹಾಯದಿಂದ ಅವಧಿಗೆ ಸರಿಯಾಗಿ ಕಾರ್ಖಾನೆಯಲ್ಲಿ ಕಬ್ಬು ನುರಿಸುವಿಕೆ ಪ್ರಾರಂಭಿಸಲು ಈ ಮೂಲಕ ಅನುಕೂಲವಾಗಲಿದೆ.

ಮನವಿಯಲ್ಲೇನಿತ್ತು: ಮಂಡ್ಯ ಜಿಲ್ಲೆಯ ಮೈಸೂರು ಸಕ್ಕರೆ ಕಾರ್ಖಾನೆ (ಮೈಷುಗರ್) ಯು ರೋಗಗ್ರಸ್ತವಾಗಿದ್ದು, ಕೆಲವು ವರ್ಷಗಳಿಂದ ಕಬ್ಬು ನುರಿಸುವಿಕೆ ಸ್ಥಗಿತ ಮಾಡಿತ್ತು. ಕಳೆದ ವರ್ಷವಷ್ಟೇ ಕಬ್ಬು ನುರಿಸುವಿಕೆ ಆರಂಭವಾಗಿದೆ. ಅಲ್ಲದೆ, ಕಳೆದ ವರ್ಷ ಸರ್ಕಾರವು ಬಜೆಟ್‌ನಲ್ಲಿ ಕಾರ್ಖಾನೆ ಪುನಶ್ಚೇತನಕ್ಕೆ 50 ಕೋಟಿ ರೂ. ನೀಡುವುದಾಗಿ ಘೋಷಿಸಿತ್ತು. ಆದರೆ, ಇದುವರೆಗೆ 32 ಕೋಟಿ ರೂ. ಮಾತ್ರವೇ ಬಿಡುಗಡೆಯಾಗಿದೆ. ಇದರಿಂದ ರೈತರಿಗೆ ತೀವ್ರ ಅನಾನುಕೂಲವಾಗುತ್ತಿದ್ದು, ಕಾರ್ಖಾನೆ ವ್ಯಾಪ್ತಿಯಲ್ಲಿ ಈ ಹಂಗಾಮಿನಲ್ಲಿ 10,002 ಹೆಕ್ಟೇರ್ ಪ್ರದೇಶದಲ್ಲಿ ರೈತರು ಕಬ್ಬು ಬೆಳೆದಿದ್ದು, ಸುಮಾರು 500100 ಮೆಟ್ರಿಕ್ ಟನ್ ಕಬ್ಬು ಪೂರೈಕೆ ಮಾಡುವ ಕುರಿತು ಒಪ್ಪಂದ ಮಾಡಿಕೊಳ್ಳಲಾಗಿದೆ. 5745 ರೈತರು ಕಾರ್ಖಾನೆಗೆ ಕಬ್ಬು ನುರಿಸಲು ನೀಡುವುದಾಗಿ ಈಗಾಗಲೇ ನೋಂದಣಿ ಮಾಡಿಕೊಂಡಿದ್ದಾರೆ. ರೈತರ ಹಿತದೃಷ್ಟಿಯಿಂದ ಹಾಗೂ ಕಾರ್ಖಾನೆ ಭವಿಷ್ಯದ ದೃಷ್ಟಿಯಿಂದ ಸಕಾಲದಲ್ಲಿ ಕಬ್ಬು ನುರಿಸಲು ಪ್ರಾರಂಭಿಸ ಬೇಕು ಎಂದು ಮನವಿ ಮಾಡಲಾಗಿತ್ತು.

ಪಾಂಡವಪುರ: ಚಿರತೆ ದಾಳಿಗೆ ಕರು ಬಲಿ

ಪಾಂಡವಪುರ, ಜೂ.2– ಚಿರತೆ ದಾಳಿಗೆ ಕರು ಬಲಿಯಾಗಿರುವ ಘಟನೆ ತಾಲೂಕಿನ ಕನಗನಹಳ್ಳಿಯಲ್ಲಿ ಗುರುವಾರ ರಾತ್ರಿ ನಡೆದಿದೆ.

ಗ್ರಾಮದ ರೈತ ಭೀಮೇಗೌಡ ಎಂಬುವರಿಗೆ ಸೇರಿದ ಕರು ಸಾವನ್ನಪ್ಪಿದೆ. ಗ್ರಾಮದ ಹೊರವಲಯದಲ್ಲಿರುವ ತಮ್ಮ ಜಮೀನಿನಲ್ಲಿ ಭೀಮೇಗೌಡ ದನದ ಕೊಟ್ಟಿಗೆ ನಿರ್ಮಿಸಿದ್ದು, ರಾತ್ರಿ ವೇಳೆ ಜಾನುವಾರುಗಳನ್ನು ಕಟ್ಟುತ್ತಿದ್ದರು. ಗುರುವಾರ ರಾತ್ರಿ ಕೊಟ್ಟಿಗೆಗೆ ನುಗ್ಗಿರುವ ಚಿರತೆ ಕರು ಮೇಲೆ ದಾಳಿ ನಡೆಸಿ ಬಲಿ ಪಡೆದಿದೆ. ವಿಷಯ ತಿಳಿದು ಶುಕ್ರ ವಾರ ಬೆಳಗ್ಗೆ ಸ್ಥಳಕ್ಕಾಗಮಿಸಿದ ಅರಣ್ಯಾಧಿಕಾರಿಗಳು ಪರಿಶೀಲನೆ ನಡೆಸಿ ಸರ್ಕಾರದಿಂದ ಪರಿಹಾರ ಕೊಡಿಸುವುದಾಗಿ ಭರವಸೆ ನೀಡಿ, ಚಿರತೆ ಸೆರೆಗೆ ಬೋನ್ ಇರಿಸಿದ್ದಾರೆ.

ಪರೀಕ್ಷಾ ಕೇಂದ್ರಗಳ ಸುತ್ತ ನಿಷೇಧಾಜ್ಞೆ

ಮಂಡ್ಯ, ಜೂ.2– ಜಿಲ್ಲೆಯಲ್ಲಿ ಪ್ರಥಮ ಹಾಗೂ ದ್ವಿತೀಯ ಡಿಇಎಲ್‌ಇಡಿ ಮುಖ್ಯ ಪರೀಕ್ಷೆ ಜೂ.5ರಿಂದ 16ರವರೆಗೆ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್)ಯಲ್ಲಿ ನಡೆಯಲಿದ್ದು, ಪರೀಕ್ಷಾ ದಿನಗಳಂದು 200 ಮೀಟರ್ ವ್ಯಾಪ್ತಿಯ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಲಾಗಿದೆ.

ಈ ಆದೇಶವನ್ನು ಉಲ್ಲಂಘಿಸಿದವರ ವಿರುದ್ಧ ಭಾರತೀಯ ದಂಡ ಸಂಹಿತೆ (ಸಿಆರ್‌ಪಿಸಿ)1973 ಕಲಂ 144ರ ಪ್ರಕಾರ ಕ್ರಮ ಜರುಗಿಸಲಾಗುವುದು ಎಂದು ಮಂಡ್ಯ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ.ಹೆಚ್.ಎನ್ ಗೋಪಾಲಕೃಷ್ಣ ಆದೇಶದಲ್ಲಿ ತಿಳಿಸಿದ್ದಾರೆ.

ನೂತನ ಸಂಸತ್ ಭವನ ಉದ್ಘಾಟನಾ ವಿಧಾನಕ್ಕೆ ಎಂಎಲ್‌ಸಿ ವಿಶ್ವನಾಥ್ ಆಕ್ಷೇಪ



ಮೈಸೂರು,ಜೂ.2(ಪಿಎಂ)– ನೂತನ ಸಂಸತ್ ಭವನದ ಉದ್ಘಾಟನಾ ಸಮಾರಂಭವು ಪ್ರಧಾನಿ ನರೇಂದ್ರ ಮೋದಿಯವರ ಪಟ್ಟಾಭಿಷೇಕದ ರೀತಿ ನಡೆಯಿತು. ಇಲ್ಲಿ ಹೋಮ, ಹವನ ಮತ್ತು ಪೂಜೆ ಮಾಡುವ ಮೂಲಕ ಪುರೋಹಿತ ಶಾಹಿ ವ್ಯವಸ್ಥೆಯ ಮರುಸ್ಥಾಪನೆ ಮಾಡು ತ್ತಿದ್ದಾರೆಯೇ? ಎಂದು ವಿಧಾನ ಪರಿಷತ್ ಸದಸ್ಯ ಎ.ಹೆಚ್.ವಿಶ್ವನಾಥ್ ವಾಗ್ದಾಳಿ ನಡೆಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನ ದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ವಕಾಲಿಕ ಸಂವಿಧಾನ ಬರೆದು ಕೊಟ್ಟ ಅಂಬೇಡ್ಕರ್ ಅವರಿಗೆ ಗೌರವ ಕೊಡಲಿಲ್ಲ. ಅವರ ಹೆಸರು ಎಲ್ಲಿಯೂ ಪ್ರಸ್ತಾಪವೇ ಆಗಲಿಲ್ಲ. ಭಾರತದ ಪ್ರಥಮ ಪ್ರಜೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ದೇಶದ ಮೂರು ರಕ್ಷಣಾ ಪಡೆಗಳ ಪ್ರಧಾನ ದಂಡನಾಯಕರೂ ಹೌದು. ಅವರನ್ನೂ ಕಡೆಗಣಿಸಲಾಯಿತು ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸಂಸತ್ ಭವನ ಇರಲೇ ಇಲ್ಲವೇನೋ, ಹಿಂದಿನ ಯಾವುದೇ ಪ್ರಧಾನಿಗಳು ಈ ದೇಶಕ್ಕೆ ಏನು ಮಾಡಲೇ ಇಲ್ಲವೇನೋ, ನಾನಷ್ಟೇ ಸಂಸತ್ ಭವನ ಕಟ್ಟಿದ್ದೇನೆ ಎಂಬ ರೀತಿಯಲ್ಲಿ ಮೋದಿಯವರು ವರ್ತಿಸಿ ದರು. ಸಮಾರಂಭದ ಘಟನಾ ವಳಿಗಳು 140 ಕೋಟಿ ದೇಶದ ಜನತೆಗೆ ಮಾಡಿದ ಅವಮಾನ ಎಂದರೂ ತಪ್ಪಿಲ್ಲ. ರಾಷ್ಟ್ರ ಲಾಂಛನ ಅಶೋಕ ಸ್ತಂಭ ಇರಬೇಕಾದ ಜಾಗದಲ್ಲಿ ಧರ್ಮ ಲಾಂಛನ ಸ್ಥಾಪನೆ ಮಾಡಲಾಗಿದೆ. ಇದರಿಂದ ಇಡೀ ದೇಶದ ಜಾತ್ಯಾತೀತ ವ್ಯವಸ್ಥೆ ಹಾಗೂ ಧರ್ಮ ನಿರ ಪೇಕ್ಷಕ್ಕೆ ಪೆಟ್ಟು ಬಿದ್ದಂತಾಗಿದೆ ಎಂದರು.

ಪ್ರಧಾನಮಂತ್ರಿ ಅವರಿಂದಲೇ ಅಸ್ಪೃಶ್ಯತೆ ಆಚರಣೆ ಆಗಿದ್ದು, ಇದು ನಮ್ಮ ಶೋಷಿತ, ಶ್ರಮಿಕ ಸಮುದಾಯಗಳಿಗೆ ಮಾಡಿದ ಅವಮಾನ ಎಂದು ಆರೋಪಿಸಿದರು. ಆಯಾಯ ರಾಜ್ಯಗಳ ಜನಸಂಖ್ಯೆಗೆ ಅನುಗುಣ ವಾಗಿ ಜಿಎಸ್‌ಟಿ ಮತ್ತು ಇತರೆ ತೆರಿಗೆಗಳನ್ನು ಕೇಂದ್ರ ಹಂಚಿಕೆ ಮಾಡುತ್ತದೆ. ಹಾಗಾಗಿ ಕರ್ನಾಟಕ ಸೇರಿದಂತೆ ದಕ್ಷಿಣದ 6 ರಾಜ್ಯಗಳಿಗೆ ಆಡಳಿತ ಮತ್ತು ಆರ್ಥಿಕ ನೆರವಿನಲ್ಲೂ ಅನ್ಯಾಯವಾಗುತ್ತಿದೆ. ಈ ಬಗ್ಗೆ ಚರ್ಚೆ ಪ್ರಾರಂಭವಾಗಬೇಕು. ಹಿಂದಿನ ಯಾವುದೇ ಪ್ರಧಾನಿಗಳು ಏನೂ ಮಾಡಿಲ್ಲ. ಈಗಿನ ಪ್ರಧಾನಿ ಮೋದಿಯವರೇ ಎಲ್ಲಾ ಮಾಡುತ್ತಿರುವುದು ಎಂದು ಬಿಂಬಿಸುವ ಕೆಲಸ ನಡೆಯುತ್ತಿದೆ ಎಂದು ಹೇಳಿದರು.

ಪಠ್ಯಪುಸ್ತಕ ಪರಿಷ್ಕರಣೆಗೆ ಅವಸರ ಬೇಡ...

ಸರ್ಕಾರ ಪಠ್ಯ ಪುಸ್ತಕ ಪರಿಷ್ಕರಣೆಗೆ ಮುಂದಾಗಿರುವ ಬಗ್ಗೆ ಪ್ರತ್ರಿಯಿಸಿದ ವಿಶ್ವನಾಥ್, ಅವಸರ ಮಾಡುವುದು ಬೇಡ. ಶಾಲೆಗಳು ಪ್ರಾರಂಭವಾಗಿವೆ. ಈಗ ಸಮಿತಿ ರಚಿಸಿ, ಅದು ಕೆಲಸ ಮಾಡಲಿ. ಮುಂದಿನ ಶೈಕ್ಷಣಿಕ ವರ್ಷದಿಂದ ಬದಲಾವಣೆ ಮಾಡಲಿ ಎಂದು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ಬಿಜೆಪಿಯವರ ಬಳಿ ಗ್ಯಾರಂಟಿ ಕಾರ್ಡ್ ಕೇಳಬೇಕು: 9 ವರ್ಷಗಳ ಹಿಂದೆ ಮೋದಿಯವರು ಸ್ವಿಸ್ ಬ್ಯಾಂಕ್‌ನಿಂದ ಭಾರತದ ಕಪ್ಪು ಹಣ ತಂದು ಎಲ್ಲರ ಖಾತೆಗೆ ತಲಾ 15 ಲಕ್ಷ ಹಾಕುವುದಾಗಿ ಹೇಳಿದ್ದರು. ಆದರೆ ಕಾಂಗ್ರೆಸ್‌ನವರಂತೆ ಅವರು ಗ್ಯಾರಂಟಿ ಕಾರ್ಡ್ ಕೊಟ್ಟಿರಲಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ನಳೀನ್ ಕುಮಾರ್ ಕಟೀಲ್ ಹೇಳಿಕೆ ನೀಡಿದ್ದಾರೆ. ರಾಷ್ಟ್ರೀಯ ಪಕ್ಷದ ರಾಜ್ಯಾಧ್ಯಕ್ಷರ ಸ್ಥಾನದಲ್ಲಿದ್ದೂ ಈ ರೀತಿ ಹೇಳಿಕೆ ನೀಡಿರುವುದು ನಾಚಿಕೆಗೇಡು. ಮುಂದೆ ಬಿಜೆಪಿಯವರು ಏನಾದರೂ ಮಾಡುತ್ತೇವೆ ಎಂದು ಜನರ ಮುಂದೆ ಬಂದರೆ, ಗ್ಯಾರಂಟಿ ಕಾರ್ಡ್ ಕೇಳಬೇಕಾಗುತ್ತದೆ ಎಂದು ಲೇವಡಿ ಮಾಡಿದರು.

ಮದ್ದೂರು ಬಳಿ ವೈದ್ಯ ಡಾ. ವೇಣುಗೋಪಾಲ್ ಆತ್ಮಹತ್ಯೆ



ಮಂಡ್ಯ, ಜೂ.2– ಖಾಸಗಿ ಆಸ್ಪತ್ರೆಯ ಖ್ಯಾತ ವೈದ್ಯರೊಬ್ಬರು ಸಹೋದರಿ ಸಾವಿನಿಂದ ಮನನೊಂದು ಆತ್ಮಹತ್ಯೆಗೆ ಶರಣಾಗಿರುವ ಘಟನೆ ಮದ್ದೂರು ತಾಲೂಕಿನ ಕುದುರಗುಂಡಿ ಗ್ರಾಮದ ಕೆರೆ ಬಳಿ ಗುರುವಾರ ರಾತ್ರಿ ಜರುಗಿದೆ.

ಖ್ಯಾತ ವೈದ್ಯ ಡಾ.ವೇಣುಗೋಪಾಲ್ (57) ಆತ್ಮಹತ್ಯೆ ಮಾಡಿಕೊಂಡವರು. ಇವರು ಮಂಡ್ಯದ ಉಮ್ಮಡಹಳ್ಳಿ ಗೇಟ್ ಬಳಿಯ ಪ್ರತಿಷ್ಠಿತ ಸಾಂಜೋ ಆಸ್ಪತ್ರೆಯಲ್ಲಿ ಶಸ್ತ್ರ ಚಿಕಿತ್ಸಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದರು.

ಗುರುವಾರ ಬೆಳಗ್ಗೆ ಕರ್ತವ್ಯಕ್ಕೆ ಹಾಜರಾಗಿದ್ದ ಅವರು ಹಲವು ಮಂದಿಗೆ ಚಿಕಿತ್ಸೆ ನೀಡಿದ್ದಾರೆ. ಬಳಿಕ ಮಧ್ಯಾಹ್ನ ಮೂರ್ನಾಲ್ಕು ಗಂಟೆ ಸುಮಾರಿಗೆ ಆಸ್ಪತ್ರೆಯಿಂದ ಹೊರಟಿರುವ ಅವರು ಮದ್ದೂರು ಸಾರಿಗೆ ಬಸ್ ನಿಲ್ದಾಣಕ್ಕೆ ಆಗಮಿಸಿದ್ದಾರೆ. ಬಳಿಕ ಗುರುವಾರ ರಾತ್ರಿ 10 ಗಂಟೆ ವೇಳೆಗೆ ಮದ್ದೂರು ತಾಲೂಕಿನ ಕುದುರಗುಂಡಿ ಗ್ರಾಮದ ಕೆರೆಯ ಬಳಿ ಆಗಮಿಸಿ ಆತ್ಮಹತ್ಯೆಗೆ ಶರಣಾಗಿದ್ದಾರೆ ಎನ್ನಲಾಗಿದೆ.

ಗ್ರಾಮದ ಸಾರ್ವಜನಿಕರು ಶುಕ್ರವಾರ ಬೆಳಿಗ್ಗೆ ಕೃಷಿ ಚಟುವಟಿಕೆಗಳಲ್ಲಿ ಪಾಲ್ಗೊಳ್ಳಲು ತೆರಳಿದ್ದಾಗ ಪ್ರಕರಣ ಬೆಳಕಿಗೆ ಬಂದಿದೆ. ಸಾರ್ವಜನಿಕರು ಮದ್ದೂರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಆಗಮಿಸಿ ಪೊಲೀಸರು ಪರಿಶೀಲನೆ ನಡೆಸಿದ ಬಳಿಕ ಮಂಡ್ಯ ಮಿಮ್ಸ್ ಆಸ್ಪತ್ರೆಗೆ ಶವವನ್ನು ರವಾನಿಸಲಾಗಿದ್ದು, ಮದ್ದೂರು ಪೊಲೀಸರು ಪ್ರಕರಣ ದಾಖಲು ಮಾಡಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

ಶಿಕ್ಷಕರ ವರ್ಗಾವಣೆ ಪ್ರಕ್ರಿಯೆಗೆ ಕೊನೆಗೂ ಚಾಲನೆ

ಮೈಸೂರು, ಜೂ.2(ಎಸ್‌ಪಿಎನ್)– ಹೆಚ್ಚುವರಿ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆಯಲ್ಲಿ ಗೊಂದಲ ಹಾಗೂ 2023ರ ವಿಧಾನ ಸಭಾ ಚುನಾವಣೆ ಪ್ರಕ್ರಿಯೆಯಿಂದಾಗಿ ನನೆಗುದ್ದಿಗೆ ಬಿದ್ದಿದ್ದ ಪ್ರಾಥಮಿಕ ಮತ್ತು ಪ್ರೌಢಶಾಲೆ ಶಿಕ್ಷಕರ ವರ್ಗಾವಣೆಗೆ ಚಾಲನೆ ಸಿಕ್ಕಿದ್ದು, ನೂತನ ಸರ್ಕಾರ ಪರಿಷ್ಕೃತ ವರ್ಗಾವಣಾ ವೇಳಾಪಟ್ಟಿಯನ್ನು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಶುಕ್ರವಾರ ಬಿಡುಗಡೆ ಮಾಡಿದೆ.

ಹೆಚ್ಚುವರಿ ಶಿಕ್ಷಕರ ಸ್ಥಳ ಮರು ನಿಯುಕ್ತಿ ಕೌನ್ಸಿಲಿಂಗ್ ಪ್ರಕ್ರಿಯೆ ಜೂನ್ 6ರಿಂದ, ಪ್ರಾಥಮಿಕ ಹಾಗೂ ಪ್ರೌಢಶಾಲಾ ಶಿಕ್ಷಕರ ಸಾರ್ವತ್ರಿಕ ವರ್ಗಾವಣೆ ಜೂನ್ 7ರಿಂದ ಆರಂಭವಾಗಲಿವೆ. ಈ ಕುರಿತು ಪರಿಷ್ಕೃತ ವರ್ಗಾವಣಾ ವೇಳಾಪಟ್ಟಿ ಪ್ರಕಟಿಸಿದೆ.

ಹೆಚ್ಚುವರಿ ಶಿಕ್ಷಕರ ನಿಯುಕ್ತಿ, ಮುಖ್ಯಶಿಕ್ಷಕರು, ಸಹ ಶಿಕ್ಷಕರ ಸಾಮಾನ್ಯ ಕೋರಿಕೆ ವರ್ಗಾವಣೆ, ಜಿಲ್ಲಾ, ವಿಭಾಗೀಯ ಹಂತದ ವರ್ಗಾವಣೆ ಸೇರಿದಂತೆ ಎಲ್ಲ ಪ್ರಕ್ರಿಯೆಗಳೂ ಜುಲೈ 31ರ ಒಳಗೆ ಪೂರ್ಣಗೊಳ್ಳಲಿವೆ ಎಂದು ಶಾಲಾ ಶಿಕ್ಷಣ ಇಲಾಖೆ ಆಯುಕ್ತೆ ಬಿ.ಬಿ.ಕಾವೇರಿ ತಿಳಿಸಿದ್ದಾರೆ.

ಕರ್ನಾಟಕ ರಾಜ್ಯ ನಾಗರಿಕ ಸೇವೆಗಳ (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಕಾಯ್ದೆ–2020 ರಡಿ ರಾಜ್ಯ ಸರ್ಕಾರ ಕಳೆದ ಡಿಸೆಂಬರ್‌ನಲ್ಲಿ ಅಧಿಸೂಚನೆ ಹೊರಡಿಸಿತ್ತು. ವರ್ಗಾವಣಾ ವೇಳಾಪಟ್ಟಿಯೂ ಬಿಡುಗಡೆಯಾಗಿತ್ತು. ಸುಮಾರು 80 ಸಾವಿರ ಶಿಕ್ಷಕರು ವರ್ಗಾವಣೆ ಕೋರಿ ಅರ್ಜಿ ಸಲ್ಲಿಸಿದ್ದರು.

ವಿಪಕ್ಷ ನಾಯಕನ ಸ್ಥಾನಕ್ಕಾಗಿ ಬಿಜೆಪಿಯಲ್ಲಿ ತೀವ್ರ ಪೈಪೋಟಿ

ಬಿಎಸ್‌ವೈ ಭೇಟಿಯಾದ ಮಾಜಿ ಸಿಎಂ ಬೊಮ್ಮಾಯಿ

ಬೆಂಗಳೂರು, ಜೂ.2–ವಿಧಾನಸಭಾ ಚುನಾವಣೆಯಲ್ಲಿ ದೊಡ್ಡ ಸೋಲು ಅನುಭವಿಸಿದ ಬಳಿಕ ಬಿಜೆಪಿಯಲ್ಲಿ ವಿಪಕ್ಷ ನಾಯಕನ ಸ್ಥಾನ ಪಡೆಯಲು ರಾಜ್ಯ ಬಿಜೆಪಿಯಲ್ಲಿ ಭಾರೀ ಪೈಪೋಟಿ ನಡೆಯುತ್ತಿದೆ.



ಈ ನಡುವಲ್ಲೇ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಯವರು ಬಿಜೆಪಿ ಹಿರಿಯ ನಾಯಕ ಬಿ.ಎಸ್. ಯಡಿಯೂರಪ್ಪ ಅವರನ್ನು ಭೇಟಿ ಮಾಡಿದ್ದು, ವಿಪಕ್ಷ ನಾಯಕ ಸ್ಥಾನ ಸೇರಿದಂತೆ ರಾಜ್ಯ ರಾಜಕೀಯ ಬೆಳವಣಿಗೆಗಳ ಕುರಿತು ಚರ್ಚೆ ನಡೆಸಿದ್ದಾರೆಂದು ತಿಳಿದುಬಂದಿದೆ.

ಈಗಾಗಲೇ ಬಿಜೆಪಿಯ ರಾಷ್ಟ್ರೀಯ ನಾಯಕರು ಬಿಜೆಪಿ ಶಾಸಕರ ಜೊತೆ ಅನೌಪಚಾರಿಕ ಸಭೆ ನಡೆಸಿ ಅಭಿಪ್ರಾಯವನ್ನು ಕಲೆಹಾಕುತ್ತಿದ್ದಾರೆ. ಆದರೆ, ಅಂತಿಮ ನಿರ್ಧಾರವನ್ನು ಜುಲೈನಲ್ಲಿ ನಡೆಯುವ ಬಜೆಟ್ ಅಧಿವೇಶನಕ್ಕೂ ಮುನ್ನ ತೆಗೆದುಕೊಳ್ಳುವ ಸಾಧ್ಯತೆ ಇದೆ ಎಂದು ಬಿಜೆಪಿಯ ಮೂಲಗಳು ತಿಳಿಸಿವೆ. ಆದರೆ, ವಿಪಕ್ಷ ನಾಯಕರ ಸ್ಥಾನಕ್ಕೆ ಪೈಪೋಟಿ ಹೆಚ್ಚಿರುವುದು ಬಿಜೆಪಿ ವರಿಷ್ಠರ ತಲೆನೋವಿಗೆ ಕಾರಣವಾಗಿದೆ.

ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಮಾಜಿ ಡಿಸಿಎಂ ಆರ್ ಅಶೋಕ್, ಮಾಜಿ ಸಚಿವ ಸುನೀಲ್ ಕುಮಾರ್ ಹಾಗೂ ಹಿರಿಯ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿಪಕ್ಷ ನಾಯಕ ಸ್ಥಾನದ ರೇಸ್‌ನಲ್ಲಿದ್ದಾರೆ. ವಿಪಕ್ಷ ನಾಯಕನ ಸ್ಥಾನ ನಿರ್ಣಾಯಕ ಆಗಿರುವುದರಿಂದ ಬಿಜೆಪಿ ಅಳೆದು ತೂಗಿ ನಿರ್ಧಾರವನ್ನು ತೆಗೆದುಕೊಳ್ಳುತ್ತಿದೆ. ಏಕೆಂದರೆ ಕಾಂಗ್ರೆಸ್ ಸರ್ಕಾರದ ವೈಫಲ್ಯಗಳು ಹಾಗೂ ತಪ್ಪು ಹೆಜ್ಜೆಗಳನ್ನು ಜನರ ಮುಂದಿಟ್ಟು ಪ್ರತಿಯೊಂದು ಸಿಕ್ಕ ಅವಕಾಶಗಳನ್ನು ಯಶಸ್ವಿಯಾಗಿ ಬಳಸಿಕೊಳ್ಳಲು ವಿಪಕ್ಷ ನಾಯಕನ ಸ್ಥಾನ ಬಿಜೆಪಿಗೆ ಪ್ರಮುಖವಾಗಿದೆ. ವಿಪಕ್ಷ ದಾಳಿಯನ್ನು ಸಮರ್ಥವಾಗಿ ಎದುರಿಸಲು ಕಾಂಗ್ರೆಸ್‌ನಲ್ಲಿ ಹಲವು ಹಿರಿಯ ಶಾಸಕರಿರುವ ಕಾರಣಕ್ಕಾಗಿ ಬಿಜೆಪಿಯ ಲ್ಲಿಯೂ ಅಂತಹದ್ದೇ ನಾಯಕನನ್ನು ಆಯ್ಕೆ ಮಾಡಲು ನಾಯಕರು ನಿರ್ಧರಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ

ಗ್ಯಾರಂಟಿ ಘೋಷಣೆ ಬಗ್ಗೆ ಮಾಜಿ ಸಿಎಂ ಕುಮಾರಸ್ವಾಮಿ ಸರಣಿ ಟ್ವೀಟ್: ಷರತ್ತಿಗೆ ಸಿಡುಕು



ಬೆಂಗಳೂರು, ಜೂ.2– ಕಾಂಗ್ರೆಸ್ ಸರ್ಕಾರದ ಗ್ಯಾರಂಟಿಗಳ ಒಳಮರ್ಮ ಜನರಿಗೆ ಅರ್ಥವಾಗಲು ಬಹಳ ದಿನ ಬೇಕಿಲ್ಲ ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಹೇಳಿದ್ದಾರೆ.

ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಘೋಷಿಸಿದ್ದರ ಬಗ್ಗೆ ಸರಣಿ ಟ್ವೀಟ್‌ಗಳ ಮೂಲಕ ವ್ಯಂಗ್ಯವಾಗಿ ಟೀಕಿಸಿರುವ ಅವರು, 'ಷರತ್ತು ಸಹಿತವಾಗಿ ಘೋಷಣೆ ಮಾಡಲಾಗಿರುವ 5 ಗ್ಯಾರಂಟಿಗಳ ಬಗ್ಗೆ ಈಗಾಗಲೇ ಜನರಿಗೆ ಒಂದು ನಿರ್ದಿಷ್ಟ ಅಭಿಪ್ರಾಯ ಬಂದಿದೆ. ಹರುಷದ ಕೂಳಿಗೆ ಆಸೆಪಟ್ಟು ವರುಷದ ಕೂಳು ಕಳೆದುಕೊಂಡರು ಎನ್ನುವ ಮಾತನ್ನು ನಾನು ಹೇಳಲಾರೆ. ಆದರೆ, ರಾಜ್ಯದ ಜನತೆಗೆ ಇದರ ಒಳಮರ್ಮ ಅರ್ಥವಾಗಲು ಬಹಳ ದಿನ ಬೇಕಿಲ್ಲ' ಎಂದಿದ್ದಾರೆ.

ಗ್ಯಾರಂಟಿಗಳ ಬಗ್ಗೆ ಚರ್ಚೆ ಅಥವಾ ವಿಮರ್ಶೆಗೆ ನನಗೆ ಆತುರವಿಲ್ಲ, ನನಗೆ ತಾಳ್ಮೆ ಇದೆ. ಆದರೆ, ಮತ ಗಳಿಕೆಗೆ ಮುನ್ನ ಕೊಟ್ಟ ಭರವಸೆಗಳು ಅಧಿಕಾರಕ್ಕೆ ಬಂದ ಮೇಲೆ 'ಷರತ್ತು ಸಹಿತ' ಎಂದಾಗಿದ್ದರ ಬಗ್ಗೆ ನನಗೆ ನೋವಿದೆ. ಜನರ ಸಹನೆ ಎನ್ನುವುದು ಖಂಡಿತಾ ಕಟ್ಟೆಯೊಡೆಯುತ್ತದೆ. ಆವರೆಗೆ ನಾನು ಕಾಯುತ್ತೇನೆ ಹಾಗೂ ಅವರ ಜತೆ ನಿಲ್ಲುತ್ತೇನೆ.


ಹಾಲಿ ಮುಖ್ಯಮಂತ್ರಿಗಳು 2013–18ರಲ್ಲಿ ಮುಖ್ಯಮಂತ್ರಿಗಳಾಗಿದ್ದಾಗ 2.75 ಲಕ್ಷದಷ್ಟು ಸರ್ಕಾರಿ ಹುದ್ದೆಗಳನ್ನು ಖಾಲಿ ಇಟ್ಟಿದ್ದರು. ಆ ಖಾಲಿ ಹುದ್ದೆಗಳನ್ನು ತುಂಬಲು ಅವರು ಆ ಸಂದರ್ಭದಲ್ಲಿ ಎಳ್ಳಷ್ಟೂ ಪ್ರಯತ್ನ ಮಾಡಲಿಲ್ಲ. ಅಂದು ಕಾಣದ ನಿರುದ್ಯೋಗ ಸಮಸ್ಯೆ ಈ ಚುನಾವಣೆಗೆ ಮುನ್ನ ಕಂಡಿತು, ಅದು ಮತ ಫಸಲು ತಂದುಕೊಟ್ಟಿದೆ ಎಂದು ಟೀಕಿಸಿದ್ದಾರೆ. ಮುಗ್ಧ ಯುವಜನರಿಗೆ 3 ಸಾವಿರ ಮಾಸಿಕ ಭತ್ಯೆ ಎಂದು ಗ್ಯಾರಂಟಿ ಕೊಟ್ಟಾಗ ಷರತ್ತಿನ ಬಗ್ಗೆ ನಾಲಿಗೆ ಮೌನವಾಗಿತ್ತು! ಅದೇ ಯುವಜನರ ವೋಟಿನಿಂದ ಪಟ್ಟಕ್ಕೇರಿದ ಮೇಲೆ 'ಪ್ರಸಕ್ತ ಸಾಲಿಗೆ ಮಾತ್ರ' ಎನ್ನುವ ಷರತ್ತು ವಿಧಿಸಿ 24 ತಿಂಗಳಷ್ಟೇ ಭತ್ಯೆ ಎಂದಿದ್ದು ನನ್ನನ್ನು ಬಾಧಿಸಿದೆ. ಯುವಕರಿಗೆ ಟೋಪಿ ಹಾಕಿದ 'ನಕಲಿ ಗ್ಯಾರಂಟಿ'ಗೆ ಶಾಸ್ತಿ ದೂರವಿಲ್ಲ.

ನಾನು ತುಟಿಗೆ ತುಪ್ಪ ಸವರುವವರನ್ನು ನೋಡಿದ್ದೆ. ಹಣೆಗೆ ತುಪ್ಪ ಸವರುವವರನ್ನು ನೋಡಿರಲಿಲ್ಲ. ಗ್ಯಾರಂಟಿ ಕಾರ್ಡ್‌ಗೆ ಸಹಿ ಹಾಕಿ ಕೊಟ್ಟು ಯಾಮಾರಿಸಿದ ಮಹಾನುಭಾವರು ಹಣೆಗೆ ತುಪ್ಪ ಸವರಿ ನಯಗಾರಿಕೆಯಿಂದ ಭಂಡತನ ಮೆರೆದು ಯುವಜನರ ಬೆನ್ನಿಗೆ ಚೂರಿ ಹಾಕಿದ್ದಾರೆ. ಯುವಜನರೂ ತಮ್ಮ ಶಕ್ತಿಯನ್ನು ತೋರಿಸಲಿದ್ದಾರೆ, ನಾನು ಕಾಯುತ್ತೇನೆ ಎಂದು ಕಿಡಿಕಾರಿದ್ದಾರೆ.

ಈಗ ಒಂದು ಗ್ಯಾರಂಟಿ ಬಗ್ಗೆ ಮಾತ್ರ ಮಾತನಾಡಿದ್ದೇನೆ. ಉಳಿದವುಗಳ ಬಗ್ಗೆ ಕ್ರಮೇಣ ಮಾತನಾಡುತ್ತೇನೆ. ಜನರ ತಲೆ ಮೇಲೆ ಐದು ಮಕ್ಮಲ್ ಟೋಪಿಗಳನ್ನು ಹಾಕಿದ ಈ ಷರತ್ತು ಸರ್ಕಾರವನ್ನು ಜನ ಕ್ಷಮಿಸುವುದಿಲ್ಲ. 'ಕಂಡಿಷನ್ಸ್ ಕಾಂಗ್ರೆಸ್' ಪಕ್ಷಕ್ಕೆ ತಕ್ಕಪಾಠ ಕಲಿಸಿಯೇ ಕಲಿಸುತ್ತಾರೆ' ಎಂದು ಕುಮಾರಸ್ವಾಮಿ ಗುಡುಗಿದ್ದಾರೆ.

ಸಾವರ್ಕರ್ ಪ್ರತಿಷ್ಠಾನದ ವತಿಯಿಂದ ಇಂದು 'ವೀರ ಸಾವರ್ಕರ್ ಸಮ್ಮಾನ್ ಪ್ರಶಸ್ತಿ' ಪ್ರದಾನ ಸಮಾರಂಭ

- ಖ್ಯಾತ ಇತಿಹಾಸ ತಜ್ಞ ವಿಕ್ರಮ್ ಸಂಪತ್ ಪ್ರಶಸ್ತಿಗೆ ಭಾಜನ
- ಪ್ರಸಿದ್ಧ ಕಾದಂಬರಿಕಾರ ಡಾ.ಎಸ್.ಎಲ್.ಭೈರಪ್ಪರ ಘನ ಉಪಸ್ಥಿತಿ



ಡಾ.ಎಸ್.ಎಲ್.ಭೈರಪ್ಪ



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಸಾವರ್ಕರ್ ಪ್ರತಿಷ್ಠಾನದ ಅಧ್ಯಕ್ಷೆ ಡಾ.ಎಸ್.ಯಶಸ್ವಿನಿ (ಎಡದಿಂದ 3ನೇಯವರು) ಮಾತನಾಡಿದರು.



ವಿಕ್ರಮ್ ಸಂಪತ್

ಮೈಸೂರು,ಜೂ.2(ಪಿಎಂ)–ಮೈಸೂರು ಮೂಲದ ಸಾವರ್ಕರ್ ಪ್ರತಿಷ್ಠಾನದ ವತಿಯಿಂದ ಜೂ.3ರಂದು ಹಮ್ಮಿಕೊಂಡಿರುವ ಸಮಾರಂಭದಲ್ಲಿ ವಿನಾಯಕ ದಾಮೋದರ್ (ವೀರ್) ಸಾವರ್ಕರ್ ಅವರ 140ನೇ ಜಯಂತಿ ಪ್ರಯುಕ್ತ ಖ್ಯಾತ ಇತಿಹಾಸ ತಜ್ಞರೂ ಆದ ಲೇಖಕ ವಿಕ್ರಮ್ ಸಂಪತ್ ಅವರಿಗೆ 'ವೀರ ಸಾವರ್ಕರ್ ಸಮ್ಮಾನ್ ಪ್ರಶಸ್ತಿ' ಪ್ರದಾನ ಮಾಡಲಾಗುತ್ತಿದೆ.

ಮೈಸೂರಿನ ಮುಕ್ತ ಗಂಗೋತ್ರಿಯ ಮುಕ್ತ ವಿಶ್ವವಿದ್ಯಾನಿಲಯದ ಘಟಿಕೋತ್ಸವ ಭವನದಲ್ಲಿ ಅಂದು ಸಂಜೆ 5ಕ್ಕೆ ಹಮ್ಮಿಕೊಂಡಿರುವ ಬೃಹತ್ ಸಮಾರಂಭದಲ್ಲಿ ವಿಕ್ರಮ್ ಸಂಪತ್ ಪ್ರಶಸ್ತಿ ಸ್ವೀಕರಿಸಲಿದ್ದಾರೆ. ಸರಸ್ವತಿ ಸಮ್ಮಾನ್ ಪುರಸ್ಕೃತರೂ ಆದ ಖ್ಯಾತ ಹಿರಿಯ ಕಾದಂಬರಿಕಾರ ಡಾ.ಎಸ್.ಎಲ್.ಭೈರಪ್ಪ ಅವರ ಘನ ಉಪಸ್ಥಿತಿಯಲ್ಲಿ ಸಮಾರಂಭ ನಡೆಯಲಿದೆ. ಇದೇ ಸಂದರ್ಭದಲ್ಲಿ ಯುವ ಬ್ರಿಗೇಡ್ ಸಂಸ್ಥಾಪಕ ಚಕ್ರವರ್ತಿ ಸೂಲಿಬೆಲೆ ವಿಶೇಷ ಉಪನ್ಯಾಸ ನೀಡಲಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಈ ವಿಷಯ ತಿಳಿಸಿದ ಪ್ರತಿಷ್ಠಾನದ ಅಧ್ಯಕ್ಷೆ ಡಾ.ಎಸ್.ಯಶಸ್ವಿನಿ, ಇದೇ ಮೊದಲ ಬಾರಿಗೆ ಈ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದ್ದು, ಪ್ರಶಸ್ತಿಯು ಒಂದು ಲಕ್ಷ ನಗದು ಮತ್ತು ಪ್ರಶಸ್ತಿ ಫಲಕ ಒಳಗೊಂಡಿದೆ. ಪ್ರತಿ ವರ್ಷ ಸಾಧಕರೊಬ್ಬರನ್ನು ಆಯ್ಕೆ ಮಾಡಿ ಈ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ತಿಳಿಸಿದರು.

ಪ್ರಶಸ್ತಿ ಪ್ರದಾನ ಸಮಾರಂಭಕ್ಕೂ ಮುನ್ನ ಮಧ್ಯಾಹ್ನ 2ಕ್ಕೆ ರಕ್ತದಾನ ಶಿಬಿರ ನಡೆಯಲಿದೆ. ಜೊತೆಗೆ ಮಧ್ಯಾಹ್ನ 3ಕ್ಕೆ ಸಾವರ್ಕರ್ ಅವರ ಕುರಿತ ಛದ್ಮವೇಷ ಮತ್ತು ಚಿತ್ರಕಲೆ ಸ್ಪರ್ಧೆ ಆಯೋಜಿಸಲಾಗಿದೆ. ಛದ್ಮವೇಷ ಸ್ಪರ್ಧೆಯು 8 ವರ್ಷದೊಳಗಿನ ಮಕ್ಕಳಿಗೆ ನಡೆಯಲಿದ್ದು, ವಿವರಗಳಿಗೆ ಮೊ.ಸಂ. 82775 35336 ಸಂಪರ್ಕಿಸಬಹುದು. ಅದೇ ರೀತಿ 8 ವರ್ಷ ಮೇಲ್ಪಟ್ಟ ಮಕ್ಕಳು ಚಿತ್ರಕಲಾ ಸ್ಪರ್ಧೆಯಲ್ಲಿ ಭಾಗವಹಿಸಬಹುದು. ವಿವರಗಳಿಗೆ ಮೊ.ಸಂ. 89712 01521 ಸಂಪರ್ಕಿಸಬಹುದು. ಈ ಸ್ಪರ್ಧೆಗಳಿಗೆ ಪ್ರವೇಶ ಉಚಿತವಿದೆ. ಸಾವರ್ಕರ್ ಕುರಿತು ರೀಲ್ಸ್ ಮತ್ತು ವೀಡಿಯೋ ಸ್ಪರ್ಧೆಗೂ ಹಲವರಿಂದ ವೀಡಿಯೋಗಳು ಸಲ್ಲಿಕೆಯಾಗಿವೆ ಎಂದು ಹೇಳಿದರು. ಈಗಾಗಲೇ ಪ್ರಶಸ್ತಿ ಪ್ರದಾನ ಸಮಾರಂಭ ಕುರಿತು ಪ್ರಚಾರ ವಾಹನಗಳಿಗೆ ಸಂಸದ ಪ್ರತಾಪ್ ಸಿಂಹ ಚಾಲನೆ ನೀಡಿದ್ದರು. ಪ್ರಚಾರ ವಾಹನಗಳು ನಗರದಾದ್ಯಂತ ಸಂಚರಿಸಿ ಪ್ರಚಾರ ಮಾಡಿವೆ. ಜೊತೆಗೆ ಶಾಸಕ ಟಿ.ಎಸ್.ಶ್ರೀವತ್ಸ ಕರಪತ್ರ ಬಿಡುಗಡೆಗೊಳಿಸಿ ಶುಭ ಕೋರಿದ್ದರು ಎಂದು ತಿಳಿಸಿದರು.

ವಿಕ್ರಮ್ ಸಂಪತ್ ಅವರ ಕುರಿತು: ವಿಕ್ರಮ್ ಸಂಪತ್ ಅವರು ಪ್ರಸಿದ್ಧ ಭಾರತೀಯ ಇತಿಹಾಸಕಾರರು. ಬೆಂಗಳೂರಿನಲ್ಲಿ ಹುಟ್ಟಿ ಬೆಳೆದ ಇವರು ಇಂಜಿನಿಯರಿಂಗ್‌ನಲ್ಲಿ ಪದವಿ, ಗಣಿತಶಾಸ್ತ್ರದಲ್ಲಿ ಸ್ನಾತಕೋತ್ತರ ಪದವಿ ಪಡೆದಿದ್ದಾರೆ. ಅನೇಕ ಬಹುರಾಷ್ಟ್ರೀಯ ಕಂಪನಿಗಳಲ್ಲಿ ಕೆಲಸ ಮಾಡಿದ್ದಾರೆ. ಸಂಗೀತಗಾರ್ತಿ ಗೌಹರ್ ಜಾನ್ ಮತ್ತು ಸ್ವಾತಂತ್ರ್ಯ ಹೋರಾಟಗಾರ ಸಾವರ್ಕರ್ ಕುರಿತ ಜೀವನಚರಿತ್ರೆಯ ಬರಹಗಳಿಗೆ ಹೆಸರುವಾಸಿಯಾಗಿದ್ದಾರೆ.

2008ರಲ್ಲಿ ಒಡೆಯರ್ ರಾಜವಂಶದ ಇತಿಹಾಸದ ಪುಸ್ತಕ ಪ್ರಕಟಿಸಿದ್ದರು. 2012ರಲ್ಲಿ ಇವರು ಬರೆದ ಗೌಹರ್ ಜಾನ್ ಅವರ ಕುರಿತ ಜೀವನ ಚರಿತ್ರೆಗೆ ಇಂಗ್ಲಿಷ್ ಸಾಹಿತ್ಯ ಕ್ಷೇತ್ರದಲ್ಲಿ 'ಯುವ ಪುರಸ್ಕಾರ'ಕ್ಕೆ ಸಾಹಿತ್ಯ ಅಕಾಡೆಮಿಯಿಂದ ಭಾಜನರಾಗಿದ್ದರು. ಆ ನಂತರ ಖ್ಯಾತ ವೀಣಾ ವಾದಕ ಎಸ್.ಬಾಲಚಂದರ್ ಅವರ ಬಗ್ಗೆ (ವಾಯ್ಸ್ ಆಫ್ ವೀಣಾ–ಎಸ್.ಬಾಲಚಂದರ್) ಪುಸ್ತಕ ರಚಿಸಿದ್ದರು. ಇವರ ಗೌಹರ್ ಜಾನ್ ಅವರ ಪುಸ್ತಕಕ್ಕೆ ನ್ಯೂಯಾರ್ಕ್‌ನ ಐಸಿಹಾಸಿಕ ಸಂಶೋಧನೆಗೆ ನೀಡುವ ಎಆರ್‌ಎಸ್‌ಸಿ ಅಂತಾರಾಷ್ಟ್ರೀಯ ಪ್ರಶಸ್ತಿ ದೊರೆತಿದೆ. ಪ್ರತಿಷ್ಠಾನದ ಕಾರ್ಯದರ್ಶಿ ಎಸ್.ಎಂ. ರಜತ್, ಸದಸ್ಯರಾದ ರಾಕೇಶ್ ಭಟ್, ಕೆ.ಎಂ. ನಿಶಾಂತ್, ಶಿವಕುಮಾರ್ ಗೋಷ್ಠಿಯಲ್ಲಿದ್ದರು.

ಕಾಂಗ್ರೆಸ್ ಗ್ಯಾರಂಟಿಗಳಲ್ಲಿ ಸ್ಪಷ್ಟತೆ ಇಲ್ಲ

ಬೆಂಗಳೂರು, ಜೂ.2– ಪ್ರಣಾಳಿಕೆಯಲ್ಲಿ ಹೇಳಿದ 5 ಗ್ಯಾರಂಟಿಗಳನ್ನು ಕಾಂಗ್ರೆಸ್ ಸರ್ಕಾರ ಇಂದು ಘೋಷಣೆ ಮಾಡಿದ್ದು, ಈ ಸಂಬಂಧ ಮಾಜಿ ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ ಕಿಡಿಕಾರಿದ್ದಾರೆ.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್‌ನ ಗ್ಯಾರಂಟಿಗಳಲ್ಲಿ ಸ್ಪಷ್ಟತೆ ಇಲ್ಲ. ರಾಜ್ಯಕ್ಕೆ ಕೇಂದ್ರ ಸರ್ಕಾರ ಒಬ್ಬರಿಗೆ 5 ಕೆ.ಜಿ. ಅಕ್ಕಿ ಕೊಡುತ್ತೆ. ಇವರು ಕೊಡೋದು ಈಗ 5 ಕೆ.ಜಿ. ಅನ್ನಭಾಗ್ಯದಲ್ಲಿ 10 ಕೆ.ಜಿ. ಅಂತಾ ಹೇಳ್ತಿಲ್ಲ. 10 ಕೆ.ಜಿ. ಆಹಾರ ಧಾನ್ಯ ಅಂತಾ ಸಿಎಂ ಹೇಳ್ತಾರೆ. ಈ 10 ಕೆ.ಜಿ.ಯಲ್ಲಿ ರಾಗಿ, ಜೋಳ ಮತ್ತು ಗೋಧಿ ಕೊಡ್ತೀರಾ... ಇದರ ಬಗ್ಗೆ ಸ್ಪಷ್ಟತೆ ಕೊಡುತ್ತಿಲ್ಲ ಎಂದು ವಾಗ್ದಾಳಿ ನಡೆಸಿದರು.

2,000 ರೂ. ಮನೆ ಯಜಮಾನಿಗೆ ಕೊಡೋದರಲ್ಲಿಯೂ ಮಹಾಮೋಸ ಅಡಗಿದೆ. ಆನ್‌ಲೈನ್ ಅರ್ಜಿಯಲ್ಲಿ ಅರ್ಧ ತೆಗೆದು ಹಾಕ್ತಾರೆ. ನಾವು ನಿಜವಾಗಲೂ ಬಡವರಿಗೆ ಅನುಕೂಲ ಮಾಡುತ್ತೇವೆ ಅಂದರೆ ಎಂಪವರ್‌ಮೆಂಟ್ ಇರಬೇಕು. ಆನ್‌ಲೈನ್ ಅರ್ಜಿ ಕರೆದು ಅರ್ಧ ತೆಗೆದು ಮೋಸ ಮಾಡ್ತಾರೆ. ಬಹಳ ಸರಳವಾಗಿ ಮಾಡಬಹುದಿತ್ತು ಪಿಡಿಓಗಳು ಇದ್ದಾರೆ ಅವರ ಮುಖಾಂತರ



ಕೊಡಿಸಬಹುದಿತ್ತು. ಈವಾಗ ಆಗಸ್ಟ್‌ನಿಂದ ಕೊಡುತ್ತೇವೆ ಎನ್ನುತ್ತಾರೆ. ಜೂನ್, ಜುಲೈದು ಸೇರಿಸಿ ಕೊಡ್ತಾರಾ ಸ್ಪಷ್ಟತೆ ಇಲ್ಲ. ಜೂನ್, ಜುಲೈದು ಸೇರಿಸಿ ಕೊಟ್ಟರೆ ಪ್ರಾಮಾಣಿಕತೆ ಅಂತಾ ಹೇಳಬಹುದಿತ್ತು. ಈ ತಿಂಗಳಿಂದಲೇ ಕೊಡಬಹುದಿತ್ತು ಆದರೆ ಎರಡು ತಿಂಗಳು ಯಾಮಾರಿಸ್ತಾ ಇದ್ದಾರೆ ಎಂದು ಹೇಳಿದರು. ಬಸ್ ಪಾಸ್, ರಾಜ್ಯದ ಒಳಗಡೆನೇ ಅಂದಿದ್ದಾರೆ. ಯಾವ್ಯಾವ ಬಸ್ ಅಂತಾ ಹೇಳದೇ ಕೆಂಪು ಬಸ್ ಎಂದು ಹೇಳಿದ್ದಾರೆ. ನೇರವಾಗಿ ಕೆಂಪು ಬಸ್ ಅಂತಾ ಹೇಳಬೇಕಿತ್ತು. ಇದರಲ್ಲೂ ಗೊಂದಲ ಸೃಷ್ಟಿಸಿದ್ದಾರೆ. ಯುವ ನಿಧಿ ಯೋಜನೆಯಲ್ಲಿ ಕಳೆದ ವರ್ಷ ಪಾಸ್ ಆದವರಿಗೆ, ನಿರುದ್ಯೋಗಿಗಳಿಗೆ ಡಿಗ್ರಿ ಪಡೆದವರಿಗೆ ಕೊಡುತ್ತೇವೆ ಅಂದಿದ್ದಾರೆ. ಡಿಗ್ರಿ ಆದ ಮೇಲೆ ಹೆಚ್ಚಿನ ವಿದ್ಯಾಭ್ಯಾಸಕ್ಕೆ ಹೋಗ್ತಾರೆ. ಮೂರು ವರ್ಷದಿಂದ ನಿರುದ್ಯೋಗದಲ್ಲಿ ಇರೋರಿಗೆ ಕೊಡಬೇಕಿತ್ತು. ಸಮರ್ಪಕವಾಗಿ ಪುನರ್ ಚಿಂತನೆ ಮಾಡಬೇಕು ಎಂದು ಬೊಮ್ಮಾಯಿ ಸಲಹೆ ನೀಡಿದರು.

ವೆಚ್ಚ ಎಲ್ಲಿಂದ ತರುತ್ತೀರಾ, ಆದಾಯ ಹೇಗೆ, ಯಾವುದಾದರೂ ಯೋಜನೆ ನಿಲ್ಲಿಸುತ್ತೀರಾ..., ತೆರಿಗೆ ಹೆಚ್ಚಿಸುತ್ತೀರಾ, ನೀರಾವರಿ ನಿಲ್ಲಿಸ್ತೀರಾ... ಎಸ್‌ಸಿ, ಎಸ್‌ಟಿ ಹಾಸ್ಟೆಲ್‌ಗಳನ್ನು ನಿಲ್ಲಿಸ್ತೀರಾ..., ಯಾವ ಯೋಜನೆ ಸ್ವಾಪ್ ಮಾಡಿ ವೆಚ್ಚ ಭರಿಸ್ತೀರಾ..., ವೆಚ್ಚ ಹೇಗೆ ಅಂತಾನೇ ಹೇಳಿಲ್ಲ. ಕೇಂದ್ರದ ಯೋಜನೆಗಳನ್ನು ನಿಲ್ಲಿಸ್ತೀರಾ... ಜನತೆಗೆ ಕೇಳೋ ಅಧಿಕಾರ ಇದೆ. ಜನರ ಧ್ವನಿಯಾಗಿ ನಾವು ಕೇಳ್ತಾ ಇದ್ದೇವೆ ಎಂದರು. ಇದಕ್ಕೆಲ್ಲಾ 50 ಸಾವಿರಕ್ಕಿಂತ ಹೆಚ್ಚು ಬೇಕು ಎಂದು ಮೊದಲೇ ಹೇಳಿದ್ದಾರೆ. ಇದರಿಂದ ಕರ್ನಾಟಕಕ್ಕೆ ಆರ್ಥಿಕ ಹಿನ್ನಡೆ ಆಗುತ್ತೆ. ಸರಿಯಾಗಿ ಆದಾಯ ತರದೇ ಇದ್ದರೆ ರಾಜ್ಯ ಆರ್ಥಿಕ ಸಂಕಷ್ಟದಲ್ಲಿ ಸಿಲುಕಲಿದೆ. ಯಾವ ರೀತಿ ನಿಭಾಯಿಸ್ತಾರೆ ಎಂಬುದು ನೋಡಬೇಕಾಗಿದೆ. ಕೋವಿಡ್‌ನಂತಹ ದೊಡ್ಡ ಕಾಲವನ್ನು ಎದುರಿಸಿಕೊಂಡು ಆರ್ಥಿಕ ಪ್ರಗತಿಯನ್ನು ನಿಭಾಯಿಸಿಕೊಂಡು ಬಂದಿದ್ದೇವೆ. ನಾವು 2 ವರ್ಷ ಲೋನ್ ತೆಗೆದುಕೊಳ್ಳದೇ ಆರ್ಥಿಕ ಪ್ರಗತಿ ಸಾಧಿಸಿದ್ದೇವೆ ಎಂದರು.

ಯಾವುದೇ ಉಚಿತ ಯೋಜನೆ ಜಾರಿಗೊಳಿಸಲು ಮಾನದಂಡಗಳು ಇದ್ದೇ ಇರುತ್ತದೆ: ಪ್ರಿಯಾಂಕ ಖರ್ಗೆ

ಬೆಂಗಳೂರು, ಜೂ.2– ಸರ್ಕಾರದ



ಯೋಜನೆಗಳು ನಿಯಮ, ನಿಬಂಧನೆಗಳಿಗೆ ಒಳಪಟ್ಟಿರುತ್ತವೆ, ಷರತ್ತುಗಳಿಲ್ಲದೆ ಯಾವುದೇ ಸರ್ಕಾರಿ ಯೋಜನೆ ಜಾರಿಯಿಲ್ಲ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆಯವರು ಶುಕ್ರವಾರ ಹೇಳಿದ್ದಾರೆ.

ವಿಧಾನಸಭೆ ಚುನಾವಣೆಗೂ ಮುನ್ನ ಕಾಂಗ್ರೆಸ್ ಪಕ್ಷ ತನ್ನ ಪ್ರಣಾಳಿಕೆಯಲ್ಲಿನ 5 ಗ್ಯಾರಂಟಿ ಯೋಜನೆಗಳನ್ನು ರಾಜ್ಯದ ಮತದಾರರ ಮುಂದೆ ಇರಿಸಿತ್ತು.ಪಕ್ಷ ಅಧಿಕಾರಕ್ಕೆ ಬಂದ ಮರುಘಳಿಗೆಯಲ್ಲೇ ಈ ಯೋಜನೆಗಳನ್ನು ಜಾರಿಗೆ ತರುವುದಾಗಿಯೂ ಭರವಸೆ ನೀಡಿತ್ತು. ಇದೀಗ ಸಚಿವ ಸಂಪುಟ ಸಭೆ ನಡೆಯುತ್ತಿದ್ದು ಘೋಷಿತ ಯೋಜನೆಗಳನ್ನು ಜಾರಿಗೆ ತರುವ ಬಗ್ಗೆ ಮಹತ್ವದ ಚರ್ಚೆ ನಡೆಯುತ್ತಿದೆ. ಈ ನಡುವಲ್ಲೇ ಸುದ್ದಿಗಾರರೊಂದಿಗೆ ಮಾತನಾಡಿದ ಪ್ರಿಯಾಂಕ್ ಖರ್ಗೆಯವರು, ಕೇಂದ್ರ ಅಥವಾ ರಾಜ್ಯ ಸರ್ಕಾರದ ಪ್ರತಿಯೊಂದು ಯೋಜನೆಯೂ ಕೆಲವು ನಿಯಮ ಮತ್ತು ನಿಬಂಧನೆಗಳನ್ನು ಹೊಂದಿರುತ್ತವೆ. ಯೋಜನೆಗಳ ಅನುಷ್ಠಾನಕ್ಕೆ ಸಾಧ್ಯವಾದಷ್ಟು ಬೇಗ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತದೆ.

5 ಗ್ಯಾರಂಟಿ ಘೋಷಣೆ: ಪ್ರತಿ ಯೋಜನೆಗೆ ಬೇಕಿರುವ ಹಣ!

ಬೆಂಗಳೂರು, ಜೂ.2– ಕರ್ನಾಟಕ ವಿಧಾನಸಭಾ ಚುನಾವಣೆಗೂ ಮುನ್ನ ಕಾಂಗ್ರೆಸ್ ಭರವಸೆ ನೀಡಿದ್ದ 5 ಗ್ಯಾರಂಟಿಗಳನ್ನು ಇದೀಗ ಸಿಎಂ ಸಿದ್ದರಾಮಯ್ಯ ಅಧಿಕೃತವಾಗಿ ಘೋಷಿಸಿದ್ದಾರೆ. ಬಹು ನಿರೀಕ್ಷಿತ ಘೋಷಣೆಗಳು ಇವಾಗಿವೆ.

ಸಿದ್ದರಾಮಯ್ಯ ಸರ್ಕಾರ ಘೋಷಣೆ ಮಾಡಿರುವ 5 ಗ್ಯಾರಂಟಿ ಯೋಜನೆ ಜಾರಿಗೆ ವರ್ಷಕ್ಕೆ 50–55 ಸಾವಿರ ಕೋಟಿ ರೂ. ಹೊರೆಯಾಗಬಹುದು ಎಂದು ಅಂದಾಜಿಸಲಾಗಿದೆ.

ಗೃಹಜ್ಯೋತಿ: ಕಾಂಗ್ರೆಸ್ ಘೋಷಿಸಿರುವ ಮೊದಲ ಗ್ಯಾರಂಟಿ ಗೃಹಜ್ಯೋತಿ ಯೋಜನೆಯಾಗಿದ್ದು, ವಾರ್ಷಿಕವಾಗಿ ಸರ್ಕಾರಕ್ಕೆ ಅಂದಾಜು 12 ರಿಂದ 15 ಸಾವಿರ ಕೋಟಿ ರೂ. ಅಧಿಕ ವೆಚ್ಚವಾಗಲಿದೆ.

ಗೃಹಲಕ್ಷ್ಮಿ: ಮನೆ ಒಡತಿಯ ಖಾತೆಗೆ ಪ್ರತಿ ತಿಂಗಳು 2,000 ರೂ. ಬರುವಂತಹ ಗೃಹಲಕ್ಷ್ಮಿ ಯೋಜನೆಯಿಂದ 1 ಕೋಟಿ ಫಲಾನುಭವಿಗಳಿಗೆ ವಾರ್ಷಿಕವಾಗಿ ಅಂದಾಜು 24 ಸಾವಿರ ಕೋಟಿ ರೂ. ಸರ್ಕಾರಕ್ಕೆ ಹೊರೆಯಾಗಲಿದೆ. ಆದರೆ ಅರ್ಜಿ ಸಲ್ಲಿಕೆ ಬಳಿಕವೇ ಈ ಹೊರೆಯ ಸ್ಪಷ್ಟ ಲೆಕ್ಕ ಸಿಗಲಿದೆ.

ಶಕ್ತಿ: ಮಹಿಳೆಯರಿಗೆ ಬಸ್‌ಗಳಲ್ಲಿ ಉಚಿತ ಪ್ರಯಾಣ ಒದಗಿಸುವ, ತೀವ್ರ ಕುತೂಹಲ ಕೆರಳಿಸಿದ ಶಕ್ತಿ ಯೋಜನೆಯಿಂದ ವಾರ್ಷಿಕವಾಗಿ ಸರ್ಕಾರಕ್ಕೆ ಸುಮಾರು 3,500 ರಿಂದ 4,000 ಕೋಟಿ ರೂ. ಹೊರೆಯಾಗಬಹುದು ಎಂದು ಅಂದಾಜಿಸಲಾಗಿದೆ.

ಯುವನಿಧಿ: ಯುವ ನಿಧಿ ಯೋಜನೆಯನ್ನು 2022–23ರಲ್ಲಿ ತೇರ್ಗಡೆ ಹೊಂದಿದ ವೃತ್ತಿ ಶಿಕ್ಷಣ ಸೇರಿದಂತೆ ಎಲ್ಲಾ ಪದವಿ ಪೂರೈಸಿದ ಯುವಕ–ಯುವತಿಯರಿಗೆ ನೀಡಲು ತೀರ್ಮಾನಿಸಲಾಗಿದೆ. ಇದರಿಂದ ಸರ್ಕಾರಕ್ಕೆ ವರ್ಷಕ್ಕೆ 1,200 ರಿಂದ 1,300 ಕೋಟಿ ರೂ. ಹೊರೆಯಾಗಲಿದೆ.

ಅನ್ನಭಾಗ್ಯ: ಜುಲೈ 1 ರಿಂದ ಬಿಪಿಎಲ್ ಕಾರ್ಡ್ ಹೊಂದಿರುವ ಕುಟುಂಬದ ಪ್ರತಿ ಸದಸ್ಯರಿಗೆ 10 ಕೆ.ಜಿ. ಅಕ್ಕಿ ನೀಡಲಾಗುತ್ತದೆ. ಇದರಿಂದ ಸರ್ಕಾರಕ್ಕೆ ವಾರ್ಷಿಕವಾಗಿ ಅಂದಾಜು 10 ಸಾವಿರ ಕೋಟಿ ರೂ. ಹೊರೆಯಾಗಲಿದೆ.

ಹಣ ಹೊಂದಿಕೆ ಹೇಗೆ: ಚುನಾವಣಾ ಪ್ರಚಾರದಲ್ಲಿ ಈ ಯೋಜನೆಗಳಿಗೆ ಹಣವನ್ನು ಹೇಗೆ ಹೊಂದಿಸಲಾಗುತ್ತದೆ ಎಂದು ಕೇಳಿದ್ದಕ್ಕೆ ಕಾಂಗ್ರೆಸ್ ನಾಯಕರು ಬಿಜೆಪಿ ಸರ್ಕಾರದ 40% ಕಮಿಷನ್ ಹಣವನ್ನು ಇದಕ್ಕೆ ವಿನಿಯೋಗಿಸುತ್ತೇವೆ ಎಂದು ಹೇಳಿಕೆ ನೀಡಿದ್ದರು. ಇಂದು ಮಾಧ್ಯಮಗಳು ಈ ಯೋಜನೆಗಳಿಗೆ ಹೇಗೆ ಹಣವನ್ನು ಹೊಂದಿಸಲಾಗುತ್ತದೆ ಎಂಬ ಪ್ರಶ್ನೆಗಳಿಗೆ ಸರ್ಕಾರದ ಕಡೆಯಿಂದ ಯಾವುದೇ ಸ್ಪಷ್ಟವಾದ ನಿರ್ಧಾರ ಪ್ರಕಟವಾಗಿಲ್ಲ.

ನಾಳೆ ಆಧುನಿಕ ಕರ್ನಾಟಕದ ನಿರ್ಮಾತೃ ನಾಲ್ವಡಿ ಜಯಂತಿ

ಮೈಸೂರು,ಜೂ.2(ಪಿಎಂ)– ಅರಸು ಮಂಡಳಿ ಸಂಘದ ವತಿಯಿಂದ ಜೂ.4ರಂದು ಆಧುನಿಕ ಕರ್ನಾಟಕದ ನಿರ್ಮಾತೃ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ 139ನೇ ಜಯಂತಿ ಆಯೋಜಿಸಲಾಗಿದೆ ಎಂದು ಸಂಘದ ಅಧ್ಯಕ್ಷ ಹೆಚ್.ಎಂ.ಟಿ ಲಿಂಗರಾಜೇ ಅರಸ್ ತಿಳಿಸಿದರು.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರಿನ ತ್ಯಾಗರಾಜ ರಸ್ತೆಯ 5ನೇ ಕ್ರಾಸ್‌ನಲ್ಲಿರುವ ಅರಸು ಮಂಡಳಿ ಸಂಘದ ಆವರಣದಲ್ಲಿ ಅಂದು ಬೆಳಗ್ಗೆ 8.30ಕ್ಕೆ ಕಾರ್ಯಕ್ರಮ ನಡೆಯಲಿದೆ. ಮೈಸೂರು ರಾಜವಂಶಸ್ಥೆ ಡಾ.ಪ್ರಮೋದಾದೇವಿ ಒಡೆಯರ್ ಉದ್ಘಾಟನೆ ನೆರವೇರಿಸಲಿದ್ದಾರೆ ಎಂದು ಹೇಳಿದರು. ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ, ಶಾಸಕ ಟಿ.ಎಸ್.ಶ್ರೀವತ್ಸ, ಪಾಲಿಕೆ ಸದಸ್ಯ ಬಿ.ವಿ. ಮಂಜುನಾಥ್, ಪೊಲೀಸ್ ಅಕಾಡೆಮಿ ಉಪ ನಿರ್ದೇಶಕ ಎನ್.ನಿರಂಜನ್‌ರಾಜೇ ಅರಸ್ ಪಾಲ್ಗೊಳ್ಳಲಿದ್ದಾರೆ. ಸಭಾ ಕಾರ್ಯಕ್ರಮದ ನಂತರ ನಾಲ್ವಡಿ ಅವರ ಸಾಧನೆ ಸ್ಮರಿಸುವ ಸ್ತಬ್ಧಚಿತ್ರದೊಂದಿಗೆ ಮೆರವಣಿಗೆ ಆಯೋಜಿಸಲಾಗಿದೆ. ಕಲಾತಂಡಗಳೊಂದಿಗೆ ಸಂಘದ ಆವರಣದಿಂದ ಹೊರಡುವ ಮೆರವಣಿಗೆಯು ಅಗ್ರಹಾರ ವೃತ್ತ, ಸಯ್ಯಾಜಿರಾವ್ ರಸ್ತೆ ಮೂಲಕ ಕೆಆರ್ ವೃತ್ತ ತಲುಪಲಿದೆ. ನಾಲ್ವಡಿ ಅವರ ಪ್ರತಿಮೆಗೆ ಪುಷ್ಪ ನಮನ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಬಳಿಕ ಕಲಾಮಂದಿರದಲ್ಲಿ ಜಿಲ್ಲಾಡಳಿತ ಆಯೋಜಿಸಿರುವ ನಾಲ್ವಡಿ ಜಯಂತಿ ನಡೆಯಲಿದೆ. ನಾಲ್ವಡಿ ಅವರ ಮಾರ್ಗದರ್ಶನದಂತೆ ಅವರ ಸೋದರ ಮಾನವನವರೂ ಆಗಿದ್ದ ಅಂದಿನ ದಿವಾನರಾದ ಸರ್ದಾರ್ ಎಂ.ಕಾಂತರಾಜೇ ಅರಸ್ ಅವರಿಂದ 1922ರ ಆ.21ರಂದು ಅರಸು ಮಂಡಳಿ ಸಂಘ ಸ್ಥಾಪನೆಗೊಂಡಿತು ಎಂದರು. ಸಂಘದ ಉಪಾಧ್ಯಕ್ಷ ಡಿ.ಜಯದೇವರಾಜೇ ಅರಸ್, ಕಾರ್ಯದರ್ಶಿ ಸುಮಾ ಅರಸ್, ಜಂಟಿ ಕಾರ್ಯದರ್ಶಿ ಎನ್.ಬಿ.ಶರತ್, ಜಯಂತಿ ಆಚರಣಾ ಸಮಿತಿ ಅಧ್ಯಕ್ಷ ಎಂ.ಎ.ಶ್ರೀಕಾಂತ್‌ರಾಜೇ ಅರಸ್ ಗೋಷ್ಠಿಯಲ್ಲಿದ್ದರು.

ಹಾಲಿನ ಪ್ರೋತ್ಸಾಹ ಧನ ಪ್ರತಿ ಲೀಟರ್‌ಗೆ 1.50 ರೂ. ಕಡಿತ

ಬೆಂಗಳೂರು, ಜೂ.2– ಬೆಂಗಳೂರು ಜಿಲ್ಲಾ ಸಹಕಾರ ಹಾಲು ಒಕ್ಕೂಟ ರೈತರಿಗೆ ಶಾಕ್ ನೀಡಿದ್ದು, ಹಾಲಿನ ಪ್ರೋತ್ಸಾಹ ಧನ ಲೀಟರ್‌ಗೆ 1.50 ರೂ. ಕಡಿತಗೊಳಿಸಿ ಆದೇಶ ಹೊರಡಿಸಿದೆ. ಈ ಹಿಂದೆ ಬೆಂಗಳೂರು ಜಿಲ್ಲಾ ಹಾಲು ಒಕ್ಕೂಟ ಬೇಸಿಗೆ ಸಮಯದಲ್ಲಿ ಏಪ್ರಿಲ್ 1 ರಿಂದ ಮೇ 31ರವರೆಗೆ ಪ್ರತಿ ಲೀಟರ್ ಹಾಲಿಗೆ 2.85 ರೂ. ವಿಶೇಷ ಪ್ರೋತ್ಸಾಹ ಧನ ಘೋಷಿಸಿತ್ತು. ಇದೀಗ ಪ್ರೋತ್ಸಾಹ ಧನವನ್ನು ಪ್ರತಿ ಲೀಟರ್ ಹಾಲಿಗೆ 1.50 ರೂಪಾಯಿ ಕಡಿತಗೊಳಿಸಿ ಆದೇಶಿಸಿದೆ.

ಸದ್ಯ, ಉತ್ತಮ ಮಳೆಯಾಗಿ ಹಸಿರು ಮೇವಿನ ಲಭ್ಯತೆ ಜಾಸ್ತಿಯಾಗಿದ್ದು, ಹಾಲು ಉತ್ಪಾದನೆ ಹೆಚ್ಚಾಗುತ್ತಿದೆ. ಏಪ್ರಿಲ್ ತಿಂಗಳ ಆರಂಭದಲ್ಲಿ ಪ್ರತಿದಿನ 13.50 ಲಕ್ಷಲೀಟರ್ ಉತ್ಪಾದನೆಯಾಗುತ್ತಿದ್ದ ಹಾಲು, ಈಗ 16 ಲಕ್ಷ ಲೀಟರ್‌ಗೆ ಉತ್ಪಾದನೆಯಾಗುತ್ತಿದೆ.

ಹೆಚ್ಚಿನ ವರ್ಗೀಕೃತ ಜಾಹೀರಾತು ಪುಟ 5ರಲ್ಲಿ

ಶಾಲಾ–ಕಾಲೇಜು ಅಭಿವೃದ್ಧಿಗೆ ನೆರವು: ಶಾಸಕ ಶ್ರೀವತ್ಸ ಭರವಸೆ

ಮೈಸೂರು, ಜೂ.2(ಎಸ್‌ಬಿಡಿ)– ಸರ್ಕಾರಿ ಶಾಲಾ–ಕಾಲೇಜುಗಳ ಅಭಿವೃದ್ಧಿಗೆ ಆದ್ಯತೆ ನೀಡುವುದಾಗಿ ಕೃಷ್ಣರಾಜ ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸ ಹೇಳಿದರು.



ಮೈಸೂರಿನ ಕುರುಬಾರಹಳ್ಳಿ ಬಾಡಿಗಾರ್ಡ್ ಲೈನ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಶಾಸಕ ಟಿ.ಎಸ್.ಶ್ರೀವತ್ಸ ಶುಕ್ರವಾರ ಭೇಟಿ ನೀಡಿ, ವೀಕ್ಷಿಸಿದ ಸಂದರ್ಭದಲ್ಲಿ ಮಾತನಾಡಿದ ಅವರು, ಕಾಲೇಜು ಸರ್ಕಾರಿ ಸ್ವಾಯತ್ತತೆಯಲ್ಲಿ ಯಶಸ್ವಿಯಾಗಿ ಮುನ್ನಡೆಯುತ್ತಿದ್ದು, ಇಲ್ಲಿನ ಪ್ರಾಧ್ಯಾಪಕರು ವಿದ್ಯಾರ್ಥಿಗಳು ಹಾಗೂ ಅವರ ಪೋಷಕರೊಂದಿಗೆ ಉತ್ತಮ ಬಾಂಧವ್ಯ ಸಾಧಿಸಿರುವುದು ನಿಜಕ್ಕೂ ಸಂತಸದ ಸಂಗತಿ ಎಂದರು.

ಸರ್ಕಾರಿ ಶಿಕ್ಷಣ ಸಂಸ್ಥೆಗಳು ಉತ್ತಮ ಸಾಧನೆ ಮಾಡುತ್ತಿವೆ ಎನ್ನುವುದಕ್ಕೆ ಈ ಕಾಲೇಜು ಒಂದು ಉದಾಹರಣೆ. 2007ರಲ್ಲಿ ಪ್ರಾರಂಭವಾಗಿದ್ದು, ಸಾವಿರಾರು ವಿದ್ಯಾರ್ಥಿಗಳ ಜೀವನಕ್ಕೆ ಮಾರ್ಗದರ್ಶನ ನೀಡಿದೆ. ಕೇವಲ 9 ವಿದ್ಯಾರ್ಥಿಗಳೊಂದಿಗೆ ಆರಂಭವಾದ ಈ ಕಾಲೇಜಿನಲ್ಲಿ ಪ್ರಸ್ತುತ 1200ಕ್ಕೂ ಹೆಚ್ಚು ವಿದ್ಯಾರ್ಥಿಗಳಿದ್ದಾರೆ. 40ಕ್ಕೂ ಹೆಚ್ಚು ಪ್ರಾಧ್ಯಾಪಕರು ಕಾರ್ಯನಿರ್ವಹಿಸುತ್ತಿದ್ದಾರೆ. ಸೈನ್ಸ್, ಆರ್ಟ್ಸ್, ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್ ಕೋರ್ಸ್‌ಗಳು ನಡೆಯುತ್ತಿದ್ದು, ಗ್ರಾಮಾಂತರ ವಿದ್ಯಾರ್ಥಿಗಳ ಸಂಖ್ಯೆಯೇ ಹೆಚ್ಚಿದೆ. ಸರ್ಕಾರಿ ಶಾಲಾ–ಕಾಲೇಜು ಅಭಿವೃದ್ಧಿಗೆ ಆದ್ಯತೆ ನೀಡಲಾಗಿದ್ದು, ಈ ನಿಟ್ಟಿನಲ್ಲಿ ಈ ಭಾಗದ ಸಾರ್ವಜನಿಕರು ಮತ್ತು ಸಂಘ ಸಂಸ್ಥೆಗಳು, ಖಾಸಗಿ ವಿದ್ಯಾ ಸಂಸ್ಥೆಗಳ ಸಹಕಾರದೊಂದಿಗೆ ಅಭಿವೃದ್ಧಿ ಮಂಡಳಿ ಮೂಲಕ ಸೂಕ್ತ ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಉಪಮೇಯರ್ ರೂಪ ಯೋಗೇಶ್, ಪಾಲಿಕೆ ನಾಮನಿರ್ದೇಶಿತ ಸದಸ್ಯ ಕೆ.ಜೆ.ರಮೇಶ್, ಕಾಲೇಜಿನ ಪ್ರಾಂಶುಪಾಲೆ ಡಾ.ಎನ್. ಮಾಯಾವತಿ, ಅಧೀಕ್ಷಕಿ ಶೈಲಜಾ, ಡಾ.ವೇದ, ಡಾ. ಅನುರಾಧ, ಲೋಹಿತ್, ವಿರೇಶ್, ಅರುಣ್, ಚಂದ್ರಶೇಖರ, ಡಾ.ಮಂಜು, ಡಾ.ಪ್ರತಿಭಾ, ಡಾ.ರವಿಪ್ರಕಾಶ್, ಜವರೇಗೌಡ, ಪಾರ್ವತಿ, ಡಾ.ಶೀನಿ ನಾಯಕ್, ಡಾ.ಬೇಬಿ, ಪ್ರೇಮಲತಾ, ಸವಿತಾ ಮತ್ತಿತರರು ಉಪಸ್ಥಿತರಿದ್ದರು.

5ಎ ಸೈಡ್ ಸೌತ್ ಝೋನ್ ಫುಟ್ಬಾಲ್ ಪಂದ್ಯಾವಳಿ



ಮಡಿಕೇರಿ ಎಫ್‌ಎಂಕೆಎಂಸಿ ಕಾಲೇಜು ಚಾಂಪಿಯನ್

ಗೋಣಿಕೊಪ್ಪಲು ಕಾವೇರಿ ಕಾಲೇಜು ರನ್ನರ್ ಅಪ್

ಗೋಣಿಕೊಪ್ಪ, ಜೂ.2– ಗೋಣಿಕೊಪ್ಪಲು ಕಾವೇರಿ ಕಾಲೇಜಿನಲ್ಲಿ ಆಯೋಜಿಸಲಾಗಿದ್ದ, 5 ಎ ಸೈಡ್ ಸೌತ್ ಝೋನ್ ಫುಟ್ಬಾಲ್ ಪಂದ್ಯಾವಳಿಯ ಫೈನಲ್ ಪಂದ್ಯದಲ್ಲಿ ಮಡಿಕೇರಿ ಎಫ್‌ಎಂಕೆಎಂಸಿ ಕಾಲೇಜು, ಅತಿಥೇಯ ಗೋಣಿಕೊಪ್ಪಲು ಕಾವೇರಿ ಕಾಲೇಜು ವಿರುದ್ಧ 5–0 ಗೋಲುಗಳಿಂದ ಭರ್ಜರಿ ಜಯ ಸಾಧಿಸುವ ಮೂಲಕ ವಿನ್ನರ್ ಟ್ರೋಫಿಯನ್ನು ತನ್ನದಾಗಿಸಿಕೊಂಡಿತು.

ಫೈನಲ್ ಪಂದ್ಯದಲ್ಲಿ ನೀರಸ ಪ್ರದರ್ಶನ ನೀಡಿದ ಗೋಣಿಕೊಪ್ಪಲು ಕಾವೇರಿ ಕಾಲೇಜು ಗೋಲುಗಳಿಸಲು ಸಾಧ್ಯವಾಗದೆ ರನ್ನರ್ ಸ್ಥಾನಕ್ಕೆ ತೃಪ್ತಿ ಪಟ್ಟುಕೊಂಡಿತು. ವಿಜೇತ ತಂಡದ ಪರ ರಂಗ ಹ್ಯಾಟ್ರಿಕ್ ಗೋಲುಗಳಿಸಿ ಮಿಂಚಿದರೆ, ರಾಶಿದ್ ಮತ್ತು ಅಜಿತ್ ತಲಾ ಒಂದೊಂದು ಗೋಲುಗಳಿಸಿ ಗೆಲುವಿನ ಅಂತರ ಹೆಚ್ಚಿಸಿದರು.

ಇದಕ್ಕೂ ಮುನ್ನ ನಡೆದ ಮೊದಲ ಸೆಮಿಫೈನಲ್ ಪಂದ್ಯದಲ್ಲಿ ಮಡಿಕೇರಿ ಎಫ್‌ಎಂಕೆಎಂಸಿ ಕಾಲೇಜು, ವೀರಾಜಪೇಟೆ ಸಂತ ಅನ್ನಮ್ಮ ಕಾಲೇಜು ವಿರುದ್ಧ 4–1 ಗೋಲುಗಳ ಜಯ ಸಾಧಿಸಿ ಫೈನಲ್‌ಗೆ ಲಗ್ಗೆ ಇಟ್ಟಿತು. ಎರಡನೇ ಸೆಮಿಫೈನಲ್ ಪಂದ್ಯದಲ್ಲಿ ಮಂಗಳೂರು ಸೇಕ್ರೆಡ್ ಹಾರ್ಟ್ ಕಾಲೇಜು ವಿರುದ್ಧ ಗೋಣಿಕೊಪ್ಪಲು ಕಾವೇರಿ ಕಾಲೇಜು 4–2 ಗೋಲುಗಳಿಂದ ಜಯ ಸಾಧಿಸಿ ಫೈನಲ್ ಪ್ರವೇಶಿಸಿತು.


ವೈಯಕ್ತಿಕ ಪ್ರಶಸ್ತಿ: ಮ್ಯಾನ್ ಆಫ್ ದಿ ಮ್ಯಾಚ್ ಹಾಗೂ ಪ್ಲೇಯರ್ ಆಫ್ ದ ಟೂರ್ನಮೆಂಟ್ ಪ್ರಶಸ್ತಿಯನ್ನು ಮಡಿಕೇರಿ ಎಫ್‌ಎಂಕೆಎಂಸಿ ಕಾಲೇಜಿನ ರಂಗ, ಬೆಸ್ಟ್ ಗೋಲ್ ಕೀಪರ್ ಆಗಿ ಗೋಣಿಕೊಪ್ಪಲು ಕಾವೇರಿ ಕಾಲೇಜಿನ ನಿಜಾಮುದ್ದೀನ್, ಬೆಸ್ಟ್ ಡಿಫೆಂಡರ್ ಆಗಿ ಎಫ್‌ಎಂಕೆಎಂಸಿ ಕಾಲೇಜಿನ ರಾಶಿದ್, ಬೆಸ್ಟ್ ಸ್ಟ್ರೈಕರ್ ಆಫ್ ಟೂರ್ನಮೆಂಟ್ ಆಗಿ ಗೋಣಿಕೊಪ್ಪಲು ಕಾವೇರಿ ಕಾಲೇಜಿನ ಸುಹೈಲ್ ಪ್ರಶಸ್ತಿ ಪಡೆದುಕೊಂಡರು.

ಸಮಾರೋಪ: ಕಾವೇರಿ ಕಾಲೇಜು ಪ್ರಾಂಶುಪಾಲ ಡಾ.ಎಂ.ಬಿ.ಕಾವೇರಪ್ಪ ಅವರ ಅಧ್ಯಕ್ಷತೆಯಲ್ಲಿ ನಡೆದ ಬಹುಮಾನ ವಿತರಣಾ ಸಮಾರಂಭದಲ್ಲಿ ಮಾಜಿ ಅಂತಾರಾಷ್ಟ್ರೀಯ ರಗ್ಬಿ ಆಟಗಾರ ಮಾದಂಡ ತಿಮ್ಮಯ್ಯ, ಟ್ರೋಫಿ ದಾನಿಗಳಾದ ಗೋಣಿಕೊಪ್ಪಲಿನ ಮೀನು ವ್ಯಾಪಾರಿ ಉಂಬೈ ಪ್ರೋಟೆಕ್ ಪಿವಿಸಿ ಲಿಮಿಟೆಡ್ ನ ನಿರ್ದೇಶಕ ಅಳಮೆಂಗಡ ಬೆವನ್ ಬೋಪಣ್ಣ, ಗೋಣಿಕೊಪ್ಪಲು ಬುಲ್ಸ್ ಕಿಂಗ್ ಡಂ ಜಿಮ್ ವ್ಯವಸ್ಥಾಪಕರಾದ ಬಬಿನ್ ಮತ್ತು ಗಗನ್, ಉಪ ಪ್ರಾಂಶುಪಾಲೆ ಡಾ.ಎ.ಎಸ್.ಪೂವಮ್ಮ ಬಹುಮಾನ ವಿತರಣೆ ಮಾಡಿದರು. ಈ ಸಂದರ್ಭ ವಾಣಿಜ್ಯ ವಿಭಾಗ ಮುಖ್ಯಸ್ಥೆ ಡಾ.ನಯನ ತಮ್ಮಯ್ಯ, ದೈಹಿಕ ಶಿಕ್ಷಣ ನಿರ್ದೇಶಕ ಎಂ.ಟಿ.ಸಂತೋಷ್, ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ಸಂಘದ ಕ್ರೀಡಾ ಕಾರ್ಯದರ್ಶಿ ಹರ್ಷದ್, ಪಂದ್ಯಾವಳಿ ಆಯೋಜಕ ಮಹಮದ್ ಮಿಷಬ್ ಮತ್ತು ಮಹಮದ್ ನಿಹಾಲ್ ಇದ್ದರು.

ಪಂದ್ಯಾವಳಿಯ ತೀರ್ಪುಗಾರರಾಗಿ ಅಶ್ವಿನ್, ಅಜಯ್, ಅರುಣ್ ಮತ್ತು ಜಿತಿನ್ ಕಾರ್ಯಪ್ಪ ಕಾರ್ಯನಿರ್ವಹಿಸಿದರು. ಅಶ್ವಿ ಮತ್ತು ಅಫಿಫ್ ವೀಕ್ಷಕ ವಿವರಣೆ ನೀಡಿದರು.

ಹೊಸ ವಿವಿಗಳ ಮಹಿಳಾ, ಪುರುಷ ವಿದ್ಯಾರ್ಥಿನಿಲಯಗಳಿಗೆ ಅನುದಾನ

ನೂತನ ವಿವಿ ಕುಲಪತಿಗಳ ನಿಯೋಗದ ಮನವಿಗೆ ಸ್ಪಂದಿಸಿದ ಸಿಎಂ ಸಿದ್ದರಾಮಯ್ಯ



ಕುಶಾಲನಗರ, ಜೂ.2– ಕೊಡಗು ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಅಶೋಕ ಸಂ. ಆಲೂರ ಅವರು, ನೂತನ ವಿಶ್ವವಿದ್ಯಾಲಯಗಳ ಕುಲಪತಿಗಳ ನಿಯೋಗದ ಜೊತೆಗೂಡಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಗೃಹಕಚೇರಿ ಕೃಷ್ಣದಲ್ಲಿ ಭೇಟಿ ಮಾಡಿ ಶುಭ ಕೋರಿದರು.

ಈ ಸಂದರ್ಭದಲ್ಲಿ ತಮ್ಮನ್ನು ಭೇಟಿಯಾದ ಕುಲಪತಿಗಳ ನಿಯೋಗವನ್ನುದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿಗಳು, ದೇಶದ ಭವಿಷ್ಯವನ್ನು ಹೆಚ್ಚು ವೈಜ್ಞಾನಿಕವಾಗಿ ರೂಪಿಸುವ ಶಕ್ತಿ ವಿಶ್ವವಿದ್ಯಾಲಯಗಳಿಗಿದೆ. ದೇಶದ ಮತ್ತು ವಿದ್ಯಾರ್ಥಿಗಳ ಹಿತಕ್ಕಾಗಿ ಸಾಮಾಜಿಕ ಮೌಲ್ಯಗಳನ್ನು ಅಳವಡಿಸಿಕೊಂಡು, ವೈಜ್ಞಾನಿಕ ತಳಹದಿಯ ಮೇಲೆ ಉನ್ನತ ಶಿಕ್ಷಣವನ್ನು ಸದೃಢಗೊಳಿಸುವ ನಿಟ್ಟಿನಲ್ಲಿ ವಿಶ್ವವಿದ್ಯಾಲಯಗಳಿಗೆ ಸಂಪೂರ್ಣ ಸಹಕಾರ ನೀಡಲು ನಮ್ಮ ಸರ್ಕಾರ ಬದ್ಧವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಎಲ್ಲಾ ಹೊಸ ವಿಶ್ವವಿದ್ಯಾಲಯಗಳ ಕುಲಪತಿಗಳ ಪರವಾಗಿ ಪ್ರೊ. ಅಶೋಕ ಸಂ. ಆಲೂರ ಅವರು ಮುಖ್ಯಮಂತ್ರಿಗಳ ಬಳಿ ವಿನಂತಿಸುತ್ತಾ, ಈ ವರ್ಷದ ಆಯವ್ಯಯದಲ್ಲಿ ಹೊಸ ವಿಶ್ವವಿದ್ಯಾಲಯಗಳಿಗೆ ಕನಿಷ್ಠ ಒಂದು ಮಹಿಳಾ ವಿದ್ಯಾರ್ಥಿ ನಿಲಯ ಮತ್ತು ಪುರುಷ ವಿದ್ಯಾರ್ಥಿ ನಿಲಯ, ಶೈಕ್ಷಣಿಕ ಕಟ್ಟಡ ಹಾಗೂ ಪ್ರಯೋಗಾಲಯಗಳ ಸುಧಾರಣೆಗೆ ಅನುದಾನವನ್ನು ಒದಗಿಸುವಂತೆ ಕೋರಿದರು. ಮುಖ್ಯಮಂತ್ರಿಗಳು ಇದಕ್ಕೆ ಪೂರಕವಾಗಿ ಸ್ಪಂದಿಸಿದರು.

ಹೊಸ ವಿಶ್ವವಿದ್ಯಾಲಯಗಳ ಕುಲಪತಿಗಳ ನಿಯೋಗದಲ್ಲಿ ಕೊಪ್ಪಳ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಿ.ಕೆ. ರವಿ, ಬಾಗಲಕೋಟೆ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ದೇಶಪಾಂಡೆ, ಹಾವೇರಿ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಜಂಗಮಶೆಟ್ಟಿ ಬೀದರ್ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಿರಾದಾರ್, ಹಾಸನ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ತಾರಾನಾಥ್, ಚಾಮರಾಜನಗರ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಗಂಗಾಧರ್ ಉಪಸ್ಥಿತರಿದ್ದರು.

ರಾಜ್ಯ ಹಾಕಿ ತಂಡಕ್ಕೆ ಕೊಡಗಿನ ಮೂವರು ಆಯ್ಕೆ



ವಿರಾಜಪೇಟೆ, ಜೂ.2– ಗುಲ್ಬರ್ಗದಲ್ಲಿ ನಡೆದ ರಾಜ್ಯ ಮಟ್ಟದ ಹಾಕಿ ಪಂದ್ಯಾವಳಿಯಲ್ಲಿ ಕೊಡಗಿನ ತಂಡ ಉತ್ತಮ ಪ್ರದರ್ಶನ ನೀಡಿದ್ದು, ತಂಡದ ಮೂವರು ವಿದ್ಯಾರ್ಥಿಗಳು ರಾಜ್ಯ ಹಾಕಿ ತಂಡಕ್ಕೆ ಆಯ್ಕೆಯಾಗಿದ್ದಾರೆ.

ಇತ್ತೀಚೆಗೆ ಗುಲ್ಬರ್ಗ ಜಿಲ್ಲೆಯಲ್ಲಿ ನಡೆದ ಅಂತರ್ ಜಿಲ್ಲಾ ಹಾಕಿ ಪಂದ್ಯಾವಳಿಯಲ್ಲಿ ವಿರಾಜಪೇಟೆ ಕಾವೇರಿ ಪದವಿ ಪೂರ್ವ ಕಾಲೇಜಿನ ದ್ವಿತೀಯ ಪಿ.ಯು.ಸಿ ವಾಣಿಜ್ಯ ವಿಭಾಗದ ವಿದ್ಯಾರ್ಥಿಗಳಾದ ತಿರೋಡಿರ ನಾಣಯ್ಯ, ಐಚಂಡ ಸಜನ್ ಮಾಚಯ್ಯ ಮತ್ತು ಐಯ್ಯನೆರುವಂಡ ನಾಚಪ್ಪ ಅವರುಗಳು ಕೊಡಗು ಜಿಲ್ಲಾ ತಂಡವನ್ನು ಪ್ರತಿನಿಧಿಸಿದ್ದರು.

ಈ ಮೂವರು ಪಂದ್ಯದಲ್ಲಿ ಉತ್ತಮ ಸಾಧನೆ ಮಾಡಿದ್ದು, ಇದೀಗ ಕರ್ನಾಟಕ ರಾಜ್ಯ ತಂಡದಲ್ಲಿ ಸ್ಥಾನ ಪಡೆದಿದ್ದಾರೆ. ಜೂ.7ರಂದು ಮಧ್ಯಪ್ರದೇಶ ಗ್ವಾಲಿಯರ್‌ನಲ್ಲಿ ಆರಂಭವಾಗುವ ರಾಷ್ಟ್ರಮಟ್ಟದ ಹಾಕಿ ಪಂದ್ಯಾಟದಲ್ಲಿ ಕರ್ನಾಟಕ ರಾಜ್ಯ ತಂಡವನ್ನು ಪ್ರತಿನಿಧಿಸಲಿದ್ದಾರೆ.

ಗಿಡ ನೆಟ್ಟು ಬೆಳೆಸಿ ಪರಿಸರ ಉಳಿಸಲು ಜಿಲ್ಲಾಧಿಕಾರಿ ಕರೆ

ಮಡಿಕೇರಿ, ಜೂ.2– ಪರಿಸರ ಸಂರಕ್ಷಣೆ ಮಾಡುವ ನಿಟ್ಟಿನಲ್ಲಿ ಗಿಡ ನೆಟ್ಟು ಪೋಷಿಸಿ ಬೆಳೆಸುವುದರ ಮೂಲಕ ಪರಿಸರ ಸಂರಕ್ಷಿಸುವಂತಾಗಬೇಕು ಎಂದು ಜಿಲ್ಲಾಧಿಕಾರಿ ಡಾ. ಬಿ.ಸಿ.ಸತೀಶ ಕರೆ ನೀಡಿದ್ದಾರೆ.

ಕೊಡಗು ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ರಾಷ್ಟ್ರೀಯ ಹಸಿರು ಪಡೆಯ ಇಕೋ ಕ್ಲಬ್ ಹಾಗೂ ಸೋಮವಾರಪೇಟೆ ಸಾಮಾಜಿಕ ಅರಣ್ಯ ವಲಯದ ವತಿಯಿಂದ ಕುಶಾಲನಗರ ತಾಲೂಕಿನ ಕೂಡುಮಂಗಳೂರು (ಕೂಡ್ಲೂರು) ಸರಕಾರಿ ಪ್ರೌಢಶಾಲೆಯ ಜೆ.ಸಿ.ಬೋಸ್ ಇಕೋ ಕ್ಲಬ್ ಮತ್ತು ಎನ್‌ಎಸ್‌ಎಸ್ ಘಟಕ ಹಾಗೂ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸಂಯುಕ್ತಾಶ್ರಯದಲ್ಲಿ ಶಾಲಾ ಪ್ರಾರಂಭೋತ್ಸವ ಹಾಗೂ ಗೋ ಗ್ರೀನ್" ಅಭಿಯಾನದ ಅಂಗವಾಗಿ ಸರ್ಕಾರಿ ಪ್ರೌಢಶಾಲಾ ಆವರಣದಲ್ಲಿ ಏರ್ಪಡಿಸಿದ್ದ ಪರಿಸರ ಜಾಗೃತಿ ಆಂದೋಲನದಲ್ಲಿ ಗಿಡ ನೆಟ್ಟು ಅವರು ಮಾತನಾಡಿದರು.

ವಿದ್ಯಾರ್ಥಿಗಳು ತಮ್ಮನ್ನು ಪರಿಸರ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು. ನಮ್ಮ ಸುತ್ತಲಿನ ಪರಿಸರ ಸೇರಿದಂತೆ ಪ್ರತಿ ಶಾಲಾ ಕಾಲೇಜು, ಆಸ್ಪತ್ರೆ, ಹಾಸ್ಟೆಲ್ ಮತ್ತಿತರ ಸರ್ಕಾರಿ ಜಾಗ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಗಿಡ ನೆಟ್ಟು ಬೆಳೆಸುವ ಮೂಲಕ ಪರಿಸರ ಶುಚಿತ್ವಕ್ಕೆ ಒತ್ತು ನೀಡಬೇಕು ಎಂದರು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪ ನಿರ್ದೇಶಕ ಸಿ.ರಂಗಧಾಮಯ್ಯ ಮಾತನಾಡಿ, ಪ್ರತಿ ವಿದ್ಯಾರ್ಥಿಯು ಒಂದೊಂದು ಗಿಡ ನೆಟ್ಟು ಪೋಷಿಸಿ ಬೆಳೆಸುವ ಸಂಕಲ್ಪ ತೊಡಬೇಕು ಎಂದರು.



ರಾಷ್ಟ್ರೀಯ ಹಸಿರು ಪಡೆಯ ಇಕೋ ಕ್ಲಬ್‌ನ ಜಿಲ್ಲಾ ನೋಡಲ್ ಅಧಿಕಾರಿ ಆದ ಶಾಲಾ ಮುಖ್ಯೋಪಾಧ್ಯಾಯ ಟಿ.ಜಿ.ಪ್ರೇಮಕುಮಾರ್, ವಿದ್ಯಾರ್ಥಿಗಳು ತಮ್ಮನ್ನು ಸ್ವಚ್ಛತೆಯೊಂದಿಗೆ ಪರಿಸರ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು. ಶಾಲೆಯಲ್ಲಿ ಇಕೋ ಕ್ಲಬ್ ಮೂಲಕ ಮಕ್ಕಳಲ್ಲಿ ಪರಿಸರ ಪ್ರಜ್ಞೆ ಬೆಳೆಸಲಾಗುತ್ತಿದೆ ಎಂದರು. ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ವಿ.ಸುರೇಶ್ ಮಾತನಾಡಿ, ಮಕ್ಕಳು ಸ್ವಚ್ಛ ಶಾಲೆ–ಸ್ವಚ್ಛ ಪರಿಸರ ಸಂರಕ್ಷಣೆಗೆ ಪಣ ತೊಡಬೇಕು ಎಂದರು.

ತಹಶೀಲ್ದಾರ್ ಟಿ.ಎಂ.ಪ್ರಕಾಶ್, ಗ್ರಾಪಂ ಅಧ್ಯಕ್ಷೆ ಇಂದಿರಾ ರಮೇಶ್, ಎಸ್‌ಡಿಎಂಸಿ ಅಧ್ಯಕ್ಷ ಎಸ್.ಎನ್. ಪುಟ್ಟಸ್ವಾಮಿ, ಆರ್‌ಎಂಎಸ್‌ಎ ಡಿವೈಪಿಸಿ ಸೌಮ್ಯ, ವಿಷಯ ಪರಿವೀಕ್ಷಕಿ ಕೆ.ಆರ್.ಬಿಂದು, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಡಾ.ಸದಾಶಿವ ಎಸ್.ಪಲ್ಲೇದ್, ಪ್ರಾಥಮಿಕ ಶಾಲಾ ಎಸ್‌ಡಿಎಂಸಿ ಅಧ್ಯಕ್ಷ ಕೆ.ಪಿ. ರೇವಣ್ಣ, ಸಮಿತಿ ಸದಸ್ಯರು ಇದ್ದರು. ವಿದ್ಯಾರ್ಥಿಗಳು ಪರಿಸರ ಸಂರಕ್ಷಣೆ ಕುರಿತ ಭಿತ್ತಿ ಫಲಕಗಳನ್ನು ಹಿಡಿದು ಪರಿಸರ ಸಂರಕ್ಷಣಾ ಘೋಷಣೆಗಳನ್ನು ಪ್ರಚುರಪಡಿಸಿದರು.

ಇಂದು ಕೆಲವೆಡೆ ವಿದ್ಯುತ್ ವ್ಯತ್ಯಯ

ಮಡಿಕೇರಿ, ಜೂ.2– ಪೊನ್ನಂಪೇಟೆ ಮತ್ತು ವಿರಾಜಪೇಟೆ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತುರ್ತು ನಿರ್ವಹಣೆ ಕಾರ್ಯ ನಿರ್ವಹಿಸಬೇಕಿರುವುದರಿಂದ ಜೂ.3 ರಂದು ಬೆಳಗ್ಗೆ 9.30 ರಿಂದ ಸಂಜೆ 4 ಗಂಟೆವರೆಗೆ ಪೊನ್ನಂಪೇಟೆ, ಗೋಣಿಕೊಪ್ಪಲು, ನಲ್ಲೂರು, ಹುದಿಕೇರಿ, ತಿತಿಮತಿ, ಹಾತೂರು, ಪಾಲಿಬೆಟ್ಟ, ಶ್ರೀಮಂಗಲ, ಬಾಳಲೆ, ಕಾನೂರು, ಬಿರುನಾಣಿ, ಕುಟ್ಟ ವಿರಾಜಪೇಟೆ, ಬಿ.ಶೆಟ್ಟಿಗೇರಿ, ಬೇತ್ರಿ, ಕಡಂಗ ಮರೂರು, ಕಾಕೋಟುಪರಂಬು, ಅಮ್ಮತ್ತಿ, ಸಿದ್ದಾಪುರ, ಮಾಲ್ದಾರೆ, ಮೂರ್ನಾಡು, ಮರಗೋಡು, ನಾಪೋಕ್ಲು, ಕಕ್ಕಬೆ, ಅರೆಕಾಡು, ಐಯ್ಯಂಗೇರಿ ಹಾಗೂ ಸುತ್ತಮುತ್ತ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ರಾಜಾಸೀಟು–ಮುನೀಶ್ವರ ದೇವಾಲಯದ ಸಂಪರ್ಕ ರಸ್ತೆ ದುರಸ್ತಿಗೆ ಆಗ್ರಹಿಸಿ ವೀರವೇ ಪ್ರತಿಭಟನೆ



ಮಡಿಕೇರಿ, ಜೂ.2– ನಗರದ ರಾಜಾಸೀಟು–ಮುನೀಶ್ವರ ದೇವಾಲಯದ ಸಂಪರ್ಕ ರಸ್ತೆಯನ್ನು ಶೀಘ್ರ ದುರಸ್ತಿಪಡಿಸಬೇಕೆಂದು ಒತ್ತಾಯಿಸಿ ಕೊಡಗು ಜಿಲ್ಲಾ ವೀರನಾಡು ರಕ್ಷಣಾ ವೇದಿಕೆ (ವೀರವೇ)ಯಿಂದ ಸಾರ್ವಜನಿಕರ ಸಹಕಾರದೊಂದಿಗೆ ಪ್ರತಿಭಟನೆ ನಡೆಸಲಾಯಿತು.

ನಗರದ ರಾಜಾಸೀಟು–ಮುನೀಶ್ವರ ದೇವಾಲಯದ ಸಂಪರ್ಕ ರಸ್ತೆಯಲ್ಲಿ ಸಮಾವೇಶಗೊಂಡ ವೇದಿಕೆಯ ಪ್ರಮುಖರು ಹಾಗೂ ಸ್ಥಳೀಯರು, ನಗರಸಭೆಯ ವಿರುದ್ಧ ಘೋಷಣೆಯನ್ನು ಕೂಗಿ ಅಸಮಾಧಾನ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ವೇದಿಕೆಯ ಜಿಲ್ಲಾಧ್ಯಕ್ಷ ಹರೀಶ್ ಜಿ.ಆಚಾರ್ಯ ಮಾತನಾಡಿ, ಹಾನಿಗೀಡಾದ ನಗರದ ರಸ್ತೆಗಳನ್ನು ಅಭಿವೃದ್ಧಿ ಪಡಿಸದೆ ಮಡಿಕೇರಿ ನಗರಸಭೆ ನಿದ್ರಾವಸ್ಥೆಗೆ ಜಾರಿದೆ. ಈ ಹಿಂದೆ ಹಲವು ಬಾರಿ ರಸ್ತೆ ದುರಸ್ತಿಗೆ ಆಗ್ರಹಿಸಿ ಮನವಿ ಮಾಡಲಾಗಿದ್ದರು. ಇಲ್ಲಿಯವರೆಗೆ ಯಾವುದೇ ಸ್ಪಂದನೆ ದೊರೆತಿಲ್ಲ ಎಂದು ದೂರಿದರು. ಈಗಾಗಲೇ ಈ ರಸ್ತೆಯಲ್ಲಿ ವಾಹನ ಸವಾರರು, ಪಾದಚಾರಿಗಳು ಸಂಚರಿಸಲು ಹರಸಾಹಸ ಪಡುವಂತಹ ಪರಿಸ್ಥಿತಿ ನಿರ್ಮಾಣವಾಗಿದ್ದು, ತಕ್ಷಣ ದುರಸ್ತಿಪಡಿಸುವಂತೆ ಒತ್ತಾಯಿಸಿದರು.

ಮುಂಗಾರು ಶೀಘ್ರ ಪ್ರಾರಂಭವಾಗಲಿದ್ದು, ನಗರದ ಸ್ಟೋನ್‌ಹಿಲ್‌ನಲ್ಲಿ ಸುರಿಯಲಾಗುತ್ತಿರುವ ಕಸದಿಂದ ಸಾಂಕ್ರಾಮಿಕ ರೋಗ ಹರಡುವ ಭೀತಿ ಎದುರಾಗಿದೆ. ಈ ಹಿನ್ನೆಲೆ ನಗರದಲ್ಲಿ ಸಂಗ್ರಹವಾಗುವ ತ್ಯಾಜ್ಯವನ್ನು ಸಮರ್ಪಕವಾಗಿ ವಿಲೇವಾರಿ ಮಾಡುವಂತೆ ಆಗ್ರಹಿಸಿದ ಅವರು, ನಗರಸಭೆಯ ಅಧಿಕಾರಿಗಳು ತಕ್ಷಣವೇ ಕ್ರಮ ಕೈಗೊಳ್ಳದಿದ್ದಲ್ಲಿ ನಗರಸಭೆಗೆ ಮುತ್ತಿಗೆ ಹಾಕಲಾಗುವುದೆಂದು ಎಚ್ಚರಿಸಿದರು.

ವೇದಿಕೆಯ ನಗರಾಧ್ಯಕ್ಷ ಪ್ರದೀಪ್ ಕರ್ಕೆರ, ಸದಸ್ಯರಾದ ಗಣೇಶ್, ರಾಜ ಹಾಗೂ ಸ್ಥಳೀಯರಾದ ಸಿದ್ದರಾಜು, ದೇವಯ್ಯ, ಗೀತಾ, ಜುಲೇಕಾಬಿ ಸೇರಿದಂತೆ ಮತ್ತಿತರು ಪ್ರತಿಭಟನೆಯಲ್ಲಿ ಹಾಜರಿದ್ದರು.

ವಿಮಾನ ಪತನ ಸ್ಥಳಕ್ಕೆ ವಾಯುಸೇನೆ ಹಿರಿಯ ಅಧಿಕಾರಿಗಳು, ಎಸ್‌ಪಿ ಭೇಟಿ



ವಿಮಾನ ಪತನಗೊಂಡ ಸ್ಥಳಕ್ಕೆ ವಾಯುಸೇನೆಯ ಹಿರಿಯ ಅಧಿಕಾರಿಗಳ ತಂಡ ಗುರುವಾರ ಭೇಟಿ ನೀಡಿ, ಪರಿಶೀಲಿಸಿ ಮಾಹಿತಿ ಸಂಗ್ರಹಿಸಿತು.

ಚಾಮರಾಜನಗರ, ಜೂ.2– ಚಾಮರಾಜನಗರ ತಾಲೂಕಿನ ಭೋಗಾಪುರ ಗ್ರಾಮದ ಬಳಿ ಗುರುವಾರ ಮಧ್ಯಾಹ್ನ ವಾಯುಸೇನೆಯ ತರಬೇತಿ ಲಘು ವಿಮಾನ ಪತನಗೊಂಡಿದ್ದ ಸ್ಥಳಕ್ಕೆ ಶುಕ್ರವಾರ ವಾಯುಸೇನೆಯ ಹಿರಿಯ ಅಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿಸಾಹು ಭೇಟಿ ನೀಡಿ ಪರಿಶೀಲಿಸಿದರು.

ಭಾರತೀಯ ವಾಯುಸೇನೆಯ ಹಿರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಆಗಮಿಸಿ, ಘಟನಾ ಸ್ಥಳವನ್ನು ಪರಿಶೀಲಿಸಿದರು. ಇದಲ್ಲದೇ ಸ್ಥಳದಲ್ಲಿ ದೊರೆತ ವಿಮಾನದ ಅವಶೇಷಗಳನ್ನು ವಶಪಡಿಸಿಕೊಂಡರು ಹಾಗೂ ಘಟನಾ ಸ್ಥಳ ಹಾಗೂ ಸುತ್ತಮುತ್ತಲಿನ ಸ್ಥಳಗಳನ್ನು ವಿಡಿಯೋ ಮಾಡಿಕೊಳ್ಳಲಾಯಿತು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು ಸಹ ಸ್ಥಳಕ್ಕೆ ಭೇಟಿ ನೀಡಿ, ವಾಯುಸೇನೆಯ ಅಧಿಕಾರಿಗಳೊಂದಿಗೆ ಮುಂದಿನ ಕ್ರಮದ ಬಗ್ಗೆ ಚರ್ಚಿಸಿದರು.

ದುರಂತ ನಡೆದ ಸ್ಥಳದ ಸುತ್ತಲೂ ಟೇಪ್‌ನಿಂದ ಬೌಂಡರಿ ಮಾದರಿ ನಿರ್ಮಿಸಿ ಸಾರ್ವಜನಿಕರು ಮತ್ತು ಪತ್ರಕರ್ತರ ಪ್ರವೇಶ ನಿರ್ಬಂಧಿಸಲಾಗಿತ್ತು. ವಾಯುಸೇನೆ ಅಧಿಕಾರಿಗಳು ಸೂಕ್ಷ್ಮವಾಗಿ ಸ್ಥಳ ಪರಿಶೀಲನೆ ನಡೆಸಿ, ಅವಶೇಷಗಳನ್ನು ಸಂಗ್ರಹಿಸಿ ಅಪಘಾತಕ್ಕೆ ಕಾರಣವನ್ನು ತಿಳಿದುಕೊಳ್ಳಲು ಪ್ರಯತ್ನಿಸಿದರು. ಸ್ಥಳದಲ್ಲಿ ಕೆಲವು ಮಹತ್ವದ ಸುಳಿವು ಸಿಕ್ಕಿದ್ದು, ಅವುಗಳನ್ನೂ ಪೊಲೀಸ್ ಅಧಿಕಾರಿಗಳೊಂದಿಗೆ ಹಂಚಿಕೊಂಡಿದ್ದಾರೆ ಎಂದು ತಿಳಿದುಬಂದಿದೆ.

ಪೈಲಟ್‌ಗಳು ಚೇತರಿಕೆ: ವಿಮಾನದಲ್ಲಿ ತಾಂತ್ರಿ ದೋಷ ಉಂಟಾದ ಕೂಡಲೇ ಎಚ್ಚೆತ್ತು ವಿಮಾನದಿಂದ ಪ್ಯಾರಚೂಟ್ ಮೂಲಕ ಜಿಗಿದು ಪ್ರಾಣಾಪಾಯದಿಂದ ಪಾರಾಗಿದ್ದ ವಿಂಗ್ ಕಮಾಂಡರ್ ತೇಜ್‌ಪಾಲ್ ಹಾಗೂ ತರಬೇತಿ ಪೈಲೆಟ್ ಭೂಮಿಕಾ ಚೇತರಿಸಿಕೊಳ್ಳುತ್ತಿದ್ದಾರೆ ಎಂದು ವಾಯುಸೇನೆಯ ಮೂಲಗಳು ತಿಳಿಸಿವೆ.



ವಿಮಾನ ಪತನಗೊಂಡ ಸ್ಥಳಕ್ಕೆ ಜಿಲ್ಲಾ ವರಿಷ್ಠಾಧಿಕಾರಿ ಪದ್ಮಿನಿ ಸಾಹು ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಕೊಳ್ಳೇಗಾಲ ಸಂಪೂರ್ಣ ಅಭಿವೃದ್ಧಿಗೆ ಆದ್ಯತೆ

ಮಾಧ್ಯಮ ಸಂವಾದದಲ್ಲಿ ಶಾಸಕ ಎಆರ್‌ಕೆ ಅಭಯ



ಚಾಮರಾಜನಗರ, ಜೂ.2– ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರದಲ್ಲಿ ಮೂಲಭೂತ ಸೌಕರ್ಯ, ಶಿಕ್ಷಣ, ಉದ್ಯೋಗಕ್ಕೆ ಮೊದಲ ಆದ್ಯತೆ ನೀಡುವ ಮೂಲಕ ಕ್ಷೇತ್ರವನ್ನು ಅಭಿವೃದ್ಧಿಪಥದತ್ತ ಕೊಂಡೊಯ್ಯಲಾಗುವುದು ಶಾಸಕ ಎ.ಆರ್. ಕೃಷ್ಣಮೂರ್ತಿ ಹೇಳಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಕಚೇರಿಯಲ್ಲಿ ಶುಕ್ರವಾರ ನಡೆದ ಮಾಧ್ಯಮ ಸಂವಾದದಲ್ಲಿ ಮಾತನಾಡಿ, ಕ್ಷೇತ್ರದ ಎಲ್ಲಾ ಗ್ರಾಪಂ, ಪಪಂ, ನಗರಸಭೆ ವ್ಯಾಪ್ತಿಯಲ್ಲಿ ಮೂಲ ಸೌಲಭ್ಯ ಕಲ್ಪಿಸಲು ಮೊದಲ ಆದ್ಯತೆ ನೀಡಲಾಗುವುದು. ಅಲ್ಲದೇ ಶಿಕ್ಷಣ ಕ್ಷೇತ್ರಕ್ಕೂ ಹೆಚ್ಚಿನ ಒತ್ತು ನೀಡಲಾಗುವುದು ಎಂದರು.

ಕೊಳ್ಳೇಗಾಲದಲ್ಲಿ ಇತ್ತೀಚೆಗೆ ನಿರುದ್ಯೋಗ ಸಮಸ್ಯೆ ಹೆಚ್ಚಾಗಿದ್ದು, ನಿರುದ್ಯೋಗಿಗಳಿಗೆ ಕೌಶಲ್ಯ ತರಬೇತಿ ನೀಡುವ ಮೂಲಕ ಸ್ವ ಉದ್ಯೋಗಕ್ಕೆ ಪ್ರೇರಿಪಿಸಲಾಗುವುದು ಎಂದರು.

> ದೇವರು ಕ್ಷೇತ್ರದ ಮತದಾರರ ರೂಪದಲ್ಲಿ ಬಂದು ನನಗೆ ಜಯ ತಂದುಕೊಟ್ಟಿದ್ದಾನೆ. ನನ್ನ ನಿರೀಕ್ಷೆಗೂ ಮೀರಿದ ಗೆಲುವು ಲಭಿಸಿದೆ. ನಾನು ಕ್ಷೇತ್ರದ ಜನರ ವಿಶ್ವಾಸ– ಪ್ರೀತಿ ಉಳಿಸಿಕೊಳ್ಳುವ ನಿಟ್ಟಿನಲ್ಲಿ ಕೆಲಸ ಮಾಡುತ್ತೇನೆ.
>
> -ಎ.ಆರ್. ಕೃಷ್ಣಮೂರ್ತಿ, ಶಾಸಕರು.

ಆಡಳಿತ ಯಂತ್ರದ ಸುಧಾರಣೆ: ಕ್ಷೇತ್ರದ ಅಭಿವೃದ್ಧಿಯಾಗಬೇಕಾದರೆ ಮೊದಲು ಆಡಳಿತ ಯಂತ್ರದ ಸುಧಾರಣೆ ಆಗಬೇಕಿದೆ. ಈ ನಿಟ್ಟಿನಲ್ಲಿ ತಾಲೂಕು ಮಟ್ಟದ ಅಧಿಕಾರಿಗಳ ಸಭೆ ನಡೆಸಿ ಎಲ್ಲಾ ಇಲಾಖೆಯೊಂದಿಗೆ ಚರ್ಚೆ ನಡೆಸಿದ್ದೇನೆ. ಕಚೇರಿಗೆ ಬರುವ ಜನರ ಸಮಸ್ಯೆಯನ್ನು ಶೀಘ್ರವೇ ಇತ್ಯರ್ಥಪಡಿಸಬೇಕು. ಅವರನ್ನು ಅಲೆದಾಡಿಸಬಾರದು ಎಂದು ಸೂಚಿಸಲಾಗಿದೆ ಎಂದರು.

ಎಲ್ಲಾ ಕಚೇರಿಗಳಲ್ಲಿಯೂ ಬಯೋಮೆಟ್ರಿಕ್ ಅಳವಡಿಸಿ, ಅಧಿಕಾರಿಗಳು ಕಚೇರಿಗೆ ನಿಗದಿತ ಸಮಯದಲ್ಲಿ ಹಾಜರಾಗಬೇಕು. ಒಂದು ವೇಳೆ ಕೆಲಸ ನಿಮಿತ್ತ ಪ್ರವಾಸ ಕೈಗೊಂಡರೆ ಈ ಬಗ್ಗೆಯೂ ರಿಜಿಸ್ಟರ್ ಪುಸ್ತಕದಲ್ಲಿ ನಮೂದಿಸಬೇಕು. ಆಡಳಿತದಲ್ಲಿ ಸುಧಾರಣೆ ತರಬೇಕೆಂದು ಸೂಚಿಸಲಾಗಿದೆ ಎಂದರು.

ಹೋಬಳಿ ಕೇಂದ್ರದಲ್ಲಿ ಸಭೆ: ಕ್ಷೇತ್ರದ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಉದ್ದೇಶದಿಂದ ಪ್ರತಿವಾರ ಕ್ಷೇತ್ರದ ಪ್ರತಿ ಹೋಬಳಿ ಕೇಂದ್ರದಲ್ಲಿ ಅಧಿಕಾರಿಗಳೊಂದಿಗೆ ಜನಸಂಪರ್ಕ ಸಭೆ ನಡೆಸಲಾಗುವುದು. ಈ ವೇಳೆ ಜನರು ಸಲ್ಲಿಸುವ ಅರ್ಜಿಗಳನ್ನು ಸ್ವೀಕರಿಸಿ, ಮುಂದಿನ ಸಭೆಯಲ್ಲಿ ಇತ್ಯರ್ಥಪಡಿಸಲು ಕ್ರಮ ವಹಿಸಲಾಗುವುದು ಎಂದರು.

ಡೆಪ್ಯುಟಿ ಸ್ಪೀಕರ್ ಆಗುವ ನಿರೀಕ್ಷೆ: ಚಾಮರಾಜನಗರ ಕ್ಷೇತ್ರದ ಶಾಸಕ ಸಿ. ಪುಟ್ಟರಂಗಶೆಟ್ಟಿ ಅವರು ಸರ್ಕಾರ ನೀಡಿರುವ ಉಪ ಸಭಾಪತಿ ಹುದ್ದೆಯನ್ನು ಸ್ವೀಕರಿಸುವ ನಿರೀಕ್ಷೆ ಇದೆ ಎಂದು ತಿಳಿಸಿದರು.

ಈ ವೇಳೆ ಸಂಘದ ಅಧ್ಯಕ್ಷ ದೇವರಾಜ್ ಕಪ್ಪಸೋಗೆ, ಪ್ರಧಾನ ಕಾರ್ಯದರ್ಶಿ ಗೌಡಹಳ್ಳಿ ಮಹೇಶ್ ಇದ್ದರು.

ಆಕ್ಸಿಜನ್ ದುರಂತ: ತಪ್ಪಿತಸ್ಥರ ವಿರುದ್ಧ ಕ್ರಮಕ್ಕೆ ಆಗ್ರಹ

ಚಾಮರಾಜನಗರ, ಜೂ.2– ಆಕ್ಸಿಜನ್ ದುರಂತದ ಸಂಬಂಧ ರಾಜ್ಯ ಸರ್ಕಾರ ಈಗಾಗಲೇ ಮರು ತನಿಖೆಗೆ ಆದೇಶ ನೀಡಿದೆ. ಈ ವಿಚಾರವಾಗಿ ನಾನು ಮತ್ತೊಮ್ಮೆ ಸರ್ಕಾರದ ಗಮನಕ್ಕೆ ತರುವ ಮೂಲಕ ತಪ್ಪಿತಸರ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸುತ್ತೇನೆ ಎಂದು ಶಾಸಕ ಎ.ಆರ್. ಕೃಷ್ಣಮೂರ್ತಿ ಹೇಳಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ದುರಂತ ನಡೆದಾಗ ಅಂದಿನ ಸರ್ಕಾರ ಕೇವಲ ಮೂವರು ಮಾತ್ರ ಮೃತಪಟ್ಟರು ಎಂದು ವರದಿ ನೀಡಿ ಪ್ರಕರಣ ಸಂಬಂಧ ಸರಿಯಾದ ತನಿಖೆ ನಡೆಸಲಿಲ್ಲ ಎಂದರು.

ಪ್ರಕರಣವನ್ನು ಗಂಭೀರವಾಗಿ ಕಾಂಗ್ರೆಸ್ ಗಂಭೀರವಾಗಿ ಪರಿಗಣಿಸಿತ್ತು. ಘಟನೆ ನಡೆದ ಕೂಡಲೇ ಜಿಲ್ಲೆಗೆ ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್ ಭೇಟಿ ನೀಡಿ ಪರಿಶೀಲಿಸಿದರು. ದುರಂತದಲ್ಲಿ ಮೃತಪಟ್ಟವರು ಮೂವರಲ್ಲ, 36 ಮಂದಿ ಎಂದು ತಿಳಿದು ಎಲ್ಲಾ ಕುಟುಂಬಕ್ಕೂ ತಲಾ ಒಂದೊಂದು ಲಕ್ಷ ಪರಿಹಾರ ನೀಡಿ ಸಾಂತ್ವನ ಹೇಳಿದರು ಎಂದರು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಿದ್ದು, ಪ್ರಕರಣವನ್ನು ಮರು ತನಿಖೆ ನಡೆಸಲು ಆದೇಶಿಸಿದ್ದು, ತಪ್ಪಿತಸ್ಥರಿಗೆ ಶಿಕ್ಷೆಯಾಗಲಿದೆ. ಅಲ್ಲದೇ ಕುಟುಂಬದ ಸದಸ್ಯರಿಗೆ ಸರ್ಕಾರಿ ಉದ್ಯೋಗ ನೀಡುವ ಭರವಸೆ ಈಡೇರಿಸುವಂತೆ ಮನವಿ ಮಾಡಲಾಗುವುದು ಎಂದರು.

ಸಂಜೀವ್ ವಿರುದ್ಧ ಕ್ರಮಕ್ಕೆ ಒತ್ತಾಯ: ಚಾಮರಾಜನಗರ ಸಿಮ್ಸ್‌ನ ಡೀನ್ ಡಾ.ಸಂಜೀವ್ ವಿರುದ್ಧ ಈಗಾಗಲೇ ನಗರದಲ್ಲಿ ಪ್ರತಿಭಟನೆಗಳು ನಡೆದಿದೆ. ಅವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಸರ್ಕಾರಕ್ಕೆ ಒತ್ತಾಯಿಸಲಾಗುವುದು ಎಂದು ತಿಳಿಸಿದರು.

ಸರ್ಕಾರಿ ಶಾಲೆ ಮಕ್ಕಳಿಗೆ ಗುಲಾಬಿ ನೀಡಿ ಸ್ವಾಗತ

ಬೇಗೂರು(ಗುಂಡ್ಲುಪೇಟೆ), ಜೂ.2– ಸಮೀಪದ ಚಿಕ್ಕಾಟಿ ಗ್ರಾಮದಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಯ 2023–24 ನೇ ಸಾಲಿನ ಶಾಲಾ ಪ್ರಾರಂಭೋತ್ಸವವನ್ನು ತಾಲೂಕಿನ ಶಾಸಕ ಹೆಚ್.ಎಂ. ಗಣೇಶ್ ಪ್ರಸಾದ್ ಮಕ್ಕಳಿಗೆ ಗುಲಾಬಿ ಹೂ ನೀಡುವುದರ ಮೂಲಕ ಶಾಲೆಗೆ ಬರಮಾಡಿಕೊಂಡರು.



ನಂತರ ನಡೆದ ಸಮಾರಂಭದಲ್ಲಿ ಮಾತನಾಡಿದ ಅವರು ನಮ್ಮ ಮನೆಯ ಪರಿಸರ ಸ್ವಚ್ಛವಾಗಿಡುವ ರೀತಿಯಲ್ಲಿ ನಾವು ನಮ್ಮ ಶಾಲೆಯನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ಎಲ್ಲಾ ಪೋಷಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸಿ ಸರ್ಕಾರದಿಂದ ಬರುವ ಸಕಲ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು ಎಂದರು.

ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ಸಿಗುತ್ತಿದ್ದು, ಖಾಸಗಿ ಶಾಲೆಗಳು ನಾಚುವಂತೆ ಗುಣಾತ್ಮಕ ಮತ್ತು ಆಕರ್ಷಣೀಯವಾಗಿವೆ. ಶಿಕ್ಷಣ ಸಚಿವರಿಗೆ ತಿಳಿಸಿ ಗುಂಡ್ಲುಪೇಟೆ ಕ್ಷೇತ್ರದ ಎಲ್ಲಾಶಾಲೆಗಳನ್ನು ಅಭಿವೃದ್ಧಿಪಡಿಸಲು ಶಕ್ತಿಮೀರಿ ಪ್ರಯತ್ನ ಪಡುತ್ತೇನೆ ಎಂದರು. ಇದೇ ಸಂದರ್ಭದಲ್ಲಿ ಮಕ್ಕಳಿಗೆ ಪಠ್ಯಪುಸ್ತಕ ಮತ್ತು ಸಮವಸ್ತ್ರ ವಿತರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಬಿಇಓ ರಾಜಶೇಖರ್ ಮಾತನಾಡಿ, ಸರ್ಕಾರದಿಂದ ವಿದ್ಯಾಭ್ಯಾಸಕ್ಕಾಗಿ ದೊರೆಯುವ ಸವಲತ್ತುಗಳನ್ನು ಬಳಸಿಕೊಂಡು ಸರ್ಕಾರಿ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡಿ ಎಂದರು. ಈ ಸಂದರ್ಭದಲ್ಲಿ ಜಿಪಂ ಮಾಜಿ ಅಧ್ಯಕ್ಷ ಮುನಿರಾಜು, ಗ್ರಾಮದ ಮುಖಂಡರಾದ ಮಹೇಶ, ಬಂಗಾರ ನಾಯಕ, ಎಸ್‌ಡಿಎಂಸಿ ಅಧ್ಯಕ್ಷ ನಾಗರಾಜೇಗೌಡ, ಎಂ.ಮಹೇಶ್, ಶಾಲೆಯ ಮುಖ್ಯ ಶಿಕ್ಷಕ ನಾಗೇಂದ್ರ, ಸಿಬ್ಬಂದಿವರ್ಗ ಉಪಸ್ಥಿತರಿದ್ದರು.

ಜಿಂಕೆ ಬೇಟೆ: ಇಬ್ಬರ ಬಂಧನ, ಮೂವರು ಪರಾರಿ

ಕೊಳ್ಳೇಗಾಲ, ಜೂ.2– ನಾಡ ಬಂದೂಕಿನಿಂದ ಜಿಂಕೆ ಹತ್ಯೆಗೈದು ಅರಣ್ಯ ಪ್ರದೇಶದಲ್ಲೇ ಮಾಂಸ ಕತ್ತರಿಸುತ್ತಿದ್ದ ಖಚಿತ ಮಾಹಿತಿ ಮೇರೆಗೆ ಅರಣ್ಯಾಧಿಕಾರಿಗಳು ದಾಳಿ ನಡೆಸಿ ಇಬ್ಬರು ಆರೋಪಿಗಳನ್ನು ಬಂಧಿಸಿದ್ದು, ಮೂವರು ಪರಾರಿಯಾಗಿದ್ದಾರೆ. ಈ ಘಟನೆ ಕೊಳ್ಳೇಗಾಲ ವನ್ಯಜೀವಿ ವಲಯದಲ್ಲಿ ಸಂಭವಿಸಿದೆ.

ಕೊಳ್ಳೇಗಾಲ ವನ್ಯಜೀವಿ ವಲಯದಲ್ಲಿ ಐವರು ಆರೋಪಿಗಳು ಅಕ್ರಮವಾಗಿ ಅರಣ್ಯ ಪ್ರವೇಶಿಸಿದ್ದು, ಅಲ್ಲದೆ ಜಿಂಕೆಯನ್ನು ನಾಡಬಂದೂಕಿನಿಂದ ಬೇಟೆಯಾಡಿ, ಮಾಂಸ ಪಾಲು ಮಾಡಿಕೊಳ್ಳುತ್ತಿದ್ದ ವೇಳೆ ಅರಣ್ಯಾಧಿಕಾರಿಗಳು ಕಾರ್ಯಾಚರಣೆ ನಡೆಸಿದ್ದಾರೆ.

ಈ ವೇಳೆ ಕುಣಗಳ್ಳಿ ಗ್ರಾಮದ ದಿವಂಗತ ಪುಟ್ಟಮಾದಶೆಟ್ಟಿಯವರ ಮಗ ಮೂರ್ತಿ (26) ಮತ್ತು ದಿವಂಗತ ಮರಣಶೆಟ್ಟಿ ಅವರ ಪುತ್ರ ರಾಮು ಸಿಕ್ಕಿಬಿದ್ದಿದ್ದು, ದೊಡ್ಡಿಂದುವಾಡಿ ಗ್ರಾಮದ ಶಾಂತರಾಜು ಅಲಿಯಾಸ್ ದಪ್ಪತಲೆ, ವಿಜಯ್, ಮಧು ಪರಾರಿಯಾಗಿದ್ದಾರೆ. ಆರೋಪಿಗಳು ಮಧುವನಹಳ್ಳಿ ಗಸ್ತಿನ ರಾಯರಹಳ್ಳ ಅರಣ್ಯ ಪ್ರದೇಶದಲ್ಲಿ ಜಿಂಕೆಯನ್ನು ನಾಡ ಬಂದೂಕು ಬಳಸಿ ಬೇಟೆಯಾಡಿ ಮಾಂಸ ಪಾಲು ಮಾಡುತ್ತಿದ್ದಾರೆ ಎಂಬ ಖಚಿತ ಮಾಹಿತಿ



ಹಿನ್ನೆಲೆ ಬಿಆರ್‌ಟಿ ಸಂರಕ್ಷಿತ ಪ್ರದೇಶದ ಉಪಅರಣ್ಯ ಸಂರಕ್ಷಣಾಧಿಕಾರಿ ದೀಪು ಜೆ. ಕಾಂಟ್ರ್ಯಾಕ್ಟರ್, ಎಸಿಎಫ್ ಮಹದೇವಯ್ಯ ಅವರ ಮಾರ್ಗದರ್ಶನದಲ್ಲಿ ವಲಯ ಅರಣ್ಯಾಧಿಕಾರಿ ವಾಸು, ಉಪ ಅಧಿಕಾರಿ ಮಹೇಶ್, ಪ್ರಭುಸ್ವಾಮಿ, ಗಸ್ತು ಅರಣ್ಯಪಾಲಕರಾದ ಸಂಜುನಾಥ ಅಂಯಟ್ಟಿ, ಮಹೇಶ್, ಅರಣ್ಯ ವೀಕ್ಷಕರಾದ ಬಸವರಾಜ ಹಬ್ಬದ್, ಸತೀಶ್, ತಮ್ಮಯ್ಯಗೌಡ, ನಂಜುಂಡಸ್ವಾಮಿ ಇನ್ನಿತರರು ಕಾರ್ಯಾಚರಣೆಯಲ್ಲಿ ಪಾಲ್ಗೊಂಡು ಬಂಧಿತ ಆರೋಪಿಗಳಿಂದ ನಾಲ್ಕು ಚಾಕು, ಎರಡು ಮೊಬೈಲ್, 35 ಕೆಜಿ ಜಿಂಕೆ ಮಾಂಸ, ಮೂರು ಬೈಕ್ ಸೇರಿದಂತೆ ಇನ್ನಿತರೆ ಪದಾರ್ಥಗಳನ್ನು ವಶಕ್ಕೆ ಪಡೆಯುವ ಮೂಲಕ ಪ್ರಕರಣ ದಾಖಲಿಸಿಕೊಂಡು ಪರಾರಿಯಾದ ಆರೋಪಿಗಳ ಬಂಧನಕ್ಕೆ ಬಲೆ ಬೀಸಿದ್ದಾರೆ.

ಮಧುವನಹಳ್ಳಿ, ಕುಣಗಳ್ಳಿ, ಅರೇ ಪಾಳ್ಯ ಅರಣ್ಯ ಗಸ್ತು ವ್ಯಾಪ್ತಿಯಲ್ಲಿ ಜಿಂಕೆ ಬೇಟೆ ಪ್ರಕಣ ಹೆಚ್ಚಾಗುತ್ತಿದ್ದು ಅರಣ್ಯಾಧಿಕಾರಿಗಳ ಕಾರ್ಯಾಚರಣೆ ವನ್ಯಜೀವಿ ಪ್ರಿಯರಲ್ಲಿ ಪ್ರಶಂಸೆಗೆ ಭಾಜನವಾಗಿದ್ದು, ಮುಂದಿನ ದಿನಗಳಲ್ಲಿ ಆರೋಪಿಗಳ ಬಗ್ಗೆ ನಿಗಾವಹಿಸುವಂತೆ ಅರಣ್ಯಾಧಿಕಾರಿಗಳು ಮುಂದಾಗಬೇಕು ಎಂದು ವನ್ಯಜೀವಿ ಪ್ರಿಯರು ಕೋರಿದ್ದಾರೆ.

ಮ.ಬೆಟ್ಟದಲ್ಲಿ ಉಚಿತ ದಂತ ತಪಾಸಣಾ ಶಿಬಿರ

ಚಾಮರಾಜನಗರ, ಜೂ.2– ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಎನ್‌ಓಹೆಚ್‌ಪಿ ಹಾಗೂ ಮಲೈ ಮಹದೇಶ್ವರ ಬೆಟ್ಟದ ಪ್ರಾಧಿಕಾರದ ಸಹಯೋಗದೊಂದಿಗೆ ದಂತ ತಪಾಸಣಾ ಹಾಗೂ ಚಿಕಿತ್ಸಾ ಶಿಬಿರವನ್ನು, ಜೂ.8 ರಂದು ಬೆಳಿಗ್ಗೆ 9 ರಿಂದ ಸಂಜೆ 4 ಗಂಟೆಯವರೆಗೆ ಹಾಗೂ 9ರಂದು ಮಧ್ಯಾಹ್ನ 12 ಗಂಟೆಯವರೆಗೆ ಮಲೆ ಮಹದೇಶ್ವರ ಬೆಟ್ಟದ ಪ್ರಾಥಮಿಕ ಆರೋಗ್ಯ ಕೇಂದ್ರದ ಪಕ್ಕದಲ್ಲಿರುವ ಕನ್ವೆಷನ್ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ಶಿಬಿರಕ್ಕೆ ಸರ್ಕಾರಿ ದಂತ ಮಹಾವಿದ್ಯಾಲಯ ಹಾಗೂ ಸಂಶೋಧನಾ ಕೇಂದ್ರ ಮತ್ತು ಜಿಲ್ಲೆಯ ನುರಿತ ದಂತ ವೈದ್ಯರು ಭಾಗವಹಿಸಲಿದ್ದಾರೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲೆಯ ರಾಷ್ಟ್ರೀಯ ಬಾಯಿ ಆರೋಗ್ಯ ಕಾರ್ಯಕ್ರಮಾಧಿಕಾರಿ ಡಾ. ಪ್ರಿಯದರ್ಶಿನಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರು ಮಿತ್ರ ಶನಿವಾರ 3 ಜೂನ್ 2023



ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರನ್ನು ಮೈಸೂರಿನ ಉದ್ಯಮಿ, ಕಾಂಗ್ರೆಸ್ ಮುಖಂಡ ಎನ್.ಧ್ರುವರಾಜ್, ಸಿಟಿ ಕೋ ಆಪರೇಟಿವ್ ಬ್ಯಾಂಕ್ ನಿರ್ದೇಶಕ ಕುರುಬಾರಹಳ್ಳಿ ಪ್ರಕಾಶ್ ಮತ್ತು ಇತರರು ಅಭಿನಂದಿಸಿದರು.

ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಮೈಸೂರು,ಜೂ.2(ಪಿಎಂ)– ಮೈಸೂರು ಜಿಲ್ಲಾ ಮಡಿವಾಳ ಸಂಘದ ವತಿಯಿಂದ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡುತ್ತಿದ್ದು, ಜೂ.15ರೊಳಗೆ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬೇಕೆಂದು ಸಂಘದ ಪ್ರಧಾನ ಕಾರ್ಯದರ್ಶಿ ಹನುಮ ನಾಗರಾಜು ತಿಳಿಸಿದರು. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 2022–23ನೇ ಸಾಲಿನಲ್ಲಿ ದ್ವಿತೀಯ ಪಿಯುಸಿ, ಡಿಪ್ಲೊಮಾ, ಎಸ್‌ಎಸ್‌ಎಲ್‌ಸಿಯಲ್ಲಿ ಉನ್ನತ ಶ್ರೇಣಿಯಲ್ಲಿ ಉತ್ತೀರ್ಣರಾದ ಸಮುದಾಯದ ವಿದ್ಯಾರ್ಥಿಗಳಿಗೆ ಜೂ.15ರ ಬಳಿಕ ನಡೆಯಲಿರುವ ಸಮಾರಂಭದಲ್ಲಿ ಪ್ರತಿಭಾ ಪುರಸ್ಕಾರ ನೀಡಲಾಗುವುದು ಎಂದರು. ಮೈಸೂರು ಜಿಲ್ಲೆಯ ವಿದ್ಯಾರ್ಥಿಗಳಿಗೆ ಮಾತ್ರವೇ ಪ್ರತಿಭಾ ಪುರಸ್ಕಾರ ನೀಡಲಾಗುತ್ತಿದೆ. 'ಜಗದೀಶ್‌ಕುಮಾರ್, ನಂ.2666/6, 6ನೇ ಕ್ರಾಸ್, ಅಗಸರ ಬೀದಿ, ಪುಲಿಕೇಶಿ ರಸ್ತೆ, ಲಷ್ಕರ್ ಮೊಹಲ್ಲಾ, ಮೈಸೂರು–570001' ಇಲ್ಲಿಗೆ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು ಎಂದು ತಿಳಿಸಿದರು.

ಸಂಘದ ಉಪಾಧ್ಯಕ್ಷ ಬಿ.ಜಿ.ಕೇಶವ, ಪದಾಧಿಕಾರಿಗಳಾದ ಸಿದ್ದನಕೊಪ್ಪಲು ಕುಮಾರ್, ಆಲಗೂಡು ಬಸವರಾಜು, ರವಿ, ಕರ್ನಾಟಕ ರಾಜ್ಯ ಮಡಿವಾಳರ ಮಹಿಳಾ ಸಂಘದ ರಾಜ್ಯಾಧ್ಯಕ್ಷೆ ಎನ್.ಆರ್.ವಿಜಯಲಕ್ಷ್ಮೀ ಅಂಜನಪ್ಪ ಮತ್ತಿತರರು ಗೋಷ್ಠಿಯಲ್ಲಿದ್ದರು.

ಪ್ಯೂಮಾ ಶೋರಂನಲ್ಲಿ ಕಳವು: ಆರೋಪಿ ಬಂಧನ



ಮೈಸೂರು, ಜೂ.2– ಪ್ಯೂಮಾ ಶೋರೂಂ ಷೆಟರ್ ಮುರಿದು, ಹಣ ಹಾಗೂ ವಸ್ತುಗಳನ್ನು ಕಳ್ಳತನ ಮಾಡಿದ್ದವನನ್ನು ಕುವೆಂಪುನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಮೈಸೂರಿನ ಪ್ರಜ್ವಲ್(20) ಬಂಧಿತ ಆರೋಪಿಯಾಗಿದ್ದು, ಬಂಧಿತನಿಂದ ಕೃತ್ಯಕ್ಕೆ ಬಳಸಿದ ಒಂದು ದ್ವಿಚಕ್ರ ವಾಹನ, ಎರಡು ಮೊಬೈಲ್, 5500 ರೂ. ಹಣ ವಶಪಡಿಸಿಕೊಳ್ಳಲಾಗಿದೆ. ಮೇ 7ರಂದು ಷಟರ್ ಮುರಿದು ಶೋರೂಂನೊಳಗೆ ನುಗ್ಗಿ 27 ಸಾವಿರ ರೂ. ಹಣ, 20 ಸಾವಿರ ಮೌಲ್ಯದ ಪಾದರಕ್ಷೆಗಳು, ಕ್ಯಾಪ್ ಹಾಗೂ ಪರ್ಸ್‌ಗಳನ್ನು ದೋಚಿ ಪರಾರಿಯಾಗಿದ್ದ. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡ ಕುವೆಂಪುನಗರ ಠಾಣೆ ಪೊಲೀಸರು ಕಾರ್ಯಾಚರಣೆ ನಡೆಸಿ ಆರೋಪಿಯನ್ನು ಬಂಧಿಸಿದ್ದಾರೆ. ಈತ ತನ್ನ ಸಹಚರರಾದ ನಿತಿನ್, ಭಾಷಾ, ಚೇತನ್ ಜೊತೆ ಸೇರಿ ಮೈಸೂರು, ಬೆಂಗಳೂರು, ಹೊಸಪೇಟೆ, ಅರಸೀಕೆರೆ ಸೇರಿದಂತೆ ರಾಜ್ಯದ ವಿವಿಧೆಡೆ ಈ ರೀತಿಯ ಅಪರಾಧ ಕೃತ್ಯಗಳಲ್ಲಿ ಭಾಗಿಯಾಗಿರುವುದು ವಿಚಾರಣೆ ವೇಳೆ ತಿಳಿದುಬಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಅಪರಾಧ ಮತ್ತು ಸಂಚಾರ ವಿಭಾಗದ ಡಿಸಿಪಿ ಜಾಹ್ನವಿ ನಿರ್ದೇಶನ, ಕೆ.ಆರ್.ಉಪವಿಭಾಗದ ಎಸಿಪಿ ಗಂಗಾಧರಸ್ವಾಮಿ ಮಾರ್ಗದರ್ಶನ, ಕುವೆಂಪುನಗರ ಠಾಣೆ ಇನ್‌ಸ್ಪೆಕ್ಟರ್ ನಾರಾಯಣ ಸ್ವಾಮಿ ನೇತೃತ್ವದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಸಬ್‌ಇನ್‌ಸ್ಪೆಕ್ಟರ್‌ಗಳಾದ ಗೋಪಾಲ್, ರಾಧಾ, ಎಎಸ್‌ಐಗಳಾದ ಕಾಂತರಾಜು, ಮಹದೇವ, ಸಿಬ್ಬಂದಿ ವಿರೂಪಾಕ್ಷ, ಮಂಜುನಾಥ್, ಆನಂದ್, ಪುಟ್ಟಪ್ಪ, ಹಜರತ್, ಸುರೇಶ್, ನಾಗೇಶ್ ಶ್ರೀನಿವಾಸ್ ಭಾಗವಹಿಸಿದ್ದರು.

ಡಾ.ರಾಮಾನಂದರಾವ್ ನಿಧನ



ಮೈಸೂರು, ಜೂ.2–ಶೃಂಗೇರಿ ಮೂಲದವರಾದ ಡಾ.ರಾಮಾನಂದ ರಾವ್ ಅವರು ತಮ್ಮ ಸ್ವಗೃಹದಲ್ಲಿ ನಿಧನರಾದರು. ಮೃತರು ಪತ್ನಿ, ಪುತ್ರ ಹಾಗೂ ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ.

ಡಾ.ರಾಮಾನಂದ ರಾವ್ ಅವರು, ತಮ್ಮ ಉನ್ನತ ವ್ಯಾಸಂಗವನ್ನು ಮೈಸೂರಿನ ಆಯುರ್ವೇದ ಮಹಾವಿದ್ಯಾಲಯದಲ್ಲಿ ಮುಗಿಸಿ ನಂತರ ಬಹಳ ವರ್ಷಗಳವರೆಗೆ ಮೈಸೂರಿನ ಗೋಕುಲಂ ಬಡಾವಣೆಯಲ್ಲಿ ವೈದ್ಯ ವೃತ್ತಿ ನಡೆಸಿದ್ದಾರೆ. ಇವರು ಒಬ್ಬ ಉತ್ತಮ ಯೋಗ ಪಟುವಾಗಿ ಮೈಸೂರು ವಿ ವಿ ಮೊಹಲ್ಲಾದ ಅಂಡಾಳ್ ಮಂದಿರದಲ್ಲಿ ಹಲವಾರು ವರ್ಷಗಳ ಕಾಲ ಯೋಗ ತರಬೇತಿಯನ್ನೂ ನೀಡಿದ್ದರು. ಇವರ ಸೇವೆಗಳನ್ನು ಗುರುತಿಸಿ ಹಲವಾರು ಸಂಘ–ಸಂಸ್ಥೆಗಳು ಇವರನ್ನು ಸನ್ಮಾನಿಸಿವೆ. ಪಾರ್ಥಿವ ಶರೀರದ ಅಂತಿಮ ದರ್ಶನಕ್ಕೆ ಅವರ ನಿವಾಸದಲ್ಲಿ ಜೂ.3 ರಂದು ಬೆಳಗ್ಗೆ 9.30 ರಿಂದ 11 ಗಂಟೆಯವರೆಗೆ ಅವಕಾಶವಿದ್ದು, ಮೃತರ ಅಂತಿಮ ಸಂಸ್ಕಾರ ವಿಜಯನಗರ ನಾಲ್ಕನೆಯ ಹಂತದ ಚಿತಾಗಾರದಲ್ಲಿ ನಡೆಯಲಿದೆ ಎಂದು ಕುಟುಂಬ ಮೂಲಗಳು ತಿಳಿಸಿವೆ.

ಮೂರನೇ ಪುಟದಿಂದ

ಐದೂ ಗ್ಯಾರಂಟಿ ಜಾರಿ ಘೋಷಣೆ

ಎರಡನೇ ಗ್ಯಾರಂಟಿ: 'ಗೃಹಲಕ್ಷ್ಮಿ'ಯನ್ನು ಆಗಸ್ಟ್ 15 ರಂದು ಅನುಷ್ಠಾನಕ್ಕೆ ತರಲಾಗುವುದು, ಈ ಯೋಜನೆಯಡಿ ಬಿಪಿಎಲ್ , ಎಪಿಎಲ್ ಖಾತೆದಾರರ ಮನೆ ಯಜಮಾನಿ ಖಾತೆಗೆ ಹಣ ಮಾಡಲಾಗುವುದು, ಆದರೆ, ಯೋಜನೆ ಫಲಾನುಭವಿಗಳು ಆಧಾರ್ ಕಾರ್ಡ್, ಬ್ಯಾಂಕ್ ಖಾತೆ ವಿವರ ಸಲ್ಲಿಸಬೇಕು, ಜೂನ್ 15 ರಿಂದ ಜುಲೈ 15ರೊಳಗೆ ಅರ್ಜಿ ಸಲ್ಲಿಸಬೇಕು ಎಂದರು. ಸಾಮಾಜಿಕ ಭದ್ರತೆ ಪಿಂಚಣಿದಾರರಿಗೂ ಈ ಯೋಜನೆ ಅನ್ವಯವಾಗಲಿದೆ ಎಂದರು.

ಮೂರನೇ ಗ್ಯಾರಂಟಿ: ಅನ್ನಭಾಗ್ಯ ಯೋಜನೆಯಡಿ ಜುಲೈ 1 ರಿಂದ ಎಲ್ಲಾ ಬಿಪಿಎಲ್ ಕಾರ್ಡ್‌ದಾರರು ಮತ್ತು ಅಂತ್ಯೋದಯ ಫಲಾನುಭವಿಗಳಿಗೆ ತಲಾ 10 ಕೆ.ಜಿ. ಅಕ್ಕಿ ನೀಡಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದರು.

ನಾಲ್ಕನೇ ಗ್ಯಾರಂಟಿ: ಶಕ್ತಿ ಯೋಜನೆಯಡಿ ವಿದ್ಯಾರ್ಥಿನಿಯರು ಸೇರಿದಂತೆ ರಾಜ್ಯದಲ್ಲಿನ ಎಲ್ಲಾ ಮಹಿಳೆಯರು ಕೆಎಸ್‌ಆರ್‌ಟಿಸಿ ಹಾಗೂ ನಗರ ಸಾರಿಗೆ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣಿಸುವ ಈ ಯೋಜನೆಗೆ ಇದೇ ಜೂನ್ 11ನೇ ತಾರೀಖು ಚಾಲನೆ ನೀಡಲಾಗುವುದು, ಬೆಂಗಳೂರಿನಿಂದ ತಿರುಪತಿ, ಬೆಂಗಳೂರಿನಿಂದ ಹೈದರಾಬಾದ್‌ಗೆ ಅವಕಾಶವಿಲ್ಲ. ಎಸಿ ಮತ್ತು ಲಕ್ಷುರಿ ಬಸ್ ಹೊರತುಪಡಿಸಿ ಸಾಮಾನ್ಯ ಬಸ್‌ಗಳಿಗೆ ಮಾತ್ರ ಅನ್ವಯವಾಗಲಿದೆ. ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ ಶೇ.50ರಷ್ಟು ಸೀಟು ಪುರುಷರಿಗೆ ಮೀಸಲು, ಐರಾವತ, ರಾಜಹಂಸ ಸೇರಿ ಎಲ್ಲ ರೀತಿಯ ಲಕ್ಸುರಿ, ಎಸಿ ಮತ್ತು ನಾನ್ ಎಸಿ ಸ್ಲೀಪರ್ ಬಸ್‌ಗಳಿಗೆ ಇದು ಅನ್ವಯವಾಗಲ್ಲ ಎಂದು ಮುಖ್ಯಮಂತ್ರಿ ತಿಳಿಸಿದರು. ಉಚಿತ ಬಸ್ ಪ್ರಯಾಣದ ಸವಲತ್ತನ್ನು ತೃತೀಯ ಲಿಂಗಿಗಳಿಗೂ ಒದಗಿಸಲಾಗಿದೆ.


ಐದನೇ ಗ್ಯಾರಂಟಿ: ಯುವನಿಧಿಯಡಿ 2022–23ರಲ್ಲಿ ಪಾಸ್ ಆದ ಪದವೀಧರ ನಿರುದ್ಯೋಗಿಗಳಿಗೆ ನೋಂದಣಿಯಾದ 24 ತಿಂಗಳವರೆಗೆ ಪ್ರತಿ ತಿಂಗಳಿಗೆ 3,000 ರೂ. ಮತ್ತು ಡಿಪ್ಲೋಮಾ ಮಾಡಿದವರಿಗೆ 1500 ರೂ. ಗೌರವ ಧನ ನೀಡಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದರು. ವೃತ್ತಿಪರ ಶಿಕ್ಷಣ ಸೇರಿದಂತೆ ಎಲ್ಲಾ ಪದವೀಧರ ನಿರುದ್ಯೋಗಿಗಳಿಗೆ ಇದು ಅನ್ವಯವಾಗಲಿದೆ. ತೃತೀಯ ಲಿಂಗಿಗಳಿಗೂ ಕೂಡ ಈ ಯೋಜನೆ ಅನ್ವಯ ನಿರುದ್ಯೋಗ ಭತ್ಯೆ ನೀಡಲಾಗುವುದು, ಇದಕ್ಕಾಗಿ ಅರ್ಜಿ ಕರೆಯಲಾಗುವುದು ಎಂದು ಮುಖ್ಯಮಂತ್ರಿ ಸ್ಪಷ್ಟಪಡಿಸಿದರು.

ಒಂದು ವೇಳೆ ಪದವಿ ಪಡೆದ ತಕ್ಷಣ, ಸರ್ಕಾರ ಇಲ್ಲವೇ ಖಾಸಗಿ ಉದ್ಯೋಗ ದೊರೆತರೆ ಅಂಥವರಿಗೆ ಈ ಯೋಜನೆ ದೊರೆಯುವುದಿಲ್ಲ. ಯೋಜನೆಯ ಲಾಭ ಪಡೆದ ನಂತರ ಮಧ್ಯದಲ್ಲೇ ಉದ್ಯೋಗ ದೊರೆತರೆ ಅಂಥವರಿಗೆ ಅಂದಿನಿಂದಲೇ ಯುವನಿಧಿ ಭತ್ಯೆ ಸ್ಥಗಿತಗೊಳ್ಳಲಿದೆ ಎಂದು ವಿವರಿಸಿದರು. ಕರ್ನಾಟಕದ ಯಾವುದೇ ಜಾತಿ, ಧರ್ಮಗಳ ತಾರತಮ್ಯಗಳಿಲ್ಲದೆ, ಗ್ಯಾರಂಟಿ ಯೋಜನೆ ಜಾರಿ ಮಾಡಿದ್ದೇವೆ. ನಾವು ಚುನಾವಣೆಗೂ ಮುನ್ನ ರಾಜ್ಯದ ಜನರಿಗೆ ನೀಡಿದ್ದ ಭರವಸೆಯನ್ನು ಈಡೇರಿಸಿದ್ದೇವೆ ಎಂದು ಕೆಪಿಸಿಸಿ ಅಧ್ಯಕ್ಷರಾಗಿರುವ ಡಿ.ಕೆ.ಶಿವಕುಮಾರ್ ಇದೇ ಸಂದರ್ಭದಲ್ಲಿ ತಿಳಿಸಿದರು.

ಪ್ರಸಕ್ತ ಆರ್ಥಿಕ ವರ್ಷದಲ್ಲೇ ಘೋಷಣೆ ಮಾಡಿರುವ ಐದು ಗ್ಯಾರಂಟಿಗಳು ಅನುಷ್ಠಾನಗೊಳ್ಳಲಿವೆ ಎಂದ ಮುಖ್ಯಮಂತ್ರಿಗಳು ಇವುಗಳಿಗೆ ಎಷ್ಟು ಹಣದ ಅಗತ್ಯವಿದೆ ಎಂಬ ಬಗ್ಗೆ ಯಾರು ತಲೆ ಕೆಡಿಸಿಕೊಳ್ಳುವ ಅಗತ್ಯವಿಲ್ಲ. ಇದರ ಅಂಕಿ–ಅಂಶಗಳನ್ನು ಮುಂದಿನ ದಿನಗಳಲ್ಲಿ ಬಹಿರಂಗಪಡಿಸುತ್ತೇನೆ. ಆದರೆ, ನೀಡಿದ ಭರವಸೆಗಳ ಜಾರಿಗೆ ನಾವು ಸಂಪನ್ಮೂಲ ಕ್ರೋಢೀಕರಿಸಿ ಜನರಿಗೆ ಗ್ಯಾರಂಟಿ ಕೊಡುತ್ತೇವೆ ಎಂದರು. ಇಡೀ ರಾಷ್ಟ್ರದಲ್ಲೆ ನುಡಿದಂತೆ ನಡೆದಿರುವ ಸರ್ಕಾರ ನಮ್ಮದೊಂದೆ ಎಂದು ಸಮರ್ಥಿಸಿಕೊಂಡ ಉಭಯ ನಾಯಕರು, ಪ್ರತಿ ಕುಟುಂಬಕ್ಕೂ ನಮ್ಮ ಯೋಜನೆಗಳು ಒಂದಲ್ಲ ಒಂದು ರೀತಿ ತಲುಪುತ್ತವೆ. ರಾಜಕೀಯವಾಗಿ ವಿರೋಧ ಪಕ್ಷಗಳು ಏನೇ ಹೇಳಿಕೊಳ್ಳಲಿ ನಾವು ನುಡಿದಂತೆ ನಡೆದಿದ್ದೇವೆ. ಚುನಾವಣಾ ಸಂದರ್ಭದಲ್ಲಿ ನಮ್ಮ ಪಕ್ಷ ಪ್ರಣಾಳಿಕೆಯಲ್ಲಿ ನೀಡಿದ್ದ ಭರವಸೆಗಳ ಪ್ರಮುಖಾಂಶಗಳನ್ನು ಈಡೇರಿಸಿದ್ದೇವೆ ಎಂದು ಹೇಳಿದರು.

ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಅಭಿವೃದ್ಧಿಗೆ ಆದ್ಯತೆ

ಕೃತಜ್ಞತಾ ಸಮಾರಂಭದಲ್ಲಿ ಶಾಸಕ ಕೆ. ಹರೀಶ್‌ಗೌಡ ಭರವಸೆ



ಮೈಸೂರು, ಜೂ.2(ಎಂಟಿವೈ)– ಚುನಾವಣೆಯಲ್ಲಿ ನನಗೆ ಹಿನ್ನಡೆಯುಂಟು ಮಾಡಲು ಪ್ರಯತ್ನಿಸಿದ ಯಾರ ಮೇಲೂ ದ್ವೇಷ ಸಾಧಿಸುವುದಿಲ್ಲ. ಕ್ಷೇತ್ರದ ಅಭಿವೃದ್ಧಿಗಾಗಿ ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸೇವೆ ಸಲ್ಲಿಸುತ್ತೇನೆ ಎಂದು ಚಾಮರಾಜ ಕ್ಷೇತ್ರದ ನೂತನ ಶಾಸಕ ಕೆ.ಹರೀಶ್‌ಗೌಡ ತಿಳಿಸಿದ್ದಾರೆ.

ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಶುಕ್ರವಾರ ಆಯೋಜಿಸಿದ್ದ ಚಾಮರಾಜ ಕ್ಷೇತ್ರದ ಕಾರ್ಯಕರ್ತರ ಕೃತಜ್ಞತಾ ಸಮಾರಂಭದಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ನಾಯಕತ್ವದಲ್ಲಿ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಭೂತಪೂರ್ವ ಗೆಲುವು ದಾಖಲಿಸಿದೆ. ಸುದೀರ್ಘ ಅವಧಿಯ ನಂತರ ಕಾಂಗ್ರೆಸ್ 135 ಸ್ಥಾನಗಳೊಂದಿ ನಿಚ್ಚಳ ಬಹುಮತ ಪಡೆದಿದೆ. ಇದಕ್ಕೆ ಬಿಜೆಪಿ ಸರ್ಕಾರದ ಮಿತಿ ಮೀರಿದ ಭ್ರಷ್ಟಾಚಾರ, ಶೇ.40ರಷ್ಟು ಕಮಿಷನ್ ದಂಧೆ, ಅಕ್ರಮ ನೇಮಕಾತಿ, ವರ್ಗಾಗಣೆ ದಂಧೆ ಸೇರಿದಂತೆ ದುರಾಡಳಿತ ಜನ ಬೇಸತ್ತಿದ್ದರು. ಇದರ ನಡುವೆ ಪಕ್ಷದ ಕಾರ್ಯಕರ್ತರ ಸಂಘಟಿತ ಶ್ರಮದಿಂದ ಕಾಂಗ್ರೆಸ್‌ಗೆ ಪ್ರಚಂಡ ಗೆಲುವು ಲಭಿಸಿದೆ ಎಂದರು.

ನಾನು ಕಳೆದ ನಾಲ್ಕೂವರೆ ವರ್ಷದ ಹಿಂದಷ್ಟೇ ಕಾಂಗ್ರೆಸ್‌ಗೆ ಸೇರಿದ್ದೇನೆ. ಈ ಹಿಂದೆ ಜೆಡಿಎಸ್‌ನಲ್ಲಿದ್ದಾಗ ಆ ಪಕ್ಷಕ್ಕೆ ಪ್ರಾಮಾಣಿಕನಾಗಿದ್ದೆ. ಆ ಪಕ್ಷದ ವರಿಷ್ಠರು ಸಂಬಂಧಿಯೊಬ್ಬರಿಗೆ ಟಿಕೆಟ್ ನೀಡುವುದಕ್ಕಾಗಿ ನನ್ನನ್ನು ಉಚ್ಚಾಟಿಸಿದರು. ಕಳೆದ ಚುನಾವಣೆಯಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ಕಣಕ್ಕಿಳಿದಿದ್ದೆ. ನನ್ನ ಸೇವೆ ಮನಗಂಡು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪಕ್ಷಕ್ಕೆ ಆಹ್ವಾನಿಸಿದರು. ಇದರಿಂದ ಕಳೆದ ನಾಲ್ಕೂವರೆ ವರ್ಷದಿಂದ ಕಾಂಗ್ರೆಸ್ ಪಕ್ಷಕ್ಕೆ ಬದ್ಧನಾಗಿ ಸೇವೆ ಸಲ್ಲಿಸುತ್ತಾ ಬಂದಿದ್ದೇನೆ. ಈ ಚುನಾವಣೆಯಲ್ಲಿ ಪಕ್ಷದ ವತಿಯಿಂದ ನಡೆಸಿದ ಸರ್ವೆ ವರದಿ ಆಧರಿಸಿ ಸಿಎಂ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ನನ್ನನ್ನು ಗುರುತಿಸಿ ಟಿಕೆಟ್ ನೀಡಿದ್ದಾರೆ. ಈ ಚುನಾವಣೆಯಲ್ಲಿ ಚಾಮರಾಜ ಕ್ಷೇತ್ರದ ಜನತೆ ಅಹಂಕಾರಿಗಳನ್ನು ದೂರವಿಟ್ಟು, ನನಗೆ ಬೆಂಬಲ ನೀಡಿದ್ದಾರೆ ಎಂದು ತಿಳಿಸಿದರು.

ಮುಂಬರುವ ದಿನಗಳಲ್ಲಿ ಕ್ಷೇತ್ರವನ್ನು ಸಮಗ್ರವಾಗಿ ಅಭಿವೃದ್ಧಿ ಮಾಡುವುದಕ್ಕಾಗಿ ಎಲ್ಲರ ಸಹಕಾರ ಬಯಸುತ್ತೇವೆ. ನಾನು ಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತರನ್ನು ಕೈಬಿಡುವುದಿಲ್ಲ. ಪಕ್ಷಕ್ಕೆ ಪ್ರಾಮಾಣಿಕವಾಗಿ ದುಡಿಯುತ್ತೇನೆ. ಎಲ್ಲರೂ ಪಕ್ಷ ಸಂಘಟನೆಗೆ ಸಹಕಾರ ನೀಡಬೇಕು. ಕೆಲವರು ನನಗೆ ಟಿಕೆಟ್ ಸಿಕ್ಕ ಹಿನ್ನೆಲೆಯಲ್ಲಿ ಪಕ್ಷ ತೊರೆಯುವ ಇಂಗಿತ ವ್ಯಕ್ತಪಡಿಸಿದ್ದರು. ನಾನು ಅಂತಹವರನ್ನು ಭೇಟಿ ಮಾಡಿ, ಪಕ್ಷದಲ್ಲಿ ಹಿರಿತನ ಹೊಂದಿದ್ದೀರಿ. ಪಕ್ಷ ಬಿಡಬೇಡಿ ಎಂದು ಮನವಿಯನ್ನೂ ಮಾಡಿಕೊಂಡಿದ್ದೇನೆ. ಮುಂದಿನ ದಿನಗಳಲ್ಲಿ ಎಲ್ಲರನ್ನೂ ಒಗ್ಗಟ್ಟಾಗಿ ಕೊಂಡೊಯ್ಯುವ ಮನೋಭಾವ ನನ್ನದಾಗಿದೆ. ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಕ್ಷೇತ್ರದ ಅಭಿವೃದ್ಧಿ ಹಾಗೂ ಪಕ್ಷ ಸಂಘಟನೆಗೆ ಶ್ರಮಿಸಿದರೆ, ಮುಂದಿನ ದಿನಗಳಲ್ಲಿ ಅವರ ಸಾಮರ್ಥ್ಯಕ್ಕೆ ಅನುಗುಣವಾಗಿ ಸರ್ಕಾರ ವಿವಿಧ ಸ್ಥಾನಮಾನ ನೀಡುತ್ತದೆ ಎಂದರು.

> ಈ ಚುನಾವಣೆಯಲ್ಲಿ ಕಾಂಗ್ರೆಸ್‌ನ ಪ್ರತಿಯೊಂದು ವಾರ್ಡ್, ಬ್ಲಾಕ್ ಪದಾಧಿಕಾರಿಗಳು, ಮಹಿಳಾ ಘಟಕದ ಮುಖಂಡರು, ಕಾರ್ಯಕರ್ತರು ನನ್ನ ಪರವಾಗಿ ಪ್ರಚಾರ ಮಾಡಿದ್ದಾರೆ. ಎಲ್ಲರ ಪರಿಶ್ರಮದಿಂದ ನನಗೆ ಜಯ ಸಿಕ್ಕಿದೆ. ಯಾರೂ ಸಹ ನನ್ನ ವಿರುದ್ಧವಾಗಿ ಕೆಲಸ ಮಾಡಲಿಲ್ಲ. ಆದರೆ, ಕೆಲವರು ಕೆಲಸ ಮಾಡಲು ಉದಾಸೀನತೆ ಪ್ರದರ್ಶಿಸಿದರು. ನಾನು ಅಂತಹವರ ವಿರುದ್ಧ ದ್ವೇಷ ಸಾಧಿಸುವುದಿಲ್ಲ. ಚುನಾವಣೆ ವೇಳೆ ಕೆಲವರು ಅವಮಾನಿಸಿ, ಹೀಯ್ಯಾಳಿಸಿದರು. ಮೂಲ, ವಲಸಿಗನೆಂದು ಮಾತನಾಡಿ ನನಗೆ ಹಿನ್ನಡೆಯಾಗುವಂತೆ ಮಾಡಿದರು.
> – ಕೆ.ಹರೀಶ್‌ಗೌಡ, ಶಾಸಕರು, ಚಾಮರಾಜ ಕ್ಷೇತ್ರ

ಒಂದು ಜಾತಿ ಜನರನ್ನು ನೋಯಿಸಬೇಡಿ: ಸಭೆಯಲ್ಲಿ ಕಾಂಗ್ರೆಸ್ ನಗರ ಕಾರ್ಯದರ್ಶಿ, ಪಾಲಿಕೆ ಮಾಜಿ ಸದಸ್ಯ ಶಿವಣ್ಣ ಮಾತನಾಡಿ, ಚುನಾವಣೆಗೂ ಮುನ್ನ ನಾಯಕರೊಬ್ಬರು ಮಾತನಾಡಿ, ಕಳೆದ ಚುನಾವಣೆಯಲ್ಲಿ ಕುರುಬ ಸಮುದಾಯಕ್ಕೆ ನಾಲ್ಕು ಟಿಕೆಟ್ ನೀಡಲಾಗಿತ್ತು ಎಂದಿದ್ದರು. ಈ ಹೇಳಿಕೆ ಕುರುಬ ಸಮುದಾಯಕ್ಕೆ ನೋವುಂಟು ಮಾಡಿದೆ. ನಾವು ಯಾರು ಕೂಡ ಇಂತಹದ್ದೇ ಜಾತಿಯಲ್ಲಿ ಹುಟ್ಟಬೇಕು ಎಂದು ಅರ್ಜಿ ಹಾಕಿರುವುದಿಲ್ಲ. ನಾವೆಲ್ಲಾ ಜಾತ್ಯತೀತ ಮನೋಭಾವವುಳ್ಳವರಾಗಿದ್ದರೂ, ನಮ್ಮ ಜಾತಿ ವಿಚಾರಕ್ಕೆ ಬಂದಾಗ ಎಲ್ಲರೂ ಆಯಾ ಜಾತಿಗೆ ನಿಲುವಿಗೆ ಬದ್ಧರಾಗಿರುತ್ತಾರೆ. ಹಾಗಾಗಿ ಮುಖಂಡರು ಎನಿಸಿಕೊಂಡವರು ಜಾತಿ ಬಗ್ಗೆ ನೋಯಿಸುವ ಮಾತನಾಡಬಾರದು ಎಂದು ಮನವಿ ಮಾಡಿದರು.

ವರದಿ ಸಲ್ಲಿಕೆ: ಚಾಮರಾಜ ಕ್ಷೇತ್ರ ಚುನಾವಣಾ ಉಸ್ತುವಾರಿಯಾಗಿದ್ದ ಈಶ್ವರ್ ಚಕ್ಕಡಿ ಮಾತನಾಡಿ, ಚುನಾವಣೆ ವೇಳೆ ಕ್ಷೇತ್ರದ ಎಲ್ಲಾ ವಾರ್ಡ್‌ಗಳಲ್ಲೂ ಪಕ್ಷದ ಅಭ್ಯರ್ಥಿ ಪರ ಉತ್ತಮವಾಗಿ ಕೆಲಸ ಮಾಡಿದವರು ಹಾಗೂ ಪಕ್ಷಕ್ಕೆ ಹಿನ್ನೆಡೆಯುಂಟು ಮಾಡಿದವರ ಮಾಹಿತಿ ಒಳಗೊಂಡಂತೆ ಕೆಲವು ಸಾಧಕ ಬಾಧಕಗಳ ಬಗ್ಗೆ ವರದಿ ತಯಾರಿಸಿದ್ದೇನೆ. ಇದನ್ನು ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ ಹಾಗೂ ಶಾಸಕ ಕೆ.ಹರೀಶ್ ಗೌಡ ಅವರಿಗೆ ಸಲ್ಲಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಮಾಜಿ ಮೇಯರ್‌ಗಳಾದ ಬಿ.ಕೆ.ಪ್ರಕಾಶ್, ಪುಷ್ಪಲತಾ ಟಿ.ಬಿ. ಚಿಕ್ಕಣ್ಣ ಎಂ.ಸಿ.ರಾಜೇಶ್ವರಿ ಪುಟ್ಟಸ್ವಾಮಿ, ಮಾಜಿ ಉಪಮೇಯರ್ ಪುಷ್ಪವಲ್ಲಿ, ಮುಖಂಡರಾದ ಗೋಪಿ ನಾಥ್, ನಾಗಭೂಷಣ್, ಶಾರದಾ ಸಂಪತ್, ಭಾಸ್ಕರ್, ರವಿಕುಮಾರ್, ಎನ್.ಆರ್. ನಾಗೇಶ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.



ಮೈಸೂರಿನ ಬಸವ ಮಾರ್ಗ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷ ಬಸವರಾಜು ಅವರನ್ನು ಹುಟ್ಟುಹಬ್ಬದ ಪ್ರಯುಕ್ತ ಹೆಬ್ಬಾಳು ಯುವ ಬಳಗದ ವತಿಯಿಂದ ಆತ್ಮೀಯವಾಗಿ ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ ಕವಿಕಾ ನಿಕಟಪೂರ್ವ ಅಧ್ಯಕ್ಷ ತಮ್ಮೇಶ್ ಗೌಡ, ಬಿಜೆಪಿ ಯುವ ಮೋರ್ಚಾ ನಗರಾಧ್ಯಕ್ಷ ಎಂ.ಜೆ.ಕಿರಣ್ ಗೌಡ, ಹರೀಶ್ ಕುಮಾರ್, ಕಾರ್ತಿಕ್ ಮರಿಯಪ್ಪ, ಧನರಾಜ್, ಆದರ್ಶ್, ಮಧು, ಬೆಟ್ಟಪ್ಪ, ಮಾದೇಶ್ವರ ಬಡಾವಣೆಯ ಮತ್ತಿತರಿದ್ದರು

ಇಂದು ದಿಶಾ ಸಮಿತಿ ಸಭೆ


ಮೈಸೂರು, ಜೂ.2– ಲೋಕಸಭಾ ಸದಸ್ಯ ಪ್ರತಾಪ್ ಸಿಂಹ ಅಧ್ಯಕ್ಷತೆಯಲ್ಲಿ ಜೂ.3 ರ ಬೆಳಗ್ಗೆ 10 ಗಂಟೆಗೆ ಜಿಲ್ಲಾ ಪಂಚಾಯತ್‌ನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ 2023–24ನೇ ಸಾಲಿನ ಮೊದಲನೇ ತ್ರೈಮಾಸಿಕ ಜಿಲ್ಲಾ ಅಭಿವೃದ್ಧಿ ಸಮನ್ವಯ ಹಾಗೂ ಉಸ್ತುವಾರಿ ಸಮಿತಿ (ದಿಶಾ ಸಮಿತಿ) ಸಭೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

51 ಡಿವೈಎಸ್‌ಪಿ, 292 ಪೊಲೀಸ್ ಇನ್‌ಸ್ಪೆಕ್ಟರ್ ವರ್ಗಾವಣೆ

ಬೆಂಗಳೂರು, ಜೂ.2–ವಿಧಾನಸಭಾ ಚುನಾವಣೆಯಲ್ಲಿ ವರ್ಗಾವಣೆ ಮಾಡಲಾಗಿದ್ದ 51 ಡಿವೈಎಸ್‌ಪಿ ಮತ್ತು 292 ಪೊಲೀಸ್ ಇನ್ಸ್‌ಪೆಕ್ಟರ್‌ಗಳನ್ನು ಮತ್ತೆ ಅವರದೇ ಸ್ಥಾನಗಳಿಗೆ ವರ್ಗಾವಣೆ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಚುನಾವಣಾ ಆಯೋಗದ ನಿರ್ದೇಶನದ ಮೇರೆಗೆ ಇವರೆಲ್ಲರನ್ನೂ ವರ್ಗಾವಣೆ ಮಾಡಲಾಗಿತ್ತು. ಚುನಾವಣೆ ಪ್ರಕ್ರಿಯೆ ಮುಗಿದ ಹಿನ್ನೆಲೆಯಲ್ಲಿ ಮತ್ತೆ ಅವರನ್ನು, ಅದೇ ಸ್ಥಳಗಳಿಗೆ ವರ್ಗಾವಣೆ ಮಾಡಲಾಗಿದೆ.

ಪರವಾನಗಿ ಪಡೆಯದ ಅಂಗಡಿ, ವಾಣಿಜ್ಯ ಸಂಸ್ಥೆಗಳನ್ನು ಮುಚ್ಚಿಸಿ

ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಅಧಿಕಾರಿಗಳಿಗೆ ಸೂಚನೆ



ಮೈಸೂರು, ಜೂ.2– ಪರವಾನಗಿ ಪಡೆಯದ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳನ್ನು ಮುಚ್ಚಿಸುವಂತೆ ಜಿಲ್ಲಾಧಿಕಾರಿ ಡಾ. ಕೆ.ವಿ. ರಾಜೇಂದ್ರ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ, ಮೈಸೂರು ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿಯ ಜಿಲ್ಲಾ ಮಟ್ಟದ ಕಾರ್ಯಕಾರಿ ಸಮಿತಿ ಸಭೆ ಹಾಗೂ ಕಾರ್ಯ ಪಡೆ (ಟಾಸ್ಕ್ ಫೋರ್ಸ್) ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಿಶ್ವ ಬಾಲಕಾರ್ಮಿಕ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಬೇಕು. ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986 ರನ್ವಯ ಕಲಂ 17 ರಡಿ ನೇಮಕಗೊಂಡಿರುವ ಎಲ್ಲಾ ಇಲಾಖೆಗಳ ಅಧಿಕಾರಿಗಳಿಗೆ ಬಾಲಕಾರ್ಮಿಕರ ತಪಾಸಣೆಗೆ ಗುರಿ ನಿಗದಿಪಡಿಸಿ, ಕಡ್ಡಾಯವಾಗಿ ಬಾಲಕಾರ್ಮಿಕರ ತಪಾಸಣೆ ನಡೆಸಿ ಪ್ರಕರಣ ದಾಖಲಿಸಲು ಸೂಚಿಸಿದರು.

ಸದರಿ ಸಭೆಯಲ್ಲಿ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಕೆ.ಎಂ. ಗಾಯಿತ್ರಿ, ಉಪ ವಿಭಾಗಾಧಿಕಾರಿ ಕಮಲಾಬಾಯಿ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸ್ಥಳೀಯ ಸರ್ಕಾರೇತರ ಸಂಸ್ಥೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ರಾಷ್ಟ್ರೋತ್ಥಾನ ವಿದ್ಯಾಕೇಂದ್ರದಲ್ಲಿ ಅಕ್ಷರಾಭ್ಯಾಸ, ವಿದ್ಯಾರಂಭ ಕಾರ್ಯಕ್ರಮ



ಮೈಸೂರು, ಜೂ.2(ಎಸ್‌ಬಿಡಿ)– ಮೈಸೂರು ವಿಜಯನಗರದ ರಾಷ್ಟ್ರೋತ್ಥಾನ ವಿದ್ಯಾಕೇಂದ್ರದಲ್ಲಿ ಇತ್ತೀಚೆಗೆ ಅಕ್ಷರಾಭ್ಯಾಸ ಮತ್ತು ವಿದ್ಯಾರಂಭ ಕಾರ್ಯಕ್ರಮ ಸಾಂಪ್ರದಾಯಿಕವಾಗಿ ನೆರವೇರಿತು.

ಕಾರ್ಯಕ್ರಮದಲ್ಲಿ ಮೈಸೂರು ರಾಮಕೃಷ್ಣ ಆಶ್ರಮದ ಸರ್ವಜಯಾನಂದ ಮಹಾರಾಜ್ ಸ್ವಾಮೀಜಿ, ಪ್ರಿಕೆಜಿ ಹಾಗೂ ಎಲ್‌ಕೆಜಿ ಮಕ್ಕಳ ಕೈಯಲ್ಲಿ ಅರಿಶಿನದ ಕೊನೆಯನ್ನು ಹಿಡಿಸಿ, ಅವರ ತಂದೆ–ತಾಯಿ ಸಹಾಯದಲ್ಲಿ ಅಕ್ಕಿಯ ಮೇಲೆ ಓಂಕಾರ ಬರೆಸುವ ಮೂಲಕ ಅಕ್ಷರಾಭ್ಯಾಸಕ್ಕೆ ಮಾರ್ಗದರ್ಶನ ನೀಡಿ ಆಶೀರ್ವದಿಸಿದರು. ನಂತರ 6ನೇ ತರಗತಿವರೆಗಿನ ಎಲ್ಲಾ ವಿದ್ಯಾರ್ಥಿಗಳಿಂದ ಗಣೇಶ ಮತ್ತು ಸರಸ್ವತಿ ಸ್ತೋತ್ರಗಳನ್ನು ಪಠಣ ಮಾಡಿಸಿದರು.

ಈ ವೇಳೆ ಆಶೀರ್ವಚನ ನೀಡಿ, ನಮ್ಮ ಸನಾತನ ಧರ್ಮದ ಮಹಾತ್ಮರನ್ನು ಮಕ್ಕಳು ಆದರ್ಶವಾಗಿ ಸ್ವೀಕರಿಸಬೇಕು. ಶ್ರೀರಾಮನ ವ್ಯಕ್ತಿತ್ವ, ನಮ್ಮ ನೆಲದ ಆಚಾರ ವಿಚಾರಗಳನ್ನು ಮಕ್ಕಳು ಚಿಕ್ಕಂದಿನಿದಂಲೇ ರೂಢಿಸಿಕೊಳ್ಳಬೇಕು. ಇದಕ್ಕೆ ಪೋಷಕರು ಒತ್ತಾಸೆಯಾಗಬೇಕು. ಶಿಕ್ಷಕರು ಮಕ್ಕಳಿಗೆ ಮಾದರಿಯಾಗಬೇಕು ಎಂದು ಕಿವಿಮಾತು ಹೇಳಿದರು.

ಇದಕ್ಕೂ ಮುನ್ನ ಸ್ವಾಮೀಜಿ ಅವರನ್ನು ಪೂರ್ಣಕುಂಭ ಸಹಿತ ಸಾಂಪ್ರದಾಯಿಕವಾಗಿ ಬರಮಾಡಿಕೊಳ್ಳಲಾಯಿತು. ಸರಸ್ವತಿ ಹೋಮ, ದೀಪ ಪ್ರಜ್ವಲನದೊಂದಿಗೆ ಕಾರ್ಯಕ್ರಮ ಆರಂಭಿಸಲಾಯಿತು. ಶಿಕ್ಷಕಿ ಭಾಗ್ಯಶ್ರೀ ಪ್ರಾರ್ಥನೆ ನೆರವೇರಿಸಿದರು. ರಾಷ್ಟ್ರೋತ್ಥಾನ ಸಂಸ್ಥೆಯ ಸಂವಿತ್ ಸಂಶೋಧನಾ ಪ್ರಮುಖರಾದ ಗಜಾನನ ಲೋಂಡೆ ಗುರೂಜಿ ರಾಷ್ಟ್ರೋತ್ಥಾನ ಸಂಸ್ಥೆಯ ಸ್ಥಾಪನೆ, ಧ್ಯೇಯೋದ್ದೇಶ, ಕರ್ತವ್ಯ ಹಾಗೂ ಪಂಚಮುಖಿ ಶಿಕ್ಷಣ ಕುರಿತು ಮಾತನಾಡಿದರು. ಸಂಸ್ಥೆಯ ಕಾರ್ಯದರ್ಶಿ ಮಲ್ಲರಾಜೆ ಅರಸ್, ರಾಷ್ಟ್ರೋತ್ಥಾನ ವಿದ್ಯಾ ಕೇಂದ್ರದ ಶಾಲಾ ಸಮಿತಿ ಸದಸ್ಯ ಪುನಿತ್, ಶಾಲೆಯ ಪ್ರಧಾನ ಆಚಾರ್ಯರಾದ ಶ್ರೀಮತಿ ಡಿ.ಅನಿತಾ, ಶಿಕ್ಷಿಯರಾದ ಮಮತಾ, ರತ್ನಾ ಮತ್ತಿತರರು ಉಪಸ್ಥಿತರಿದ್ದರು.



ಮೈಸೂರಿನ ಬೋಗಾದಿಯಲ್ಲಿರುವ ಹರಿ ವಿದ್ಯಾಲಯ ಸಂಯುಕ್ತ ಪಿಯು ಕಾಲೇಜಿನಲ್ಲಿ ನಡೆದ ಪ್ರಥಮ ಪಿಯುಸಿ ವಿಜ್ಞಾನ ಮತ್ತು ವಾಣಿಜ್ಯ ವಿಭಾಗದ ಉದ್ಘಾಟನಾ ಕಾರ್ಯಕ್ರಮದಲ್ಲಿ ಮುಕ್ತ ವಿವಿಯ ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ವಿಭಾಗದ ಅಧ್ಯಕ್ಷ ಡಾ. ಶೆಲ್ವಪಿಳ್ಳೆ ಅಯ್ಯಂಗಾರ್ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು. ಸಂಸ್ಥೆಯ ಕಾರ್ಯದರ್ಶಿ ಶ್ರೀನಿವಾಸ ಹೊಸಮನೆ, ಸದಸ್ಯ ಹೆಚ್.ಆರ್.ಭಗವಾನ್, ಪ್ರಾಂಶುಪಾಲರಾದ ಎನ್.ಭಾರತಿ ಶಂಕರ್ ಇನ್ನಿತರರು ಉಪಸ್ಥಿತರಿದ್ದರು.

ನಾಳೆ ವಿವಿಧೆಡೆ ವಿದ್ಯುತ್ ವ್ಯತ್ಯಯ

ಮೈಸೂರು, ಜೂ.2– ಜೂ.4 ರ ಬೆಳಗ್ಗೆ 10 ರಿಂದ ಸಂಜೆ 5:30 ಗಂಟೆಯವರೆಗೆ ನಿರ್ವಹಣಾ ಕಾಮಗಾರಿ ನಿಮಿತ್ತ ರಾಮಾನುಜ ರಸ್ತೆ 1 ರಿಂದ 9ನೇ ಕ್ರಾಸ್‌ವರೆಗೆ, ಹೊಸಬಂಡಿಕೇರಿ, ಜೆ.ಎಸ್.ಎಸ್. ಆಸ್ಪತ್ರೆ, ಅಗ್ರಹಾರ, ಬಸವೇಶ್ವರ ರಸ್ತೆ ಚಾಮುಂಡಿಪುರಂನ ಹಲವು ಭಾಗಗಳು, ತ್ಯಾಗರಾಜ ರಸ್ತೆ ಚಾಮುಂಡಿ ಬೆಟ್ಟ ಮತ್ತು ಪಾದ, ಗುಂಡೂರಾವ್ ನಗರ, ದತ್ತನಗರ, ಮುನೇಶ್ವರನಗರ, ಗೌರಿಶಂಕರನಗರ, ನಂಜನಗೂಡು ಟೋಲ್ ಗೇಟ್, ತಾವರೆಕೆರೆ, ಜಾಕಿ ಕ್ವಾಟ್ರಸ್, ರೇಸ್ ಕೋರ್ಸ್ ಹಿಂಭಾಗ, ಸಬರ್ಬ್ ಬಸ್ ನಿಲ್ದಾಣ, ನಜರ್‌ಬಾದ್, ಇಟ್ಟಿಗೆಗೂಡು, ಮೃಗಾಲಯದ ಸುತ್ತ–ಮುತ್ತ, ಸರ್ಕಾರಿ ಅಥಿತಿ ಗೃಹ ಮತ್ತು ಸುತ್ತ–ಮುತ್ತಲಿನ ಪ್ರದೇಶಗಳು, ತಾಲೂಕು ಕಛೇರಿ, ಡಿ.ದೇವರಾಜ ಅರಸು ರಸ್ತೆ ಬಿ.ಎನ್. ರಸ್ತೆ ಚಾಮುಂಡಿಬೆಟ್ಟ, ಸಿದ್ದಾರ್ಥ ನಗರ, ಆಲನಹಳ್ಳಿ ಸುತ್ತ–ಮುತ್ತಲಿನ ಪ್ರದೇಶಗಳು, ಗಿರಿದರ್ಶಿನಿ ಬಡಾವಣೆ, ಅರಮನೆ ಸುತ್ತ–ಮುತ್ತಲಿನ ಪ್ರದೇಶಗಳು, ಶ್ರೀ ಹರ್ಷ ರಸ್ತೆ, ಸಯ್ಯಾಜಿರಾವ್ ರಸ್ತೆ ಇರ್ವಿನ್ ರಸ್ತೆ ಸುತ್ತ–ಮುತ್ತಲಿನ ಪ್ರದೇಶಗಳು, ಧನ್ವಂತರಿ ರಸ್ತೆ ಹಾಗೂ ಶಿವರಾಂಪೇಟೆ ಸುತ್ತ–ಮುತ್ತಲಿನ ಪ್ರದೇಶಗಳು.

ಕಡಕೊಳ, ಬ್ಯಾತಹಳ್ಳಿ, ದಡದಹಳ್ಳಿ, ಸಿಂಧುವಳ್ಳಿ, ದೊಡ್ಡಕಾನ್ಯ, ಚಿಕ್ಕಕಾನ್ಯ, ಕೂಡನಹಳ್ಳಿ, ಕೋಚನಹಳ್ಳಿ, ಮರಸೆ, ಮಾಕನಹುಂಡಿ, ಕೆ.ಐ.ಎ.ಡಿ.ಬಿ ಇಂಡಸ್ಟ್ರಿಯಲ್ ಏರಿಯಾ, ವಿಮಾನ ನಿಲ್ದಾಣ, ಬಿರೇಗೌಡನಹುಂಡಿ, ಕೆ.ಎಂ. ಹುಂಡಿ, ಬಿ.ಜಿ. ಹುಂಡಿ, ಕೆ.ಎನ್. ಹುಂಡಿ, ಆಯರಹಳ್ಳಿ, ಕಿರಾಳು, ದೂರ, ಮುರುಡಗಳ್ಳಿ, ತಳೂರು, ಡಿ ಕಾಟೂರು, ಟಿ.ವಿ.ಎಸ್. ಫ್ಯಾಕ್ಟರಿ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗುತ್ತದೆ ಎಂದು ಸೆಸ್ಕ್ ಪ್ರಕಟಣೆ ತಿಳಿಸಿದೆ.

ಇಂದು, ನಾಳೆ ಪರೀಕ್ಷಾ ಕೇಂದ್ರದ ಸುತ್ತ ನಿಷೇಧಾಜ್ಞೆ ಜಾರಿ

ಮೈಸೂರು, ಜೂ.2– ಜೂ.3 ಮತ್ತು 4 ರಂದು ಕರ್ನಾಟಕ ಲೋಕಸೇವಾ ಆಯೋಗದ ವತಿಯಿಂದ ಮಹಾರಾಣಿ ಮಹಿಳಾ ಕಲಾ ಕಾಲೇಜು ಕೇಂದ್ರದಲ್ಲಿ ಮುಖ್ಯ ವಿದ್ಯುತ್ ಪರಿವೀಕ್ಷಕರು ಹುದ್ದೆಗಳಿಗೆ ಕನ್ನಡ ಭಾಷಾ ಪರೀಕ್ಷೆ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳು ನಡೆಯಲಿದ್ದು, ಸದರಿ ಪರೀಕ್ಷಾ ಕೇಂದ್ರದ ಸುತ್ತಲೂ ಇನ್ನೂರು ಮೀಟರ್ ವ್ಯಾಪ್ತಿಯಲ್ಲಿ ಪರೀಕ್ಷಾ ದಿನಗಳಂದು ಬೆಳಗ್ಗೆ 6 ರಿಂದ ಸಂಜೆ 6 ಗಂಟೆವರೆಗೆ ದಂಡ ಪ್ರಕ್ರಿಯೆ ಸಮಿತಿ 1973ರ ಕಲಂ 144 ರೀತಿಯ ನಿಷೇಧಾಜ್ಞೆಯನ್ನು ಜಾರಿಗೊಳಿಸಲಾಗಿದೆ ಎಂದು ನಗರ ಪೊಲೀಸ್ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಳೆ ಸಿಐಐ ಮೈಸೂರು ವತಿಯಿಂದ ಬೃಹತ್ ಸ್ವಚ್ಛತಾ ಶ್ರಮದಾನ

ಏಕಕಾಲದಲ್ಲಿ ರಿಂಗ್ ರಸ್ತೆಯ 28 ಸ್ಥಳಗಳಲ್ಲಿ ಪ್ಲಾಸ್ಟಿಕ್ ಸೇರಿ ಇತರೆ ತ್ಯಾಜ್ಯ ಸಂಗ್ರಹ



ಮೈಸೂರು,ಜೂ.2(ಪಿಎಂ)– ಸಿಐಐ ಮೈಸೂರು (ಭಾರತೀಯ ಕೈಗಾರಿಕೆಗಳ ಒಕ್ಕೂಟ) ವತಿಯಿಂದ ವಿಶ್ವ ಪರಿಸರ ದಿನದ ಪ್ರಯುಕ್ತ ಜೂ.4ರಂದು ಏಕಕಾಲದಲ್ಲಿ ಮೈಸೂರು ರಿಂಗ್ ರಸ್ತೆಯ 28 ಸ್ಥಳಗಳಲ್ಲಿ ಬೃಹತ್ ಪ್ರಮಾಣದ ಸ್ವಚ್ಛತಾ ಶ್ರಮದಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸಿಐಐ ಮೈಸೂರು ಅಧ್ಯಕ್ಷ ಸಾಮ್ ಚೆರಿಯನ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ 7ರಿಂದ 9ರವರೆಗೆ ಎರಡು ಗಂಟೆ ಕಾಲ ಸ್ವಚ್ಛತಾ ಶ್ರಮದಾನ ಚಟುವಟಿಕೆ ನಡೆಯಲಿದೆ. ತ್ಯಾಜ್ಯ ಸಂಗ್ರಹಿಸಿ ವಿಲೇವಾರಿ ಮಾಡಲಾಗುವುದು. ವಿಶೇಷವಾಗಿ ಪ್ಲಾಸ್ಟಿಕ್ ವಸ್ತುಗಳ ಸ್ವಚ್ಛತೆ ಕಾರ್ಯ ನಡೆಯಲಿದೆ. ಆ ಮೂಲಕ ಪ್ಲಾಸ್ಟಿಕ್ ಮಾಲಿನ್ಯದ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಲಾಗುವುದು ಎಂದರು.

ಮೈಸೂರು ರಿಂಗ್ ರಸ್ತೆ ಮತ್ತು ಸುತ್ತಮುತ್ತಲಿನ ಪ್ರದೇಶದಲ್ಲಿ ಸ್ವಚ್ಛತೆ ಮಾಡುವ ಮೂಲಕ ಪರಿಸರ ಮಾಲಿನ್ಯ ತಡೆ ಮಹತ್ವದ ಬಗ್ಗೆ ಸಂದೇಶ ನೀಡಲಾಗುವುದು. ಸಿಐಐ ಮೈಸೂರು ಸದಸ್ಯ ಕಂಪನಿಗಳ ಉದ್ಯೋಗಿಗಳು, ವಿದ್ಯಾರ್ಥಿಗಳು ಮತ್ತು ವಿವಿಧ ಕಾಲೇಜು ಅಧ್ಯಾಪಕರು ಮತ್ತು ಕೆಲ ಎನ್‌ಜಿಓಗಳು ಸೇರಿದಂತೆ ಸುಮಾರು 1,500 ಸ್ವಯಂ ಸೇವಕರು ಈ ಸ್ವಚ್ಛತಾ ಶ್ರಮದಾನದಲ್ಲಿ ಪಾಲ್ಗೊಳ್ಳಲಿದ್ದಾರೆ. ನಂತರ 10ಗಂಟೆಗೆ ಜೆಕೆ ಮೈದಾನದಲ್ಲಿ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಸಿಐಐ ಮೈಸೂರು ಮಾಜಿ ಅಧ್ಯಕ್ಷ ಪವನ್ ರಂಗ ಮಾತನಾಡಿ, ಸ್ವಚ್ಛಗೊಳಿಸುವ 28 ಸ್ಥಳಗಳಲ್ಲಿ ಮುಂದೆಯೂ ಸ್ವಚ್ಛತೆ ಕಾಯ್ದುಕೊಳ್ಳಲು ವಿಶೇಷ ಒತ್ತು ನೀಡುವಂತೆ ಹಾಗೂ ವಿವಿಧ ಕಂಪನಿಗಳು ಸಿಐಐ ಮೈಸೂರು ಮೂಲಕ ದತ್ತು ಪಡೆದು ನಿರ್ವಹಣೆ ಮಾಡುತ್ತಿರುವ ಮೈಸೂರಿನ 8 ಕೆರೆಗಳ ನಿರ್ವಹಣೆಯಲ್ಲಿ ಅಗತ್ಯ ಸಹಕಾರ ನೀಡುವಂತೆ ಮೈಸೂರು ಮಹಾನಗರ ಪಾಲಿಕೆ ಆಯುಕ್ತರಿಗೆ ಮನವಿ ಸಲ್ಲಿಸಲಾಗುವುದು ಎಂದರು.

ಜೂ.3ರಂದು ಇನ್ಫೋಸಿಸ್ ಮೈಸೂರು ಆವರಣದಲ್ಲಿ ಬೆಳಗ್ಗೆ 9.30ಕ್ಕೆ ಸಿಐಐ ಸದಸ್ಯರಿಗೆ 'ಪ್ಲಾಸ್ಟಿಕ್ ಬಳಕೆ ಕಡಿಮೆಗೊಳಿಸುವುದು ಹಾಗೂ ಮರುಬಳಕೆ' ವಿಚಾರ ಕುರಿತಂತೆ 'ಐಡಿಯಾಥಾನ್' ಶೀರ್ಷಿಕೆಯಡಿ ಸ್ಪರ್ಧೆ ಹಮ್ಮಿಕೊಳ್ಳಲಾಗಿದೆ. ಸ್ಪರ್ಧೆಯಲ್ಲಿ 40 ತಂಡಗಳು ಭಾಗವಹಿಸಿ ಪಿಪಿಟಿ ಪ್ರದರ್ಶನದ ಮೂಲಕ ಪ್ಲಾಸ್ಟಿಕ್ ನಿಯಂತ್ರಣದ ಮೇಲೆ ಬೆಳಕು ಚೆಲ್ಲಲಿವೆ. ಸ್ವಚ್ಛತಾ ಶ್ರಮದಾನದಲ್ಲಿ ಪಾಲ್ಗೊಳ್ಳಲು ಮೊ.ಸಂ. 98447 85965 ಮೂಲಕ ನೋಂದಾಯಿಸಿಕೊಳ್ಳಬಹುದು ಎಂದು ಹೇಳಿದರು.

ಸಿಐಐ ಮೈಸೂರು ಸದಸ್ಯರಾದ ಡಾ.ಧರ್ಮ ಪ್ರಸಾದ್, ಸವಿತಾ ಮಲ್ಲಪ್ಪ ಗೋಷ್ಠಿಯಲ್ಲಿದ್ದರು.

ಚುನಾವಣಾ ನೀತಿ ಸಂಹಿತೆ ಉಲ್ಲಂಘನೆ

ಸಂಸದ ಡಿ.ಕೆ.ಸುರೇಶ್ ವಿರುದ್ಧದ ಪ್ರಕರಣ ರದ್ದು



ಬೆಂಗಳೂರು, ಜೂ.2– ಕಳೆದ ಲೋಕಸಭಾ ಚುನಾವಣೆಯ ಪ್ರಚಾರ ಸಭೆಯಲ್ಲಿ ಚುನಾವಣಾಧಿಕಾರಿಯಿಂದ ಪೂರ್ವಾನುಮತಿ ಪಡೆಯದೇ ತೆರೆದ ವಾಹನದಲ್ಲಿ ಪ್ರಚಾರ ಮತ್ತು ಮೆರವಣಿಗೆ ನಡೆಸಿದ ಆರೋಪಕ್ಕೆ ಸಂಬಂಧಿಸಿದಂತೆ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸದಸ್ಯ ಡಿ.ಕೆ.ಸುರೇಶ್ ವಿರುದ್ಧ ದಾಖಲಾಗಿದ್ದ ದೂರು ಮತ್ತು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ವಿಚಾರಣೆಯನ್ನು ಹೈಕೋರ್ಟ್ ರದ್ದುಪಡಿಸಿದೆ.

ಭದ್ರಾವತಿ ತಾಲೂಕಿನ ಹಿರಿಯೂರು ಬಯಲು ರಂಗಮಂದಿರದ ಎದುರು ಡಿ.ಕೆ.ಸುರೇಶ್ 2019ರ ಏಪ್ರಿಲ್ 20ರಂದು ಸಂಜೆ 5 ಗಂಟೆ ಸಮಯದಲ್ಲಿ ತೆರೆದ ವಾಹನದ ಮೂಲಕ ಚುನಾವಣಾ ಪ್ರಚಾರ ಮತ್ತು ಮೆರವಣಿಗೆ ನಡೆಸಿದ್ದರು. ಈ ಪ್ರಚಾರಕ್ಕೆ ಅವರು ಚುನಾವಣಾಧಿಕಾರಿಯಿಂದ ಪೂರ್ವಾನುಮತಿ ಪಡೆದಿಲ್ಲ. ಇದು ಚುನಾವಣಾ ನೀತಿ ಸಂಹಿತೆಯ ಉಲ್ಲಂಘನೆ ಎಂದು ಆರೋಪಿಸಿ ಶಿವಮೊಗ್ಗ ಲೋಕಸಭಾ ಕ್ಷೇತ್ರದ ವಿಚಕ್ಷಣಾ ದಳದ ಅಧಿಕಾರಿಯಾಗಿದ್ದ ಎಂ.ಈಶ್ವರಪ್ಪ ಭದ್ರಾವತಿ ಪೇಪರ್ ಟೌನ್ ಠಾಣೆಗೆ ದೂರು ನೀಡಿದ್ದರು. ದೂರಿಗೆ ಸಂಬಂಧಿಸಿದಂತೆ ಎಫ್ಐಆರ್ ದಾಖಲಾಗಿತ್ತು. ಅಂತೆಯೇ, ತನಿಖೆ ಪೂರ್ಣಗೊಳಿಸಿದ್ದ ಸ್ಥಳೀಯ ಪೊಲೀಸರು, 'ಶಾಸಕರು, ಸಂಸದರ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ವಿಚಾರಣೆ'ಯ ವಿಶೇಷ ನ್ಯಾಯಾಲಯಕ್ಕೆ 2020ರ ಸೆಪ್ಟೆಂಬರ್ 1ರಂದು ಅಂತಿಮ ವರದಿ ಸಲ್ಲಿಸಿದ್ದರು. ಇದನ್ನು ಪರಿಗಣಿಸಿದ್ದ ವಿಶೇಷ ನ್ಯಾಯಾಲಯ, 2021ರ ಸೆಪ್ಟೆಂಬರ್ 21ರಂದು ಡಿ.ಕೆ.ಸುರೇಶ್‌ಗೆ ಸಮನ್ಸ್ ಜಾರಿಗೊಳಿಸಿತ್ತು.

ಈ ಹಿನ್ನೆಲೆಯಲ್ಲಿ ನನ್ನ ವಿರುದ್ಧದ ದೂರು ಮತ್ತು ವಿಶೇಷ ನ್ಯಾಯಾಲಯದ ವಿಚಾರಣೆ ರದ್ದುಪಡಿಸಬೇಕು ಎಂದು ಕೋರಿ ಸಂಸದ ಡಿ.ಕೆ.ಸುರೇಶ್ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಅರ್ಜಿಯನ್ನು ಪುರಸ್ಕರಿಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ, ಡಿ.ಕೆ.ಸುರೇಶ್ ವಿರುದ್ಧ ದಾಖಲಾಗಿದ್ದ ದೂರು ಮತ್ತು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ವಿಚಾರಣೆಯನ್ನು ರದ್ದುಪಡಿಸಿ ಆದೇಶಿಸಿದ್ದಾರೆ.

ಇಂದು ಗಾನಾಮೃತ ಸೀಜನ್–4 ಸಂಗೀತ ಸಂಜೆ



ಮೈಸೂರು,ಜೂ.2(ಪಿಎಂ)– ಸ್ಟ್ಯಾನ್ಲಿ ಪಾರ್ಕರ್ಸ್ ಸ್ಕೂಲ್ ಆಫ್ ಮ್ಯೂಸಿಕ್‌ನ 9ನೇ ವಾರ್ಷಿಕೋತ್ಸವ ಪ್ರಯುಕ್ತ ಶನಿವಾರ (ಜೂ.3)ದಂದು ಗಾನಾಮೃತ ಸೀಜನ್–4 ಸಂಗೀತ ಸಂಜೆ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಸಂಸ್ಥಾಪಕ ಸ್ಟ್ಯಾನ್ಲಿ ಪಾರ್ಕರ್ ತಿಳಿಸಿದರು. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರಿನ ಕುವೆಂಪುನಗರದ ಗಾನಭಾರತೀ ಸಭಾಂಗಣದಲ್ಲಿ ಸಂಜೆ 4 ಗಂಟೆಗೆ ಕಾರ್ಯಕ್ರಮ ಆರಂಭವಾಗಲಿದೆ. ಪಂಚಭಾಷಾ ಚಲನಚಿತ್ರ ಗೀತೆಗಳನ್ನು 20ಕ್ಕೂ ಹೆಚ್ಚು ಗಾಯಕರು ಸಾದರಪಡಿಸಲಿದ್ದಾರೆ. ಸಾರ್ವಜನಿಕರಿಗೆ ಪ್ರವೇಶ ಉಚಿತವಿದೆ ಎಂದರು.

ಇದೇ ಸಂದರ್ಭದಲ್ಲಿ ಸಮಾಜ ಸೇವಕ ಸತೀಶ್‌ಗೌಡ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷ ಡಾ.ವೈ.ಡಿ.ರಾಜಣ್ಣ ಮತ್ತು ಜೆಡಿಎಸ್ ಮುಖಂಡ ಸಂತೋಷ್‌ಗೌಡ ಅವರನ್ನು ಸನ್ಮಾನಿಸಲಾಗುವುದು ಎಂದು ತಿಳಿಸಿದರು. ಹವ್ಯಾಸಿ ಗಾಯಕರಾದ ಡಾ.ದೀಮಪ್ಪ, ಪಿ.ಸುರೇಶ್, ಗಾಯಕ ಮನು ಯಾದವ್ ಗೋಷ್ಠಿಯಲ್ಲಿದ್ದರು.

ಇಂದು ಕೆಆರ್ ಕ್ಷೇತ್ರದ ಶಾಸಕ ಟಿ.ಎಸ್.ಶ್ರೀವತ್ಸರಿಗೆ ಅಭಿನಂದನೆ



ಮೈಸೂರು,ಜೂ.2(ಪಿಎಂ)– ಮೈಸೂರು ನಗರ ಹಾಗೂ ಜಿಲ್ಲಾ ಬ್ರಾಹ್ಮಣ ಸಂಘ ಹಾಗೂ ಮೈಸೂರು ಜಿಲ್ಲಾ ವಿಪ್ರ ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಶನಿವಾರ (ಜೂ.3)ದಂದು ರಂದು ಕೆಆರ್ ಕ್ಷೇತ್ರದ ನೂತನ ಶಾಸಕ ಟಿ.ಎಸ್.ಶ್ರೀವತ್ಸ ಅವರಿಗೆ ಅಭಿನಂದನಾ ಸಮಾರಂಭ ಆಯೋಜಿಸಲಾಗಿದೆ ಎಂದು ಮೈಸೂರು ನಗರ ಹಾಗೂ ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರಿನ ಸರಸ್ವತಿಪುರಂನ ಸಾಹುಕಾರ್ ಚೆನ್ನಯ್ಯ ರಸ್ತೆಯ ಕೃಷ್ಣಧಾಮದಲ್ಲಿ ಸಂಜೆ 6.30ಕ್ಕೆ ಸಮಾರಂಭ ನಡೆಯಲಿದೆ. ಮುಖ್ಯ ಅತಿಥಿಯಾಗಿ ಎಂಐಟಿ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಡಾ.ಎಸ್.ಮುರಳಿ ಭಾಗವಹಿಸಲಿದ್ದಾರೆ ಎಂದು

ಮಾಜಿ ಸಚಿವ ಎಸ್.ಎ.ರಾಮದಾಸ್, ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ. ರಾಜೀವ್ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಶ್ರೀ ವೆಂಗೀಪುರ ಮಠದ ಶ್ರೀ ಇಳೈ ಆಳ್ವಾರ್ ಸ್ವಾಮೀಜಿ, ಬ್ರಾಹ್ಮಣ ಸಂಘದ ತಾಲೂಕು ಅಧ್ಯಕ್ಷ ಗೋಪಾಲ್‌ರಾವ್, ತುಳು ಶಿವಳ್ಳಿ ಬ್ರಾಹ್ಮಣ ಸಂಘದ ಅಧ್ಯಕ್ಷ ರವಿಶಾಸ್ತ್ರಿ, ವಿಪ್ರ ಮಹಿಳಾ ಸಂಘದ ಅಧ್ಯಕ್ಷೆ ಡಾ.ಲಕ್ಷ್ಮೀ, ಆರ್ಯಮಿತ್ರ ಟ್ರಸ್ಟ್‌ನ ಡಾ.ಯು.ಹರೀಶ್, ಬ್ರಾಹ್ಮಣ ಅಭಿವೃದ್ಧಿ ಮಂಡಳಿ ಮಾಜಿ ನಿರ್ದೇಶಕ ಎಂ.ಆರ್.ಬಾಲಕೃಷ್ಣ ಗೋಷ್ಠಿಯಲ್ಲಿದ್ದರು.

ಆದಾಯ ಮೀರಿ ಆಸ್ತಿ ಗಳಿಕೆ ಪ್ರಕರಣ: ಡಿಕೆಶಿಗೆ ಬಿಗ್ ರಿಲೀಫ್

ಮಧ್ಯಂತರ ತಡೆಯಾಜ್ಞೆ ವಿಸ್ತರಿಸಿದ ಹೈಕೋರ್ಟ್



ಬೆಂಗಳೂರು, ಜೂ.2– ಆದಾಯ ಮೀರಿ ಆಸ್ತಿ ಗಳಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯದ ಉಪ ಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರಿಗೆ ಹೈಕೋರ್ಟ್ ರಿಲೀಫ್ ನೀಡಿದೆ.

ಡಿ.ಕೆ.ಶಿವಕುಮಾರ್ ವಿರುದ್ಧದ ಸಿಬಿಐ ತನಿಖೆಗೆ ನೀಡಿದ್ದ ಮಧ್ಯಂತರ ತಡೆಯಾಜ್ಞೆಯನ್ನ ಹೈಕೋರ್ಟ್ ಏಕಸದಸ್ಯ ಪೀಠ ಮತ್ತೆ ವಿಸ್ತರಣೆ ಮಾಡಿ ಆದೇಶ ಹೊರಡಿಸಿದೆ.

ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ಡಿಕೆ ಶಿವಕುಮಾರ್ ವಿರುದ್ಧದ ಸಿಬಿಐ ತನಿಖೆಗೆ ಎರಡನೇ ಬಾರಿಗೆ ಹೈಕೋರ್ಟ್ ಮೇ ಅಂತ್ಯದವರೆಗೂ ತಡೆಯಾಜ್ಞೆ ನೀಡಿತ್ತು. ಇದೀಗ ಮತ್ತೆ ತಡೆಯಾಜ್ಞೆ ವಿಸ್ತರಿಸಿದ್ದು, ಈ ಮೂಲಕ ಡಿಕೆ ಶಿವಕುಮಾರ್ ಅವರಿಗೆ ನಿರಾಳ ಸಿಕ್ಕಂತಾಗಿದೆ.

ಭ್ರಷ್ಟಾಚಾರ ನಿಗ್ರಹ ಕಾಯ್ದೆ 1988ರ ಕಲಂ 13(2), 13(1)ಇ ಅಡಿಯಲ್ಲಿ ಸಿಬಿಐ 2020ರ ಅಕ್ಟೋಬರ್ 3ರಂದು ಕ್ರಿಮಿನಲ್ ಪ್ರಕರಣ ದಾಖಲಿಸಿತ್ತು. ಈ ಪ್ರಕರಣ ರದ್ದು ಕೋರಿ ಡಿಕೆ ಶಿವಕುಮಾರ್ ಅವರು ಹೈಕೋರ್ಟ್ ಮೆಟ್ಟಿಲೇರಿದ್ದರು. ಈ ಅರ್ಜಿ ವಿಚಾರಣೆ ನಡೆಸಿದ್ದ ಹೈಕೋರ್ಟ್, ತನಿಖೆಗೆ ಮಧ್ಯಂತರ ತಡೆ ತಡೆಯಾಜ್ಞೆ ನೀಡಿತ್ತು. ಇದೀಗ ತಡೆಯಾಜ್ಞೆ ಮತ್ತೆ ಮುಂದುವರೆದಿದೆ.

ವೋಲ್ವೋ ಬಸ್ ಡಿಕ್ಕಿ: ಬೈಕ್ ಸವಾರ ಸಾವು

ಮೈಸೂರು, ಜೂ.2(ಎಸ್‌ಬಿಡಿ)– ಕೆಎಸ್ಆರ್‌ಟಿಸಿ ವೋಲ್ವೋ ಬಸ್ ಡಿಕ್ಕಿ ಹೊಡೆದು ಬೈಕ್ ಸವಾರ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಮೈಸೂರಿನ ಶ್ರೀರಾಂಪುರದ ಬಳಿ ಶುಕ್ರವಾರ ಮಧ್ಯಾಹ್ನ ನಡೆದಿದೆ. ಶ್ರೀರಾಂಪುರದ ನಿವಾಸಿ ಶಿವರಾಜು(56) ಅಪಘಾತದಲ್ಲಿ ಮೃತಪಟ್ಟವರು. ಇವರು ಮೈಸೂರು ನಗರದಿಂದ ಶ್ರೀರಾಂಪುರದ ಕಡೆಗೆ ಮಧ್ಯಾಹ್ನ 3 ಗಂಟೆ ಸಮಯದಲ್ಲಿ ಬೈಕ್‌ನಲ್ಲಿ ತೆರಳುತ್ತಿದ್ದಾಗ, ಅಶ್ವಿನಿ ಕಲ್ಯಾಣಮಂಟಪದ ಬಳಿ ತಿರುವಿನಲ್ಲಿ ಹಿಂದಿನಿಂದ ಮೈಸೂರು–ಸರಗೂರು ಮಾರ್ಗದ ವೋಲ್ವೋ ಬಸ್ ಡಿಕ್ಕಿ ಹೊಡೆದಿದೆ. ಇದರಿಂದ ಬೈಕ್‌ನಿಂದ ನೆಲಕ್ಕುರುಳಿದ ಶಿವರಾಜು ತಲೆ ಮೇಲೆ ಬಸ್ ಚಕ್ರ ಹರಿದು ಅವರು ಸ್ಥಳದಲ್ಲೇ ಸಾವನ್ನಪ್ಪಿದರು ಎಂದು ಪೊಲೀಸರು ತಿಳಿಸಿದ್ದಾರೆ.

ನಗರ ಅಪರಾಧ ಮತ್ತು ಸಂಚಾರ ವಿಭಾಗದ ಡಿಸಿಪಿ ಜಾಹ್ನವಿ, ಸಂಚಾರ ವಿಭಾಗದ ಎಸಿಪಿ ಪರಶುರಾಮಪ್ಪ, ಕುವೆಂಪು ನಗರ ಸಂಚಾರ ಠಾಣೆಯ ಇನ್‌ಸ್ಪೆಕ್ಟರ್ ಚಿಕ್ಕರಾಜ ಶೆಟ್ಟಿ, ಸಬ್‌ಇನ್‌ಸ್ಪೆಕ್ಟರ್ ಜಯಪ್ರಕಾಶ್ ಹಾಗೂ ಸಿಬ್ಬಂದಿ ಸ್ಥಳ ಪರಿಶೀಲನೆ ನಡೆಸಿದರು. ಬಳಿಕ ಮೃತದೇಹವನ್ನು ಮೈಸೂರು ವೈದ್ಯಕೀಯ ಮತ್ತು ಸಂಶೋಧನಾ ಸಂಸ್ಥೆ ಶವಾಗಾರಕ್ಕೆ ಸಾಗಿಸಿ, ವೈದ್ಯಕೀಯ ಪರೀಕ್ಷೆ ನಂತರ ವಾರಸುದಾರರಿಗೆ ಹಸ್ತಾಂತರಿಸಲಾಯಿತು. ಈ ಸಂಬಂಧ ಕುವೆಂಪುನಗರ ಸಂಚಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಗ್ಯಾರಂಟಿ ಯೋಜನೆಗಳಿಂದ ಲಾಭವೂ ಗ್ಯಾರಂಟಿ, ನಷ್ಟವೂ ಗ್ಯಾರಂಟಿ

ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರದ ಯೋಜನೆಗಳ ಬಗ್ಗೆ ಜನಾಭಿಪ್ರಾಯ

ಮೈಸೂರು,ಜೂ. 2(ಸಿಎನ್/ಎಸ್‌ಪಿಎನ್)–ಕಾಂಗ್ರೆಸ್ ಸರ್ಕಾರದ ಮಹತ್ವದ 5 ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದರು. ಐದು ಗ್ಯಾರಂಟಿ ಯೋಜನೆಗಳನ್ನು ಹಂತ ಹಂತವಾಗಿ ಜಾರಿಗೆ ತರಲಾಗುವುದು ಎಂದು ಮುಖ್ಯಮಂತ್ರಿ ಪ್ರತಿಕ್ರಿಯೆ ನೀಡಿದ್ದಾರೆ. ಸಾರ್ವಜನಿಕರು ಕೂಡ ಈ ಬಗ್ಗೆ ಕಾತರದಿಂದ ಕಾಯುತ್ತಿದ್ದಾರೆ. ಗ್ಯಾರಂಟಿ ಯೋಜನೆಗಳ ಬಗ್ಗೆ ಜನರು ಏನು ಹೇಳಿದ್ದಾರೆ ನೋಡಿ. ಈ ಬಗ್ಗೆ 'ಮೈಸೂರು ಮಿತ್ರ'ನೊಂದಿಗೆ ಸಾರ್ವಜನಿಕರು, ವಿದ್ಯಾರ್ಥಿಗಳು ಮಿಶ್ರ ಪ್ರತಿಕ್ರಿಯೆ ವ್ಯಕ್ತಪಡಿಸಿದ್ದಾರೆ. ಕೆಲವರು ಮಹಿಳೆಯರಿಗೇ ಎಲ್ಲಾ ಯೋಜನೆಗಳನ್ನು ನೀಡುವುದಾದರೇ ಪುರುಷರಿಗೆ ಏಕಿಲ್ಲ ಎಂದು ಪ್ರಶ್ನಿಸಿದರೆ, ಇನ್ನು ಕೆಲವರು ಸರ್ಕಾರಕ್ಕೆ ಇಷ್ಟೊಂದು ಹಣ ಹೊಂದಿಸುವ ಸಾಮರ್ಥ್ಯವಿದೆಯಾ ಎಂದು ಪ್ರಶ್ನಿಸಿದ್ದಾರೆ. 5 ಗ್ಯಾರಂಟಿ ಯೋಜನೆಯಿಂದ ರಾಜ್ಯ ದಿವಾಳಿಯಾಗದೇ ಇದ್ದರೆ ಸಾಕು, ಉಚಿತ ಬಸ್ ಪ್ರಯಾಣ ಯೋಜನೆ ಇಷ್ಟವಾಗಲಿಲ್ಲ ಎಂದು ಕೆಲ ವಿದ್ಯಾರ್ಥಿನಿಯರು ನೇರವಾಗಿ ಹೇಳಿದರು. ಇನ್ನು ಉಚಿತ ಸಾರಿಗೆ ವ್ಯವಸ್ಥೆ ಹಲವರಿಗೆ ಅನುಕೂಲವಾಗಲಿದೆ ಎಂದು ಹಲವರು ಅಭಿಪ್ರಾಯಪಟ್ಟರು.



ಕರ್ನಾಟಕದಲ್ಲಿ ಬಡವರ ಪರ ಸರ್ಕಾರ ಬಂದಿದೆ. 5 ಗ್ಯಾರಂಟಿ ಯೋಜನೆ ದೇಶದಲ್ಲೇ ಸಾಕಷ್ಟು ಸದ್ದು ಮಾಡುತ್ತಿದ್ದು, ನಮ್ಮ ಕೇರಳ ರಾಜ್ಯದಲ್ಲೂ ಈ ರೀತಿ ಜನಸ್ನೇಹಿ ಯೋಜನೆಗಳ ಅಗತ್ಯವಿದೆ. ಇನ್ನು ದೆಹಲಿಯ ಅರವಿಂದ್ ಕೇಜ್ರಿವಾಲ್ ಸರ್ಕಾರದ ಮಾದರಿ ಇಲ್ಲಿ ಅನುಸರಿಸುತ್ತಿದ್ದಾರೆ. ಕೇರಳದಿಂದ ಕರ್ನಾಟಕಕ್ಕೆ ವಿದ್ಯಾಭ್ಯಾಸ ನಿಮಿತ್ತ ಅನೇಕ ವಿದ್ಯಾರ್ಥಿಗಳು ಬಂದಿದ್ದು, ಅವರಿಗೂ ರಾಜ್ಯದಲ್ಲಿ ಉಚಿತ ಬಸ್ ಪ್ರಯಾಣ ಯೋಜನೆ ಬಗ್ಗೆ ಮಾಹಿತಿ ನೀಡಿದ್ದರೆ ಸಹಾಯವಾಗುತ್ತಿತ್ತು. ಮುಂದಿನ ದಿನಗಳಲ್ಲಿ ಸಿದ್ದರಾಮಯ್ಯ ಸರ್ಕಾರ ಉತ್ತಮ ಆಡಳಿತ ನೀಡಲಿದೆ.

–ಸಾಜಿ, ಪ್ರಯಾಣಿಕ, ಕೇರಳಿಗ



ಮಹಿಳೆಯರಿಗೆ ಉಚಿತ ಯೋಜನೆ ನೀಡಿದ್ದಾರೆ ಅದೇ ರೀತಿ ಪುರುಷರಿಗೂ ಒಂದೊಳ್ಳೆ ಯೋಜನೆ ಜಾರಿಗೊಳಿಸಿದ್ದರೆ ಚೆನ್ನಾಗಿರುತ್ತಿತ್ತು ಕನಿಷ್ಠ ಪಕ್ಷ ಹಿರಿಯ ನಾಗರಿಕರಿಗೆ ಬಸ್ ಟಿಕೆಟ್ ಉಚಿತವಾಗಿ ನೀಡಿದ್ದರೆ, ನಮಗೆ ತುಂಬಾ ಸಹಾಯವಾಗುತ್ತಿತ್ತು. ಈಗ ಬಸ್ ಟಿಕೆಟ್ ದರವನ್ನು ಮುಕ್ಕಾಲು ಭಾಗ ಪಾವತಿ ಮಾಡುತ್ತಿದ್ದೇವೆ, ಉಳಿದ ಕಾಲು ಭಾಗವನ್ನು ತೆಗೆದು ಉಚಿತ ಸಾರಿಗೆ ವ್ಯವಸ್ಥೆ ಮಾಡಿದ್ದರೇ ಸರಿಯಿತ್ತು, ತಾರತಮ್ಯ ಮಾಡಿದ್ದು ಸರಿಯಿಲ್ಲ.

–ಚಂದ್ರಪ್ಪ, ಹಿರಿಯ ನಾಗರಿಕರು.

ಬೆಲೆ ಏರಿಕೆಯಿಂದ ಬಳಲಿದ್ದ ನಮಗೆ 5 ಗ್ಯಾರಂಟಿ ಯೋಜನೆಗಳು ಭರವಸೆ ಮೂಡಿಸಿವೆ. ನಮ್ಮಂಥ ಬಡ ಕೂಲಿ ಕಾರ್ಮಿಕ ವರ್ಗದವರಿಗೆ, ಸಿದ್ದರಾಮಯ್ಯ ಸರ್ಕಾರ ಉತ್ತಮ ಯೋಜನೆಗಳನ್ನೇ ನೀಡಿದೆ. ಇದರಿಂದ ಯಾರಿಗೂ ತೊಂದರೆ ಆಗಲ್ಲ. ಬಡವರ ದನಿಯಾಗಿ ನಿಲ್ಲುವಂಥ ಸರ್ಕಾರ ಬಂದಿದ್ದು, ನಮ್ಮ ಭಾಗ್ಯವೇ ಸರಿ ಎಂದು ಹೇಳಬಹುದು.

–ಮಂಗಳ, ಕೂಲಿ ಕಾರ್ಮಿಕರು



ಐದು ಗ್ಯಾರಂಟಿ ಯೋಜನೆಗಳನ್ನು ತಳಮಟ್ಟದಲ್ಲಿ ಅನುಷ್ಠಾನಗೊಳಿಸಬೇಕು. 'ಮನೆ ಯಜಮಾನಿ' ಯಾರು ಎಂಬುದರ ಬಗ್ಗೆ ಸಾಕಷ್ಟು ಗೊಂದಲ ಇದೆ. ಕುಟುಂಬದಲ್ಲಿ ಮನೆ ಯಜಮಾನಿ ಯಾರು ಎಂಬುದನ್ನು ಗುರುತಿಸಿ, ಗೃಹಲಕ್ಷ್ಮಿ ಯೋಜನೆ ಜಾರಿಗೊಳಿಸಬೇಕು. ಅಲ್ಲದೆ, ಕೆಎಸ್ಆರ್‌ಟಿಸಿ ಬಸ್‌ನಲ್ಲಿ ಎಲ್ಲಾ ಮಹಿಳೆಯರಿಗೂ ಉಚಿತ ಪ್ರಯಾಣಕ್ಕೆ ಅವಕಾಶ ಮಾಡಿಕೊಟ್ಟಿರುವುದು ದುಡಿಯುವ ಮಹಿಳಾ ವರ್ಗಕ್ಕೆ ಉತ್ತಮ ಅವಕಾಶ. ಇದು ಎಷ್ಟು ದಿನ ಜಾರಿಯಲ್ಲಿರುತ್ತದೆ ಎಂಬುದು ಯಕ್ಷ ಪ್ರಶ್ನೆ.

–ಭಾಗ್ಯಮ್ಮ, ಮಹಿಳಾ ಚಿಂತಕಿ, ಸರಗೂರು.

ರಾಜ್ಯ ಸರ್ಕಾರ ಮಹಿಳೆಯರಿಗೆ ಮಾತ್ರ ಉಚಿತ ಘೋಷಣೆ ಮಾಡಿದೆ. ಇದರಿಂದ ಇತರೆ ಫಲಾನುಭವಿಗಳು ಉಚಿತ ಯೋಜನೆಗಳ ಫಲಾನುಭವಿಗಳನ್ನು ಬೇರೆ ರೀತಿ ಪರಿಗಣಿಸುತ್ತಾರೆ. ಇದರ ಬದಲು ಕಷ್ಟಪಟ್ಟು ದುಡಿಯುತ್ತಿರುವ ಮಹಿಳಾ ಕಾರ್ಮಿಕರಿಗೆ ಸವಲತ್ತುಗಳನ್ನು ಘೋಷಣೆ ಮಾಡಿದ್ದರೆ ಚೆನ್ನಾಗಿರುತ್ತಿತ್ತು. ಅಲ್ಲದೆ, ಅಕ್ಷರ ದಾಸೋಹ ಯೋಜನೆಯಡಿ ಕಡಿಮೆ ಸಂಬಳಕ್ಕೆ ಕೆಲಸ ಮಾಡುತ್ತಿರುವ ಮಹಿಳಾ ವರ್ಗದ ಸಂಬಳ ಹೆಚ್ಚಳ ಮಾಡಬಹುದಿತ್ತು.

ಪ್ರೇಮಾ, ಮಹಿಳಾ ಹೋರಾಟಗಾರ್ತಿ, ಜಿಲ್ಲಾ ಅಕ್ಷರ ದಾಸೋಹ



ಮೈಸೂರಿನಲ್ಲಿ ಆಂಧ್ರ, ತಮಿಳುನಾಡು, ಕೇರಳ, ಉತ್ತರ ಭಾರತದ ನಿವಾಸಿಗಳೂ ಇದ್ದಾರೆ ಅವರಿಗೂ ಉಚಿತ ಸಾರಿಗೆ ಯೋಜನೆ ಅನ್ವಯವಾಗುತ್ತಾ ಎಂಬ ಬಗ್ಗೆ ಸರ್ಕಾರದಿಂದ ಸ್ಪಷ್ಟ ನಿರ್ದೇಶನ ಬಂದ ಮೇಲೆ ಅದರ ಬಗ್ಗೆ ಮಾಹಿತಿ ನೀಡುತ್ತೇವೆ. ನಮ್ಮ ಘಟಕದಲ್ಲಿ 1070 ಕೆಎಸ್ಆರ್‌ಟಿಸಿ ಬಸ್‌ಗಳಿವೆ ಈ ಪೈಕಿ ಯಾವ ರೀತಿ ಅಳವಡಿಸಿಕೊಳ್ಳಬೇಕು ಎಂದು ಮೇಲಧಿಕಾರಿಗಳಿಂದ ಮಾರ್ಗಸೂಚಿ ಬಂದ ಕೂಡಲೇ ಅಗತ್ಯ ಕ್ರಮವಹಿಸಲಿದ್ದೇವೆ.

–ಹೇಮಂತ್ ಕುಮಾರ್, ಕೆಎಸ್ಆರ್‌ಟಿಸಿ ವಿಭಾಗೀಯ ಸಂಚಲನಾಧಿಕಾರಿ



ನಮ್ಮ ತಂದೆ ನಿರ್ವಾಹಕರು, ಅವರು ಹೇಳುವ ಪ್ರಕಾರ ಇಂತಿಷ್ಟು ಟ್ರಿಪ್ ಮುಗಿಸಿ ಹಣ ಸಂಗ್ರಹಿಸಿ ಡಿಪೋಗೆ ಕಟ್ಟಬೇಕಿತ್ತು. ಆದರೆ ಈಗ ಉಚಿತ ಸಾರಿಗೆ ಜಾರಿಯಿಂದ ಅವರ ಸಂಬಳ ಕಡಿತ ಆಗುವ ಆತಂಕವಿದೆ. 1 ವರ್ಷದ ಅವಧಿಗೆ ಉಚಿತ ಯೋಜನೆ ಮಾಡಿದ್ದರೆ ಸರಿಯಿತ್ತು, ಇದನ್ನು ಮುಂದುವರಿಸಿಕೊಂಡು ಹೋಗಬಾರದು. ರಾಜ್ಯದ ಆರ್ಥಿಕ ಪರಿಸ್ಥಿತಿ ಹದಗೆಟ್ಟು ರಾಜ್ಯ ದಿವಾಳಿಯತ್ತ ಸಾಗುವ ಮುನ್ನ ಅಗತ್ಯ ಕ್ರಮ ವಹಿಸಬೇಕು.

–ಚಂದ್ರು, ಪ್ರಥಮ ವರ್ಷದ ಪದವೀಧರ ವಿದ್ಯಾರ್ಥಿ, ಶಾರದಾ ವಿಲಾಸ ಕಾಲೇಜು



ಕಾಂಗ್ರೆಸ್ ಸರ್ಕಾರ ಘೋಷಿಸಿರುವ ಗ್ಯಾರಂಟಿ ಯೋಜನೆಗಳು ನಮ್ಮ ಸಮಾಜಕ್ಕೆ ಹೊಸ ಭರವಸೆಗಳಂತೆ ಕಾಣುತ್ತಿವೆ. ಆದರೆ, ಯಾವುದೇ ದುಡಿಯುವ ವರ್ಗಕ್ಕೆ ಆಹಾರ, ಶಿಕ್ಷಣ, ಆರೋಗ್ಯ, ಸಾರಿಗೆ, ಕುಟುಂಬ ಆರ್ಥಿಕ ಭದ್ರತೆ ನೀಡಿ, ಸುಭದ್ರಗೊಳಿಸುವ ಜವಾಬ್ದಾರಿ ಸರ್ಕಾರದ ಆದ್ಯ ಕರ್ತವ್ಯವಾಗಬೇಕು. ಆದರೆ, 1917ರಲ್ಲಿ ರಷ್ಯಾದಲ್ಲಿ ಸಮಾಜವಾದಿ ಕಾಂತ್ರಿಯಾದಾಗ ಗ್ಯಾರಂಟಿ ಯೋಜನೆಗಳು ಜಾರಿಗೊಂಡಿದ್ದವು. ಅಂದರೆ, ಬೆಲೆಯೇರಿಕೆಯಿಂದ ತತ್ತರಿಸಿದ್ದ ಸಂದರ್ಭದಲ್ಲಿ ಮಧ್ಯಮ, ಬಡ ಕುಟುಂಬಗಳು ಈ ಯೋಜನೆಗಳ ಜಾರಿಯಿಂದ ತಮ್ಮತಮ್ಮ ಕುಟುಂಬದ ರಕ್ಷಣೆಗೆ ಅನುಕೂಲವಾಗುತ್ತವೆ.

ಸಂದ್ಯಾ, ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘದ ರಾಜ್ಯ ಕಾರ್ಯದರ್ಶಿ

ಕೆಎಸ್ಆರ್‌ಟಿಸಿ ಬಸ್‌ಗಳಲ್ಲಿ ರಾಜ್ಯಾದ್ಯಂತ ಮಹಿಳೆಯರಿಗೆ ಉಚಿತ ಪ್ರಯಾಣಕ್ಕೆ ಅವಕಾಶ ಮಾಡಿಕೊಟ್ಟಿರುವುದು ಉತ್ತಮ ಬೆಳವಣಿಗೆ. ಸಾರಿಗೆ ಬಸ್‌ಗಳಲ್ಲಿ ಶೇ.60 ರಷ್ಟು ಮಹಿಳಾ ಪ್ರಯಾಣಿಕರು ಟಿಕೆಟ್ ಪಡೆದು ಪ್ರಯಾಣಿಸುತ್ತಿದ್ದರು. ಅದರಲ್ಲೂ ಬಿಎಂಟಿಸಿ ಹಾಗೂ ಗ್ರಾಮೀಣ ಸಾರಿಗೆಯಲ್ಲಿ ಮಹಿಳಾ ಕಾರ್ಮಿಕರು ಹೆಚ್ಚಾಗಿ ಅವಲಂಬಿಸಿದ್ದರು. ಇದೀಗ ಈ ವರ್ಗಕ್ಕೆ ಉಚಿತ ಪ್ರಯಾಣಕ್ಕೆ ಸಾರಿಗೆ ಬಸ್‌ಗಳಲ್ಲಿ ಅವಕಾಶ ಮಾಡಿಕೊಡುವುದರಿಂದ ಕೆಎಸ್ಆರ್‌ಟಿಸಿ ಆದಾಯದ ಮೂಲವೇ ಕುಗ್ಗುತ್ತಾಗುತ್ತದೆ ಅದು ಎಷ್ಟು ಎಂಬುದು ಜೂ.12ರಂದು ಬಹಿರಂಗಗೊಳ್ಳುತ್ತದೆ. ರಾಜಕೀಯವಾಗಿ ಆಡಳಿತಾರೂಢ ಕಾಂಗ್ರೆಸ್ ಪಕ್ಷಕ್ಕೆ ಅನುಕೂಲವಾದರೂ ಭವಿಷ್ಯ ದೃಷ್ಟಿಯಿಂದ ಕೆಎಸ್ಆರ್‌ಟಿಸಿ ಏಳಿಗೆಗೆ ಇದು ಉತ್ತಮ ಬೆಳವಣಿಗೆಯಲ್ಲ

– ಮಹಾದೇವ ಸ್ವಾಮಿ, ಕೆಎಸ್ಆರ್‌ಟಿಸಿ ನಿವೃತ್ತ ಸಿಬ್ಬಂದಿ

ಒಂದು ಕಡೆ ಸಂತಸವಾದರೇ ಇನ್ನೊಂದೆಡೆ ಆತಂಕ ಕೂಡ ಇದೆ ಸಾರ್, ಇಷ್ಟೊಂದು ಯೋಜನೆಗಳನ್ನು ಉಚಿತವಾಗಿ ನೀಡುವುದರಿಂದ, ಮುಂದಿನ ದಿನಗಳಲ್ಲಿ ಸರ್ಕಾರದ ಖಜಾನೆ ಖಾಲಿಯಾಗಿ, ಎಲ್ಲಿ ಜನಸಾಮಾನ್ಯರ ಮೇಲೆ ತೆರಿಗೆ ರೂಪದಲ್ಲಿ ಹೇರಿ ಬಿಡುತ್ತಾರೋ.


–ಕುಸುಮಾ ಕೀರ್ತಿರಾಜ್, 2ನೇ ವರ್ಷದ ಪದವೀಧರ ವಿದ್ಯಾರ್ಥಿನಿ, ವಿದ್ಯಾವರ್ಧಕ ಕಾಲೇಜು.

ಉಚಿತ ಯೋಜನೆ ವಿದ್ಯಾರ್ಥಿಗಳನ್ನು ಅವಮಾನಿಸುತ್ತಿದೆ. ಅದರ ಬದಲು ಪದವೀಧರ ವಿದ್ಯಾರ್ಥಿಗಳಿಗೆ ಉದ್ಯೋಗ ಭಾಗ್ಯ ನೀಡಿದ್ದರೆ ಅವರು ಜೀವನ ಕಟ್ಟಿಕೊಳ್ಳಲು ಸಹಕಾರಿಯಾಗುತ್ತಿತ್ತು. ಡಿಪ್ಲೊಮಾ ಮುಗಿಸಿರುವವರಿಗೆ ಸರ್ಕಾರದಿಂದ ಉದ್ಯೋಗ ಸೌಲಭ್ಯ ಒದಗಿಸಬೇಕು. ಅದನ್ನು ಬಿಟ್ಟು 3000 ಸಾವಿರ, 1500 ಸಾವಿರ ರೂ. ಕೊಟ್ಟು ಅವರನ್ನು ಅವಮಾನಿಸುವ ಕೆಲಸ ಮಾಡಬಾರದು. ಬಿಟ್ಟಿ ಭಾಗ್ಯಗಳು ನಮಗೆ ಮುಳುವಾಗುತ್ತವೆ.

–ಕಾಂಚನಾ.ವಿ.ಸಿ., ಬಿ.ಸಿ.ಎ ವಿದ್ಯಾರ್ಥಿನಿ

ರಾಜ್ಯ ಸರ್ಕಾರ ಮಹಿಳೆಯರಿಗೆ ಐದು ಗ್ಯಾರಂಟಿ ಯೋಜನೆಗಳು ಜಾರಿ ಮಾಡಿರುವುದು ಉತ್ತಮ ಹೆಜ್ಜೆ. ಇದರ ಎಫೆಕ್ಟ್ ಆಟೋ ಚಾಲಕರಿಗೂ ತಟ್ಟಲಿದೆ. ಆಟೋದಲ್ಲಿ ಹಿರಿಯ ಮಹಿಳೆಯರು, ಮಧ್ಯಮ ವರ್ಗದವರು ಹೆಚ್ಚಾಗಿ ಆಟೋ ಮೇಲೆ ಅವಲಂಬಿತರಾಗಿದ್ದರು. ಬಸ್‌ಗಳಲ್ಲಿ ಉಚಿತ ಪ್ರಯಾಣಕ್ಕೆ ಅವಕಾಶ ದೊರೆತರೆ ಆಟೋದಲ್ಲಿ ಪ್ರಯಾಣಿಸುವ ಮಹಿಳಾ ಪ್ರಯಾಣಿಕರ ಸಂಖ್ಯೆ ಕಡಿಮೆಯಾಗುವ ಸಾಧ್ಯತೆ ಇದೆ. ಇದರಿಂದ ಇದರಿಂದ ದಿನನಿತ್ಯ ಸಂಪಾದನೆಗೆ ಕೊಕ್ಕೆ ಬೀಳಬಹುದು.

– ಮಹದೇವ್, ಆಟೋ ಚಾಲಕ



ಎಂಸಿಡಿಸಿಸಿ ಬ್ಯಾಂಕ್ ಅಧ್ಯಕ್ಷರೂ ಆದ ಹುಣಸೂರು ವಿಧಾನಸಭಾ ಕ್ಷೇತ್ರದ ನೂತನ ಶಾಸಕ ಜಿ.ಡಿ.ಹರೀಶ್ ಗೌಡರನ್ನು ಬ್ಯಾಂಕ್ ವತಿಯಿಂದ ಆತ್ಮೀಯವಾಗಿ ಅಭಿನಂದಿಸಲಾಯಿತು. ಬ್ಯಾಂಕ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಿ.ಸಿ.ಜನಾರ್ಧನ್, ಉಪಾಧ್ಯಕ್ಷ ಎಂ.ಪಿ.ಸುನೀಲ್, ನಿರ್ದೇಶಕರಾದ ಬಿ.ಎನ್.ಸದಾನಂದ. ಸಿ.ಎನ್.ರವಿ. ಹೆಚ್.ಸುಬ್ಬಯ್ಯ, ಕೆ.ಎಸ್.ಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

ಐಟಿಐ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮೈಸೂರು, ಜೂ.2– ಎಸ್‌ಎಸ್‌ಎಲ್‌ಸಿ ಪಾಸಾದ ವಿದ್ಯಾರ್ಥಿಗಳಿಗೆ ತಗಡೂರಿನಲ್ಲಿರುವ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ 2023–24ನೇ ಸಾಲಿಗೆ ಲಭ್ಯವಿರುವ ವಿವಿಧ ವೃತ್ತಿ ಕೋರ್ಸ್‌ಗಳ ಪ್ರವೇಶಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಮೇ 24 ರಿಂದ ಜೂ.9 ರವರೆಗೆ ಆನ್‌ಲೈನ್ ವೆಬ್‌ಸೈಟ್ www.cite.karnataka.gov.in ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಮಾಹಿತಿಗಾಗಿ ಕಚೇರಿಯ ದೂ.ಸಂ.08221–220200 ಅನ್ನು ಸಂಪರ್ಕಿಸಬಹುದು ಎಂದು ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಿರಿಯಾಪಟ್ಟಣ ಮತ್ತು ಬೆಟ್ಟದಪುರದಲ್ಲಿರುವ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ 2023–24ನೇ ಸಾಲಿಗೆ ಲಭ್ಯವಿರುವ ವಿವಿಧ ವೃತ್ತಿ ಕೋರ್ಸ್‌ಗಳ ಪ್ರವೇಶಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಮೇ 24 ರಿಂದ ಜೂ.7 ರವರೆಗೆ ಆನ್‌ಲೈನ್ ವೆಬ್‌ಸೈಟ್ www.cite.karnataka.gov.in ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಮಾಹಿತಿಗಾಗಿ ಕಚೇರಿಯ ದೂ.ಸಂ.08223–297565 ಅನ್ನು ಸಂಪರ್ಕಿಸಬಹುದು ಎಂದು ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗ್ಯಾರಂಟಿಗಳ ಜಾರಿ ಘೋಷಣೆ ಹಿನ್ನೆಲೆ; ಮೈಸೂರಲ್ಲಿ ಕಾಂಗ್ರೆಸ್ ಸಂಭ್ರಮಾಚರಣೆ



ಮೈಸೂರು, ಜೂ.2(ಎಸ್‌ಬಿಡಿ)– ಕಾಂಗ್ರೆಸ್ ಸರ್ಕಾರ ಐದು ಗ್ಯಾರಂಟಿಗಳ ಜಾರಿ ಘೋಷಿಸಿದ ಬೆನ್ನಲ್ಲೇ ಮೈಸೂರಿನಲ್ಲಿ ಪಕ್ಷದ ಮುಖಂಡರು ಸಂಭ್ರಮಾಚರಿಸಿದರು.

ನಗರದ ಅಗ್ರಹಾರ ವೃತ್ತದಲ್ಲಿ ಜಮಾಯಿಸಿದ ಕಾಂಗ್ರೆಸ್ ಮುಖಂಡರು ಹಾಗೂ ಸಿದ್ದರಾಮಯ್ಯನವರ ಅಭಿಮಾನಿಗಳು, ಸಾರ್ವಜನಿಕರಿಗೆ ಸಿಹಿ ಹಂಚಿ ಕಾಂಗ್ರೆಸ್ ಸರ್ಕಾರಕ್ಕೆ ಜೈಕಾರ ಹಾಕಿ ಸಂಭ್ರಮಿಸಿದರು.

ಈ ವೇಳೆ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕ್ ಉಪಾಧ್ಯಕ್ಷ ಬಸವರಾಜ್ ಬಸಪ್ಪ ಮಾತನಾಡಿ, ಚುನಾವಣಾ ಪೂರ್ವದಲ್ಲಿ ಕಾಂಗ್ರೆಸ್ ಘೋಷಿಸಿದ್ದ ಐದು ಮಹತ್ವದ ಗ್ಯಾರಂಟಿಗಳ ಅನುಷ್ಠಾನದ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸ್ಪಷ್ಟವಾಗಿ ವಿವರಿಸಿದ್ದಾರೆ. ಕಾಂಗ್ರೆಸ್ ನುಡಿದಂತೆ ನಡೆದಿದೆ. ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರ್ಕಾರ ಜನಪರ ಬದ್ಧತೆ ಮೆರೆಯುವ ಮೂಲಕ ವಿರೋಧಿಗಳಿಗೆ ತಕ್ಕ ಉತ್ತರ ನೀಡಿದೆ ಎಂದರು.

ಕಾಂಗ್ರೆಸ್ ಗ್ಯಾರಂಟಿ ಯೋಜನೆಗಳ ಬಗ್ಗೆ ಬಿಜೆಪಿ ನಾಯಕರು ಲಘುವಾಗಿ ಮಾತನಾಡಿದ್ದರು. ಇದಕ್ಕೆ ಆರ್ಥಿಕ ಸಂಪನ್ಮೂಲ ಎಲ್ಲಿಂದ ಒದಗಿಸುತ್ತಾರೆಂದು ಮೂಗು ಮುರಿದಿದ್ದರು. ಈ ಯೋಜನೆಗಳನ್ನು ಜಾರಿ ಮಾಡಲು ಸಾಧ್ಯವೇ ಇಲ್ಲ ಎಂದು ತಾವೇ ನಿರ್ಧರಿಸಿಕೊಂಡು ಪ್ರತಿಭಟನೆ ನಡೆಸಲು ಸಿದ್ಧತೆ ಮಾಡಿಕೊಂಡಿದ್ದರು. ಆದರೆ ಅವರ ಲೆಕ್ಕಾಚಾರವೆಲ್ಲಾ ತಲೆಕೆಳಗಾಗಿದೆ. ಸಿದ್ದರಾಮಯ್ಯನವರು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಘೋಷಿಸಿದ್ದು ಪ್ರತಿಪಕ್ಷಗಳಿಗೆ ಆಘಾತವಾಗಿದೆ ಎಂದು ಹೇಳಿದರು.

ಕಾಂಗ್ರೆಸ್ 2013ರ ಚುನಾವಣೆಯಲ್ಲಿ ಘೋಷಿಸಿದ್ದ ಕಾರ್ಯಕ್ರಮಗಳನ್ನು ಸಿದ್ದರಾಮಯ್ಯನವರ ನೇತೃತ್ವದ ಸರ್ಕಾರ ಈಡೇರಿಸಿತ್ತು. ಈಗಲೂ 5 ಗ್ಯಾರಂಟಿಗಳ ಜಾರಿ ಮೂಲಕ ನುಡಿದಂತೆ ನಡೆದಿದ್ದಾರೆ. 13 ಬಜೆಟ್ ಮಂಡಿಸಿ ಕೆಲವೇ ದಿನಗಳಲ್ಲಿ 14ನೇ ಬಜೆಟ್ ಮಂಡಿಸಲಿರುವ ಸಿದ್ದರಾಮಯ್ಯನವರಿಗೆ ಆಡಳಿತದ ಅನುಭವ ಅಗಾಧವಾಗಿದೆ. ಎಲ್ಲಾ ಯೋಜನೆಗಳನ್ನೂ ಸಮರ್ಪಕವಾಗಿ ಅನುಷ್ಠಾನಕ್ಕೆ ತರಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕ್ ಅಧ್ಯಕ್ಷ ಪ್ರತಿಧ್ವನಿ ಪ್ರಸಾದ್, ಮುಖಂಡರಾದ ಮಾದಾಪುರ ಲೋಕೇಶ್ ಕುಮಾರ್, ಜೆ.ಜೆ.ಆನಂದ್, ಬಸವಣ್ಣ, ತೀರ್ಥಕುಮಾರ್, ಶಿವರಾಜೇಗೌಡ, ಕೃಷ್ಣ, ಸಿದ್ದಪ್ಪಾಜಿ ಮತ್ತಿತರರು ಸಂಭ್ರಮಾಚರಣೆಯಲ್ಲಿ ಭಾಗವಹಿಸಿದ್ದರು.

ನಟ, ನಿರ್ದೇಶಕ ನಿತಿನ್ ಗೋಪಿ ನಿಧನ



ಬೆಂಗಳೂರು, ಜೂ.2– ಬಾಲ ನಟರಾಗಿ ಸಾಕಷ್ಟು ಸಿನಿಮಾಗಳಲ್ಲಿ ನಟಿಸಿದ್ದ ಹಾಗೂ ಇತ್ತೀಚೆಗೆ ಹಲವು ಧಾರಾವಾಹಿಗಳನ್ನು ನಿರ್ದೇಶನ ಮಾಡಿದ್ದ ನಿತಿನ್ ಗೋಪಿ ಹೃದಯಾಘಾತದಿಂದ ನಿಧನರಾದರು. ಸಾಹಸ ಸಿಂಹ ವಿಷ್ಣುವರ್ಧನ್ ನಟನೆಯ 'ಹಲೋ ಡ್ಯಾಡಿ' ಸೇರಿದಂತೆ ಸಾಕಷ್ಟು ಸಿನಿಮಾಗಳಲ್ಲಿ ಇವರು ಬಾಲನಟರಾಗಿ ಅಭಿನಯಿಸಿದ್ದರು. ಅದರಲ್ಲೂ 'ಶಾಲೆಗೆ ಈ ದಿನ ರಜಾ' ಹಾಡಿನ ಮೂಲಕ ಅಸಂಖ್ಯಾತ ಅಭಿಮಾನಿಗಳ ಹೃದಯದಲ್ಲಿ ನೆಲೆಯೂರಿದ್ದರು.

ನಿತಿನ್ ಗೋಪಿ ಬೆಂಗಳೂರಿನ ಇಟ್ಟುಮಡುವಿನ ಅಪಾರ್ಟ್‌ಮೆಂಟ್‌ನಲ್ಲಿ ವಾಸವಿದ್ದರು. ಬೆಳಗ್ಗೆ ನಾಲ್ಕು ಗಂಟೆಗೆ ಅವರಿಗೆ ಹೃದಯಾಘಾತವಾಗಿತ್ತು. ಕೂಡಲೇ ಅವರನ್ನು ಆಸ್ಪತ್ರೆಗೆ ದಾಖಲಿಸುವ ಪ್ರಯತ್ನ ಮಾಡಿತ್ತು ಅವರ ಕುಟುಂಬ. ಆಸ್ಪತ್ರೆಗೆ ಕರೆದೊಯ್ಯುವ ಮಾರ್ಗಮಧ್ಯೆಯೇ ಕೊನೆಯುಸಿರೆಳೆದಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಚಿರಬಾಂಧವ್ಯ, ನಿಶಬ್ಧ, ಕೆರಳಿದ ಕೇಸರಿ ಸೇರಿದಂತೆ ಹಲವು ಚಿತ್ರಗಳಲ್ಲಿ ನಿತಿನ್ ಬಾಲಕಲಾವಿದರಾಗಿ ನಟಿಸಿದ್ದರು. ಶ್ರುತಿ ನಾಯ್ಡು ಪ್ರೊಡಕ್ಷನ್‌ನಲ್ಲಿ ಹಾಗೂ ಬಾಲಾಜಿ ಟೆಲಿಫಿಲಮ್ಸ್ ಅಡಿಯಲ್ಲಿ ಮೂಡಿ ಬಂದ ಧಾರಾವಾಹಿಗಳಿಗೆ ನಿರ್ದೇಶಕರಾಗಿಯೂ ಕೆಲಸ ಮಾಡಿದ್ದರು. ಕನ್ನಡದಲ್ಲಿ ಮಾತ್ರವಲ್ಲ ತಮಿಳು ಧಾರಾವಾಹಿಯನ್ನೂ ಅವರು ನಿರ್ದೇಶನ ಮಾಡಿದ್ದಾರೆ.

ನಮೀಬಿಯ ವಿರುದ್ಧ ಗೆದ್ದು ಬೀಗಿದ ಕರ್ನಾಟಕ

ವಿಂಡ್‌ಹೋಕ್,ಜೂ. 2(ಸಿಎನ್)– ರವಿಕುಮಾರ್ ಸಮರ್ಥ್ ಅಬ್ಬರದ ಬ್ಯಾಟಿಂಗ್, ವಿದ್ವತ್ ಕವಿರಪ್ಪ, ರಿಷಿ ಬೋಪಣ್ಣ ಕರಾರುವಾಕ್ ಬೌಲಿಂಗ್ ಪ್ರದರ್ಶನದಿಂದಾಗಿ ನಮೀಬಿಯಾ ವಿರುದ್ಧ ಕರ್ನಾಟಕ ತಂಡ 9 ವಿಕೆಟ್‌ಗಳಿಂದ ಭರ್ಜರಿ ಜಯ ಸಾಧಿಸಿದೆ.


ಆ ಮೂಲಕ ಕರ್ನಾಟಕ ತಂಡ ಐದು ಪಂದ್ಯಗಳ ಏಕದಿನ ಸರಣಿಯಲ್ಲಿ ಮೊದಲ ವಿಜಯ ಸಾಧಿಸಿ, 1–0 ಮುನ್ನಡೆ ಪಡೆದಿದೆ. ಈಗಾಗಲೇ ವಿಶ್ವಕಪ್ ಅರ್ಹತೆ ಪಡೆಯಲು ವಿಫಲವಾಗಿರುವ ನಮೀಬಿಯ, ಕರ್ನಾಟಕ ವಿರುದ್ಧ ಜೂನ್ 4, 7, 9 ಮತ್ತು 11 ರಂದು 4 ಏಕದಿನ ಪಂದ್ಯ ಆಡಲಿದೆ.

ಇಲ್ಲಿನ ವಾಂಡರರ್ಸ್ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆದ ಮೊದಲ ಏಕದಿನ ಪಂದ್ಯದಲ್ಲಿ ನಮೀಬಿಯ ತಂಡ 171 ರನ್ ಗಳಿಸಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡಿತು.

ಸುಲಭದ ಗುರಿ ಬೆನ್ನತ್ತಿದ ಕರ್ನಾಟಕ ತಂಡ 35.5 ಓವರುಗಳಲ್ಲಿ 1 ವಿಕೆಟ್ ನಷ್ಟಕ್ಕೆ 172 ರನ್ ಗಳಿಸಿ ಗೆಲುವಿನ ನಗೆ ಬೀರಿತು. ತಂಡದ ಪರ ಆರಂಭಿಕರಾಗಿ ಕಣಕ್ಕಿಳಿದ ಎಲ್.ಆರ್.ಚೇತನ್ 37 ಎಸೆತಗಳಲ್ಲಿ 4 ಸಿಕ್ಸರ್ ಹಾಗೂ 6 ಬೌಂಡರಿ ಒಳಗೊಂಡ 37 ರನ್ ಗಳಿಸಿದರು. ಬಳಿಕ ಬಂದ ನಿಕಿನ್ ಜೋಸ್ 56 ರನ್ ಗಳಿಸಿದರೆ, ಆರಂಭದಿಂದಲು ಅಬ್ಬರಿಸಿದ ನಾಯಕ ರವಿಕುಮಾರ್ ಸಮರ್ಥ್ ಅಜೇಯ 78 ರನ್ ಗಳಿಸಿ ತಂಡಕ್ಕೆ ಜಯ ದೊರಕಿಸಿಕೊಟ್ಟರು. ನಮೀಬಿಯ ಪರ ಜಾನ್ ಫ್ರೈಲಿಂಕ್ 1 ವಿಕೆಟ್ ಪಡೆದರು.

ಇದಕ್ಕೂ ಮುನ್ನ ಬ್ಯಾಟ್ ಮಾಡಿದ ನಮೀಬಿಯ ತಂಡ 41.1 ಓವರ್‌ಗಳಲ್ಲಿ 171 ರನ್‌ಗಳ ಸಾಧಾರಣ ಗುರಿ ನೀಡಿತ್ತು. ತಂಡದ ಪರ ಜಾನ್ ಫ್ರೈಲಿಂಕ್ 57 ರನ್ ಗಳಿಸಿದರೆ, ಗೆರ್ಹಾರ್ಡ್ ಎರಾಸ್ಮಸ್ 31, ಶಾನ್ ಫೌಂಚೆ 24, ಝೇನ್ ಗ್ರೀನ್ 18 ರನ್ ಗಳಿಸಿದರು. ಕರ್ನಾಟಕ ಪರ ವಿದ್ವತ್ ಕವಿರಪ್ಪ 4 ವಿಕೆಟ್ ಪಡೆದು ಮಿಂಚಿದರೆ, ರಿಷಿ ಬೋಪಣ್ಣ 3 ವಿಕೆಟ್ ಉರುಳಿಸಿದರು. ಸಮರ್ಥ್, ವೈಶಾಕ್, ಆದಿತ್ಯಾ ಗೋಯಲ್ ತಲಾ ಒಂದೊಂದು ವಿಕೆಟ್ ಪಡೆದು ನಮೀಬಿಯ ಬ್ಯಾಟಿಂಗ್ ಬೆನ್ನೆಲುಬು ಮುರಿದರು. ನಾಯಕ ಸಮರ್ಥ್ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು.

ವಿದ್ಯುದ್ದೀಕರಣ ಕಾಮಗಾರಿ ನಂತರ ಮಂಗಳೂರು–ಮೈಸೂರು–ಬೆಂಗಳೂರು ವಂದೇ ಭಾರತ್ ಎಕ್ಸ್‌ಪ್ರೆಸ್ ಆರಂಭ: ಕಟೀಲು



ಮಂಗಳೂರು: ಮೈಸೂರು–ಮಂಗಳೂರು ನಡುವೆ ನಡೆಯುತ್ತಿರುವ ವಿದ್ಯುದ್ದೀಕರಣ ಕಾಮಗಾರಿ ಪೂರ್ಣಗೊಂಡ ಬಳಿಕ ಮೈಸೂರು–ಬೆಂಗಳೂರು ನಡುವೆ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲನ್ನು ಮೈಸೂರು ಮೂಲಕ ಜನಸೇವೆಗೆ ನೀಡಲಾಗುವುದು ಎಂದು ಸಂಸದ ನಳಿನ್ ಕುಮಾರ್ ಕಟೀಲ್ ತಿಳಿಸಿದ್ದಾರೆ. ಈಗ ಕಾಸರಗೋಡು ಮತ್ತು ತಿರುವನಂತಪುರಂ ನಡುವೆ ಸಂಚಾರ ನಡೆಸುತ್ತಿರುವ ವಂದೇ ಭಾರತ್ ಎಕ್ಸ್‌ಪ್ರೆಸ್‌ನ ಸೇವೆಯನ್ನು ಶೀಘ್ರದಲ್ಲೇ ಮಂಗಳೂರಿನವರೆಗೆ ವಿಸ್ತರಿಸಲಾಗುವುದು ಎಂದು ಅವರು ನಿನ್ನೆ ಮಂಗಳೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಹೇಳಿದರು.

ಸರಗೂರು ಬಳಿ ಕಾಡಾನೆ ದಾಳಿಗೆ ರೈತ ಬಲಿ

● ಅರಣ್ಯ ಇಲಾಖೆ ವಿರುದ್ಧ ರೈತರ ಪ್ರತಿಭಟನೆ ● ಕಾಡುಪ್ರಾಣಿಗಳ ಹಾವಳಿ ತಡೆಗೆ ಆಗ್ರಹ ● ಮೃತ ರೈತನ ಕುಟುಂಬಕ್ಕೆ 5 ಲಕ್ಷ ರೂ. ಚೆಕ್ ವಿತರಣೆ



ರವಿಕುಮಾರ್

ಸರಗೂರು, ಜೂ.2– ಕಾಡಾನೆ ದಾಳಿಗೆ ರೈತ ಬಲಿಯಾಗಿರುವ ಘಟನೆ ತಾಲೂಕಿನ ಹಿರೆಹಳ್ಳಿಯಲ್ಲಿ ಗುರುವಾರ ರಾತ್ರಿ ನಡೆದಿದೆ.

ಗ್ರಾಮದ ನಿವಾಸಿ ರವಿಕುಮಾರ್(40) ಕಾಡಾನೆ ದಾಳಿಗೆ ಬಲಿಯಾದವರು. ಈತ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶ, ಹೆಡಿಯಾಲ ಉಪ ವಿಭಾಗದ ಮೊಳೆಯೂರು ವಲಯ ಅರಣ್ಯ ಪ್ರದೇಶದ ಪಕ್ಕದಲ್ಲಿರುವ ತಮ್ಮ ಜಮೀನಿನಲ್ಲಿ ಹತ್ತಿ ಬೆಳೆದಿದ್ದರು. ಜಮೀನಿನ ಮೇಲೆ ಆಗಾಗ್ಗೆ ಕಾಡು ಪ್ರಾಣಿಗಳು ದಾಳಿ ನಡೆಸುತ್ತಿದ್ದವು. ಹೀಗಾಗಿ ರೈತ ರವಿಕುಮಾರ್ ರಾತ್ರಿ ವೇಳೆ ಜಮೀನಿನ ಕಾವಲು ಕಾಯುತ್ತಿದ್ದರು. ಎಂದಿನಂತೆ ಗುರುವಾರ ರಾತ್ರಿಯೂ ಜಮೀನಿನಲ್ಲಿ ಕಾವಲು ಕಾಯುತ್ತಿದ್ದ ವೇಳೆ ಆಹಾರ ಅರಸಿ ಕಾಡಿನಿಂದ ಬಂದ ಆನೆ ಮೊದಲು ಜಮೀನಿನಲ್ಲಿ ನಿಲ್ಲಿಸಿದ್ದ ದ್ವಿಚಕ್ರ ವಾಹನವನ್ನು ಧ್ವಂಸಗೊಳಿಸಿದೆ. ಇದನ್ನು ಕಂಡ ರವಿಕುಮಾರ್ ಕಾಡಾನೆಯಿಂದ ತಪ್ಪಿಸಿಕೊಳ್ಳಲು ಓಡುತ್ತಿದ್ದ ವೇಳೆ ಏಕಾಏಕಿ ರೈತನ ಮೇಲೆ ದಾಳಿ ನಡೆಸಿದೆ. ತೀವ್ರ ಗಾಯಗೊಂಡ ರವಿಕುಮಾರ್ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ವಿಷಯ ತಿಳಿದು ರಾತ್ರಿ 10.30ರ ವೇಳೆಗೆ ಸ್ಥಳಕ್ಕಾಗಮಿಸಿದ ಅರಣ್ಯಾಧಿಕಾರಿಗಳು ಪರಿಶೀಲಿಸಿ ಮೇಲಧಿಕಾರಿಗಳ ಗಮನಕ್ಕೆತಂದು ಸ್ಥಳದಲ್ಲೇ ಮೊಕ್ಕಾಂ ಹೂಡಿದ್ದು ಎನ್ನಲಾಗಿದೆ.

ರೈತರಿಂದ ಪ್ರತಿಭಟನೆ: ಅರಣ್ಯ ಇಲಾಖೆ ಅಧಿಕಾರಿಗಳು ಕಾಡಾನೆ ಹಾವಳಿ ತಪ್ಪಿಸಲು ವಿಫಲವಾಗಿದ್ದಾರೆ ಎಂದು ಆರೋಪಿಸಿ ರೈತರು ಶುಕ್ರವಾರ ಬೆಳಗ್ಗೆ ಪ್ರತಿಭಟನೆ ನಡೆಸಿದರು.



ರವಿಕುಮಾರ್ ಕುಟುಂಬಕ್ಕೆ ಮುಂಗಡ ಪರಿಹಾರವಾಗಿ 5 ಲಕ್ಷ ರೂ. ಚೆಕ್ ನೀಡಲಾಯಿತು.

ರೈತರು ಲಕ್ಷಾಂತರ ರೂ. ಸಾಲ ಮಾಡಿ ಬೆಳೆದ ಬೆಳೆ ಕಟಾವಿಗೆ ಬರುವ ಮುನ್ನವೇ ಕಾಡುಪ್ರಾಣಿಗಳು ಜಮೀನಿನ ಮೇಲೆ ದಾಳಿ ನಡೆಸಿ ನಾಶಗೊಳಿಸುತ್ತಿವೆ. ರೈತರು ಜಮೀನನ್ನು ಕಾವಲು ಕಾಯ್ದರೂ ಯಾವುದೇ ಪ್ರಯೋಜನವಾಗುತ್ತಿಲ್ಲ. ಹೀಗಾಗಿ ಕೂಡಲೇ ಅರಣ್ಯ ಇಲಾಖೆ ಅಧಿಕಾರಿಗಳು ಕಾಡು ಪ್ರಾಣಿಗಳ ಹಾವಳಿ ನಿಯಂತ್ರಣಕ್ಕೆ ಕ್ರಮ ವಹಿಸಬೇಕು ಎಂದು ಒತ್ತಾಯಿಸಿದರು.

ಜಿಪಂ ಮಾಜಿ ಸದಸ್ಯ ಪಿ.ರವಿ ಮಾತನಾಡಿ, ಕಾಡಂಚಿನ ಗ್ರಾಮಗಳಲ್ಲಿ ಕಾಡುಪ್ರಾಣಿಗಳ ಹಾವಳಿ ಜೋರಾಗಿದೆ. ಇಲ್ಲಿನ ರೈತರು ಬೆಳೆ ಬೆಳೆಯುವುದೇ ಕಷ್ಟವಾಗಿದ್ದು, ಮಾಡಿದ ಸಾಲ ತೀರಿಸಲಾಗದ ಪರಿಸ್ಥಿತಿ ಎದುರಾಗಿದೆ. ಇದೀಗ ಕಷ್ಟಪಟ್ಟು ಬೆಳೆದ ಬೆಳೆ ಕಾವಲಿಗೆ ಆಗಮಿಸಿದ ರೈತನನ್ನು ಕಳೆದುಕೊಂಡಿದ್ದೇವೆ. ಹೀಗಾಗಿ ಕಾಡು ಪ್ರಾಣಿಗಳ ಹಾವಳಿಗೆ ಕ್ರಮವಹಿಸಬೇಕು ಎಂದು ಮನವಿ ಮಾಡಿದರು.

ಪ್ರತಿಭಟನಾ ಸ್ಥಳಕ್ಕಾಗಮಿಸಿದ ಸಿಎಫ್ ಕೆ.ಪಿ.ರಮೇಶ್ ಕುಮಾರ್, ಎಸಿಎಫ್ ಪರಮೇಶ್ ಮಾತನಾಡಿ, ಕಾಡು ಪ್ರಾಣಿಗಳ ಹಾವಳಿ ನಿಯಂತ್ರಣಕ್ಕೆ ಅರಣ್ಯ ಇಲಾಖೆ ಕ್ರಮ ವಹಿಸಿದೆ. ರೈಲ್ವೆ ಕಂಬಿ ಅಳವಡಿಸಲು ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ. ಸರ್ಕಾರದಿಂದ ಮೃತನ ಕುಟುಂಬಕ್ಕೆ 15 ಲಕ್ಷ ರೂ. ಪರಿಹಾರ ನೀಡಲಾಗುವುದು. ಅಲ್ಲದೇ ಮೃತ ರವಿಕುಮಾರ್ ಪತ್ನಿಗೆ 5 ವರ್ಷಗಳ ವರೆಗೆ ತಿಂಗಳಿಗೆ 4 ಸಾವಿರ ರೂ. ಮಾಸಾಶನ ನೀಡಲಾಗುವುದು ಎಂದು ಭರವಸೆ ನೀಡಿದರು. ಅಲ್ಲದೇ ಇದೇ ವೇಳೆ ಸರ್ಕಾರದಿಂದ ನೀಡುವ ಪರಿಹಾರದ ಪೈಕಿ ಮುಂಗಡವಾಗಿ 5 ಲಕ್ಷ ರೂ.ಗಳ ಚೆಕ್ ನೀಡಲಾಯಿತು. ಈ ವೇಳೆ ಪ್ರತಿಭಟನಾಕಾರರು ಪ್ರತಿಭಟನೆ ಹಿಂಪಡೆದರು.

> ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರು ಮಾನವ ಮತ್ತು ಕಾಡುಪ್ರಾಣಿಗಳ ಸಂಘರ್ಷಕ್ಕೆ ಶಾಶ್ವತ ಪರಿಹಾರ ಕಲ್ಪಿಸಲು ಸಮಿತಿ ರಚಿಸಬೇಕು. ಕಾಡು ಪ್ರಾಣಿಗಳ ಹಾವಳಿ ನಿಯಂತ್ರಣಕ್ಕೆ ಕ್ರಮ ವಹಿಸಬೇಕು. ಆ ಮೂಲಕ ಕಾಡಂಚಿನಲ್ಲಿ ವಾಸಿಸುವ ಅನ್ನದಾತರ ರಕ್ಷಣೆಗೆ ಮುಂದಾಗಬೇಕು. ಕಾಡು ಪ್ರಾಣಿಗಳ ವೀಕ್ಷಣೆಗೆ ಪರಿಣಿತಿ ಹೊಂದಿರುವ ವೀಕ್ಷಕರನ್ನು ನೇಮಕಗೊಳಿಸಬೇಕು.
> – **ಚಂದನ್‌ಗೌಡ,** ರಾಜ್ಯಾಧ್ಯಕ್ಷ, ಕರ್ನಾಟಕ ರಾಜ್ಯ ರೈತ ಕಲ್ಯಾಣ ಸಂಘ.

ಮೃತ ರೈತನ ಮನೆಗೆ ಕರ್ನಾಟಕ ರಾಜ್ಯ ರೈತ ಕಲ್ಯಾಣ ಸಂಘದ ರಾಜ್ಯಾಧ್ಯಕ್ಷ ಚಂದನ್‌ಗೌಡ ಭೇಟಿ ನೀಡಿ, ಕುಟುಂಬದವರಿಗೆ ಸಾಂತ್ವನ ಹೇಳಿದರು.

ಈ ವೇಳೆ ರೈತ ಮುಖಂಡರಾದ ಅಣ್ಣಯ್ಯಸ್ವಾಮಿ, ಭೀಮರಾಜ್, ಗುಣಪಾಲ್, ಜಿ.ಕೃಷ್ಣ, ಗ್ರಾಪಂ ಉಪಾಧ್ಯಕ್ಷ ದೇವದಾಸ್, ಸದಸ್ಯರಾದ ಬೆಟ್ಟಸ್ವಾಮಿ, ಅಜಿತ್, ನಾಗೇಂದ್ರ, ನಾಗೇಶ್, ಕಾಳಸ್ವಾಮಿ, ಅಭಿಕುಮಾರ್, ಸಿದ್ದಪ್ಪ, ಎಚ್.ಎಸ್.ಬಾಲಕೃಷ್ಣ, ಎಲ್‌ಐಸಿ ಚಂದ್ರು, ಡಿವೈಎಸ್ಪಿ ಮಹೇಶ್, ಎಸ್‌ಐ ಲಕ್ಷ್ಮೀಕಾಂತ, ಸುಬ್ರಹ್ಮಣ್ಯ, ಆರ್‌ಎಫ್‌ಓಗಳು ಸೇರಿದಂತೆ ಅರಣ್ಯ ಇಲಾಖಾಧಿಕಾರಿಗಳು ಸೇರಿದಂತೆ ಇನ್ನಿತರರಿದ್ದರು.

ರೈತ ರವಿಕುಮಾರ್ ಮೃತದೇಹವನ್ನು ಸರಗೂರಿನ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಿ ಮರಣೋತ್ತರ ಪರೀಕ್ಷೆ ಬಳಿಕ ವಾರಸುದಾರರಿಗೆ ಒಪ್ಪಿಸಲಾಯಿತು. ಈ ಸಂಬಂಧ ಸರಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸಿಡಿಲಿಗೆ ಬಲಿಯಾದವರ ಕುಟುಂಬಕ್ಕೆ 5 ಲಕ್ಷ ವಿತರಣೆ



ಹುಣಸೂರು, ಜೂ.2– ಸಿಡಿಲು ಬಡಿದು ಸಾವನ್ನಪ್ಪಿದವರ ಕುಟುಂಬದವರಿಗೆ ಕೊಟ್ಟ ಭರವಸೆಯಂತೆ 5 ಲಕ್ಷ ರೂ. ಪರಿಹಾರ ವಿತರಿಸಲಾಗಿದೆ ಎಂದು ಶಾಸಕ ಜಿ.ಡಿ. ಹರೀಶ್‌ಗೌಡ ತಿಳಿಸಿದರು.

ಸಿಡಿಲು ಬಡಿದು ಸಾವನ್ನಪ್ಪಿದವರ ಕುಟುಂಬದವರಿಗೆ ಸರ್ಕಾರದಿಂದ 5 ಲಕ್ಷ ರೂ. ಪರಿಹಾರಧನ ಕೊಡಿಸುವ ಭರವಸೆ ನೀಡಿದ್ದ ಶಾಸಕ ಹರೀಶ್‌ಗೌಡ, 15 ದಿನದೊಳಗಾಗಿ ಪರಿಹಾರ ಧನದ ಡಿಡಿ ವಿತರಿಸಿ ತಮ್ಮ ಮಾತನ್ನು ಉಳಿಸಿ ಕೊಂಡಿದ್ದಾರೆ.

ಈ ವೇಳೆ ಸುದ್ದಿಗಾರೊಂದಿಗೆ ಮಾತನಾಡಿದ ಅವರು, ಸರ್ಕಾರದಿಂದ ನೀಡಿರುವ ಹಣದಿಂದ ಅವರ ದುಃಖ ಭರಿಸಲಾಗುವುದಿಲ್ಲ. ಹೀಗಾಗಿ ಸಮಾಜ ಇವರ ಕಷ್ಟಕ್ಕೆ ಸ್ಪಂದಿಸಬೇಕು. ಈ ಕುಟುಂಬ ಆಘಾತದಿಂದ ಹೊರ ಬರುವವರೆಗೆ ಕೈಲಾದ ಸಹಾಯ ಮಾಡುವ ಅಗತ್ಯವಿದೆ ಎಂದರು. ಈ ವೇಳೆ ತಹಸೀಲ್ದಾರ್ ಅಶೋಕ್, ರೆವಿನ್ಯೂ ಇನ್ಸ್‌ಪೆಕ್ಟರ್ ನಂದೀಶ್, ಗ್ರಾಮಲೆಕ್ಕಿಗ ಸುಮಂತ್ ಸೇರಿದಂತೆ ಇನ್ನಿತರರಿದ್ದರು.

ನಾಳೆ ಕೃತಜ್ಞತಾ ಸಮಾರಂಭ

ತಿ.ನರಸೀಪುರ, ಜೂ.2– ಸಾರ್ವತ್ರಿಕ ವಿಧಾನಸಭಾ ಚುನಾವಣೆಯಲ್ಲಿ ಅಭೂತಪೂರ್ವ ಗೆಲುವು ನೀಡಿದ ತಿ.ನರಸೀಪುರ ಕ್ಷೇತ್ರದ ಮತದಾರರಿಗೆ ಕೃತಜ್ಞತೆ ಸಲ್ಲಿಸಲು ಜೂ.4ರಂದು ಮಧ್ಯಾಹ್ನ 12 ಗಂಟೆಗೆ ಪಟ್ಟಣದ ಹೊರವಲಯ ಹೆಳವರಹುಂಡಿ ಬಳಿ ಕೃತಜ್ಞತಾ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ಕಾಂಗ್ರೆಸ್ ಪ್ರಕಟಣೆ ತಿಳಿಸಿದೆ.

ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅವರ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮ ನಡೆಯಲಿದ್ದು, ವರುಣ ಕ್ಷೇತ್ರದ ಮಾಜಿ ಶಾಸಕ ಡಾ.ಯತೀಂದ್ರ ಸಿದ್ದರಾಮಯ್ಯ, ಕಾಂಗ್ರೆಸ್ ಯುವ ಮುಖಂಡ ಸುನೀಲ್ ಬೋಸ್ ಸೇರಿದಂತೆ ಹಲವು ಜನಪ್ರತಿನಿಧಿಗಳು ಹಾಗೂ ಕಾಂಗ್ರೆಸ್ ಮುಖಂಡರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ವಿಜೃಂಭಣೆಯ ಶ್ರೀ ಕಾಲಭೈರವೇಶ್ವರಸ್ವಾಮಿ ಕಳಸ ಪ್ರತಿಷ್ಠಾಪನೆ

ತಿ.ನರಸೀಪುರ, ಜೂ.2– ಪಟ್ಟಣದ ಹೊಸ ತಿರುಮಕೂಡಲು ಗ್ರಾಮದ ಕಪಿಲಾ ನದಿ ದಡದಲ್ಲಿ ಶ್ರೀಕಾಲಭೈರವೇಶ್ವರಸ್ವಾಮಿಯವರ ವಿಮಾನ ಕಳಸ ಮತ್ತು ವಿಗ್ರಹ ಪ್ರತಿಷ್ಠಾಪನಾ ಮಹೋತ್ಸವ ವಿಜೃಂಭಣೆಯಿಂದ ನೆರವೇರಿತು.

ಮಹೋತ್ಸವದ ಹಿನ್ನೆಲೆಯಲ್ಲಿ ಬುಧವಾರ ಬೆಳಗ್ಗೆಯಿಂದಲೇ ಅಲಯ ಪ್ರವೇಶದೊಂದಿಗೆ ಚಿಕ್ಕರಸಿನಕೆರೆ ಬಸಪ್ಪ ಹಾಗೂ ಶ್ರೀಗಂಗಾಧರೇಶ್ವರ ಬಸಪ್ಪನ ಮೆರವಣಿಗೆ, ಧಾರ್ಮಿಕ ಉತ್ಸವಗಳು ನಡೆದು ಸಂಜೆ ಗಣಪತಿ ಪೂಜೆ ಪುಣ್ಯಹ, ಪಂಚಗವ್ಯ ಸಾಧನ, ದೀಕ್ಷಾ ಲಂಕಾರಾಧನೆ, ವಾಸ್ತು ಪೂಜೆ, ರಕ್ಷೋಘ್ನ ಪೂಜೆ ಹಾಗೂ ಹೋಮ ಹವನಗಳು ನಡೆದವು.

ಇಂದು ಬೆಳಗ್ಗೆ ಬ್ರಾಹ್ಮಿ ಮುಹೂರ್ತದಲ್ಲಿ ರತ್ನನ್ಯಾಸ, ಯಂತ್ರ ಸ್ಥಾಪನೆ, ವಿಮಾನ ಕಳಸ ಸ್ಥಾಪನೆ, ಪ್ರಧಾನ ಹೋಮ, ಪೂರ್ಣಾಹುತಿ, ಕುಂಬಾಭಿಷೇಕ, ಮಹಾ ಮಂಗಳಾರತಿ ಮತ್ತು ಮಹಾ ನೈವೇದ್ಯ, ಮಂತ್ರಪುಷ್ಪ, ರಾಷ್ಟ್ರಾಶೀರ್ವಾದ, ತೀರ್ಥ ಪ್ರಸಾದ ವಿನಿಯೋಗ ಹಾಗೂ ಅನ್ನ ಸಂತರ್ಪಣೆ ನಡೆಯಿತು.



ಭೈರವೈಕ್ಯ ಬಾಲಗಂಗಾಧರನಾಥ ಸ್ವಾಮೀಜಿಗಳು ಹಾಗೂ ಆದಿಚುಂಚನಗಿರಿ ಮಠದ ನಿರ್ಮಲಾನಂದನಾಥ ಸ್ವಾಮೀಜಿಯವರ ದಿವ್ಯ ಆಶೀರ್ವಾದಗಳೊಂದಿಗೆ ಬಿ.ಜಿ.ಪುರ ಮಠದ ಜ್ಞಾನಾನಂದ ಚನ್ನರಾಜ ಅರಸ್ ಹಾಗೂ ಮೈಸೂರು ಶಾಖಾ ಮಠದ ಸೋಮನಾಥ ಸ್ವಾಮೀಜಿಗಳ ಸಮ್ಮುಖದಲ್ಲಿ ಪ್ರತಿಷ್ಠಾಪನಾ ಮಹೋತ್ಸವ ನಡೆದು ನಂತರ ಆಶೀರ್ವಚನ ನೀಡಿದರು.

ಅರ್ಚಕ ಸೋಮಣ್ಣ, ಒಕ್ಕಲಿಗ ಜನಾಂಗದ ಯಜಮಾನ ಚಂದ್ರೇಗೌಡ, ನಾಯಕ ಜನಾಂಗದ ಯಜಮಾನ ನಟರಾಜು, ಗ್ರಾಪಂ ಮಾಜಿ ಉಪಾಧ್ಯಕ್ಷ ಪುಟ್ಟು, ದೊಡ್ಡ ಯಜಮಾನ ನಾಗ, ಪುಟ್ಟ, ಬಸವರಾಜ, ಲಕ್ಷ್ಮಣ, ಗುಂಡ, ಹರ್ಷ, ನವೀನ, ಗಣೇಶ, ಉಮೇಶ, ನವೀನ, ಮಲ್ಲಿಕಾ, ಕುಮಾರ, ಮಲ್ಲಣ್ಣ, ಲೋಕೇಶ್, ಮಾದೇವ್, ವಿನೋದ್ ಕುಮಾರ್, ನಾಗೇಂದ್ರ ಸೇರಿದಂತೆ ಭಕ್ತರು ಹಾಜರಿದ್ದರು.

ಹೈರಿಗೆ ಗ್ರಾಪಂ ವ್ಯಾಪ್ತಿ ಗ್ರಾಮಗಳಿಗೆ ಕಲುಷಿತ ನೀರು ಪೂರೈಕೆ: ಆರೋಪ



ಹೆಚ್.ಡಿ.ಕೋಟೆ, ಜೂ.2– ತಾಲೂಕಿನ ಹೈರಿಗೆ ಗ್ರಾಪಂ ವ್ಯಾಪ್ತಿಯ ಗ್ರಾಮಗಳಿಗೆ ಕಳೆದ 3 ತಿಂಗಳಿಂದ ಕಲುಷಿತ ನೀರು (ಮಣ್ಣು ನಿಶ್ರೀತ ನೀರು) ಸರಬರಾಜು ಮಾಡಲಾಗುತ್ತಿದೆ ಎಂದು ಗ್ರಾಮದ ನಿವಾಸಿ ಪ್ರಕಾಶ್ ಆರೋಪಿಸಿದರು.

ಸುದ್ದಿಗಾರರಿಗೆ ಈ ಸಂಬಂಧ ಮಾಹಿತಿ ನೀಡಿರುವ ಅವರು, ಹೈರಿಗೆ ಗ್ರಾಪಂ ವ್ಯಾಪ್ತಿಗೆ ಕಬಿನಿ ಜಲಾಶಯದಿಂದ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದ್ದು, ಈ ನೀರು ಕುಡಿಯಲು ಯೋಗ್ಯವಿಲ್ಲ. ಇದರಿಂದ ಪಾತ್ರೆ ಸಹ ತೊಳೆಯಲು ಆಗುವುದಿಲ್ಲ. ಕುಡಿಯುವ ನೀರಿನ ನಲ್ಲಿಗಳ ಮೂಲಕ ಮಣ್ಣು ಮಿಶ್ರಿತ ಕೊಳಚೆ ನೀರನ್ನು ಸರಬರಾಜು ಮಾಡಲಾಗುತ್ತಿದೆ. ಈ ನೀರನ್ನೇ ಕುಡಿದು ಸಾರ್ವಜನಿಕರು ಅನಾರೋಗ್ಯ ಪೀಡಿತರಾಗುತ್ತಿದ್ದಾರೆ. ಬಡಜನರ ಆರೋಗ್ಯದ ಬಗ್ಗೆ ಕಾಳಜಿ ಇಲ್ಲದ ಅಧಿಕಾರಿಗಳು, ಜನಪ್ರತಿನಿಧಿಗಳು ನಿರ್ಲಕ್ಷ್ಯ ವಹಿಸಿದ್ದಾರೆ. ಹೀಗಾಗಿ ಸಂಬಂಧಪಟ್ಟ ಅಧಿಕಾರಿಗಳು ಈ ಬಗ್ಗೆ ಗಮನಹರಿಸಿ ಶುದ್ಧ ಕುಡಿಯುವ ನೀರು ಪೂರೈಕೆಗೆ ಮುಂದಾಗಬೇಕು. ಇಲ್ಲದಿದ್ದರೇ ಹೈರಿಗೆ ಗ್ರಾಪಂ ವ್ಯಾಪ್ತಿಯ ಗ್ರಾಮಸ್ಥರು ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

> ಹೈರಿಗೆ ಗ್ರಾಪಂ ವ್ಯಾಪ್ತಿಯ ಗ್ರಾಮಗಳಿಗೆ ಟ್ಯಾಂಕರ್ ಮೂಲಕ ಶುದ್ಧ ಕುಡಿಯುವ ನೀರು ಸರಬರಾಜು ಮಾಡುತ್ತಿದ್ದೇವೆ. ಕಬಿನಿ ನದಿಯಿಂದ ಹೊಸ ನೀರು ಬರುತ್ತಿದ್ದು, ಆ ನೀರನ್ನು ಪಾತ್ರೆ ತೊಳೆಯಲು, ಬಟ್ಟೆ ಒಗೆಯಲು ಮಾತ್ರ ಬಳಸಿ.
> –**ರಾಮು,** ಹೈರಿಗೆ ಗ್ರಾಪಂ ಅಧ್ಯಕ್ಷ.

ಡಿಆರ್‌ಸಿ ಸಿನಿಮಾಸ್ ದೂ : 4240422/4241800	
ಸ್ಕ್ರೀನ್ 1	ದಿ ಕೇರಳ ಸ್ಟೋರಿ (ಹಿಂ): ಬೆ.10.25ಕ್ಕೆ, ಮ.1.20ಕ್ಕೆ, ಸಂ.4.05ಕ್ಕೆ, ರಾ.7ಕ್ಕೆ, ರಾ.9.50ಕ್ಕೆ.
ಸ್ಕ್ರೀನ್ 2	ಡೇರ್‌ಡೆವಿಲ್ ಮುಸ್ತಫಾ (ಕ): ಬೆ.10.05ಕ್ಕೆ, ಸಂ.6.50ಕ್ಕೆ, ಗಾರ್ಡಿಯನ್ಸ್ ಆಫ್ ಗ್ಯಾಲಕ್ಸಿ ವಾಲ್ಯೂಂ 3 (3ಡಿ)(ಇಂ): ಮ.1.10ಕ್ಕೆ, ಜೆರ್ಸಿ ನಂಬರ್ 10 (ಕ): ಸಂ.4.05ಕ್ಕೆ, ರಾಘವೇಂದ್ರ ಸ್ಟೋರ್ಸ್ (ಕ): ರಾ.10ಕ್ಕೆ.
ಸ್ಕ್ರೀನ್ 3	ಇವಿಲ್ ಡೆಡ್ ರೈಸ್ (ಇಂ): ಬೆ.11ಕ್ಕೆ, ಪಿಚ್ಚೈಕಾರನ್2 (ತ): ಮ.1.20ಕ್ಕೆ, ಸಂ.4.25ಕ್ಕೆ, ರಾಘವೇಂದ್ರ ಸ್ಟೋರ್ಸ್ (ಕ): ರಾ.7.30ಕ್ಕೆ, ಚಾರ್ಲ್ಸ್ ಎಂಟರ್‌ಪ್ರೈಸಸ್ (ಮ): ಸಂ.9.55ಕ್ಕೆ.
ಸ್ಕ್ರೀನ್ 4	ಫಾಸ್ಟ್ X (3ಡಿ)(ಇಂ): ಬೆ.10.45ಕ್ಕೆ, ಮ.1.35ಕ್ಕೆ, ಸಂ.4.25ಕ್ಕೆ, ರಾ.7.15ಕ್ಕೆ, ರಾ.10ಕ್ಕೆ.

ಐನಾಕ್ಸ್ ಮೂವೀಸ್ ದೂ : 2533444 / 2433456	
ಸ್ಕ್ರೀನ್ 1	ಫಾಸ್ಟ್ X (3ಡಿ)(ಇಂ): ಬೆ.10.30, ಮ.1.30ಕ್ಕೆ, ಸಂ.4.30ಕ್ಕೆ, ರಾ.7.30ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 2	ದಿ ಕೇರಳ ಸ್ಟೋರಿ (ಹಿಂ): ಬೆ.10ಕ್ಕೆ, ಮ.12.55ಕ್ಕೆ, ಮ.3.50ಕ್ಕೆ, ಸಂ.6.45ಕ್ಕೆ, ರಾ.9.40ಕ್ಕೆ.
ಸ್ಕ್ರೀನ್ 3	ದಿ ಕೇರಳ ಸ್ಟೋರಿ (ಹಿಂ): ಬೆ.11ಕ್ಕೆ, ಮ.1.55ಕ್ಕೆ, ಸಂ.4.50ಕ್ಕೆ, ರಾ.10.30ಕ್ಕೆ, ಅನುರಾಗಂ (ಮ): ರಾ.7.45ಕ್ಕೆ.
ಸ್ಕ್ರೀನ್ 4	ಫಾಸ್ಟ್ X (3ಡಿ)(ಇಂ): ಬೆ.9.30ಕ್ಕೆ, ಪಿಚ್ಚೈಕಾರನ್ 2(ತ): ಮ.12.20ಕ್ಕೆ, ರಾ.10.05ಕ್ಕೆ, ಡೇರ್‌ಡೆವಿಲ್ ಮುಸ್ತಫಾ (ಕ): ಸಂ.6.50ಕ್ಕೆ.

ಪಿವಿಆರ್ ಸಿನಿಮಾಸ್
ಮೊ.ನಂ: 8951357139
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಮಂಡಲ (ಕ): ಮ.2.15ಕ್ಕೆ, **1 ರಾಬರಿ ಕಥೆ (ಕ):** ಸಂ.4.50ಕ್ಕೆ, **ಚೌಕಾಬಾರ (ಕ):** ರಾ.7.50ಕ್ಕೆ, **ಕ್ರಿಡ್ 3 (ಇಂ):** ಬೆ.11.35ಕ್ಕೆ, **ತು ಜೂಥಿ ಮೇನ್ ಮಕ್ಕರ್ (ಹಿಂ):** ಬೆ.8.30ಕ್ಕೆ, ಮ.12ಕ್ಕೆ, ಮ.3.30ಕ್ಕೆ, ರಾ.7ಕ್ಕೆ, ರಾ.10.30ಕ್ಕೆ, **ತು ಜೂಥಿ ಮೇನ್ ಮಕ್ಕರ್ (ಹಿಂ):** ಬೆ.9.30ಕ್ಕೆ, ಬೆ.11ಕ್ಕೆ, ಮ.1ಕ್ಕೆ, ಮ.2.30ಕ್ಕೆ, ಸಂ.4.30ಕ್ಕೆ, ಸಂ.6ಕ್ಕೆ, ರಾ.8ಕ್ಕೆ, ರಾ.9.30ಕ್ಕೆ, **ತುರಮುಖಂ (ಮ):** ರಾ.10.30ಕ್ಕೆ, **ಅಜಿಲನ್ ಕಿಂಗ್ ಆಫ್ ದಿ ಓಷನ್ (ತ):** ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ, **ಸ್ಕ್ರೀಮ್ 6 (ಇಂ):** ಮ.2.45ಕ್ಕೆ, ರಾ.7.45ಕ್ಕೆ, **65 (ಇಂ):** ಮ.12.30ಕ್ಕೆ, ಸಂ.5.30ಕ್ಕೆ, ರಾ.10.30ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಪದ್ಮ ಚಿತ್ರಮಂದಿರ	(ದೂ: 2521923)
ವೀರಂ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಸೈರನ್ (ಕ)	4 ಪ್ರದರ್ಶನಗಳು
ಉಮಾ ಚಿತ್ರಮಂದಿರ	(ದೂ: 2520009)
ಡೇ ಅಂಡ್ ಸಮ್‌ಒನ್ (ತೆ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಟೈಗರ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಡೇರ್ ಡೆವಿಲ್ ಮುಸ್ತಾಫಾ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಡೇರ್ ಡೆವಿಲ್ ಮುಸ್ತಾಫಾ (ಕ)	4 ಪ್ರದರ್ಶನಗಳು
ರಾಜ್‌ಕಮಲ್	
ಕಥರ್ ಬಾಷಾ ಇಂದ್ರ ಮುತ್ತುರಾಮಲಿಂಗಂ(ತ) 2ಶೋ, ಕೇರಳ ಸ್ಟೋರಿ(ಹಿಂ)2 ಶೋ	
ಸಂಗಂ	
ಝರಾ ಹತ್ಕ ಝರಾ ಬಚ್ಕೆ(ಹಿಂ)	4 ಪ್ರದರ್ಶನಗಳು
ಲಿಡೋ	
ಪಿಎಸ್–2 (ತ)	4 ಪ್ರದರ್ಶನಗಳು
ತಿಬ್ಬಾದೇವಿ	
ಪಿಎಸ್–2 (ತ)	4 ಪ್ರದರ್ಶನಗಳು
ಪ್ರಭಾ	
ಸುಮನ್ (ಕ)	4 ಪ್ರದರ್ಶನಗಳು

ಸ್ಕೂಟರ್‌ಗೆ ಸಾರಿಗೆ ಬಸ್ ಡಿಕ್ಕಿ: ಸವಾರ ಸಾವು

ಹುಣಸೂರು, ಜೂ.2– ಸ್ಕೂಟರ್‌ಗೆ ಸಾರಿಗೆ ಬಸ್ ಡಿಕ್ಕಿ ಹೊಡೆದ ಪರಿಣಾಮ ಸವಾರ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ನಗರದ ಬಿ.ಎಂ. ರಸ್ತೆಯ ಸಾಯಿ ಮಂದಿರದ ಬಳಿ ಶುಕ್ರವಾರ ಮಧ್ಯಾಹ್ನ ನಡೆದಿದೆ.



ನಗರದ ವಿ.ಪಿ.ಬೋರೆ ನಿವಾಸಿ ಮಾಲೇಗೌಡರ ಪುತ್ರ, ಫೋಟೋಗ್ರಾಫರ್ ಮಂಜುನಾಥ್(34) ಸಾವನ್ನಪ್ಪಿದವರು. ಈತ ಇಂದು ಮಧ್ಯಾಹ್ನ ಕಾರ್ಯನಿಮಿತ್ತ ತನ್ನ (ಕೆಎ.45, ಜೆ.5888) ಜುಪಿಟರ್‌ನಲ್ಲಿ ನರಸಿಂಹಸ್ವಾಮಿ ಬಡಾವಣೆಗೆ ಹೋಗಿ ವಾಪಸ್ ಮನೆಗೆ ತೆರಳುತ್ತಿದ್ದ ವೇಳೆ ಎದುರಿನಿಂದ ಬಂದ ಸಾರಿಗೆ ಬಸ್(ಕೆಎ.09, ಎಫ್.5137) ಸ್ಕೂಟರ್‌ಗೆ ಡಿಕ್ಕಿ ಹೊಡೆದಿದೆ. ಪರಿಣಾಮ ತೀವ್ರ ಗಾಯಗೊಂಡ ಮಂಜುನಾಥ್ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಈ ಸಂಬಂಧ ಹುಣಸೂರು ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಡಾ.ಬಿ.ಪ್ರದೀಪ್‌ಗೆ ಸೂಕ್ತ ಸ್ಥಾನಮಾನ ನೀಡಲು ಒತ್ತಾಯ



ತಿ.ನರಸೀಪುರ, ಜೂ. 2– ಕಳೆದ 18 ವರ್ಷಗಳಿಂದ ಪಕ್ಷಕ್ಕಾಗಿ ದುಡಿದು ಹಲವು ಸಾಮಾಜಿಕ, ಶೈಕ್ಷಣಿಕ ಸೇವಾ ಕಾರ್ಯ ಕೈಗೊಂಡಿರುವ ಕಾಂಗ್ರೆಸ್ ವೈದ್ಯಕೀಯ ವಿಭಾಗದ ಜಿಲ್ಲಾಧ್ಯಕ್ಷ ಡಾ. ಬಿ.ಪ್ರದೀಪ್‌ಗೆ ರಾಜ್ಯ ಮಟ್ಟದ ಸ್ಥಾನಮಾನ ನೀಡುವಂತೆ ಕಾಂಗ್ರೆಸ್ ಕಾರ್ಮಿಕರ ವಿಭಾಗದ ಮಾಜಿ ಅಧ್ಯಕ್ಷ ಎಸ್.ರಾಜಶೇಖರ್ ಒತ್ತಾಯಿಸಿದ್ದಾರೆ.

ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೊರೊನಾ ವೇಳೆ ಅಪಾರ ಸೇವೆ ಸಲ್ಲಿಸಿದ್ದಾರೆ. ಅಲ್ಲದೇ ಬಡ ವರ್ಗದ ವಿದ್ಯಾರ್ಥಿಗಳು ಓದಲು ಅವಕಾಶ ಮಾಡಿಕೊಟ್ಟಿದ್ದಾರೆ. ಕ್ಷೇತ್ರದಲ್ಲಿ ಸಾಕಷ್ಟು ಸೇವಾ ಕಾರ್ಯ ಕೈಗೊಂಡಿರುವ ಡಾ.ಪ್ರದೀಪ್ ಅವರಿಗೆ ಸೂಕ್ತ ಸ್ಥಾನಮಾನ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಮಾಜಿ ಶಾಸಕ ಡಾ. ಯತೀಂದ್ರ ಸಿದ್ದರಾಮಯ್ಯ ಅವರನ್ನು ಒತ್ತಾಯಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮೊಹಮ್ಮದ್ ರೆಹಮಾನ್, ಡೈರಿ ಬಸವರಾಜು, ಮಹಮ್ಮದ್ ಜಿಯಾವುಲ್ಲಾ, ಶೇಷ, ಮಾದೇಶ್ ಸೇರಿದಂತೆ ಇತರರಿದ್ದರು.

ಮೈವಿವಿ ಸಂಶೋಧಕರ ಸಂಘದ ಅಧ್ಯಕ್ಷರಾಗಿ ಮಹೇಶ್ ಆಯ್ಕೆ



ಮೈಸೂರು, ಜೂ.2– ಮೈಸೂರು ವಿಶ್ವವಿದ್ಯಾನಿಲಯ ಸಂಶೋಧಕರ ಸಂಘದ ಅಧ್ಯಕ್ಷರಾಗಿ ಅರ್ಥಶಾಸ್ತ್ರ ಅಧ್ಯಯನ ವಿಭಾಗದ ಸಿ. ಮಹೇಶ್ ಆಯ್ಕೆಯಾಗಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ನಾಳೆ ಸಚಿವ ಕೆ.ವೆಂಕಟೇಶ್‌ಗೆ ಸನ್ಮಾನ

ಬೆಟ್ಟದಪುರ, ಜೂ.2– ಪಶು ಸಂಗೋಪನೆ ಹಾಗೂ ರೇಷ್ಮೆ ಸಚಿವ ಕೆ.ವೆಂಕಟೇಶ್ ಅವರನ್ನು ಜೂ.4ರಂದು ಅದ್ಧೂರಿಯಾಗಿ ಸನ್ಮಾನಿಸಲಾಗುವುದು ಎಂದು ನಿವೃತ್ತ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಬಿ.ಟಿ. ಸಣ್ಣಸ್ವಾಮಿಗೌಡ ತಿಳಿಸಿದ್ದಾರೆ.



ಅಂದು ಬೆಳಗ್ಗೆ 11 ಗಂಟೆ ಆಗಮಿಸುವ ಸಚಿವರನ್ನು ಪಿರಿಯಾಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ತಾಲೂಕಿನ ಜನತೆ ಪರವಾಗಿ ಸನ್ಮಾನಿಸಲಾಗುವುದು.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ರಾಮಾಂತರ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿಜಯ್ ಕುಮಾರ್, ಕೆಪಿಸಿಸಿ ಸದಸ್ಯರಾದ ನಿತಿನ್ ವೆಂಕಟೇಶ್, ಅನಿಲ್, ಮುಖಂಡರಾದ ಬಿ.ಜೆ.ಬಸವರಾಜ್, ಹೊಲದಪ್ಪ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಲೋಕೇಶ್, ಶಿವಕುಮಾರ್, ಎಸ್‌ಸಿ, ಎಸ್‌ಟಿ ಘಟಕದ ಅಧ್ಯಕ್ಷ ಚನ್ನಕಲ್ಲು ಶೇಖರ್, ಆವರ್ತಿ ಗ್ರಾಪಂ ಅಧ್ಯಕ್ಷ ಶಿವು, ಬೆಟ್ಟದಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಹಮದ್ ಜಾನ್ ಬಾಬು, ಬೆಟ್ಟದಪುರ ಗ್ರಾಪಂ ಮಾಜಿ ಅಧ್ಯಕ್ಷ ಇಕ್ಬಾಲ್ ಷರೀಫ್, ಚನ್ನಕೇಶವ, ತಾಪಂ ಮಾಜಿ ಸದಸ್ಯರಾದ ಕುಂಜಪ್ಪ ಕಾರ್ನಾಡ್, ಅನಿತಾ, ತೋಟಪ್ಪಶೆಟ್ಟಿ ಸೇರಿದಂತೆ ಪ್ರಮುಖ ಮುಖಂಡರು ಭಾಗವಹಿಸಲಿದ್ದು, ತಾಲೂಕಿನ ಜನತೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಅವರು ಮನವಿ ಮಾಡಿದ್ದಾರೆ.



ಮೈಸೂರು ಜಿಲ್ಲಾ ಹಾಪ್ ಕಾಮ್ಸ್ ವತಿಯಿಂದ ನಿವೃತ್ತ ಇಂಜಿನಿಯರ್ ನಟರಾಜು ಹಾಗೂ ಎಫ್‌ಡಿಎ ರಂಗಸ್ವಾಮಿ ಅವರಿಗೆ 25 ಲಕ್ಷ ರೂ.ಗಳ ನಿವೃತ್ತಿ ವೇತನದ ಚೆಕ್ ಅನ್ನು ವಿತರಿಸಲಾಯಿತು. ಈ ವೇಳೆ ಜಿಲ್ಲಾ ಸಮಘದ ಅಧ್ಯಕ್ಷ ಅಣ್ಣೇಗೌಡ, ನಿರ್ದೇಶಕ ಬಿ.ಪದ್ಮನಾಭ, ರಾಜ್ಯ ಉಪಾಧ್ಯಕ್ಷ ಸೂರ್ಯಕುಮಾರ್, ಜಿಲ್ಲಾ ಉಪಾಧ್ಯಕ್ಷ ಸರ್ವೇಶ್, ಮಾಜಿ ಜಿಲ್ಲಾಧ್ಯಕ್ಷ ಬೋರೇಗೌಡ, ನಿರ್ದೇಶಕ ಶ್ರೀನಿವಾಸ್, ರಘು, ಯಾಚೇನಹಳ್ಳಿ ಮಹೇಂದ್ರ, ಚಂದ್ರೇಗೌಡ, ರಾಮೇಗೌಡ ಇತರರಿದ್ದರು.

ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಶ್ರಮಿಸುತ್ತೇನೆ: ಶಾಸಕ ದರ್ಶನ್

ನಂಜನಗೂಡು, ಜೂ.2– ನನ್ನ ತಂದೆ ಹಾದಿಯಲ್ಲೇ ಸಾಗಿ ಜನಸೇವೆ ಮಾಡಬೇಕೆಂಬ ಸಂಕಲ್ಪದೊಂದಿಗೆ ನಾನು ರಾಜಕೀಯಕ್ಕೆ ಬಂದಿದ್ದೇನೆ. ಸಾರ್ವಜನಿಕರ ಸಮಸ್ಯೆ ಪರಿಹರಿಸಿ, ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಶ್ರಮಿಸುವ ಮೂಲಕ ನೀವು ನನ್ನ ಮೇಲೆ ಇಟ್ಟಿರುವ ನಂಬಿಕೆ ಉಳಿಸಿಕೊಳ್ಳುತ್ತೇನೆ ಎಂದು ಶಾಸಕ ದರ್ಶನ್ ಧ್ರುವನಾರಾಯಣ್ ತಿಳಿಸಿದರು.

ತಾಲೂಕಿನ ಹೆಡತಲೆ, ಸಿಂಗಾರಿಪುರ, ಶ್ರೀನಗರ, ಬಸವಟ್ಟಿಗೆ ಗ್ರಾಮಗಳಲ್ಲಿ ಜನಸ್ಪಂದನಾ ಸಭೆ ಹಾಗೂ ಮತದಾರರಿಗೆ ಕೃತಜ್ಞತೆ ಸಲ್ಲಿಸಿ ಮಾತನಾಡಿದ ಅವರು, ನಾನು ರಾಜಕೀಯಕ್ಕೆ ಬಂದಿದ್ದು ಆಕಸ್ಮಿಕ. ನನ್ನ ತಂದೆ ಕ್ಷೇತ್ರದ ಜನರೊಂದಿಗೆ ನಿಕಟ ಸಂಪರ್ಕ ಹೊಂದಿದ್ದರು. ಅವರು ಸೋತಿದ್ದರೂ ಜನರ ಸಮಸ್ಯೆಗಳಿಗೆ ಸದಾ ಸ್ಪಂದಿಸುತ್ತಿದ್ದರು. ಹೀಗಾಗಿ ಕ್ಷೇತ್ರದ ಜನತೆ ನನ್ನ ತಂದೆ ಮೇಲೆ ವಿಶೇಷ ಪ್ರೀತಿ, ಅಭಿಮಾನ ಹೊಂದಿದ್ದೀರಿ. ಅಲ್ಲದೇ ಅವರ ಸಾವಿನ ನಂತರವೂ ಅವರ ಮೇಲಿನ ಪ್ರೀತಿ ಅಭಿಮಾನವನ್ನು ಅವರ ಪುತ್ರನಾದ ನನಗೂ ನೀಡುವ ಮೂಲಕ ಐತಿಹಾಸಿಕ ಗೆಲುವಿನ ಉಡುಗೊರೆ ನೀಡಿರುವುದಕ್ಕೆ ನಾನು ಸದಾ ಚಿರಋಣಿ ಎಂದರು.



ತಂದೆ ಆಸೆ ಈಡೇರಿಸಲು ಶ್ರಮಿಸುತ್ತೇನೆ: ನನ್ನ ತಂದೆ ದಿ.ಆರ್.ಧ್ರುವನಾರಾಯಣ್ ಕ್ಷೇತ್ರದಲ್ಲಿ ಸುತ್ತಾಡಿ ಸಾಕಷ್ಟು ಸಮಸ್ಯೆಗಳನ್ನು ಗುರ್ತಿಸಿ ಅವುಗಳನ್ನು ಬಗೆಹರಿಸುವ ಮೂಲಕ ಕ್ಷೇತ್ರವನ್ನು ರಾಜ್ಯದಲ್ಲೇ ಮಾದರಿಯಾಗಿಸಬೇಕೆಂಬ ಹಂಬಲ ಹೊಂದಿದ್ದರು. ಅವರ ಆಸೆ ಈಡೇರಿಸಲು ಚುನಾವಣೆ ಪೂರ್ವದಲ್ಲಿ ನೀಡಿದ್ದ ಭರವಸೆಯಂತೆ ಇಡೀ ಕ್ಷೇತ್ರದ ಎಲ್ಲಾ ಗ್ರಾಮಗಳಿಗೆ ಭೇಟಿ ನೀಡಿ ಸಾರ್ವಜನಿಕರ ಸಮಸ್ಯೆ ಆಲಿಸಿ ಆಗಬೇಕಿರುವ ಅಭಿವೃದ್ಧಿ ಕಾರ್ಯಗಳ ಪಟ್ಟಿ ಮಾಡಿ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುತ್ತೇನೆ. ಜೊತೆಗೆ ನಮ್ಮದೇ ಸರ್ಕಾರವಿರುವ ಕಾರಣ ಮುಖ್ಯಮಂತ್ರಿಗಳ ಗಮನ ಸೆಳೆದು ಕ್ಷೇತ್ರದಲ್ಲಿ ಶಾಶ್ವತ ಯೋಜನೆಗಳನ್ನು ಅನುಷ್ಠಾನಗೊಳಿಸಿ ಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿ ರೂಪಿಸುತ್ತೇನೆ ಎಂದರು.

ಸಾರ್ವಜನಿಕರಿಗೆ ಸದಾ ಸಿಗುತ್ತೇನೆ: ತಂದೆ ತಾಯಿ ಕಳೆದುಕೊಂಡಿರುವ ನನಗೆ ಕ್ಷೇತ್ರದ ಜನರೇ ತಂದೆ ತಾಯಿ. ಪ್ರತಿಯೊಬ್ಬರ ಮನೆ ಮಗನಾಗಿ ಸೇವೆ ಸಲ್ಲಿಸಲು ನಾನು ಸದಾ ಸಿದ್ಧನಿದ್ದೇನೆ. ಹೀಗಾಗಿ ಸಾರ್ವಜನಿಕರು ನನ್ನನ್ನು ಖುದ್ದಾಗಿ ಅಥವಾ ದೂರವಾಣಿ ಮೂಲಕ ಸಂಪರ್ಕಿಸಿ ಅಹವಾಲು ಸಲ್ಲಿಸಬಹುದು. ಅಲ್ಲದೇ ತಾಪಂ ಕಚೇರಿಯಲ್ಲಿ ಶೀಘ್ರದಲ್ಲೇ ಶಾಸಕರ ಕಚೇರಿ ತೆರೆಯಲಿದ್ದು, ಅಲ್ಲಿಯೂ ಭೇಟಿಯಾಗಬಹುದು. ಸಾರ್ವಜನಿಕರಿಗೆ ಸದಾ ಸಿಗುತ್ತೇನೆ ಎಂದರು.

ಸಮಾರಂಭದಲ್ಲಿ ಮಾಜಿ ಶಾಸಕ ಕಳಲೆ ಕೇಶವಮೂರ್ತಿ ಮಾತನಾಡಿದರು. ಈ ವೇಳೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹೇಶ್, ಎಸ್ಟಿ ವಿಭಾಗದ ರಾಜ್ಯ ಪ್ರಧಾನ ಕಾರ್ಯದರ್ಶಿ ದೊರೆಸ್ವಾಮಿ ನಾಯಕ, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯೆ ಲತಾ, ಮುಖಂಡರಾದ ವಿಜಯ್ ಕುಮಾರ್, ಶ್ರೀನಿವಾಸಮೂರ್ತಿ, ನಾಗರಾಜಯ್ಯ, ರಾಜೇಶ್, ಶಿವಣ್ಣ, ನಾಗರಾಜು, ಕುಳ್ಳಯ್ಯ, ಶಿವಕುಮಾರ್, ಕಾರ್ಮಿಕ ಮುಖಂಡ ಗೋವಿಂದರಾಜು, ಯುವ ಕಾಂಗ್ರೆಸ್ ಅಧ್ಯಕ್ಷ ಅಶೋಕ್, ಕೆಪಿಸಿಸಿ ಸದಸ್ಯ ಅಕ್ಬರ್ ಅಲಿಂ ಸೇರಿದಂತೆ ಇತರರಿದ್ದರು.

ಮೈಸೂರು ಮಿತ್ರ
ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತು ದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ತಾಲ್ಲೂಕು ಪಂಚಾಯತ್, ಪಿರಿಯಾಪಟ್ಟಣ
(Off) +91(08223)273456/274154
(Fax) +91(08223) 273456,
e-mail: tppiriyapatna-ka@gov.in
tp.pptn@gmail.com eo_tpppt@rediffmail.com
ಸಂಖ್ಯೆ:ತಾಪಂಪಿಪ/ಸಿಬ್ಬಂದಿ–ಟೆಂಡರ್/2023–24 ದಿನಾಂಕ: 30.05.2023

ಅಲ್ಪಾವಧಿ ಟೆಂಡರ್ ಪ್ರಕಟಣೆ

ಈ ಮೂಲಕ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯಿತಿ, ಪಿರಿಯಾಪಟ್ಟಣರವರು 2023–24ನೇ ಸಾಲಿಗೆ ತಾಲ್ಲೂಕು ಪಂಚಾಯಿತಿ ಕಛೇರಿಯಲ್ಲಿ ದೈನಂದಿನ ಕೆಲಸ ಕಾರ್ಯಗಳಿಗೆ ಹೊರಗುತ್ತಿಗೆ ಆಧಾರದ ಕಾರ್ಯನಿರ್ವಾಹಕ ಅಧಿಕಾರಿಗಳ ದೈನಂದಿನ ಕಛೇರಿ ಕಾರ್ಯಗಳ ನಿರ್ವಹಣೆಗಾಗಿ ಒಂದು ವಾಹನದೊಂದಿಗೆ ವಾಹನ ಚಾಲಕ, ಸಹಾಯಕ ನಿರ್ದೇಶಕರು (ಗ್ರಾ.ಉ)ರವರ ದೈನಂದಿನ ಕಛೇರಿ ಕಾರ್ಯಗಳ ನಿರ್ವಹಣೆಗಾಗಿ ಒಂದು ವಾಹನದೊಂದಿಗೆ ವಾಹನ ಚಾಲಕರ ಸೇವೆಯನ್ನು ಅರ್ಹ ಸಂಸ್ಥೆಗಳಿಂದ ಒದಗಿಸಲು ಇಚ್ಛೆಯುಳ್ಳ ಆಸಕ್ತ ಅರ್ಹ ಗುತ್ತಿಗೆ/ಸಂಸ್ಥೆದಾರರು ಈ ಕಛೇರಿಯಿಂದ ಖಾಲಿ ಟೆಂಡರ್ ಫಾರಂಗಳನ್ನು (ಟೆಂಡರ್ ಫಾರಂ ಶುಲ್ಕ ಪಾವತಿಸಿ) ಪಡೆಯಲು ನಿಗದಿಗೊಳಿಸಿರುವ ದಿ: 01.06.2023 ರಿಂದ 12.06.2023ರವರೆಗೆ ಕಛೇರಿಯ ಕೆಲಸದ ವೇಳೆಯಲ್ಲಿ ಅಪರಾಹ್ನ 3.00 ಗಂಟೆಯೊಳಗೆ ಪಡೆದು, ಅರ್ಹ ಹಾಗೂ ಆಸಕ್ತ ಗುತ್ತಿಗೆದಾರರು ಈ ಕಛೇರಿಗೆ ಟೆಂಡರ್ ಸಲ್ಲಿಸಲು ಕೊನೆಯ ದಿ: 12.06.2023ರ ಮಧ್ಯಾಹ್ನ 2.00 ಗಂಟೆಯಾಗಿದ್ದು, ನಂತರ ಬಂದ ಟೆಂಡರ್‌ನ್ನು ತಿರಸ್ಕರಿಸಲಾಗುವುದು. ಸ್ವೀಕೃತ ಟೆಂಡರ್‌ಗಳನ್ನು ತೆರೆಯುವ ದಿ: 13.06.2023ರಂದು ಅಪರಾಹ್ನ 3.00 ಗಂಟೆಯಾಗಿರುತ್ತದೆ. ಹೆಚ್ಚಿನ ವಿವರಗಳು ಬೇಕಾದಲ್ಲಿ ಈ ಕಛೇರಿಯನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಲು ಕೋರಿದೆ.

ಸಹಿ/– ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ,ಪಿರಿಯಾಪಟ್ಟಣ.
DIPR/DDMYS/KSMCA/34/2023-24